ಸಂಪುಟ: 05 ಸಂಚಿಕೆ: 219 ಪುಟಗಳು: 08 ಶುಕ್ರವಾರ 24 ಅಕ್ಟೋಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ನೀವು ಏನನ್ನಾದರೂ ಮಾಡಲು ಪ್ರಾರಂಭಿಸಿದಾಗ ವೈಫಲ್ಯಕ್ಕೆ ಹೆದರಬೇಡಿ ಮತ್ತು ಅದನ್ನು ತ್ಯಜಿಸಬೇಡಿ. ಪ್ರಾಮಾಣಿಕವಾಗಿ ಕೆಲಸ ಮಾಡುವ ಜನರು ಸಂತೋಷವಾಗಿರುತ್ತಾರೆ.

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಆರ್‌ಎಸ್‌ಎಸ್ ಚಟುವಟಿಕೆಗೆ ಅಂಕುಶ ಕುಮಾರಸ್ವಾಮಿ ಪ್ರತಿಕ್ರಿಯೆ

• ಉದಯವಾಹಿನಿ, ಬೆಂಗಳೂರು

ರಾಷ್ಟ್ರೀಯ ಸ್ವಯಂಸೇವಕ ಸಂಘದ ವಿಚಾರದಲ್ಲಿ ನಿಮ್ಮ ಪಾರ್ಟಿಯ ನಿಲುವೇನು? ನಿಮ್ಮ ಪಕ್ಷದಲ್ಲಿರುವ ಜಾತ್ಯಾತೀಯ ಪದವನ್ನು ತೆಗೆಯಿರಿ ಎಂದು ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ, ಜೆಡಿಎಸ್ ಪಾರ್ಟಿಯ ಬಗ್ಗೆ ವ್ಯಂಗ್ಯವಾಡಿದ್ದರು. ಈ ಬಗ್ಗೆ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರತಿಕ್ರಿಯೆ ನೀಡಿದ್ದಾರೆ. ಹಿಂದೆ ನಾನು ಆರ್‌ಎಸ್‌ಎಸ್ ಅನ್ನು ಟೀಕೆ ಮಾಡಿದ್ದೇನೆ, ಇಲ್ಲ ಅಂತ ಹೇಳುವುದಿಲ್ಲ, ಕಾಂಗ್ರೆಸ್ ನವರು ನೀವೇನು ಮಾಡಿದ್ದೀರಾ?

ರಾಜ್ಯದಲ್ಲಿ 136 ಸೀಟು ಕೊಟ್ಟಿದ್ದಾರೆ. ಜನರ ಸಮಸ್ಯೆ ಕೇಳುತ್ತಿಲ್ಲ. ಕಲಬುರ್ಗಿಯಲ್ಲಿ ಜನ ಬೀದಿಯಲ್ಲಿ ಇದ್ದಾರೆ. ರೈತರು ಸಂಕಷ್ಟದಲ್ಲಿ ಇದ್ದಾರೆ ಏನು ಮಾಡಿದ್ದೀರಪ್ಪ ಎಂದು ಸಚಿವರು ಆಕ್ರೋಶ ವ್ಯಕ್ತಪಡಿಸಿದರು. ಕಳೆದ ವಿಜಯದಶಮಿ ನಂತರದ ಭಾನುವಾರದ ದಿನ, ರಾಷ್ಟ್ರೀಯ ಸ್ವಯಂಸೇವಕ ಸಂಘ, ರಾಜ್ಯಾದ್ಯಂತ ಪಥಸಂಚಲನವನ್ನು ನಡೆಸಿತ್ತು. ಎಲ್ಲಾ ಭಾಗದಲ್ಲೂ ಇದಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿತ್ತು. ಆ ದಿನದಿಂದೇ, ಸರ್ಕಾರೀ ಸ್ಥಳಗಳಲ್ಲಿ ಈ ರೀತಿಯ ಚಟುವಟಿಕೆಗಳಿಗೆ ನಿರ್ಬಂಧ ಹೇರಬೇಕು ಎಂದು ಪ್ರಿಯಾಂಕ್ ಖರ್ಗೆ, ಮುಖ್ಯಮಂತ್ರಿಗಳಿಗೆ ಪತ್ರವನ್ನು ಬರೆದಿದ್ದರು.

## 2ನೇ ವಿಮಾನ ನಿಲ್ದಾಣ ನಿರ್ಮಾಣ ಬಗ್ಗೆ ಎಂಬಿ ಪಾಟೀಲ್ ಮಾಹಿತಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಸರ್ಕಾರವು ಬೆಂಗಳೂರಿನಲ್ಲಿ ಸ್ಥಾಪನೆಗೆ ಮುಂದಾಗಿರುವ 2 ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಕುರಿತ ಸ್ಥಳ ಪರಿಶೀಲನೆ ವರದಿ ಇನ್ನು 2 – 3 ದಿನಗಳಲ್ಲಿ ಸರ್ಕಾರದ ಕೈಸೇರಲಿದೆ. ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಅವರು, ಎರಡನೆಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ನಮಗೆ 2033 ರವರೆಗೂ ನಿರ್ಬಂಧವಿದೆ. ಆದರೆ, ಈಗಿನಿಂದಲೇ ಅಗತ್ಯ ಪ್ರಕ್ರಿಯೆಗಳನ್ನು ಆರಂಭಿಸಿದರೆ ಅಷ್ಟು ಹೊತ್ತಿಗೆ ಮುಗಿಸಬಹುದು. ಒಂದು ವಿಮಾನ ನಿಲ್ದಾಣ ನಿರ್ಮಿಸಲು ಕನಿಷ್ಠ ಪಕ್ಷ ಐದಾರು ವರ್ಷಗಳಾದರೂ ಹಿಡಿಯುತ್ತದೆ ಎಂದಿದ್ದಾರೆ. ಎಎಐ ತಾನು ಪರಿಶೀಲಿಸಿರುವ ಎರಡು ಸ್ಥಳಗಳಿಗೂ ಹಸಿರು ನಿಶಾನೆ ತೋರಿಸಬಹುದು. ನಾವೂ ಒಂದು ಕಡೆ ಐದಾರು ಸಾವಿರ ಎಕರೆ ಭೂಮಿ ಕೊಡಬಹುದು. ಆದರೆ ವಿಮಾನ ನಿಲ್ದಾಣ ನಿರ್ಮಾಣ ಸಂಸ್ಥೆಗಳು ಇದು ಆರ್ಥಿಕವಾಗಿ ಲಾಭದಾಯಕವೇ ಎನ್ನುವಂತಹ ಅಂಶಗಳನ್ನು ನೋಡುತ್ತವೆ. ಇದೊಂದು ಜಟಿಲವಾದ ಕೆಲಸ ಎನ್ನುವುದು ನನಗೆ ಎಲ್ಲರಿಗಿಂತ ಚೆನ್ನಾಗಿ ಗೊತ್ತಿದೆ ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ.

## ಚೆನ್ನಮ್ಮ ಸಮಾಧಿಯನ್ನು ರಾಷ್ಟ್ರೀಯ ಸ್ಮಾರಕವೆಂದು ಘೋಷಿಸಬೇಕು

• ಉದಯವಾಹಿನಿ, ನವದೆಹಲಿ

ಬೈಲಹೊಂಗಲದಲ್ಲಿರುವ ರಾಣಿ ಚೆನ್ನಮ್ಮನವರ ಸಮಾಧಿಯನ್ನು ಅಭಿವೃದ್ಧಿಗೊಳಿಸಿ ರಾಷ್ಟ್ರೀಯ ಸ್ಮಾರಕವೆಂದು ಘೋಷಿಸಬೇಕು ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಆಗ್ರಹಿಸಿದರು. ಸಂಸತ್ ಆವರಣದ ಪ್ರೇರಣಾ ಸ್ಥಳದಲ್ಲಿ ಗುರುವಾರ ನಡೆದ ಕಿತ್ತೂರು ರಾಣಿ ಚೆನ್ನಮ್ಮ ಅವರ 201ನೇ ವಿಜಯೋತ್ಸವ ಹಾಗೂ ಜನ್ಮದಿನೋತ್ಸವದಲ್ಲಿ ಅವರು ಮಾತನಾಡಿದರು. ಕಿತ್ತೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಹೆಚ್ಚಿನ ಅನುದಾನ ನೀಡಬೇಕು. ಚೆನ್ನಮ್ಮ ಅವರ ಜೀವನ ಮತ್ತು ಸಾಧನೆ ಕುರಿತು ಎಲ್ಲಾ ಭಾಷೆಗಳಲ್ಲೂ ಪುಸ್ತಕ ಹೊರತರಬೇಕು.

ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆಯಲಾಗಿದೆ ಎಂದರು. ಶುಕ್ರವಾರ ನಡೆಯಲಿರುವ ಕಿತ್ತೂರು ರಾಣಿ ಚೆನ್ನಮ್ಮ ಅವರ 201ನೇ ವಿಜಯೋತ್ಸವ ಕಾರ್ಯಕ್ರಮದಲ್ಲಿ ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರು ವೀರರಾಣಿ ಚೆನ್ನಮ್ಮ ಅವರ ವಿಶೇಷ ಅಂಚೆ ಚೀಟಿ ಬಿಡುಗಡೆ ಮಾಡಲಿದ್ದಾರೆ ಎಂದರು. ಸಂಸದರಾದ ಜಗದೀಶ ಶೆಟ್ಟರ್, ಸುಧಾಮೂರ್ತಿ, ಹರಿಹರ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ, ಬಸವ ಜಯಮೃತ್ಯುಂಜಯ ಸ್ವಾಮೀಜಿ ಇದ್ದರು.

## ಬೆಂಗಳೂರಿನಲ್ಲಿ ದಕ್ಷಿಣ ಭಾರತದ ನಗರಾಭಿವೃದ್ಧಿ ಸಚಿವರುಗಳ ಸಭೆ

• ಉದಯವಾಹಿನಿ, ಬೆಂಗಳೂರು

'ಇದೇ 30ರಂದು ಬೆಂಗಳೂರಿನಲ್ಲಿ ದಕ್ಷಿಣ ಭಾರತದ ಎಲ್ಲಾ ರಾಜ್ಯಗಳ ನಗರಾಭಿವೃದ್ಧಿ ಜವಾಬ್ದಾರಿ ಹೊಂದಿರುವ ಸಚಿವರುಗಳ ಸಮ್ಮೇಳನವನ್ನು ಬೆಂಗಳೂರಿನಲ್ಲಿ ನಡೆಸಲು ಕೇಂದ್ರ ಇಂಧನ, ವಸತಿ ಹಾಗೂ ನಗರಾಭಿವೃದ್ಧಿ ಸಚಿವ ಮನೋಹರ ಲಾಲ್ ಖಟ್ಟರ್ ಅವರು ಒಪ್ಪಿದ್ದಾರೆ' ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಸದಾಶಿವನಗರ ನಿವಾಸದ ಬಳಿ ಹಾಗೂ ಬನ್ನೇರುಘಟ್ಟ ರಸ್ತೆಯಲ್ಲಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಗುರುವಾರ ಪ್ರತಿಕ್ರಿಯೆ ನೀಡಿದರು. ಬೆಂಗಳೂರಿನ ಅಭಿವೃದ್ಧಿಗೆ ಕೇಂದ್ರ ಸರ್ಕಾರದಿಂದ ಅನುದಾನಕ್ಕೆ ಒತ್ತಡ ಹಾಕುತ್ತೀರಾ ಎಂಬ ಪ್ರಶ್ನೆಗೆ, 'ಖಂಡಿತವಾಗಿ ಕೇಳುತ್ತೇವೆ. ಕೇಂದ್ರದ ನಗರಾಭಿವೃದ್ಧಿ ಸಚಿವರು ಈ ಸಮ್ಮೇಳನದಲ್ಲಿ ಭಾಗವಹಿಸಲಿದ್ದು, ನಾವು ನಮ್ಮ ಬೇಡಿಕೆಗಳನ್ನು ಅವರ ಮುಂದೆ ಇಡುತ್ತೇವೆ. ಈಗಾಗಲೇ ಹಲವು ಬಾರಿ ಕೇಂದ್ರ ಸಚಿವರು ಹಾಗೂ ಪ್ರಧಾನಮಂತ್ರಿಗಳನ್ನು ಭೇಟಿ ಮಾಡಿ ಅನುದಾನ ಕೇಳಿದ್ದೇವೆ' ಎಂದು ತಿಳಿಸಿದರು.

**ಭಾರತ ಮತ್ತು ರಷ್ಯಾ ನಡುವಿನ ಸಂಬಂಧಗಳು ಅಮೆರಿಕದ ಒತ್ತಡಗಳ ಮಧ್ಯೆಯೂ ಬಲಗೊಳ್ಳುತ್ತಿವೆ. ವಿಶೇಷವಾಗಿ ಡೊನಾಲ್ಡ್ ಟ್ರಂಪ್ ಅಧ್ಯಕ್ಷರಾದ ನಂತರ, ಭಾರತ-ರಷ್ಯಾ ಸಂಬಂಧಗಳ ಮೇಲೆ ಒತ್ತಡ ಹೆಚ್ಚಾಗಿದ್ದರೂ, ಪ್ರಧಾನಿ ಮೋದಿ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಜಾಗತಿಕ ವೇದಿಕೆಗಳಲ್ಲಿ ತಮ್ಮ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಬದ್ಧತೆಯನ್ನು ತೋರಿಸಿದ್ದಾರೆ.**

# ಭಾರತ, ರಷ್ಯಾ ಸಹಕಾರ ಬೇಕಿದೆ ರಸಗೊಬ್ಬರ

**ಟ್ರಂಪ್‌ಗೆ ಆಘಾತ ಪಕ್ಕಾ!**



**ಬಲವಾಗುತ್ತಿದೆ ಮೋದಿ-ಪುಟಿನ್ ಸಂಬಂಧ**

**ವರ್ಷಾಂತ್ಯದ ವೇಳೆಗೆ ಭಾರತ ರಷ್ಯಾದ ತೈಲ ಆಮದನ್ನು 'ಹಂತ ಹಂತವಾಗಿ' ನಿಲ್ಲಿಸಲಿದೆ: ಟ್ರಂಪ್**



• ಉದಯವಾಹಿನಿ, ನವದೆಹಲಿ

ಭಾರತ ಮತ್ತು ರಷ್ಯಾ ನಡುವಿನ ಸಂಬಂಧಗಳು ಅಮೆರಿಕದ ಒತ್ತಡಗಳ ಮಧ್ಯೆಯೂ ಬಲಗೊಳ್ಳುತ್ತಿವೆ. ವಿಶೇಷವಾಗಿ ಡೊನಾಲ್ಡ್ ಟ್ರಂಪ್ ಅಧ್ಯಕ್ಷರಾದ ನಂತರ, ಭಾರತ-ರಷ್ಯಾ ಸಂಬಂಧಗಳ ಮೇಲೆ ಒತ್ತಡ ಹೆಚ್ಚಾಗಿದ್ದರೂ, ಪ್ರಧಾನಿ ಮೋದಿ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಜಾಗತಿಕ ವೇದಿಕೆಗಳಲ್ಲಿ ತಮ್ಮ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಬದ್ಧತೆಯನ್ನು ತೋರಿಸಿದ್ದಾರೆ. ಈ ಹಿನ್ನೆಲೆ ಇದೀಗ ಭಾರತ ರಷ್ಯಾದಲ್ಲಿ ಹೊಸ ಯೋಜನೆ ರೂಪಿಸುವ ಬಗ್ಗೆ ಚರ್ಚೆ ನಡೆಯುತ್ತಿದೆ. ಭಾರತ ರಷ್ಯಾದಲ್ಲಿ ಮೊದಲ ಬಾರಿಗೆ ರಸಗೊಬ್ಬರ ಕಂಪನಿಯನ್ನು ಸ್ಥಾಪಿಸಲು ಸಿದ್ಧತೆ ನಡೆಸುತ್ತಿದೆ. ಈ ಕ್ರಮವು ಅಮೆರಿಕದ ಉದ್ದೇಶಗಳಿಗೆ ದೊಡ್ಡ ಹೊಡೆತವಾಗಿ ಬರಲಿದ್ದು, ಭಾರತದ ಆರ್ಥಿಕ ಸ್ವಾವಲಂಬನೆಗೆ ಹೊಸ ದಿಕ್ಕು ನೀಡುತ್ತದೆ. ರಷ್ಯಾದಲ್ಲಿ ರಸಗೊಬ್ಬರ ಕಂಪನಿಯನ್ನು ಸ್ಥಾಪಿಸಲು ಸಿದ್ಧತೆ ವರದಿಯ ಪ್ರಕಾರ, ಈ ಯೋಜನೆಯ ಬಗ್ಗೆ ತಿಳಿದಿರುವ ಅಧಿಕಾರಿಯೊಬ್ಬರು, ಭಾರತದ ರಸಗೊಬ್ಬರ ಪೂರೈಕೆಯನ್ನು ಸುಧಾರಿಸುವುದು ಈ ಯೋಜನೆಯ ಮುಖ್ಯ ಗುರಿ ಎಂದು ಹೇಳಿದ್ದಾರೆ. ರಾಷ್ಟ್ರೀಯ ರಾಸಾಯನಿಕಗಳು ಮತ್ತು ರಸಗೊಬ್ಬರಗಳು ರಾಷ್ಟ್ರೀಯ ರಸಗೊಬ್ಬರಗಳು ಲಿಮಿಟೆಡ್ ಮತ್ತು ಇಂಡಿಯನ್ ಪೊಟ್ಯಾಶ್ ಲಿಮಿಟೆಡ್ ಈ ಯೋಜನೆಯನ್ನು ಜಂಟಿಯಾಗಿ ಅಭಿವೃದ್ಧಿಪಡಿಸುತ್ತಿವೆ.

ರಷ್ಯಾದಲ್ಲಿ ನೈಸರ್ಗಿಕ ಅನಿಲ ಮತ್ತು ಅಮೋನಿಯಾ ನಿಕ್ಷೇಪಗಳು ಅಪಾರ ಆಗಿವೆ. ಇದರೊಂದಿಗೆ ಕಚ್ಚಾ ವಸ್ತುಗಳ ಲಭ್ಯತೆಯ ಲಾಭವನ್ನು ಪಡೆಯುವುದು ಯೋಜನೆಯ ದೊಡ್ಡ ಉದ್ದೇಶವಾಗಿದೆ. ಭಾರತದಂತಹ ಬೆಳೆಯುತ್ತಿರುವ ದೇಶಕ್ಕೆ ರಸಗೊಬ್ಬರಗಳು ಅತ್ಯಗತ್ಯ. ಈ ಕಂಪನಿ ಸ್ಥಾಪನೆಯು ಆಮದುಗಳನ್ನು ಕಡಿಮೆ ಮಾಡಿ, ಬೆಲೆಯ ಸ್ಥಿರತೆಯನ್ನು ತರಲಿದೆ.

**ಪುಟಿನ್ ಘೋಷಣೆ ಸಾಧ್ಯತೆ!:** ಈ ಯೋಜನೆಯನ್ನು ಡಿಸೆಂಬರ್‌ನಲ್ಲಿ ರಷ್ಯಾ ಅಧ್ಯಕ್ಷ ಪುಟಿನ್ ಅವರ ಭಾರತ ಭೇಟಿಯ ಸಮಯದಲ್ಲಿ ಅಧಿಕೃತವಾಗಿ ಘೋಷಿಸಲಾಗುತ್ತದೆ ಎಂದು ನಿರೀಕ್ಷಿಸಲಾಗಿದೆ. ಈ ಭೇಟಿಯಲ್ಲಿ ಯೋಜನೆಯ ವಿವರಗಳು ಮತ್ತು ಒಪ್ಪಂದಗಳು ಅಂತಿಮಗೊಳ್ಳಬಹುದು. ಭಾರತದ ಮೂರು ಸರ್ಕಾರಿ ಕಂಪನಿಗಳು ರಷ್ಯಾದ ಕಂಪನಿಗಳೊಂದಿಗೆ ಹಲವು ಒಪ್ಪಂದಗಳಿಗೆ ಸಹಿ ಹಾಕಿವೆ. ಯೋಜನೆಯ ಕೆಲಸ ತ್ವರಿತಗೊಳ್ಳುತ್ತದೆ. ಭಾರತ-ರಷ್ಯಾ ವ್ಯಾಪಾರ ಸಂಬಂಧಗಳಲ್ಲಿ ಇದು ಹೊಸ ಅಧ್ಯಾಯವಾಗುತ್ತದೆ. ರಷ್ಯಾದೊಂದಿಗಿನ ಈ ಜಂಟಿ ಉತ್ಪಾದನೆಯು ಭಾರತದ ರಸಗೊಬ್ಬರ ಅಗತ್ಯಗಳನ್ನು ನೇರವಾಗಿ ಈಡೇರಿಸುತ್ತದೆ.

ಯೋಜನೆಯ ಯೋಜಿತ ಉತ್ಪಾದನೆಯು ವಾರ್ಷಿಕ 2 ಮಿಲಿಯನ್ ಟನ್ ಯೂರಿಯಾ. ಇದು ಭಾರತದ ರಸಗೊಬ್ಬರ ಕೊರತೆಯನ್ನು ಭಾಗಶಃ ತುಂಬುತ್ತದೆ. ಭೂಸ್ವಾಧೀನ, ನೈಸರ್ಗಿಗ ಅನಿಲ, ಮತ್ತು ಅಮೋನಿಯಾ ಬೆಲೆಗಳು, ಲಾಜಿಸ್ಟಿಕ್ಸ್ ವೆಚ್ಚಗಳ ಬಗ್ಗೆ ಇದೀಗ ಮಾತುಕತೆಗಳು ನಡೆಯುತ್ತಿವೆ. ಎರಡೂ ದೇಶಗಳ ಅಧಿಕಾರಿಗಳು ಗಂಭೀರ ಚರ್ಚೆಗಳಲ್ಲಿ ತೊಡಗಿದ್ದಾರೆ.

**1** ರಷ್ಯಾದ 2 ಬೃಹತ್ ತೈಲ ಕಂಪನಿಗಳಾದ ರಾಸ್ನೆಫ್ಟ್ ಮತ್ತು ಲುಕ್‌ಆಯಿಲ್ ಮೇಲೆ ಅಮೆರಿಕ ನಿರ್ಬಂಧ

**2** ಉಕ್ರೇನ್ ಶಾಂತಿ ಮಾತುಕತೆಯಲ್ಲಿ ಪುಟಿನ್ ಪ್ರಾಮಾಣಿಕವಾಗಿಲ್ಲ ಎಂದು ಟ್ರಂಪ್ ಸರ್ಕಾರದ ಆರೋಪ


**3** ಬುಡಾಪೆಸ್ಟ್‌ನಲ್ಲಿ ನಡೆಯಬೇಕಿದ್ದ ಟ್ರಂಪ್-ಪುಟಿನ್ ಮಹತ್ವದ ಶೃಂಗಸಭೆ ರದ್ದಿನ ಬೆನ್ನಲ್ಲೇ ಈ ಕ್ರಮ

**ಆರ್ಥಿಕ ಸ್ವಾವಲಂಬನೆಗೆ ಹೊಸ ಹೆಜ್ಜೆ!**

ರಷ್ಯಾದ ಅಪಾರ ಅನಿಲ ಮತ್ತು ಅಮೋನಿಯಾ ಸಂಪನ್ಮೂಲಗಳು ಭಾರತವನ್ನು ಉತ್ತಮ ಪಾಲುದಾರರನ್ನಾಗಿ ಮಾಡುತ್ತವೆ. ಭಾರತವು ವಿಶ್ವದ ಅತಿದೊಡ್ಡ ರಸಗೊಬ್ಬರ ಗ್ರಾಹಕರಲ್ಲಿ ಒಂದಾಗಿದೆ. ಕಳೆದ ಎರಡು ವರ್ಷಗಳಲ್ಲಿ, ಚೀನಾ ತನ್ನ ರಸಗೊಬ್ಬರ ರಫ್ತು ಕಡಿಮೆ ಮಾಡಿದ್ದು, ಭಾರತದ ಆಮದುಗಳು ಕುಸಿತಕ್ಕೆ ಒಳಗಾಗಿವೆ. ಈ ಸಂದರ್ಭದಲ್ಲಿ, ರಷ್ಯಾದೊಂದಿಗಿನ ಈ ಯೋಜನೆಯು ಭಾರತದ ಅಗತ್ಯಗಳನ್ನು ನೇರವಾಗಿ ತುಂಬುತ್ತದೆ. ಇದು ಆರ್ಥಿಕ ಸ್ವಾವಲಂಬನೆಗೆ ಹೊಸ ಹೆಜ್ಜೆಯಾಗಿದ್ದು, ರೈತರಿಗೆ ಕಡಿಮೆ ಬೆಲೆಯ ರಸಗೊಬ್ಬರಗಳು ಲಭ್ಯವಾಗುತ್ತವೆ. ಟ್ರಂಪ್ ಅಧ್ಯಕ್ಷರಾದ ನಂತರ, ಭಾರತ-ರಷ್ಯಾ ಸಂಬಂಧಗಳ ಮೇಲೆ ಒತ್ತಡ ಹೆಚ್ಚಾಗಿದ್ದರೂ, ಭಾರತ ನಿಜವಾದ ಸ್ನೇಹಿತರೊಂದಿಗೆ ಸಹಕಾರವನ್ನು ಮುಂದುವರಿಸುತ್ತಿದೆ. ಪುಟಿನ್-ಮೋದಿ ಸಭೆಗಳು ಈ ಬದ್ಧತೆಯನ್ನು ಒತ್ತಿ ಹೇಳುತ್ತವೆ.

**ರಷ್ಯಾ ನಮ್ಮನ್ನು ಯುದ್ಧಕ್ಕೆ ಬಳಸಿಕೊಳ್ಳುತ್ತಿದೆ**

ಭಾರತೀಯ ವ್ಯಕ್ತಿಯನ್ನು ರಷ್ಯಾ ಬಲವಂತವಾಗಿ ಯುದ್ಧಕ್ಕೆ ಬಳಸಿಕೊಳ್ಳುತ್ತಿದೆ ಮತ್ತೊಂದು ಆರೋಪ ಕೇಳಿಬಂದಿದೆ. ಕಟ್ಟಡ ನಿರ್ಮಾಣ ಕಾರ್ಯಕ್ಕಾಗಿ ರಷ್ಯಾಗೆ ತೆರಳಿದ್ದ ತನ್ನನ್ನು ಉಕ್ರೇನ್ ವಿರುದ್ಧ ಯುದ್ಧ ಮಾಡುವಂತೆ ಒತ್ತಾಯಿಸಲಾಗುತ್ತಿದೆ ಎಂದು ಹೈದರಾಬಾದ್ ಮೂಲದ ವ್ಯಕ್ತಿಯೊಬ್ಬ ಸೆಲ್ಫಿ ವಿಡಿಯೋ ಮೂಲಕ ತನ್ನ ಅಳಲನ್ನು ತೋಡಿಕೊಂಡಿದ್ದಾನೆ. ಇಹೌದು.. ರಷ್ಯಾದಲ್ಲಿ ಸಿಲುಕಿರುವ ಹೈದರಾಬಾದ್ ಮೂಲದ 37 ವರ್ಷದ ಮೊಹಮ್ಮದ್ ಅಹ್ಮದ್ ಎಂಬಾತನನ್ನು ರಕ್ಷಿಸುವಂತೆ ಅವರ ಪತ್ನಿ ಅಫ್ಶಾ ಬೇಗಂ ವಿದೇಶಾಂಗ ಸಚಿವ ಎಸ್.ಜೈಶಂಕರ್ ಪತ್ರ ಬರೆದಿದ್ದಾರೆ. ಅಹ್ಮದ್ ಪತ್ನಿ ಪ್ರಕಾರ, ಮುಂಬೈ ಮೂಲದ ಕನ್ಸಲ್ಟನ್ಸಿ ಕಂಪನಿಯೊಂದು ಕಟ್ಟಡ ನಿರ್ಮಾಣ ಕಂಪನಿಯಲ್ಲಿ ಕೆಲಸ ಕೊಡಿಸುವುದಾಗಿ ಹೇಳಿತ್ತು. ಅದರಂತೆ ಅಹಮ್ಮದ್ ಏಪ್ರಿಲ್ 2025ರಂದು ಭಾರತದಿಂದ ರಷ್ಯಾಗೆ ತೆರಳಿದ್ದರು. ಒಂದು ತಿಂಗಳೂ ಯಾವುದೇ ಕೆಲಸ ನೀಡದೇ ಹಾಗೆ ಕೂರಿಸಿ ಬಳಿಕ, ಇತರೆ 30 ಜನರೊಂದಿಗೆ ದೂರದ ಪ್ರದೇಶಕ್ಕೆ ಸ್ಥಳಾಂತರಿಸಿ ಬಲವಂತವಾಗಿ ಶಸ್ತ್ರಾಸ್ತ್ರ ತರಬೇತಿ ನೀಡಲಾಗಿದೆ.



**ಟ್ರಂಪ್ ಹಾಜರು, ಮೋದಿ ಗೈರು**

ಮಲೇಷ್ಯಾದಲ್ಲಿ ಆಯೋಜನೆಗೊಂಡಿರುವ ದಕ್ಷಿಣ ಏಷ್ಯಾ ರಾಷ್ಟ್ರಗಳ ಒಕ್ಕೂಟದ ಸಭೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಗೈರಾಗುತ್ತಿರುವುದಕ್ಕೆ ಕುಹಕವಾಡಿರುವ ಕಾಂಗ್ರೆಸ್, 'ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಂದ ಮೂಲೆಗುಂಪಾಗುವುದನ್ನು ತಪ್ಪಿಸಿಕೊಳ್ಳಲು ಪ್ರಧಾನಿ ಕಾರಣ ಕಂಡುಕೊಂಡಿದ್ದಾರೆ' ಎಂದಿದೆ. ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಅವರು ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಒಂದನ್ನು ಗುರುವಾರ ಹಂಚಿಕೊಂಡಿದ್ದಾರೆ. 'ಸಾಮಾಜಿಕ ಮಾಧ್ಯಮಗಳಲ್ಲಿ ಟ್ರಂಪ್ ಹೊಗಳಿ ಪೋಸ್ಟ್ ಮಾಡಿರುವುದು ಒಂದೆಡೆಯಾದರೆ, ಭಾರತ ಮತ್ತು ಪಾಕಿಸ್ತಾನ ನಡುವಿನ ಯುದ್ಧವನ್ನು ತಾನೇ ನಿಲ್ಲಿಸಿದ್ದಾಗಿ ಈಗಾಗಲೇ 53 ಸಲ ಟ್ರಂಪ್ ಪುನರುಚ್ಚರಿಸಿದ್ದಾರೆ. ಅಷ್ಟು ಸಾಲದು ಎಂಬಂತೆ ರಷ್ಯಾದಿಂದ ಭಾರತ ತೈಲ ಖರೀದಿ ನಿಲ್ಲಿಸಲಿದೆ ಎಂದು ಈಗಾಗಲೇ ಐದು ಬಾರಿ ಹೇಳಿದ್ದಾರೆ. ಇಂಥ ವ್ಯಕ್ತಿಯನ್ನು ನೇರವಾಗಿ ವೈಯಕ್ತಿಕವಾಗಿ ಭೇಟಿ ಆಗುವುದು ಮೋದಿ ಅವರಿಗೆ ತೀರಾ ಅಪಾಯಕಾರಿ' ಎಂದಿದ್ದಾರೆ.

## ಸಿದ್ದರಾಮಯ್ಯ ಅಧಿಕಾರಕ್ಕೆ ಯತೀಂದ್ರ ಅವರಿಂದಲೇ ಕೊನೆಯ ಮೊಳೆ!

• ಉದಯವಾಹಿನಿ ಬೆಂಗಳೂರು

ಸಿದ್ದರಾಮಯ್ಯ ಅಧಿಕಾರಕ್ಕೆ ಯತೀಂದ್ರ ಅವರಿಂದಲೇ ಕೊನೆಯ ಮೊಳೆ ಹೊಡೆದಿದ್ದಾರೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ವ್ಯಂಗ್ಯವಾಗಿ ಟೀಕಿಸಿದ್ದಾರೆ. ಬೆಂಗಳೂರಿನಲ್ಲಿ ಗುರುವಾರ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಭಿವೃದ್ಧಿ ಕುಂಠಿತಗೊಳಿಸಿದೆ. ಅಭಿವೃದ್ಧಿ ಬಗ್ಗೆ ಪ್ರಶ್ನೆ ಮಾಡಿದರೆ ದಾರಿ ತಪ್ಪಿಸುವ ಉತ್ತರ ಕೊಡಲಾಗುತ್ತಿದೆ. ರಸ್ತೆ ಗುಂಡಿ ಮುಚ್ಚಲು ಸಾಧ್ಯವಾಗುತ್ತಿಲ್ಲ. ರಸ್ತೆ ಗುಂಡಿ ಅಷ್ಟೇ ಅಲ್ಲ ಸರ್ಕಾರದಲ್ಲೂ ಗುಂಡಿ ಬಿದ್ದಿದೆ. ನಾಯಕರು ಮಕ್ಕಳಾದ ಯತೀಂದ್ರ, ಪ್ರಿಯಾಂಕ್ ಖರ್ಗೆ ಅವರು ಕಾಂಗ್ರೆಸ್‌ಗೆ ಗುಂಡಿ ತೋಡುತ್ತಿದ್ದಾರೆ.



ಅಷ್ಟೇ ಅಲ್ಲ ತಮ್ಮ ತಂದೆಯವರನ್ನೇ ಅಪಮಾನಗೊಳಿಸುವಂತೆ ಮಾಡುತ್ತಿದ್ದಾರೆ ಎಂದರು. ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ರಾಜ್ಯದಲ್ಲಿ ಹದಗೆಟ್ಟಿದೆ. ಇದನ್ನು ನೂರಾರು ಬಾರಿ ಹೇಳಿದರೂ ಪ್ರಜ್ಞೆ ಇಲ್ಲದಂತೆ ವರ್ತಿಸುತ್ತಿದ್ದಾರೆ. 7 ಜನರು ಒಂದು ಮನೆಗೆ ನುಗ್ಗಿ ಮಹಿಳೆಯ ಮೇಲೆ ಅತ್ಯಾಚಾರ ಎಸಗಿದ್ದಾರೆ. ಕೊಲೆಗಳು ನಡೆಯುತ್ತಿವೆ. ಮೈಸೂರಿನಲ್ಲಿ ಅಲೆಮಾರಿ ಸಮುದಾಯದ ಹಸುಳೆಯ ಮೇಲೆ ಅತ್ಯಾಚಾರ ನಡೆಯಿತು. ಇದನ್ನೆಲ್ಲಾ ಕೇಳಿದರೆ ಆರ್‌ಎಸ್‌ಎಸ್ ಬಗ್ಗೆ ಮಾತನಾಡುತ್ತಾರೆ ಎಂದು ವಾಗ್ದಾಳಿ ನಡೆಸಿದರು.

ಸರ್ಕಾರ ಜನರ ಸಮಸ್ಯೆಗಳ ಪರಿಹಾರಕ್ಕೆ ಬಂದಿದೆಯೋ ಅಥವಾ ಮತ್ತಷ್ಟು ಸಮಸ್ಯೆಗಳನ್ನು ಸೃಷ್ಟಿಸಲು ಆಡಳಿತಕ್ಕೆ ಬಂದಿದ್ದಾರಾ? ನಿಮ್ಮಿಂದ ಯಾರಿಗೆ ಪ್ರಯೋಜನ ಆಗುತ್ತಿದೆ ರಾಜ್ಯದ ಜನರು ಹಿಡಿಶಾಪ ಹಾಕುತ್ತಿದ್ದಾರೆ.

ಆದರೆ ಸರ್ಕಾರ ಕಾಲ ಹರಣ ಮಾಡುತ್ತಿದೆ. ಸರ್ಕಾರ ಯಾವುದರ ಬಗ್ಗೆ ತಲೆಕೆಡಿಸಿಕೊಳ್ಳುತ್ತಿಲ್ಲ. ಕಾಂಗ್ರೆಸ್ ಸರ್ಕಾರ ಈ ರಾಜ್ಯಕ್ಕೆ ಮಾರಕವಾಗಿದೆ ಎಂದು ಆಕ್ರೋಶ ಹೊರಹಾಕಿದರು.



ಯತೀಂದ್ರ ಅವರು ತನ್ನ ತಂದೆಗೆ ವಯಸ್ಸಾಗಿದೆ. ಅವರ ರಾಜಕೀಯ ಮುಗಿದಿದೆ. ಅವರ ನಾಯಕತ್ವ ಅಂತ್ಯದ ದಿನದಲ್ಲಿದೆ ಎಂದಿದ್ದಾರೆ. ಅಲ್ಲದೆ, ಅವರ ಉತ್ತರಾಧಿಕಾರಿಯಾಗಿ ಸತೀಶ್ ಜಾರಕಿಹೊಳಿ ಆಗಬೇಕು ಎಂದಿದ್ದಾರೆ. ಇದು ಪಕ್ಷದ ತೀರ್ಮಾನವೇ? ಅಥವಾ ಯತೀಂದ್ರ ಅವರೇ ತಮ್ಮ ತಂದೆಯ ರಾಜಕಾರಣಕ್ಕೆ ಕೊನೆಯ ಮೊಳೆ ಹೊಡೆಯುತ್ತಿದ್ದರಾ? ಎಂದು ಪ್ರಶ್ನಿಸಿದರು.

ಪ್ರಿಯಾಂಕ್ ಖರ್ಗೆ ಅವರು ಉಪ ಮುಖ್ಯಮಂತ್ರಿ ಆಗುತ್ತಾರೆ ಎಂದು ಹೇಳಲಾಗುತ್ತಿದೆ. ಅದಕ್ಕೆ ಅವರು ಅಷ್ಟೊಂದು ಆರ್ಭಟ ಮಾಡುತ್ತಿದ್ದಾರೆ. ಇಲಾಖೆ ಕೆಲಸ ಮಾಡದೆ ಬೇರೆ ಬೇರೆ ವಿಚಾರಗಳ ಬಗ್ಗೆ ಮಾತನಾಡುತ್ತಿದ್ದಾರೆ.

ಅವರು ಈ ಹಿಂದೆ ಸಚಿವರಾಗಿದ್ದಾಗಲೂ ಏಕೆ ಆದರು ಎಂದು ಗೊತ್ತಿಲ್ಲ. ಮಲ್ಲಿಕಾರ್ಜುನ ಖರ್ಗೆ ಅವರ ಹೆಸರು ಸಿಎಂ ಸ್ಥಾನಕ್ಕೆ ಉಲ್ಲೇಖವಾಗಿತ್ತು. ಆದರೆ ಸಿದ್ದರಾಮಯ್ಯನವರು ಹಾಗೂ ಮಹದೇವಪ್ಪ ಅವರು ಖರ್ಗೆ ಮುಖ್ಯಮಂತ್ರಿ ಆಗಬಾರದು ಎಂಬ ಕಾರಣಕ್ಕಾಗಿ ಪ್ರಿಯಾಂಕ್ ಅವರಿಗೆ ಸಚಿವ ಸ್ಥಾನ ನೀಡಿದ್ದರು ಎಂದು ಆರೋಪಿಸಿದರು.


ದಲಿತ ಸಮುದಾಯದ ಬಲಗೈ ಪಂಗಡದ ಅನೇಕರಿಗೆ ಸಚಿವ ಸ್ಥಾನ ಕೈತಪ್ಪಲು ಪ್ರಿಯಾಂಕ್ ಖರ್ಗೆ ಕಾರಣ. ದಲಿತ ಸಿಎಂ ಚರ್ಚೆ ಮತ್ತೆ ಮುನ್ನೆಲೆಗೆ ಬಂದಿದೆ. ಡಿನ್ನರ್ ಹಾಗೂ ಬ್ರೇಕ್ ಫಾಸ್ಟ್ ಮೀಟಿಂಗ್ ಆಗುತ್ತಿದೆ. ಅವರನ್ನು ಬಲಿ ಪಡೆದುಕೊಳ್ಳಲು ಡಿಸಿಎಂ ಆಗಬೇಕು ಎಂದು ಟವೆಲ್ ಹಾಕಲಾಗಿದೆ. ಹೀಗಾದರೆ ಪರಮೇಶ್ವರ್ ಹಾಗೂ ಎಚ್ ಸಿ ಮಹದೇವಪ್ಪ ಸಿಎಂ ಆಕಾಂಕ್ಷೆಗೆ ಕೊನೆಯ ಮೊಳೆ ಹೊಡೆದಂತೆ ಎಂದರು.

## ಪೋಕ್ಸೋ ಕೇಸ್: ಬಿಎಸ್ ಯಡಿಯೂರಪ್ಪ ವಿರುದ್ಧ 2 ಸಾಕ್ಷಿಗಳಿವೆ

■ ವಾಸ್ತವಿಕ ಅಂಶ ದಾಖಲಿಸಿ ಆದೇಶ ಕಾಯ್ದಿರಿಸಿದ ಹೈಕೋರ್ಟ್! ■ ಪೋಕ್ಸೋ ಕೇಸ್ ರದ್ದು ಕೋರಿ ಹೈಕೋರ್ಟ್‌ನಲ್ಲಿ ಅರ್ಜಿ ವಿಚಾರಣೆ.

• ಉದಯವಾಹಿನಿ ಬೆಂಗಳೂರು

ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ವಿರುದ್ಧ ಪೋಕ್ಸೋ ಕೇಸ್‌ಗೆ ಸಂಬಂಧಿಸಿದ ವಿಚಾರಣೆ ಆಲಿಸಿದ ಕರ್ನಾಟಕ ಹೈಕೋರ್ಟ್ ವಾಸ್ತವಾಂಶವನ್ನು ದಾಖಲಿಸಿ ಆದೇಶವನ್ನು ಕಾಯ್ದಿರಿಸಿದೆ!



ಪೋಕ್ಸೋ ಪ್ರಕರಣದಲ್ಲಿ ಸಂಜ್ಞೇ ಪರಿಗಣಿಸಿರುವುದನ್ನು ರದ್ದುಪಡಿಸುವಂತೆ ಕೋರಿ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಸಲ್ಲಿಸಿರುವ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್‌ನ ನ್ಯಾಯಮೂರ್ತಿ ಎಂ ಐ ಅರುಣ್ ಅವರ ಏಕಸದಸ್ಯ ಪೀಠವು ವಿಚಾರಣೆ ನಡೆಸಿತು. ಯಡಿಯೂರಪ್ಪ ಪರವಾಗಿ ಹಿರಿಯ ವಕೀಲ ಸಿವಿ ನಾಗೇಶ್ ವಾದ ಮಂಡಿಸಿದರು. ಸರ್ಕಾರದ ಪರ ವಿಶೇಷ ಸರ್ಕಾರಿ ಅಭಿಯೋಜಕ ಪ್ರೊ. ರವಿವರ್ಮ ಕುಮಾರ್ ಹಾಜರಾಗಿದ್ದರು.

ಈ ಕೇಸ್‌ನಲ್ಲಿ ವಿಚಾರಣಾಧೀನ ನ್ಯಾಯಾಲಯ ಪ್ರಾಸಿಕ್ಯೂಷನ್ ಸಂಗ್ರಹಿಸಿದ ದಾಖಲೆ ಆಧರಿಸಿ ಸಂಜ್ಞೇ ಪರಿಗಣಿಸಬೇಕಿತ್ತು. ಸಂತ್ರಸ್ತೆಯ ಹೇಳಿಕೆಯನ್ನು ಮಾತ್ರ ವಿಚಾರಣಾಧೀನ ನ್ಯಾಯಾಲಯ ಪರಿಗಣಿಸಿದೆ ಎಂಬುದು ಬಿಎಸ್ ಯಡಿಯೂರಪ್ಪ ಪರ ವಕೀಲರ ವಾದವಾಗಿತ್ತು.

ಮೊದಲು ವಾದ ಆರಂಭಿಸಿದ ಸಿವಿ ನಾಗೇಶ್, ಕೇಸ್ ಅನ್ನು ಹೊಸದಾಗಿ ಪರಿಗಣಿಸುವಂತೆ ಸಮನ್ವಯ ಪೀಠವು ವಿಚಾರಣಾಧೀನ ನ್ಯಾಯಾಲಯಕ್ಕೆ ಆದೇಶಿಸಿತ್ತು. ಇದನ್ನು ಮಾಡಲಾಗಿಲ್ಲ. ವಿವೇಚನೆ ಬಳಸಲಾಗಿಲ್ಲ. ತನಿಖಾಧಿಕಾರಿ ಸಲ್ಲಿಸಿರುವ ಇಡೀ ಸಾಕ್ಷಿಯನ್ನು ಪರಿಗಣಿಸಬೇಕು ಎಂದು ಹೇಳಿತ್ತು. ಅದನ್ನು ಪರಿಗಣಿಸಲಾಗಿಲ್ಲ ಎಂದು ಕೋರ್ಟ್‌ನ ಗಮನಕ್ಕೆ ತಂದರು.

**2 ಸಾಕ್ಷಿಗಳು ವಿರುದ್ಧವಿದೆ ಎಂದ ಕೋರ್ಟ್**

ಸಂತ್ರಸ್ತೆಯ ಹೇಳಿಕೆಯನ್ನೇ ಆಧರಿಸಿ ಪೋಕ್ಸೋ ಪ್ರಕರಣದಲ್ಲಿ ಅಪರಾಧಿ ಎಂದು ನಿರ್ಧರಿಸಲಾಗುತ್ತದೆಯಲ್ಲವೇ? ಸಂತ್ರಸ್ತೆಯ ಹೇಳಿಕೆ ಮತ್ತು (ಬಿಎಸ್ ಯಡಿಯೂರಪ್ಪ ಜೊತೆಗಿನ) ಆಡಿಯೋ ರೆಕಾರ್ಡಿಂಗ್ ನಿಮ್ಮ ವಿರುದ್ಧವಿದೆ. ಉಳಿದ ಸಾಕ್ಷಿಗಳ ಹೇಳಿಕೆಗಳು ನಿಮ್ಮ ಪರವಾಗಿವೆ ಎಂದು ಹೈಕೋರ್ಟ್ ಪೀಠ ಹೇಳಿತು ಎಂದು ಬಾರ್ ಅಂಡ್ ಬೆಂಚ್ ವರದಿ ಮಾಡಿದೆ.

ಸಂಜ್ಞೇ ಪರಿಗಣಿಸುವುದಕ್ಕೆ ಸಂತ್ರಸ್ತೆಯ ಹೇಳಿಕೆಯೇ ಸಾಕು ಎಂದು ವಿಚಾರಣಾಧೀನ ನ್ಯಾಯಾಲಯ ಹೇಳಿಲ್ಲ. ಸಂತ್ರಸ್ತೆಯ ಹೇಳಿಕೆಯನ್ನು ತನಿಖಾಧಿಕಾರಿ ಪರೀಕ್ಷೆಗೆ ಒಳಪಡಿಸಿದ್ದಾರೆ. ಈ ಹೇಳಿಕೆಯನ್ನೇ ತನಿಖಾಧಿಕಾರಿ ಒಪ್ಪಿಕೊಳ್ಳುವುದಾದರೆ ತನಿಖೆಯೇ ಅಗತ್ಯವಿಲ್ಲ.

ತನಿಖಾಧಿಕಾರಿಯು ಸಂಗ್ರಹಿಸುವ ಸಾಕ್ಷಿಗಳನ್ನು ವಿಚಾರಣಾಧೀನ ನ್ಯಾಯಾಲಯ ನೋಡಬೇಕೆ ಅಥವಾ ಬೇಡವೇ? ಎಂದು ಸಿವಿ ನಾಗೇಶ್ ಹೇಳಿದರು.

**ದನಿ ಖಾತ್ರಿ ಆಗಿದೆ!**

ಆಡಿಯೊ ರೆಕಾರ್ಡಿಂಗ್ ಅನ್ನು ಹೇಗೆ ಮೀರುತ್ತೀರಿ ಎಂದು ಪ್ರಶ್ನಿಸಿದ ಪೀಠಕ್ಕೆ ಸಿವಿ ನಾಗೇಶ್ ಅವರು ಆಡಿಯೊ ರೆಕಾರ್ಡಿಂಗ್ ಇಲ್ಲ ಎಂದರು. ಮಧ್ಯ ಪ್ರವೇಶಿದ ವಿಶೇಷ ಸರ್ಕಾರಿ ಅಭಿಯೋಜಕ ಪ್ರೊ. ರವಿವರ್ಮ ಕುಮಾರ್, ಆಡಿಯೋ ರೆಕಾರ್ಡಿಂಗ್ ನಾಶಪಡಿಸಲಾಗಿದೆ. ಅದು ಇಲ್ಲ ಎಂದಾದರೆ ಬಿಎಸ್ ಯಡಿಯೂರಪ್ಪ ಅವರು ಎರಡು ಲಕ್ಷ ರೂಪಾಯಿಯನ್ನು ಸಂತ್ರಸ್ತೆಗೆ ಏಕೆ ನೀಡಿದ್ದರು ಎಂದು ಪ್ರಶ್ನೆ ಮಾಡಿದರು.

ವಿಧಿ ವಿಜ್ಞಾನ ಪ್ರಯೋಗಾಲಯದ ವರದಿಯಲ್ಲಿ ಆಡಿಯೊದಲ್ಲಿರುವ ಧ್ವನಿಯು ಯಡಿಯೂರಪ್ಪ ಅವರದ್ದೇ ಎಂದು ಖಾತರಿಪಡಿಸಲಾಗಿದೆ ಸಂತ್ರಸ್ತೆಯನ್ನು ಖಾಸಗಿ ಕೊಠಡಿಗೆ ಕರೆದೊಯ್ದುರು. ಇದನ್ನು ವಿಚಾರಣಾಧೀನ ನ್ಯಾಯಾಲಯ ಪರಿಣಿಸಿದೆ. ಆನಂತರ ಸಂತ್ರಸ್ತೆಯು ಅಳುತ್ತಾ ಹೊರಬಂದಿದ್ದಾರೆ. ಇದನ್ನೂ ನ್ಯಾಯಾಲಯ ಪರಿಗಣಿಸಿದೆ ಎಂದು ಪ್ರೊ.ಕುಮಾರ್ ಪೀಠದ ಗಮನಕ್ಕೆ ತಂದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹12,508/Gram24ct ₹11,465/Gram22ct ಬೆಳ್ಳಿ: ₹159.00/Gram

## ಮಹಾಭಾರತದ ಉಪಾಖ್ಯಾನಗಳು ಧಾರ್ಮಿಕ ಪ್ರವಚನ

• ಉದಯವಾಹಿನಿ, ಬೆಂಗಳೂರು



ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಅಕ್ಟೋಬರ್ 24 ರಿಂದ 31ರ ವರೆಗೆ ಪ್ರತಿದಿನ ಸಂಜೆ 7-00ಕ್ಕೆ ಡಾ|| ಆನಂದತೀರ್ಥಾಚಾರ್ ಮಳಗಿಯವರಿಂದ ಮಹಾಭಾರತದ ಉಪಾಖ್ಯಾನಗಳು ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ.

ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಮಲ್ಲೇಶ್ವರಂ, ಬೆಂಗಳೂರು-560003

## ತುರ್ತು ನಿರ್ವಹಣೆ: ಅ.24-25ರಂದು ಬೆಸ್ಕಾಂ ಸೇವೆಯಲ್ಲಿ ವ್ಯತ್ಯಯ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಐದೂ ಎಸ್ಕಾಂಗಳ ಸೇವೆಗಳಲ್ಲಿ ಅಕ್ಟೋಬರ್ 24-25ರಂದು ವ್ಯತ್ಯಯ ಉಂಟಾಗಲಿದೆ. ತುರ್ತು ನಿರ್ವಹಣಾ ಕಾರ್ಯಗಳಿಂದಾಗಿ ಅ.24 ರಂದು ರಾತ್ರಿ 8 ಗಂಟೆಯಿಂದ ಅ.25 ರ ಮಧ್ಯಾಹ್ನ 1 ಗಂಟೆವರೆಗೆ ಐದು ಎಸ್ಕಾಂಗಳ ನಗರ ವ್ಯಾಪ್ತಿಯ ಗ್ರಾಹಕರಿಗೆ (ಆರ್‌ಎಪಿಡಿಆರ್‌ಪಿ) ವಿದ್ಯುತ್ ಬಿಲ್ ಪಾವತಿ, ಹೆಸರು ಬದಲಾವಣೆ, ಮೀಟರ್ ಬದಲಾವಣೆ, ಹೊಸ ಸಂಪರ್ಕಕ್ಕೆ ಅರ್ಜಿ ಸಲ್ಲಿಕೆ ಸೇರಿದಂತೆ ಯಾವುದೇ ಆನ್‌ಲೈನ್ ಸೇವೆ ಲಭ್ಯವಿರುವುದಿಲ್ಲ. ಜತೆಗೆ ವಿದ್ಯುತ್ ಬಿಲ್ ಪಾವತಿಗಾಗಿ ಬಳಸುವ ಬೆಸ್ಕಾಂ ಮಿತ್ರ ಆ್ಯಪ್, ಬೆಂಗಳೂರು ಒನ್, ಕರ್ನಾಟಕ ಒನ್ ಸೇರಿ ಥರ್ಡ್ ಪಾರ್ಟಿ ಪಾವತಿ ವಿಧಾನಗಳಲ್ಲೂ ಈ ಸೇವೆ ಅಲಭ್ಯ ಎಂದು ಇಂಧನ ಇಲಾಖೆ ಮಾಹಿತಿ ನೀಡಿದೆ.

ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ (ಬೆಸ್ಕಾಂ), ಹುಬ್ಬಳ್ಳಿಯ ಹೆಸ್ಕಾಂ, ಕಲಬುರಗಿಯ ಜೆಸ್ಕಾಂ, ಮೈಸೂರಿನ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ (ಸೆಸ್ಕ್), ಮಂಗಳೂರಿನ ಮೆಸ್ಕಾಂ ಸೇರಿ ಐದು ಕಂಪೆನಿಗಳ ವ್ಯಾಪ್ತಿಯಲ್ಲಿ ಆನ್‌ಲೈನ್ ಸೇವೆ ಲಭ್ಯವಿರುವುದಿಲ್ಲ. ಅನಾನುಕೂಲತೆಗಾಗಿ ಜನರು ಸಹಕರಿಸಬೇಕೆಂದು ಬೆಸ್ಕಾಂ ಅಧಿಕಾರಿಗಳು ತಿಳಿಸಿದ್ದಾರೆ.

## ಮಾಧ್ಯಮಗಳ ವರದಿ ಆಧರಿಸಿ ಸಿಎಂಗೆ ಪತ್ರ ಬರೆದಿದ್ದೆ; ಬಸವರಾಜ ರಾಯರೆಡ್ಡಿ ಸ್ಪಷ್ಟನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಅಕ್ರಮ ಮರಳು ದಂಧೆ ವಿರೋಧಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಿಎಂ ಆರ್ಥಿಕ ಸಲಹೆಗಾರರಾಗಿರುವ ಬಸವರಾಜ ರಾಯರೆಡ್ಡಿಯವರು ಬರೆದಿರುವ ಪತ್ರವೊಂದು ರಾಜ್ಯದಲ್ಲಿ ಸಂಚಲನ ಸೃಷ್ಟಿಸಿದೆ. ಪತ್ರ ಸಮರ ಕುರಿತು ರಾಜ್ಯ ಸರ್ಕಾರದ ವಿರುದ್ಧ ಹಲವು ಟೀಕೆಗಳು ವ್ಯಕ್ತವಾಗುತ್ತಿದ್ದು, ಇದರ ಬೆನ್ನಲ್ಲೇ ಬಸವರಾಜ ರಾಯರೆಡ್ಡಿಯವರು ಸ್ಪಷ್ಟನೆ ನೀಡಿದ್ದಾರೆ. ಪರವಾನಗಿ ಇಲ್ಲದೆ ಮರಳು ದಂಧೆ ನಡೆಸುತ್ತಿರುವ ಕುರಿತು ಮಾಧ್ಯಮಗಳಲ್ಲಿ ವರದಿಗಳಾಗಿತ್ತು. ಈ ವರದಿ ಆಧರಿಸಿ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದೆ ಎಂದು ಹೇಳಿದ್ದಾರೆ. ಪರವಾನಗಿ ಇಲ್ಲದೆ ಕೆಲವರು ಮರಳು ಗಣಿಗಾರಿಕೆ ನಡೆಸುತ್ತಿದ್ದಾರೆ. ಈ ಬಗ್ಗೆ ಅನೇಕ ಪತ್ರಿಕೆಗಳು ವರದಿ ಮಾಡಿದ್ದವು. ಆ ವರದಿ ಆಧಾರದ ಮೇಲೆ ಸಿಎಂಗೆ ಪತ್ರ ಬರೆದಿದ್ದೆ. ಇದು ಸಾಮಾನ್ಯವಾಗಿ ನಡೆಯುತ್ತಿರುವ ವಿಷಯವಾಗಿದೆ. ಇದನ್ನೇ ದೊಡ್ಡ ವಿಷಯ ಮಾಡಬೇಡಿ ಎಂದು ತಿಳಿಸಿದರು. ಬಿಜೆಪಿ ಅಧಿಕಾರದಲ್ಲಿದ್ದಾಗ ಭ್ರಷ್ಟಾಚಾರ ಹೆಚ್ಚಾಗಿತ್ತು. ನಾವು ಭ್ರಷ್ಟಾಚಾರವನ್ನು ಹತ್ತಿಕ್ಕುತ್ತಿದ್ದೇವೆ. ಈ ನಿಟ್ಟಿನಲ್ಲಿ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದೇವೆಂದು ಹೇಳಿದ್ದಾರೆ.

## ಫುಡ್ ಡೆಲಿವರಿ ಬಾಯ್‌ಗಳ ಮೊಬೈಲ್ ದೋಚುತ್ತಿದ್ದ ನಾಲ್ವರು ನೇಪಾಳಿ ಪ್ರಜೆಗಳ ಬಂಧನ

• ಉದಯವಾಹಿನಿ, ಬೆಂಗಳೂರು

ಫುಡ್ ಡೆಲಿವರಿ ಬಾಯ್‌ಗಳನ್ನು ಗುರಿಯಾಗಿಸಿಕೊಂಡು ಅವರ ಮೊಬೈಲ್ ಫೋನ್‌ಗಳನ್ನು ದೋಚುತ್ತಿದ್ದ ನಾಲ್ವರು ನೇಪಾಳಿ ಪ್ರಜೆಗಳನ್ನು ಬೆಳ್ಳಂದೂರು ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ. ಆರೋಪಿಗಳನ್ನು ಪರಾಸ್ ಸಿಂಗ್ (25), ಮುಖೇಶ್ ಸಾಯಿ (19), ಬಿಪಿನ್ ಕರ್ಕಿ (20), ಸಮೀರ್ ಲೋಹರ್ ಎಂದು ಗುರುತಿಸಲಾಗಿದೆ, ಬಂಧಿತರನ್ನು ನೇಪಾಳ ಮೂಲದ ಪಾರಸ್ ಸಿಂಗ್ (25), ಮುಕೇಶ್ ಸಾಯಿ (19), ಬಿಪಿನ್ ಕರ್ಕಿ (20), ಸಮೀರ್ ಲೋಹಾರ್ ಎಂದು ಗುರ್ತಿಸಲಾಗಿದೆ. ಇವರೆಲ್ಲರೂ ನೇಪಾಳ ಮೂಲದವರಾಗಿದ್ದು, ಕುಡ್ಲು ಗೇಟ್ ನಿವಾಸಿಗಳಾಗಿದ್ದಾರೆ.

ನಗರದ ಖಾಸಗಿ ಕಂಪನಿಗಳಲ್ಲಿ ಭದ್ರತಾ ಸಿಬ್ಬಂದಿ ಮತ್ತು ಮನೆಗೆಲಸದ ಸಿಬ್ಬಂದಿಯಾಗಿ ಕೆಲಸ ಮಾಡುತ್ತಿದ್ದರು. ರಾತ್ರಿ ವೇಳೆ ಫುಡ್ ಡೆಲಿವರಿ ಬಾಯ್‌ಗಳನ್ನು ಗುರಿಯಾಗಿಸಿಕೊಂಡು ದರೋಡೆ ಮಾಡುತ್ತಿದ್ದರು. ಫುಡ್ ಡೆಲಿವರಿ ಬಾಯ್‌ಗಳ ಬೈಕ್‌ಗಳನ್ನು ತಡೆದು, ಅವರ ಮೇಲೆ ಹಲ್ಲೆ ನಡೆಸಿ, ಅವರ ಮೊಬೈಲ್ ಫೋನ್ ಗಳನ್ನು ಕದ್ದು ಪರಾರಿಯಾಗುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಸೆಪ್ಟೆಂಬರ್ 13 ರಂದು ರಾತ್ರಿ 11.30 ರ ಸುಮಾರಿಗೆ ಆರು ಜನರು ಫುಡ್ ಡೆಲಿವರಿ ಬಾಯ್ ಸುರೇಶ್ ಅವರನ್ನು ದರೋಡೆ ಮಾಡಿದ್ದರು.

ಘಟನೆ ಸಂಬಂಧ ಸುರೇಶ್ ಅವರು ನೀಡಿದ ದೂರಿನ ಮೇರೆಗೆ ನಾಲ್ವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಆರೋಪಿಗಳನ್ನು ಕದ್ದ ಫೋನ್ ಗಳನ್ನು ಮಾರಾಟ ಮಾಡುವ ಬದಲು ಅವುಗಳನ್ನು ಬಳಕೆ ಮಾಡುತ್ತಿದ್ದರು. ಈ ಗ್ಯಾಂಗ್ ಬೆಳ್ಳಂದೂರು, ಹೆಬ್ಬಗೋಡಿ, ಪರಪ್ಪನ ಅಗ್ರಹಾರ, ಬಂಡೆಪಾಳ್ಯ ಮತ್ತು ಎಚ್‌ಎಸ್‌ಆರ್ ಲೇಔಟ್ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಇದೇ ರೀತಿಯ ದರೋಡೆ ನಡೆಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

# ನಮ್ಮ ಮೆಟ್ರೋ 72 ಕಿಮೀ ಹೊಸ ಮಾರ್ಗ ಆರಂಭಿಸಲು ಸಿದ್ಧತೆ

## ಬೆಂಗಳೂರಿನ ಪೂರ್ವ - ದಕ್ಷಿಣ ಭಾಗವನ್ನು ಸಂಪರ್ಕಿಸಲಿದ್ದು, 50 ಕ್ಕೂ ಅಧಿಕ ನಿಲ್ದಾಣ ನಿರ್ಮಾಣಕ್ಕೆ ಯೋಜನೆ

• ಉದಯವಾಹಿನಿ, ಬೆಂಗಳೂರು



ನಮ್ಮ ಮೆಟ್ರೋ ಬರೋಬ್ಬರಿ 72 ಕಿ.ಮೀ ಉದ್ದದ ಮೆಟ್ರೋ ಮಾರ್ಗ ನಿರ್ಮಾಣಕ್ಕೆ ಬಿಎಂಆರ್‌ಸಿಎಲ್ ಮುಂದಾಗಿದೆ. ಈ ಮಾರ್ಗವು ಬೆಂಗಳೂರಿನ ಪೂರ್ವ - ದಕ್ಷಿಣ ಭಾಗವನ್ನು ಸಂಪರ್ಕಿಸಲಿದ್ದು, 50 ಕ್ಕೂ ಅಧಿಕ ನಿಲ್ದಾಣಗಳನ್ನು ಹೊಂದಿರಲಿದೆ. ಮುಖ್ಯವಾಗಿ ಬೆಂಗಳೂರಿನಲ್ಲಿ ನಿರ್ಮಾಣವಾಗಲಿರುವ ದೇಶದ 2 ನೇ ಅತಿ ದೊಡ್ಡ ಕ್ರೀಡಾಂಗಣಕ್ಕೂ ಸಂಪರ್ಕ ಕಲ್ಪಿಸಲು ಯೋಜಿಸಲಾಗುತ್ತಿದೆ.

ನಮ್ಮ ಮೆಟ್ರೋ ಪ್ರಯಾಣಿಕರ ಸಂಖ್ಯೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದೆ. ಸದ್ಯ, ನೇರಳೆ, ಹಸಿರು, ಹಳದಿ ಸೇರಿ 3 ಮಾರ್ಗಗಳು ಕಾರ್ಯಾಚರಣೆ ನಡೆಸುತ್ತಿವೆ. 2026 ರ ಮಧ್ಯಭಾಗದಲ್ಲಿ ನಾಗವಾರ - ಕಾಳೇನ ಅಗ್ರಹಾರ ನಡುವಿನ ಗುಲಾಬಿ ಮಾರ್ಗ, 2027 ಕ್ಕೆ ಸರ್ಜಾಪುರ - ವಿಮಾನ ನಿಲ್ದಾಣ ಸಂಪರ್ಕ ಕಲ್ಪಿಸುವ ನೀಲಿ ಮಾರ್ಗ ಆರಂಭವಾಗಲಿದೆ. ಜತೆಗೆ ಬೂದು, ಕಿತ್ತಳೆ ಮಾರ್ಗದ ಕಾಮಗಾರಿಗೆ ಪ್ರಧಾನಿ ಇತ್ತೀಚೆಗೆ ಚಾಲನೆ ಕೊಟ್ಟಿದ್ದರು. ಇದರೊಂದಿಗೆ ಹೆಬ್ಬಾಳ - ಸರ್ಜಾಪುರ ಕೆಂಪು ಮಾರ್ಗಕ್ಕೂ ಯೋಜನೆ ರೂಪಿಸಲಾಗುತ್ತಿದೆ. ಈ ನಡುವೆ ಅತಿ ಉದ್ದದ ಮೆಟ್ರೋ ಮಾರ್ಗಕ್ಕೆ ಯೋಜನೆ ರೂಪಿಸುತ್ತಿದೆ.

> ಬಿಎಂಆರ್‌ಸಿಎಲ್ ರೂಪಿಸಿರುವ ಈ ಮಹತ್ವಾಕಾಂಕ್ಷೆಯ ಯೋಜನೆಯು ಕಾಳೇನ ಅಗ್ರಹಾರದಿಂದ ಕಾಡುಗುಡಿ ಟ್ರೀ ಪಾರ್ಕ್‌ವರೆಗೆ ಸಾಗುತ್ತದೆ. ಇದು ಬನ್ನೇರುಘಟ್ಟ, ಜಿಗಣಿ, ಅತ್ತಿಬೆಲೆ, ಸರ್ಜಾಪುರ, ದೊಮ್ಮಸಂದ್ರ ವೃತ್ತ ಮತ್ತು ವರ್ತೂರು ಕೋಡಿ ಮೂಲಕ ಹಾದುಹೋಗಲಿದೆ. ಈ ಮಾರ್ಗವು ನಗರದ ಪ್ರಮುಖ ಟೆಕ್ ಹಬ್‌ಗಳಿಗೂ ಸಂಪರ್ಕ ಕಲ್ಪಿಸಲಿದೆ.

**ಶೀಘ್ರದಲ್ಲಿಯೇ ಅಧ್ಯಯನ ವರದಿ ಸರ್ಕಾರಕ್ಕೆ:** ದೆಹಲಿ ಮೂಲದ ಇಂಟ್ರೋಸಾಫ್ಟ್ ಸೊಲ್ಯೂಷನ್ಸ್ ಪ್ರೈವೇಟ್ ಲಿಮಿಟೆಡ್ ಈ ಹೊಸ ಮೆಟ್ರೋ ಮಾರ್ಗದ ಸಮಗ್ರ ಅಧ್ಯಯನ ವರದಿಯನ್ನು ಸಿದ್ಧಪಡಿಸಿದೆ. ಈ ವರದಿಯು ಮಾರ್ಗದ ವಿನ್ಯಾಸ, ಪ್ರಯಾಣಿಕರ ಬೇಡಿಕೆ, ಭೂಸ್ವಾಧೀನ, ಅಂದಾಜು ವೆಚ್ಚ, ನಿಲ್ದಾಣಗಳ ಸಂಖ್ಯೆ ಮತ್ತು ಪ್ರಯಾಣಿಕರ ಸಂಖ್ಯೆಯ ಮುನ್ಸೂಚನೆಗಳನ್ನು ಒಳಗೊಂಡಿದೆ. ಈ ವರದಿಯನ್ನು ಅಕ್ಟೋಬರ್ ಅಂತ್ಯದೊಳಗೆ ರಾಜ್ಯ ಸರ್ಕಾರಕ್ಕೆ ಸಲ್ಲಿಸಲು ಬಿಎಂಆರ್‌ಸಿಎಲ್ ಉದ್ದೇಶಿಸಿದೆ. ಅನುಮೋದನೆ ದೊರೆತ ನಂತರ, ವಿವರವಾದ ಯೋಜನಾ ವರದಿ (ಡಿಪಿಆರ್) ತಯಾರಿಸುವ ಕಾರ್ಯ ಆರಂಭವಾಗಲಿದೆ.

**2029ಕ್ಕೆ ಕಾಮಗಾರಿ, ಆ ಬಳಿಕ 10 ವರ್ಷಕ್ಕೆ ಮಾರ್ಗ ಪೂರ್ಣಸಾಧ್ಯತೆ:** ವಿವರವಾದ ಯೋಜನಾ ವರದಿ (ಡಿಪಿಆರ್) ತಯಾರಿಸಲು ಸಾಮಾನ್ಯವಾಗಿ ಒಂದು ವರ್ಷ ಬೇಕಾಗುತ್ತದೆ. ನಂತರ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಅನುಮೋದನೆ ಪಡೆಯಲು ಇನ್ನೂ ಎರಡು ವರ್ಷಗಳ ಕಾಲಾವಕಾಶ ಬೇಕಾಗಬಹುದು.

ಎಲ್ಲಾ ಅನುಮೋದನೆಗಳು ಸರಿಯಾಗಿ ದೊರೆತರೆ, 2029ರ ವೇಳೆಗೆ ನಿರ್ಮಾಣ ಕಾರ್ಯ ಆರಂಭವಾಗಬಹುದು. ನಿರ್ಮಾಣ ಪೂರ್ಣಗೊಳ್ಳಲು 5 ರಿಂದ 10 ವರ್ಷಗಳು ಬೇಕಾಗಬಹುದು ಎಂದು ಅಂದಾಜಿಸಲಾಗಿದೆ.

### ಹೊಸ ಮಾರ್ಗದಲ್ಲೊಂದು ಚಿಕ್ಕ ಮಾರ್ಗ

**ಈ ಹೊಸ ಮಾರ್ಗವು 3.5 ರಿಂದ 4 ಕಿಲೋಮೀಟರ್ ಉದ್ದದ ಚಿಕ್ಕ ಮಾರ್ಗವೊಂದನ್ನು ಒಳಗೊಂಡಿದೆ. ಈ ಚಿಕ್ಕ ಮಾರ್ಗವು ಜಿಗಣಿಯಿಂದ ಆನೇಕಲ್ ಕಡೆಗೆ ಇರಲಿದೆ. ಇದರಿಂದ ಬನ್ನೇರುಘಟ್ಟ ಮತ್ತು ಆನೇಕಲ್ ಕಡೆಯಿಂದ ಬರುವ ಜನರು ನೇರವಾಗಿ ಸೂರ್ಯ ಸಿಟಿಯಲ್ಲಿ ನಿರ್ಮಾಣವಾಗುತ್ತಿರುವ ಬೆಂಗಳೂರಿನ ಅತಿ ದೊಡ್ಡ ಕ್ರೀಡಾ ಸಂಕೀರ್ಣಕ್ಕೆ ತಲುಪಬಹುದು. ಮುಖ್ಯ ಮಾರ್ಗವು ತನ್ನದೇ ಆದ ಹಾದಿಯಲ್ಲಿ ಮುಂದುವರಿಯುತ್ತದೆ. ಎರಡೂ ಮಾರ್ಗಗಳಲ್ಲಿ ಪ್ರತ್ಯೇಕ ರೈಲುಗಳ ಸಂಚಾರ ಇರಲಿದೆ ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದ್ದಾರೆ ಎಂದು ಮಾಡಿದೆ.**

## ಯತೀಂದ್ರ ಹೇಳಿದ್ರಲ್ಲಿ ತಪ್ಪೇನಿದೆ? ಸತೀಶ್ ಜಾರಕಿಹೊಳಿ ಪರ ಪರಂ ಬ್ಯಾಟಿಂಗ್

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಯತೀಂದ್ರ ಸಿದ್ದರಾಮಯ್ಯ ಹೇಳಿದ್ದರಲ್ಲಿ ತಪ್ಪೇನಿದೆ ಎಂದು ಕೇಳುವ ಮೂಲಕ ಸಚಿವ ಸತೀಶ್ ಜಾರಕಿಹೊಳಿಯವರಿಗೆ ಸಚಿವ ಪರಮೇಶ್ವರ್ ಅವರು ಬೆಂಬಲ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯತೀಂದ್ರ ಅವರು ಸೈದ್ಧಾಂತಿಕವಾಗಿ ಸತೀಶ್ ಜಾರಕಿಹೊಳಿ ಹೆಸರು ಹೇಳಿದ್ದಾರೆ. ಅದರಲ್ಲಿ ತಪ್ಪೇನಿದೆ? ಎಂದು ಪ್ರಶ್ನಿಸಿದ್ದಾರೆ. ಸತೀಶ್ ಜಾರಕಿಹೊಳಿಯವರು ಹಿಂದೆ ಅಹಿಂದ ಚಳುವಳಿಯಲ್ಲಿದ್ದರು. ಅವರಿಗೆ ಆ ಬದ್ಧತೆ ಇದೆ ಎಂದು ಹೇಳಿರಬಹುದು. ಸಿಎಂ ಹುದ್ದೆಯನ್ನು ದೃಷ್ಟಿಯಲ್ಲಿ ಇಟ್ಕೊಂಡು ಅವರು ಹೇಳಿಲ್ಲ ಎಂದು ಹೇಳಿದರು.

ಇದೇ ವೇಳೆ ಸಿಎಂ ರೇಸ್ ನಲ್ಲಿ ತಮ್ಮ ಹೆಸರಿರುವ ವಿಚಾರವಾಗಿ ಪ್ರತಿಕ್ರಿಯಿಸಿ, ಯಾವುದಾದರೂ ರೇಸ್ ಇರಲಿ, ಹೈಕಮಾಂಡ್ ನಿರ್ಧಾರವೇ ಅಂತಿಮ. ಆ ಸಂದರ್ಭ ಬಂದಾಗ ಸಿಎಲ್‌ಪಿ ಸಭೆ ಕರೆಯುತ್ತಾರೆ. ಶಾಸಕರ ಅಭಿಪ್ರಾಯ ಪಡೆಯುತ್ತಾರೆ. ವೀಕ್ಷಕರು ಹೈಕಮಾಂಡ್‌ಗೆ ವರದಿ ಕೊಟ್ಟು ನಂತರ ಘೋಷಣೆ ಆಗುತ್ತದೆ. ಇದು ಪದ್ಧತಿ. ಇದನ್ನು ಶಾರ್ಟ್ ಕಟ್ ಹೇಗೆ ಮಾಡುತ್ತಾರೆ ಹೇಳಿ ಎಂದು ಪ್ರಶ್ನಿಸಿದರು.

ಇದೇ ವೇಳೆ ನಾನು, ಸತೀಶ್, ಮಹಾದೇವಪ್ಪ ಕಾಫಿಗೆ ಸೇರಿದ್ದೆವು ಅಷ್ಟೇ ಎಂದು ಸ್ಪಷ್ಟಪಡಿಸಿದರು.

## ವಿದ್ಯಾರ್ಥಿಗಳಿಂದ ಶಿಕ್ಷಕರಿಗೆ ಗುರುವಂದನ, ಸನ್ಮಾನ ಕಾರ್ಯಕ್ರಮ

• ಉದಯವಾಹಿನಿ, ಕೆ.ಆರ್.ಪುರ



ಉದಯವಾಹಿನಿ ಚಿತ್ರ

ವಿದ್ಯಾರ್ಥಿಗಳು ಕಲಿಸಿದ ಗುರುಗಳಿಗಿಂತ ಉನ್ನತ ಸ್ಥಾನ ತಲುಪಬೇಕು. ಆಗ ಮಾತ್ರ ವಿದ್ಯೆ ಕಲಿಸಿದ ಗುರುಗಳಲ್ಲಿ ಸಾರ್ಥಕಭಾವ ಮೂಡುತ್ತದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ವಿಶೇಷ ಕರ್ತವ್ಯ ಅಧಿಕಾರಿಗಳಾದ ಡಾ. ಜಯಪ್ರಕಾಶ್. ಎ ತಿಳಿಸಿದರು.

ಮಹದೇವಪುರ ಕ್ಷೇತ್ರದ ವೈಟ್ ಫೀಲ್ಡ್ ಇಮ್ಮಡಿಹಳ್ಳಿ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಯಲ್ಲಿ 2002-03ನೇ ಸಾಲಿನ ಹಳೆಯ ವಿದ್ಯಾರ್ಥಿಗಳಿಂದ ಶಿಕ್ಷಕರಿಗೆ ಗುರುವಂದನ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು.

ಶಿಷ್ಯ ಉನ್ನತಕ್ಕೇರಿದಾಗ ಮಾತ್ರವೇ ಗುರುವಿಗೆ ಸಂತಸ ಸಿಗುತ್ತದೆ, ಹಳೆಯ ವಿದ್ಯಾರ್ಥಿಗಳಿಂದ ಹಮ್ಮಿಕೊಂಡಿದ ಗುರುವಂದನಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ನಿಜಕ್ಕೂ ಬಹಳ ಅರ್ಥಪೂರ್ಣವಾಗಿತ್ತು ಎಂದು ಅವರು ಸಂತಸ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಆಯೋಜಕಿ ಹಾಗೂ ಹಳೆ ವಿದ್ಯಾರ್ಥಿ ಅರುಣ ಮಾತನಾಡಿ, ಇಂದಿನ ದಿನಗಳಲ್ಲಿ ಮಕ್ಕಳು ವಿದೇಶಗಳಲ್ಲಿ ನೌಕರಿ ಮಾಡುತ್ತಿರುವುದು ಒಂದು ಕಡೆ ಸಂತಸವಿದ್ದರೆ. ಅವರಲ್ಲಿ ಕೆಲವರು ತಂದೆ ತಾಯಿಯನ್ನು ವೃದ್ಧಾಶ್ರಮಕ್ಕೆ ಸೇರಿಸುತ್ತಾರೆ. ಎಷ್ಟೇ ಕಷ್ಟವಾದರೂ ಹೆತ್ತವರ ಆರೈಕೆ ಮಾಡಬೇಕು. ವಿದ್ಯಾರ್ಥಿಗಳ ಅಭಿವೃದ್ಧಿಗೆ, ಪ್ರಗತಿಗೆ ಶ್ರಮಿಸಿದ ಗುರುಗಳನ್ನು ಸ್ಮಾರಸಬೇಕೆಂದು ನುಡಿದರು.

ಈ ಕಾರ್ಯಕ್ರಮದಲ್ಲಿ ಶಾಲೆಯ ಆಗಿನ ಮುಖ್ಯ ಶಿಕ್ಷಕಿಯಾದ ಶ್ರೀಮತಿ ರಫತ್ ನಾನ್ ತಾಚ್, ವಿದ್ಯಾ, ಗುರುಗಳಾದ ಶ್ರೀಗಂಗಾಧರ್, ಶ್ರೀನಿವಾಸ್ ಅಣ್ಣಯ್ಯಪ್ಪ, ಲಕ್ಷ್ಮಣ್, ಪಾಲಾಕ್ಷ ಸರ್, ಶ್ರೀಮತಿ ರತ್ನಮ್ಮ, ಸುಮಾ, ಉಮಾ, ಮಹಾಲಕ್ಷ್ಮಿ ಆಶಾ, ಥೆರೆಸಾಬಾನು, ಶಾಖಿರಾ, ಅರ್ಜಿಮಾನ್ ಬಾನು, ಮೇರಿ, ಶಾರದಮ್ಮ, ವಿಕ್ಟೋರಿಯ, ಗೌರಮ್ಮ, ಪ್ರೇಮ ಲೀಲಾ, ಉಷಾ, ವನಜ, ಮೇರಿ ಅಂಜಲ, ಊರಿನ ಹಿರಿಯರಾದ ಪ್ರವೀಣ್ ಕುಮಾರ್, ಎಸ್ ಡಿ ಎಂ ಸಿ ಅಧ್ಯಕ್ಷರಾದ ಅಶೋಕ್ ಅವರಿಗೆ ಗೌರವಿಸಲಾಯಿತು.

2002-03ನೇ ಸಾಲಿನ ಹಳೆಯ ವಿದ್ಯಾರ್ಥಿಗಳಾದ ಶ್ರೀಮತಿ ಅರುಣಾ, ದೀಪಿಕಾ, ಮಮತಾ, ಅಶೋಕ್, ಪ್ರದೀಪ್, ಭೈರೇಶ, ಭರತ್, ಮೂರ್ತಿ, ಶ್ರೀನಿವಾಸ್, ರಘು, ಮೋಹನ್, ರವಿ, ಗುರುಪ್ರಸಾದ್, ಪವಿತ್ರ ಕವಿತಾ, ಅಶ್ವಿನಿ, ಶಿಲ್ಪ, ಸೌಮ್ಯ, ದೀಪ ಶ್ರೀ, ಪೂರ್ಣಿಮಾ, ಜ್ಯೋತಿ, ಕಾರ್ಯಕ್ರಮದ ಆಯೋಜಕರಾದ ಶ್ರೀಮತಿ ಅರುಣ, ದೀಪಿಕಾ, ಅಶೋಕ್, ಮೂರ್ತಿ, ಶ್ರೀನಿವಾಸ್, ಪ್ರದೀಪ್, ರವಿ, ಮಮತಾ ಸೇರಿದಂತೆ ಹಳೆಯ ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಜೆಡಿಎಸ್ ರಾಜ್ಯಾಧ್ಯಕ್ಷರ ಬದಲಾವಣೆ ಚರ್ಚೆ ಸದ್ಯಕ್ಕೆ ಇಲ್ಲ: ಹೆಚ್‌ಡಿಕೆ

• ಉದಯವಾಹಿನಿ, ಬೆಂಗಳೂರು



ಜೆಡಿಎಸ್ ರಾಜ್ಯಾಧ್ಯಕ್ಷರ ಬದಲಾವಣೆ ಚರ್ಚೆ ಸದ್ಯಕ್ಕೆ ಇಲ್ಲ ಎಂದು ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಸ್ಪಷ್ಟಪಡಿಸಿದ್ದಾರೆ.

ಜೆಡಿಎಸ್ ರಾಜ್ಯಾಧ್ಯಕ್ಷರ ಬದಲಾವಣೆ ವಿಚಾರಕ್ಕೆ ಬೆಂಗಳೂರಿನಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಸದ್ಯಕ್ಕೆ ಪಕ್ಷದಲ್ಲಿ ರಾಜ್ಯಾಧ್ಯಕ್ಷ ಬದಲಾವಣೆ ಚರ್ಚೆ ಇಲ್ಲ. ರಾಜ್ಯಾಧ್ಯಕ್ಷರ ಬದಲಾವಣೆ ಬಗ್ಗೆ ಚರ್ಚೆಗೆ ಬಂದಿಲ್ಲ. ಸದ್ಯ ನಾನೇ ಅಧ್ಯಕ್ಷ ಆಗಿ ಇದ್ದೇನೆ. ರಾಜ್ಯಾಧ್ಯಕ್ಷ ಬದಲಾವಣೆ ಬೇಡ ಅಂತ ಒಂದು ವಿಂಗ್ ಇದೆ. ಇನ್ನೊಂದು ಕಡೆ ನಿಖಿಲ್ ಕುಮಾರಸ್ವಾಮಿಗೆ ಜವಾಬ್ದಾರಿ ಕೊಡಬೇಕು ಅಂತ ಇದೆ. ಆದರೆ ಇದ್ಯಾವುದರ ಬಗ್ಗೆ ಚರ್ಚೆ ಆಗಿಲ್ಲ, ಸದ್ಯಕ್ಕೆ ಜೆಡಿಎಸ್ ರಾಜ್ಯಾಧ್ಯಕ್ಷ ಬದಲಾವಣೆ ಇಲ್ಲ ಎಂದು ತಿಳಿಸಿದರು.

ಇದೇ ವೇಳೆ ಸತೀಶ್ ಜಾರಕಿಹೊಳಿ ಸಿಎಂ ಆಗಲಿ ಎಂಬ ಯತೀಂದ್ರ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ಅವರ ಪಕ್ಷದ ಬೆಳವಣಿಗೆಗಳು ಏನಿದೆ ನಾವು ಅದರ ಬಗ್ಗೆ ಚರ್ಚೆ ಮಾಡೋ ಅವಶ್ಯಕತೆ ಇಲ್ಲ. ಅವರ ಪಕ್ಷದಲ್ಲಿ ಏನೇನು ಬೇಕು ಅವರು ತೀರ್ಮಾನ ಮಾಡಿಕೊಳ್ಳಲಿ ಎಂದರು.

ಸಮನ್ವಯ ಸಮಿತಿ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಶೀಘ್ರವೇ ಜೆಡಿಎಸ್-ಬಿಜೆಪಿ ನಡುವೆ ಸಮನ್ವಯ ಸಮಿತಿ ರಚನೆ ಆಗಲಿದೆ. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು, ಬಿಜೆಪಿ ನಾಯಕರು ಬಂದು ಚರ್ಚೆ ಮಾಡಿದ್ದಾರೆ.

ಬೆಂಗಳೂರಿಗೆ ಒಂದು, ರಾಜ್ಯಕ್ಕೆ ಒಂದು ಸಮನ್ವಯ ಸಮಿತಿ ರಚನೆ ಬಗ್ಗೆ ತೀರ್ಮಾನ ಆಗಿದೆ. ಒಂದು ವಾರ ಅಥವಾ 10 ದಿನಗಳಲ್ಲಿ ಅದರ ಬಗ್ಗೆ ಅಂತಿಮ ತೀರ್ಮಾನ ಮಾಡುತ್ತೇವೆ ಎಂದು ತಿಳಿಸಿದರು.

> **ಕೋರ್ ಕಮಿಟಿ ಪುನರ್ ರಚನೆ ವಿಚಾರ ಸಂಬಂಧ ಮಾತನಾಡಿ, ಕೋರ್ ಕಮಿಟಿ ಪುನರ್ ರಚನೆ ಬಗ್ಗೆ ನಮ್ಮ ಪಕ್ಷದಲ್ಲಿ ಒಂದು ಸಭೆ ಆಗಿದೆ. ಕೋರ್ ಕಮಿಟಿ ಮತ್ತು ಕಾರ್ಪೋರೇಷನ್ ಚುನಾವಣೆ ಸಂಬಂಧ ಪಕ್ಷ ಸಂಘಟನೆಗೆ ಸಮಿತಿ ಮಾಡುವ ನಿರ್ಧಾರ ಮಾಡಿದ್ದೇವೆ. ಮುಂದಿನ ದಿನಗಳಲ್ಲಿ ಆ ಬಗ್ಗೆ ತೀರ್ಮಾನ ಮಾಡುತ್ತೇವೆ ಎಂದು ಹೇಳಿದರು.**

## ಡಿಜೆ ಹಳ್ಳಿ ಠಾಣೆಯ ಇನ್ಸ್‌ಪೆಕ್ಟರ್? ಕಾಮಕಾಂಡ ಎಳೆ ಎಳೆಯಾಗಿ ಬಿಚ್ಚಿಟ್ಟ ಸಂತ್ರಸ್ತ ಮಹಿಳೆ!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಬೆಂಗಳೂರಿನ ಡಿ.ಜೆ ಹಳ್ಳಿ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಸುನೀಲ್ ವಿರುದ್ಧ ಅತ್ಯಾಚಾರ ಮತ್ತು ವಂಚನೆ ಪ್ರಕರಣ ಕೇಳಿಬಂದಿದೆ. ಮಹಿಳೆಯೊಬ್ಬರು ನನ್ನನ್ನು ಮದುವೆಯಾಗುವುದಾಗಿ ನಂಬಿಸಿ ನನ್ನನ್ನು ಲೈಂಗಿಕವಾಗಿ ಬಳಸಿಕೊಂಡಿದ್ದಾರೆ ಎಂದು ಮಹಿಳೆಯೊಬ್ಬರು ಆರೋಪಿಸಿದ್ದು ಈ ಸಂಬಂಧ ಡಿಜಿ ಮತ್ತು ಐಜಿಪಿ ಕಚೇರಿಗೂ ದೂರು ನೀಡಿದ್ದಾರೆ.

ಹಣದ ಮೋಸದ ವಿಚಾರಕ್ಕೆ ಠಾಣೆಗೆ ಬಂದಿದ್ದ 36 ವರ್ಷದ ಮಹಿಳೆಯನ್ನು ವಿಶ್ವಾಸಕ್ಕೆ ತೆಗೆದುಕೊಂಡ ಸುನೀಲ್ ನಂತರ ಮದುವೆಯಾಗುವುದಾಗಿ ನಂಬಿಸಿದ್ದಾರೆ.

ಅಷ್ಟೇ ಅಲ್ಲದೆ ರಿಜಿಸ್ಟರ್ ಮದುವೆಯಾಗುವುದಾಗಿ ಭರವಸೆ ನೀಡಿದ್ದರು. ನನಗೆ ಮನೆ ಕೊಡಿಸುತ್ತೇನೆ. ಬ್ಯೂಟಿ ಪಾರ್ಲರ್ ಓಪನ್ ಮಾಡಿಕೊಡುತ್ತೇನೆ ಎಂದು ಹೇಳಿ ನನ್ನನ್ನು ತಮ್ಮ ಮನೆ ಮತ್ತು ಹೋಟೆಲ್ ಗೆ ಕರೆಸಿಕೊಂಡು ಮೂರು ಬಾರಿ ಅತ್ಯಾಚಾರ ನಡೆಸಿದ್ದಾರೆ ಎಂದು ಸಂತ್ರಸ್ತ ಮಹಿಳೆ ಆಯೇಷಾ ದೂರು ನೀಡಿದ್ದಾರೆ. ಈ ಮಧ್ಯೆ, ಆರೋಪರಕ್ಕೆ ಸಂಬಂಧಿಸಿದಂತೆ ಸಂತ್ರಸ್ತ ಯುವತಿಯ ಹೇಳಿಕೆ ಮತ್ತು ಅವರ ನಡುವೆ ನಡೆದ ಚಾಟಿಂಗ್ ವಿವರಗಳು ಈಗ ಬಹಿರಂಗಗೊಂಡಿದ್ದು ಪ್ರಕರಣಕ್ಕೆ ಮತ್ತಷ್ಟು ತಿರುವು ನೀಡಿವೆ. ಇನ್ಸ್‌ಪೆಕ್ಟರ್ ಸುನೀಲ್ ಅವರು ಮದುವೆಯಾಗುವುದಾಗಿ ನಂಬಿಸಿ ತನ್ನ ಮೇಲೆ ದೌರ್ಜನ್ಯ ಎಸಗಿದ್ದಾರೆ ಎಂಬ ಸಂತ್ರಸ್ತೆಯ ದೂರಿನ ಸತ್ಯಾಂಶಗಳನ್ನು ಈ ಚಾಟ್‌ಗಳು ಬಿಚ್ಚಿಟ್ಟಿವೆ.

## ಪ್ರಿಯಾಂಕ್ ಖರ್ಗೆ ವಿರುದ್ಧ ಅವಹೇಳನಕಾರಿ ಹೇಳಿಕೆ: ಬಿಜೆಪಿ ವಕ್ತಾರ ಮಹೇಶ್ ವಿರುದ್ಧ ದೂರು ದಾಖಲು

• ಉದಯವಾಹಿನಿ, ಬೆಂಗಳೂರು




ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಹಿನ್ನೆಲೆಯಲ್ಲಿ ಬಿಜೆಪಿ ಮುಖ್ಯ ವಕ್ತಾರ ಎಂ.ಜಿ. ಮಹೇಶ್ ವಿರುದ್ಧ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಬೆಂಗಳೂರು ದಕ್ಷಿಣ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಎನ್. ಆನಂದ್ ಅವರು ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ಮಹೇಶ್ ಅವರ ವಿರುದ್ಧ ದೂರು ದಾಖಲಿಸಿಕೊಂಡಿದ್ದಾರೆ. ಮಹೇಶ್ ಅವರು ಪ್ರಿಯಾಂಕ್ ಖರ್ಗೆಯವರನ್ನು ಗುಲಾಮ ಎಂದು ಸಂಬೋಧಿಸಿದ್ದು, ಜಾತಿಯನ್ನು ಅವಮಾನಿಸಿದ್ದಾರೆ. ದ್ವೇಷ ಹರಡುವ ಮತ್ತು ಮಾನಹಾನಿ ಮಾಡುವ ಉದ್ದೇಶದಿಂದ ಸುಳ್ಳು ಮಾಹಿತಿಯನ್ನು ಹರಡಿದ್ದಾರೆ. ಅವರ ಹೇಳಿಕೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ ಎಂದು ತಿಳಿಸಿದ್ದಾರೆ. ಮಹೇಶ್ ಅವರು ಮೈಸೂರಿನಲ್ಲಿ ಹೇಳಿಕೆ ನೀಡಿದ್ದು, ಹೀಗಾಗಿ, ತನಿಖೆಗಾಗಿ ಮೈಸೂರು ಪೊಲೀಸರಿಗೆ ಪ್ರಕರಣವನ್ನು ವರ್ಗಾಯಿಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ.

## ಇವಿ ಬಿಎಂಟಿಸಿ ಬಸ್ಸು ಚಾಲಕರಿಂದ ದಿಢೀರ್ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಅಟೆಂಡೆನ್ಸ್ ಬೋನಸ್, ವೇತನಭತ್ಯೆಗೆ ಆಗ್ರಹಿಸಿ ಮೈಸೂರು ರಸ್ತೆಯ ದೀಪಾಂಜಲಿ ನಗರದಲ್ಲಿರುವ ಬಿಎಂಟಿಸಿ ಡಿಪೋದಲ್ಲಿ ಎಲೆಕ್ಟ್ರಿಕ್ ಬಸ್ ಚಾಲಕರು ದಿಢೀರ್ ಪ್ರತಿಭಟನೆ ನಡೆಸುತ್ತಿದ್ದಾರೆ.

ಬಸ್ಸುಗಳನ್ನು ತೆಗೆಯದೇ ಡಿಪೋ ನಂಬರ್ 16ರ 100 ಕ್ಕೂ ಇವಿ ಬಸ್ಸುಗಳ ಚಾಲಕರ ಪ್ರತಿಭಟನೆ ನಡೆಸುತ್ತಿರುವ ಕಾರಣ ಸಂಚಾರದಲ್ಲಿ ವ್ಯತ್ಯಯವಾಗಿದೆ. ಕಳೆದ ಎರಡು ವರ್ಷಗಳಿಂದ ಅಟೆಂಡೆನ್ಸ್ ಬೋನಸ್, ವೇತನ ಭತ್ಯೆ ನೀಡುತ್ತಿಲ್ಲ. ಅಪಘಾತವಾದಾಗ ಸರಿಯಾಗಿ ಪ್ರತಿಕ್ರಿಯೆ ನೀಡುವುದಿಲ್ಲ. ಚಾಲಕರಿಗೆ ಭದ್ರತೆಯಿಲ್ಲ. ನಮ್ಮ ಬೇಡಿಕೆ ಈಡೇರುವವರೆಗೆ ಇವಿ ಬಸ್ ತೆಗೆಯುವುದಿಲ್ಲ ಎಂದು ಚಾಲಕರು ಪಟ್ಟು ಹಿಡಿದಿದ್ದಾರೆ. ಎಲೆಕ್ಟ್ರಿಕ್ ಬಸ್ಸು ಚಾಲಕರು ನೇರವಾಗಿ ಬಿಎಂಟಿಸಿ ವ್ಯಾಪ್ತಿಗೆ ಬರುವುದಿಲ್ಲ. ಇವರು ಗುತ್ತಿಗೆ ನೌಕರರಾಗಿದ್ದು ಖಾಸಗಿ ಸಂಸ್ಥೆ ನೇಮಕ ಮಾಡುತ್ತದೆ. ಈ ಸಂಸ್ಥೆ ಚಾಲಕರನ್ನು ನೇಮಕ ಮಾಡುವಾಗ ಯಾವ ರೀತಿ ಒಪ್ಪಂದ ಮಾಡಿಕೊಂಡಿರುತ್ತದೋ ಒಪ್ಪಂದದಂತೆ ಸಂಬಳ, ಭತ್ಯೆಯನ್ನು ನೀಡಬೇಕಾಗುತ್ತದೆ.

# ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತ ಕರ್ನಾಟಕಕ್ಕೆ ಹಿಡಿದ ಗ್ರಹಣ ಎಂದ ಸೂರ್ಯ


## ಅಮಾವಾಸ್ಯೆ ಸೂರ್ಯ ಎಂದು ಜರಿದಿದ್ದ ಸಿಎಂ ಸಿದ್ದರಾಮಯ್ಯ: ತೇಜಸ್ವಿ ಸೂರ್ಯ ಕೊಟ್ಟ ಖಡಕ್ ತಿರುಗೇಟು ಏನು ಗೊತ್ತಾ!?

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಟೀಕೆ ಹಾಗೂ ಸಂಸದ ತೇಜಸ್ವಿ ಸೂರ್ಯ ಅವರ ಖಡಕ್ ಪ್ರತಿಕ್ರಿಯೆ ಈಗ ಚರ್ಚೆಗೆ ಗ್ರಾಸವಾಗಿದೆ. ಅಮಾವಾಸ್ಯೆ ಸೂರ್ಯ ಎಂದಿದ್ದ ಸಿಎಂಗೆ, ಸೂರ್ಯನ ಪೂಜೆ ಮಾಡೋರಿಗೂ-ಚಂದ್ರನ ಪೂಜೆ ಮಾಡೋರಿಗೂ ವ್ಯತ್ಯಾಸ ತಿಳ್ಕೊಂಡು ಮುಂದೆ ಈ ರೀತಿಯ ಹೇಳಿಕೆ ಕೊಡಿ ಎಂದು ತೇಜಸ್ವಿ ಸೂರ್ಯ ತಿರುಗೇಟು ನೀಡಿದ್ದಾರೆ.

ಬೆಂಗಳೂರಿನ ಗಾಂಧಿನಗರದ ವೈಟ್ ಟಾಪಿಂಗ್ ಗುದ್ದಲಿ ಪೂಜೆ ಕಾರ್ಯಕ್ರಮದಲ್ಲಿ ಅ.21 ರಂದು ಸಿಎಂ ಸಿದ್ದರಾಮಯ್ಯ ಮಾತನಾಡುತ್ತಾ, ಕೇಂದ್ರದಿಂದ ರಾಜ್ಯಕ್ಕೆ ಅನುದಾನ ತರದಿರುವ ಬಗ್ಗೆ ಹಾಗೆಯೇ ಮೋದಿ ಸರ್ಕಾರದಿಂದ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯ, ದ್ರೋಹದ ಬಗ್ಗೆ ಅಮಾವಾಸ್ಯೆ ಸೂರ್ಯ ಬಾಯಿ ಬಿಟ್ಟಿದ್ದಾರಾ ಎಂದು ಟೀಕಿಸಿದ್ದರು. ಸಂಸದ ತೇಜಸ್ವಿ ಸೂರ್ಯ. ನಾನು ಇವರನ್ನು ಅಮಾವಾಸ್ಯೆ ಸೂರ್ಯ ಅಂತ ಕರೀತೀನಿ ಎಂದಿದ್ದರು.

ಈ ಬಗ್ಗೆ ಇಂದು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಸಂಸದ ತೇಜಸ್ವಿ ಸೂರ್ಯ ಸಿದ್ದರಾಮಯ್ಯ ಅವರು, ಹಲವಾರು ಬಾರಿ ನನ್ನ ಬಗ್ಗೆ ಮಾತನಾಡುತ್ತಾ ವೈಯಕ್ತಿಕವಾಗಿ ಟೀಕೆಗಳನ್ನು ಮಾಡಿದ್ದಾರೆ. ಅವರು ಇರುವ ಸ್ಥಾನಕ್ಕೆ ಶೋಭೆ ತರುವುದಿಲ್ಲ. ಈ ಹಿಂದೆ ಕೂಡಾ ಚುನಾವಣೆ ಸಂದರ್ಭದಲ್ಲಿ ಟೀಕಿಸಿದ್ರು. ಈಗ ಎರಡು ದಿನದ ಹಿಂದೆ ಕೂಡಾ ಮತ್ತೆ ಅದೇ ಶಬ್ಧ ಬಳಸಿ ಟೀಕೆ ಮಾಡಿದ್ದಾರೆ ಎಂದರು, ಪ್ರತೀ ಬಾರಿಯೂ ನನಗೆ ಆಶ್ಚರ್ಯ ಆಗುವುದೇನಂದ್ರೆ, ಸಿದ್ದರಾಮಯ್ಯ ಅವರು ಹಿರಿಯರಿದ್ದಾರೆ. ಲೋಕಾನುಭವ ಇರುವವರು ಇದ್ದಾರೆ. ಆದರೆ ಅವರಿಗೆ ಬಹುಷಃ ಅಮಾವಾಸ್ಯೆಗೂ- ಹುಣ್ಣಿಮೆಗೂ ಇರುವ ವ್ಯತ್ಯಾಸನೇ ಗೊತ್ತಿಲ್ವೇನೋ. ಹೊರಗಡೆ ಹೋಗಿ ನೋಡೋದೆ ಇಲ್ವೇನೋ ಎಂದು ಭಾಸ ಆಗುತ್ತೆ.



ಅಮಾವಾಸ್ಯೆ ದಿನಾನೂ ಸೂರ್ಯ ಇರ್ತಾನೆ, ಹುಣ್ಣಿಮೆ ದಿನಾನೂ ಇರ್ತಾನೆ. ವರ್ಷದ 365 ದಿನ ಕೂಡಾ ಪ್ರಕಾಶಮಾನ ಆಗಿರೋದು ಯಾರಂದ್ರೆ, ಸೂರ್ಯನೇ ಅಮಾವಾಸ್ಯೆ ದಿನ ಇಲ್ಲದೇ ಇರೋದು ಚಂದ್ರ. ಬಹುಷಃ ನೀವು ಈ ಚಂದ್ರನ ನೋಡಿ ಪೂಜೆ ಮಾಡೋವ್ರ ಜೊತೆ ಜಾಸ್ತಿ ಇದ್ದು, ಅಮಾವಾಸ್ಯೆ ಮತ್ತು ಹುಣ್ಣಿಮೆಗೆ ಸೂರ್ಯ ಇಲ್ಲ ಎಂದು ಕನ್ಫ್ಯೂಸ್ ಆಗಿದ್ದೀರಿ. ಚಂದ್ರ ಯಾವತ್ತಿರ್ತಾನೆ, ಯಾವತ್ತು ಇರಲ್ಲ ಪೂರ್ತಿ ಚಂದ್ರ ಇದಾನೋ, ಅರ್ಧ ಚಂದ್ರ ಇದಾನೋ, ಯಾವ ಊರಲ್ಲಿ ಚಂದ್ರ ಕಾಣಿಸಿದ್ರೆ ಯಾವ ಪೂಜೆ ಮಾಡ್ತಾರೋ, ಈ ಪೂಜೆ ಮಾಡೋರು ನಾವಲ್ಲ ಎಂದು ವ್ಯಂಗ್ಯ ಮಾಡಿದರು.

ನಮಗೆ ಅಮಾವಾಸ್ಯೆಯಂದೂ ಲಕ್ಷ್ಮೀ ಪೂಜೆ, ಅಂದೂ ಸೂರ್ಯ ಇರುತ್ತಾನೆ. ಹುಣ್ಣಿಮೆಯಂದೂ ಪೂಜೆ ಮಾಡುತ್ತೇವೆ, ಎಂದು ಹೇಳಿದರು. ಸೂರ್ಯನನ್ನು ಪೂಜಿಸುವವರಿಗೂ ಚಂದ್ರನನ್ನು ಪೂಜಿಸುವವರಿಗೂ ಇರುವ ವ್ಯತ್ಯಾಸವನ್ನು ಮೊದಲು ತಿಳಿದುಕೊಳ್ಳಿ. ಅಮಾವಾಸ್ಯೆಯಂದು ಸೂರ್ಯ ಎಷ್ಟು ಪ್ರಕಾಶಮಾನವಾಗಿರುತ್ತಾನೋ, ಹುಣ್ಣಿಮೆಯಂದೂ ಅಷ್ಟೇ ಪ್ರಕಾಶಮಾನವಾಗಿರುತ್ತಾನೆ. ಸೂರ್ಯ ಅಮಾವಾಸ್ಯೆ - ಹುಣ್ಣಿಮೆ ಎಲ್ಲಾ ದಿನವೂ ಪ್ರಕಾಶಮಾನವಾಗಿರ್ತಾನೆ ಅನ್ನುವ ಬೇಸಿಕ್ ಅರ್ಥ ಮಾಡ್ಕೊಳ್ಳಿ ಎಂದು ಮನವಿ ಮಾಡ್ತೇನೆ ಎಂದು ತಿರುಗೇಟು ನೀಡಿದ್ದಾರೆ.

ಕಾಂಗ್ರೆಸ್ ಸರ್ಕಾರದ ಕಾರ್ಯಕ್ಷಮತೆಯತ್ತ ಗಮನಸೆಳೆದ ತೇಜಸ್ವಿ ಸೂರ್ಯ, ಸಿದ್ದರಾಮಯ್ಯ ಅವರ ಆಡಳಿತದಲ್ಲಿ ಬೆಂಗಳೂರು ನಾಗರಿಕ ಅಸ್ತವ್ಯಸ್ತತೆ ಮತ್ತು ಕಾನೂನುಬಾಹಿರತೆಯಿಂದ ಬಳಲುತ್ತಿದೆ ಎಂದು ಆರೋಪಿಸಿ ತೀವ್ರ ಪ್ರತಿದಾಳಿ ನಡೆಸಿದರು. ಗುಂಡಿ ಮುಕ್ತವಾದ ಒಂದು ರಸ್ತೆಯೂ ಇಲ್ಲ. ಅವರು ಒಂದು ಕಿಲೋಮೀಟರ್ ಉತ್ತಮ ರಸ್ತೆಯನ್ನು ಅಥವಾ ಕಸಮುಕ್ತ ನಗರವನ್ನು ಒದಗಿಸಲು ಅಸಮರ್ಥರಾಗಿದ್ದಾರೆ. ಇತ್ತೀಚೆಗೆ, ಬೆಂಗಳೂರಿನಲ್ಲಿ ಮೂರು ಅತ್ಯಾಚಾರ ಪ್ರಕರಣಗಳು ದಾಖಲಾಗಿವೆ.

ಕರ್ನಾಟಕವು 15 ಶತಕೋಟಿ ಡಾಲರ್ ಮೌಲ್ಯದ ರಾಜ್ಯ ಹೂಡಿಕೆಯನ್ನು ಕಳೆದುಕೊಂಡಿದೆ, ಐಟಿ ಸಚಿವರು ಆರ್‌ಎಸ್‌ಎಸ್ ಅನ್ನು ನಿಷೇಧಿಸುವಲ್ಲಿ ನಿರತರಾಗಿದ್ದಾರೆ, ಎಂದು ಅವರು ಹೇಳಿದರು.

### ಸಿದ್ದರಾಮಯ್ಯ ಸರ್ಕಾರ ಕರ್ನಾಟಕಕ್ಕೆ ಹಿಡಿದ ಗ್ರಹಣ

**ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತವನ್ನು 'ಕರ್ನಾಟಕಕ್ಕೆ ಹಿಡಿದ ಗ್ರಹಣ' ಎಂದು ಸಂಸದ ತೇಜಸ್ವಿ ಸೂರ್ಯ ಟೀಕಿಸಿದರು. ಸರ್ಕಾರದ ಆರ್ಥಿಕ ದುಸ್ಥಿತಿ ಮತ್ತು ಅಭಿವೃದ್ಧಿ ವೈಫಲ್ಯಗಳ ಕುರಿತು ಮುಂಬರುವ ವಿಧಾನಸಭಾ ಅಧಿವೇಶನದಲ್ಲಿ ಶ್ವೇತಪತ್ರ ಹೊರಡಿಸಬೇಕೆಂದು ಆಗ್ರಹಿಸಿದರು. ಕಳೆದ ಅವಧಿಯಲ್ಲಿ ಸಿದ್ದರಾಮಯ್ಯನವರು ಮಾಡಿದ ಸಾಲ ಯಾವ ಉದ್ದೇಶಕ್ಕಾಗಿ ಬಳಕೆಯಾಯಿತು? ಆ ಹಣದಲ್ಲಿ ಹೊಸ ಮೆಟ್ರೋ ನಿರ್ಮಿಸಿದರಾ? ಹೊಸ ಫ್ಲೈಓವರ್ ಕಟ್ಟಿದರಾ? ಅಥವಾ ಉದ್ಯೋಗ ಸೃಷ್ಟಿಸುವಂತಹ ಕಟ್ಟಡಗಳನ್ನು ನಿರ್ಮಿಸಿದರಾ? ಎಂದು ಸೂರ್ಯ ಪ್ರಶ್ನಿಸಿದರು. ರಾಜ್ಯದ ಬಂಡವಾಳ ವೆಚ್ಚ 58,000 ಕೋಟಿಯಿಂದ 49,000 ಕೋಟಿಗೆ ಇಳಿದಿದೆ. ಮೂಲಸೌಕರ್ಯ ಅಭಿವೃದ್ಧಿಗೆ ಹಣವಿಲ್ಲದೆ, ಪಿಆರ್‌ಆರ್‌ನಂತಹ ಯೋಜನೆಗೆ ಕೇಂದ್ರ ಸರ್ಕಾರದ ಬಳಿ ಹಣ ಕೇಳುತ್ತಿದ್ದಾರೆ. ಹಾಗಾದರೆ, ನೀವು ಮಾಡಿದ ಸಾಲದ ಹಣ ಎಲ್ಲಿಗೆ ಹೋಯಿತು? ಎಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.**

# ಸದ್ಗುರು ಶ್ರೀ ಮಧುಸೂದನ ಸಾಯಿ ಪರಿಶ್ರಮಕ್ಕೆ ಬಸವರಾಜ ಹೊರಟ್ಟಿ ಶ್ಲಾಘನೆ


## ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರ ಸುಧಾರಣೆ, ಮೌಲ್ಯಗಳು, ಪ್ರೀತಿ, ಸೇವೆ, ಕರುಣೆ, ಏಕತೆಗಾಗಿ ಎಲ್ಲರನ್ನೂ ಒಟ್ಟುಗೂಡಿಸುವ ಕಾರ್ಯ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಸತ್ಯ ಸಾಯಿ ಸಂಸ್ಥೆಯ ಸಾಧನೆ ನಿಜಕ್ಕೂ ಅದ್ಭುತ. ಇದು ವಿಶ್ವದಲ್ಲೇ ಅತ್ಯುತ್ತಮವಾದ ಸಂಸ್ಥೆಯಾಗಿದೆ. ಈ ಸಾಧನೆಯ ಹಿಂದೆ ಸದ್ಗುರು ಶ್ರೀ ಮಧುಸೂದನ ಸಾಯಿ ಅವರ ಪರಿಶ್ರಮವಿದೆ. ಇದನ್ನು ನನ್ನ ಹೃದಯದಿಂದ ಹೇಳುತ್ತಿದ್ದೇನೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು. ಮುದ್ದೇನಹಳ್ಳಿಯ ಸತ್ಯ ಸಾಯಿ ಗ್ರಾಮದಲ್ಲಿ ನಡೆಯುತ್ತಿರುವ 'ಒಂದು ಜಗತ್ತು ಒಂದು ಕುಟುಂಬ ವಿಶ್ವ ಸಾಂಸ್ಕೃತಿಕ ಮಹೋತ್ಸವ' ದ 68ನೇ ದಿನವಾದ ಮಾತನಾಡಿದ ಅವರು ಇಲ್ಲಿ ನಡೆಯುತ್ತಿರುವ ಸಾಂಸ್ಕೃತಿಕ ಉತ್ಸವವು ಕೇವಲ ಆಚರಣೆಯಲ್ಲ. ಬದಲಾಗಿ ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರ ಸುಧಾರಣೆ, ಮೌಲ್ಯಗಳು, ಪ್ರೀತಿ, ಸೇವೆ, ಕರುಣೆ ಹಾಗೂ ಏಕತೆಗಾಗಿ ಎಲ್ಲರನ್ನೂ ಒಟ್ಟುಗೂಡಿಸುವ ಕಾರ್ಯವಾಗಿದೆ ಎಂದು ಹೇಳಿದ್ದಾರೆ.

ಸದ್ಗುರು ಶ್ರೀ ಮಧುಸೂದನ ಸಾಯಿ ಅವರ ನಿಸ್ವಾರ್ಥ ಪ್ರೀತಿ, ಅವಿಶ್ರಾಂತ ಪ್ರಯತ್ನಗಳು ಹಾಗೂ ಮಾರ್ಗದರ್ಶನದಲ್ಲಿ ಈ ಸಂಸ್ಥೆಯು ನಾಲ್ಕು ಆಧಾರ ಸ್ತಂಭಗಳನ್ನು ಪ್ರತಿನಿಧಿಸುತ್ತಿದೆ. ಶಿಕ್ಷಣ, ಆರೋಗ್ಯ, ಪೌಷ್ಟಿಕಾಂಶ ಮತ್ತು ಅಧ್ಯಾತ್ಮ ಸೇವೆಯನ್ನು ನೀಡುವ ಮೂಲಕ ಮಾದರಿ ರಾಷ್ಟ್ರ ನಿರ್ಮಾಣದ ಪ್ರಯತ್ನ ಸಾಗಿದೆ. ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡಲು ಆದ್ಯತೆ ನೀಡಲಾಗುತ್ತಿದೆ. ಶಾಲೆಯಿಂದ ಸ್ನಾತಕೋತ್ತರ ಹಂತದವರೆಗೆ ಮೌಲ್ಯಾಧಾರಿತ ಉಚಿತ ಶಿಕ್ಷಣವನ್ನು ನೀಡಲಾಗುತ್ತಿದೆ. ಇಂತಹ ಪವಿತ್ರವಾದ ಸ್ಥಳದಲ್ಲಿ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳು ಜಗತ್ತಿನ ಅತ್ಯಂತ ಶ್ರೇಷ್ಠ ವ್ಯಕ್ತಿಗಳಾಗುತ್ತಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನಾವು ನಮ್ಮಷ್ಟಕ್ಕೆ ಏನನ್ನೂ ಸಾಧಿಸಲು ಸಾಧ್ಯವಿಲ್ಲ. ನಮಗೆ ಎಲ್ಲರ ಬೆಂಬಲ ಬೇಕು. ಸರ್ಕಾರ, ಸಮಾಜ, ಸಂಸ್ಥೆ – ಈ ಮೂರು ಒಟ್ಟಾಗಿ ಸಾಗಿದಾಗ ಮಾತ್ರ ಏನು ಬೇಕಾದರೂ ಸಾಧಿಸಲು ಸಾಧ್ಯವಾಗುತ್ತದೆ. ಸಂಸ್ಥೆಗಳನ್ನು ನಡೆಸಲು ಸರ್ಕಾರದ ನೀತಿಗಳು, ಮಾರ್ಗದರ್ಶನಗಳು, ಪರವಾನಿಗೆಗಳು ಬೇಕಾಗುತ್ತವೆ. ಬಾಗಲಕೋಟೆಯಲ್ಲಿ ಸತ್ಯ ಸಾಯಿ ಶಾಲೆಯನ್ನು ಆರಂಭಿಸುವ ಸಂದರ್ಭದಲ್ಲಿ ಬಸವರಾಜ ಹೊರಟ್ಟಿ ಅವರು ನೆರವಾಗಿದ್ದನ್ನು


ಉದಯವಾಹಿನಿ ಚಿತ್ರ

ಸ್ಮರಿಸಿದರು. ಬೊಲಿವಿಯಾ ದೇಶದಲ್ಲಿ ಪರಿಸರ ಸಂರಕ್ಷಣೆಗೆ ಕೊಡುಗೆ ನೀಡುತ್ತಿರುವ ಪೆಟ್ರಿಸಿಯಾ ಮರಿಯಾ ಜಿಲ್ವೆಟಿ ಒರಿಯಾಸ್ ಅವರಿಗೆ ಒಂದು ಜಗತ್ತು ಒಂದು ಕುಟುಂಬ ಜಾಗತಿಕ ಮಾನವೀಯ ಪುರಸ್ಕಾರ ನೀಡಿ ಗೌರವಿಸಲಾಯಿತು. ಬೊಲಿವಿಯಾದ ಪ್ರತಿನಿಧಿಗಳಾದ ಮರಿಯಾ ಎಲೆನಾ ರಿಯೋಸ್ ಸುಸಾನಾ ಪ್ಯಾಚೆಕೊ, ಪೆರು ದೇಶದ ಪ್ರತಿನಿಧಿ ಜಾರ್ಜ್ ವಾಝ್ಕ್ವೆಜ್ ತಮ್ಮ ದೇಶದ ಕಲೆ, ಸಂಸ್ಕೃತಿ, ಸಂಗೀತ, ಖಾದ್ಯಗಳು, ಜನಪ್ರಿಯ ಪ್ರವಾಸಿ ತಾಣಗಳು, ಪ್ರಸಿದ್ಧ ಕ್ಷೇತ್ರ ಹಾಗೂ ಅಧ್ಯಾತ್ಮಿಕ ಬದಲಾವಣೆಯ ಅನುಭವವನ್ನು ಹಂಚಿಕೊಂಡರು.

> **ಸದ್ಗುರು ಶ್ರೀ ಮಧುಸೂದನ ಸಾಯಿ ಆಶೀರ್ವಚನ ನೀಡಿ, ಖಾಸಗಿ ಶಾಲೆಗಳಲ್ಲಿ ನೈತಿಕ ತರಗತಿಗಳು ನಡೆಯುವುದೇ ಅಪರೂಪ. ತಮ್ಮ ಮಕ್ಕಳು ಸ್ಪರ್ಧೆಯಲ್ಲಿ ಮುಂದೆ ಬರಲು ಉತ್ತಮ ಅಂಕ, ಉತ್ತಮ ಶ್ರೇಣಿಗಳನ್ನು ಪಡೆಯಲು ಪ್ರತಿ ನಿಮಿಷವನ್ನು ಓದಿನಲ್ಲಿ ಕಳೆಯಲು ಬಯಸುತ್ತಾರೆ. ಶಾಲೆಗಳು ಹೂಡಿಕೆಯ ಲಾಭವನ್ನು ನೀಡುವ ಸಂಸ್ಥೆಗಳಾಗಿ ಬದಲಾಗುತ್ತಿವೆ, ಪೋಷಕರು ಗ್ರಾಹಕರಾಗಿದ್ದಾರೆ. ಶಾಲಾ ಪಠ್ಯಕ್ರಮದಲ್ಲಿ ನೈತಿಕ ತರಗತಿಗಳನ್ನು ಸೇರಿಸುವುದು ಇಂದಿನ ಅಗತ್ಯವಾಗಿದೆ. ನಾವು ಬಹಳ ಬುದ್ಧಿವಂತ ಮನುಷ್ಯರನ್ನು ಸೃಷ್ಟಿಸುತ್ತಿದ್ದೇವೆ. ಆದರೆ ಸಹಾನುಭೂತಿಯಿರುವ ಮನುಷ್ಯರನ್ನು ಸೃಷ್ಟಿಸುತ್ತಿಲ್ಲ. ಹೀಗಾಗಿ ವಿದ್ಯಾರ್ಥಿಗಳಿಗೆ ನೈತಿಕ ಮೌಲ್ಯಗಳ ಶಿಕ್ಷಣದ ಅಗತ್ಯವಿದೆ ಎಂದು ಹೇಳಿದರು.**

## ಶರಣರ ಹಿತವಚನ ಪಾಲಿಸಲು ಸಲಹೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಕನಕಪುರ**

ಚಿಂತನೆ ಮನುಷ್ಯನ ಜೀವನ ನಕಾರಾತ್ಮಕತೆಯೆಡೆಗೆ ಕೊಂಡೊಯ್ಯುತ್ತದೆ. ಶರಣರ ಹಿತವಚನ ಜೀವನದಲ್ಲಿ ಅಳವಡಿಸಿ ಕೊಂಡರೆ ಜೀವನ ಯಶಸ್ಸಿನೆಡೆಗೆ ಕೊಂಡೊಯ್ಯುತ್ತದೆ ಎಂದು ದಾಳಿಂಬ ಬಸವ ಗುರು ಮಂಟಪ ಅಧ್ಯಕ್ಷ, ಕುಂಬಳಗೂಡು ಬಸವ ಗಂಗೋತ್ರಿ ಡಾ.ಚನ್ನಬಸವಾನಂದ ಸ್ವಾಮೀಜಿ ಅಭಿಪ್ರಾಯಪಟ್ಟರು.

ತಾಲ್ಲೂಕಿನ ಸಾತನೂರು ಹೋಬಳಿ ದಾಳಿಂಬ ಗ್ರಾಮದ ಗುರು ಬಸವ ಮಂಟಪದಲ್ಲಿ ಹಮ್ಮಿಕೊಂಡಿದ್ದ ಶರಣರ ಸಂಗಮ ಸಾಮೂಹಿಕ ಪ್ರಾರ್ಥನೆ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿ ಮಾತನಾಡಿದರು. ನಮ್ಮ ಅಹಂಕಾರ ನಿವಾರಣೆಯಾಗಲು ಶರಣರು ನೀಡಿದ ಮಹಾ ಆದರ್ಶ ನಮ್ಮ ಬಾಳಿನಲ್ಲಿ ಅಳವಡಿಸಿಕೊಳ್ಳಬೇಕು.

ಯುವಕರು, ವಿದ್ಯಾರ್ಥಿಗಳು ಮೊಬೈಲ್ ಗೀಳಿನಿಂದ ದೂರವಿದ್ದು ಸಂಸ್ಕಾರ ಬೆಳೆಸಿಕೊಳ್ಳಬೇಕು ಎಂದರು. ಮಾನವನ ಜೀವನ ಯಶಸ್ವಿಯಾಗಲು ಶರಣರ ಚಿಂತನೆ ಅಗತ್ಯ. ಜಗಜ್ಯೋತಿ ಬಸವಣ್ಣ ಅವರು ನೀಡಿದ ವಚನ ಸಾರ ಎಲ್ಲರೂ ಅಳವಡಿಸಿಕೊಳ್ಳಬೇಕಿದೆ' ಎಂದು ತಿಳಿಸಿದರು. ಸಾಮೂಹಿಕ ಪ್ರಾರ್ಥನೆ ಮಾಡುವುದರಿಂದ ಭಕ್ತರ ಮನಸ್ಸಿನಲ್ಲಿ ಶಾಂತಿ, ನೆಮ್ಮದಿ, ಸೌಹಾರ್ದತೆ ಬೆಳೆಯಲು ಕಾರಣವಾಗುತ್ತದೆ. ದಾಳಿಂಬ ಬಸವ ಮಂಟಪದಲ್ಲಿ ಪ್ರತಿ ತಿಂಗಳು ಬಸವ ಸ್ಮರಣೆ ಕಾರ್ಯಕ್ರಮ ಇರುತ್ತದೆ. ಭಕ್ತಾದಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಬೇಕು ಎಂದರು. ಮುದ್ದು ಬಸಪ್ಪ, ಈರಮ್ಮ, ಶಿವಲಿಂಗಯ್ಯ, ಉದ್ಯಮಿ ಮುನಿಮಾದಪ್ಪ, ಯೋಗ ಗುರು ವೆಂಕಟೇಶ್, ಬಸವ ಸಮಿತಿ ತಾಲ್ಲೂಕು ನಿರಂಜನ್ ಮೂರ್ತಿ, ಬಿಡದಿ ರೇಣುಕಪ್ಪ, ಚನ್ನಬಸವಣ್ಣ, ಮಂಜಮ್ಮ ಪಾಲ್ಗೊಂಡಿದ್ದರು.

# ಯಗವಕೋಟೆ ಶಾಲೆಗೆ ಕೆಪಿಎಸ್ ಭಾಗ್ಯ


## 220 ವಿದ್ಯಾರ್ಥಿಗಳು ಈ ಪ್ರೌಢ ಶಾಲೆಯಲ್ಲಿ ವಿದ್ಯಾಭ್ಯಾಸ ಎಂ.ರಾಮಕೃಷ್ಣಪ್ಪ

• **ಉದಯವಾಹಿನಿ, ಚಿಂತಾಮಣಿ**

ತಾಲ್ಲೂಕಿನ ಮುರುಗಮಲ್ಲ ಹೋಬಳಿಯ ಯಗವಕೋಟೆ ಸರ್ಕಾರಿ ಪ್ರೌಢಶಾಲೆಯು ಕರ್ನಾಟಕ ಪಬ್ಲಿಕ್ ಶಾಲೆಯಾಗಿ ಉನ್ನತೀಕರಣಗೊಂಡಿದೆ. 1969ರಲ್ಲಿ ಪ್ರಾರಂಭಗೊಂಡ ಈ ಶಾಲೆಯಲ್ಲಿ ಪ್ರಸ್ತುತ 8ರಿಂದ 10ನೇ ತರಗತಿಗಳಲ್ಲಿ ಒಟ್ಟಾರೆ 220 ವಿದ್ಯಾರ್ಥಿಗಳು ಓದುತ್ತಿದ್ದಾರೆ. 7 ಮಂದಿ ಸಿಬ್ಬಂದಿ ಕಾಯಂ ಹಾಗೂ ಗುತ್ತಿಗೆ ಆಧಾರದಲ್ಲಿ ಐವರು ಸೇರಿದಂತೆ 12 ಶಿಕ್ಷಕರು ಶಾಲೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ಎಲ್ ಕೆ.ಜಿಯಿಂದ ದ್ವಿತೀಯ ಪಿಯುವರೆಗೆ ಒಂದೇ ಸೂರಿನಡಿ ಕನ್ನಡ ಮತ್ತು ಆಂಗ್ಲ ಮಾಧ್ಯಮದ ಗುಣಮಟ್ಟದ ಶಿಕ್ಷಣ ಕಲ್ಪಿಸುವ ನಿಟ್ಟಿನಲ್ಲಿ 2018–19ರ ಸಾಲಿನಲ್ಲಿ ಕರ್ನಾಟಕ ಸರ್ಕಾರ ಆರಂಭಿಸಿದ ಮಹತ್ವಾಕಾಂಕ್ಷೆ ಯೋಜನೆಗಳಲ್ಲಿ ಕೆಪಿಎಸ್ ಯೋಜನೆಯೂ ಒಂದಾಗಿದೆ.

ಕರ್ನಾಟಕ ಸರ್ಕಾರವು 2025–26ನೇ ಸಾಲಿನಲ್ಲಿ ರಾಜ್ಯದಾದ್ಯಂತ ಹೊಸದಾಗಿ 700 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಆರಂಭಿಸುತ್ತಿದ್ದು, ಚಿಂತಾಮಣಿ ತಾಲ್ಲೂಕಿನ ಮೂರು ಶಾಲೆಗಳಿಗೆ ಕೆಪಿಎಸ್ ಭಾಗ್ಯ ದೊರೆತಿದೆ. ಮುರುಗಮಲ್ಲಾ ಹೋಬಳಿಯ ಯಗವಕೋಟೆ ಸರ್ಕಾರಿ ಪ್ರೌಢಶಾಲೆ, ಬಟ್ಲಳ್ಳಿಯ ಸರ್ಕಾರಿ ಪಿಯು ಕಾಲೇಜು, ಚಿಂತಾಮಣಿ ನಗರದ ಬಾಲಕಿಯರ ಪಿಯು ಕಾಲೇಜುಗಳು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಉನ್ನತೀಕರಣಗೊಂಡಿವೆ. ಸರ್ಕಾರಿ ಶಾಲೆಗಳಲ್ಲಿನ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕಲ್ಪಿಸುವ ನಿಟ್ಟಿನಲ್ಲಿ ಈ ಮೂರು ಶಾಲೆಗಳನ್ನು ಕೆಪಿಎಸ್ ಶಾಲೆಯಾಗಿ ಮಾರ್ಪಾಡು ಮಾಡಿರುವುದು ಆಶಾದಾಯಕ ಬೆಳವಣಿಗೆಯಾಗಿದೆ. ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಶಾಲೆ ಮಕ್ಕಳು ಖಾಸಗಿ ಶಾಲೆಗಳತ್ತ ಮುಖ ಮಾಡುತ್ತಿದ್ದು, ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಪ್ರಮಾಣ


ಉದಯವಾಹಿನಿ ಚಿತ್ರ

> **ಹಲವು ವರ್ಷಗಳ ಕನಸು ಈಗ ನನಸಾಗಿದೆ. ಸಕಲ ಸೌಲಭ್ಯಗಳೊಂದಿಗೆ ಹೆಚ್ಚಿನ ಗುಣಮಟ್ಟದ ಶಿಕ್ಷಣ ದೊರೆಯುತ್ತದೆ. ಶಾಲಾ ಮಕ್ಕಳು ಮತ್ತು ಪೋಷಕರು ಈ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಬೇಕು.**
>
> **ಶ್ರೀನಿವಾಸಪ್ಪ ಮುಖ್ಯ ಶಿಕ್ಷಕ**

ಗಣನೀಯವಾಗಿ ಇಳಿಮುಖವಾಗುತ್ತಿದೆ. ಗುಣಮಟ್ಟದ ಕಲಿಕೆ ಮತ್ತು ಹಾಜರಾತಿ ಹೆಚ್ಚಿಸಲು, ಮಕ್ಕಳನ್ನು ಸರ್ಕಾರಿ ಶಾಲೆಗಳತ್ತ ಸೆಳೆಯಲು ಸರ್ಕಾರ ಕೈಗೊಂಡಿರುವ ಸುಧಾರಣಾತ್ಮಕ ಕಾರ್ಯತಂತ್ರದ ಫಲವೇ ಕೆಪಿಎಸ್ ಶಾಲೆಗಳು.

ಕೆಪಿಎಸ್ ಶಾಲೆಗಳು ಶಾಲಾಪೂರ್ವ ತರಗತಿ ಎಲ್ ಕೆ.ಜಿಯಿಂದ 12ನೇ ತರಗತಿವರೆಗೆ (ಪಿಯುಸಿ) ಶಿಕ್ಷಣ ಒದಗಿಸುತ್ತವೆ. ಕಲಿಕೆಯ ಗುಣಮಟ್ಟ ಉತ್ತಮಪಡಿಸಲು ಉತ್ತೇಜಿಸುತ್ತದೆ. ಪ್ರಾಥಮಿಕ, ಮಾಧ್ಯಮಿಕ, ಪ್ರೌಢ ಮತ್ತು ಪಿಯುಸಿ ಹಂತಗಳಲ್ಲಿ ದಾಖಲಾತಿ ಅಗತ್ಯವಿಲ್ಲ. ವಿವಿಧ ದಾಖಲಾತಿ ಹಂತಗಳಲ್ಲಿ ವಿದ್ಯಾರ್ಥಿಗಳು ಶಾಲೆಯಿಂದ ದೂರ ಉಳಿಯುವ ಸಂಖ್ಯೆಯೂ ಕಡಿಮೆಯಾಗುತ್ತದೆ

> **ಸರ್ಕಾರಿ ಪ್ರೌಢಶಾಲೆಯನ್ನು ಕೆಪಿಎಸ್ ಶಾಲೆಯನ್ನಾಗಿ ಉನ್ನತೀಕರಿಸಿರುವುದರಿಂದ ಎಲ್ ಕೆ.ಜಿಯಿಂದ ಆರಂಭವಾಗಿ ದ್ವಿತೀಯ ಪಿಯುವರೆಗೆ ಒಂದೇ ಕಡೆ ಶಿಕ್ಷಣ ಸಿಗಲಿದೆ. ಇದರಿಂದ ಪ್ರಸ್ತುತ ಓದುತ್ತಿರುವ ಶಾಲೆಯಿಂದ ಟಿ.ಸಿ. ಪಡೆದು ವಿದ್ಯಾರ್ಥಿಗಳು ಬೇರೆ ಶಾಲೆಗೆ ದಾಖಲಾತಿಯಾಗುವುದನ್ನು ತಪ್ಪಿಸಲಿದೆ.**
>
> **ಹೇಮಾವತಿ ಎಸ್‌ಡಿಎಂಸಿ ಅಧ್ಯಕ್ಷೆ**

ಎನ್ನುವುದು ತಜ್ಞರ ಅಭಿಪ್ರಾಯ.

**ಆಧುನಿಕ ಕೌಶಲ್ಯಗಳ ತರಬೇತಿ:** ಈ ಶಾಲೆಗಳು ವಿದ್ಯಾರ್ಥಿಗಳ ಫಲಿತಾಂಶ ಸುಧಾರಿಸುವ ನಿಟ್ಟಿನಲ್ಲಿ ಮೂಲಸೌಕರ್ಯ ಮತ್ತು ಶೈಕ್ಷಣಿಕ ಮಾನದಂಡಗಳನ್ನು ಒಳಗೊಂಡಿರುತ್ತವೆ.

ಸಣ್ಣ ಶಾಲೆಗಳನ್ನು ಕೆಪಿಎಸ್ ಶಾಲೆಗಳಲ್ಲಿ ಸಮ್ಮಿಳಿತಗೊಳಿಸಿ ಶಾಲಾ ಏಕೀಕರಣ ಪ್ರಕ್ರಿಯೆಗೆ ಆದ್ಯತೆ ನೀಡಲಾಗುತ್ತದೆ. ಉತ್ತಮ ಸಂಪನ್ಮೂಲ ಬಳಕೆ ಮತ್ತು ದಕ್ಷ ಆಡಳಿತಕ್ಕಾಗಿ ಶಾಲಾ ಸಂಕೀರ್ಣಗಳ ಸ್ಥಾಪನೆ ಮೂಲಕ ಶಾಲಾ ಏಕೀಕರಣ ಮಾಡಲಾಗುವುದು ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳು ತಿಳಿಸಿದರು.

ಕೆಪಿಎಸ್ ಶಾಲೆಗಳಿಗೆ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ರೂ.2 ಕೋಟಿಯಿಂದ ರೂ. 4 ಕೋಟಿವರೆಗೆ ವಿಶೇಷ ಅನುದಾನ ನೀಡಲಾಗುತ್ತದೆ. ಇದರಲ್ಲಿ ಶಾಲೆಗೆ ಗ್ರಂಥಾಲಯ ವಿಜ್ಞಾನ ಪ್ರಯೋಗಾಲಯ ಇಂಟರ್ನೆಟ್ ಸೌಲಭ್ಯವಿರುವ ಸ್ಮಾರ್ಟ್ ತರಗತಿ ಸಿ.ಸಿ. ಕ್ಯಾಮೆರಾ ಅಳವಡಿಕೆ ಆಧುನಿಕ ಸಾಮಗ್ರಿಗಳು ಆಧುನಿಕ ಪಾಠೋಪಕರಣಗಳು ಮತ್ತು ಪೀಠೋಪಕರಣಗಳು ಸೇರಿದಂತೆ ಇನ್ನಿತರ ಸೌಲಭ್ಯಗಳನ್ನು ಕಲ್ಪಿಸಲಾಗುತ್ತದೆ.

# ಅಪಾಯ ಆಹ್ವಾನಿಸುವ ಜೂನಿಯರ್ ಕಾಲೇಜು ಮೈದಾನ

• **ಉದಯವಾಹಿನಿ, ತುಮಕೂರು**

ನಗರದ ಜೂನಿಯರ್ ಕಾಲೇಜು ಮೈದಾನವನ್ನು ವಿದ್ಯಾರ್ಥಿಗಳ ಆಟೋಟಕ್ಕಿಂತ ಕಾರ್ಯಕ್ರಮ ಆಯೋಜನೆಗೆ ಹೆಚ್ಚು ಬಳಸಿದ್ದರ ಪರಿಣಾಮ ಮೈದಾನದಲ್ಲಿ ಕಬ್ಬಿಣದ ಮೊಳೆಗಳು ಗಿಡದ ಬೇರಿನಂತೆ ಹರಡಿಕೊಂಡಿವೆ.

ಕಾಲಿಟ್ಟ ಕಡೆಯಲ್ಲಿ ಮೊಳೆಗಳು ಕಾಲಿಗೆ ಚುಚ್ಚಿಕೊಳ್ಳುತ್ತಿವೆ. ಸರ್ಕಾರಿ, ಖಾಸಗಿ ಕಾರ್ಯಕ್ರಮ ಸೇರಿ ಮೈದಾನದಲ್ಲಿ ಸದಾ ಒಂದಲ್ಲೊಂದು ಚಟುವಟಿಕೆ ನಡೆಯುತ್ತಿರುತ್ತದೆ. ಆಯೋಜಕರು ಕೆಲಸ ಮುಗಿದ ನಂತರ ತಮ್ಮ ಪಾಡಿಗೆ ತಾವು ಜಾಗ ಖಾಲಿ ಮಾಡುತ್ತಿದ್ದಾರೆ. ಆದರೆ, ಮೈದಾನ ನಿರ್ವಹಣೆಗೆ ಯಾರೂ ಆಸಕ್ತಿ ತೋರುತ್ತಿಲ್ಲ. ಮೈದಾನದಲ್ಲಿ ದಸರಾ ಪ್ರಯುಕ್ತ ಸುಮಾರು 11 ದಿನಗಳ ಕಾಲ ವಿವಿಧ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಇದಕ್ಕಾಗಿ ಬೃಹತ್ ಪೆಂಡಾಲ್ ಅಳವಡಿಸಲಾಗಿತ್ತು. ಈ ಸಮಯದಲ್ಲಿ ನೆಲಕ್ಕೆ ಹೊಡೆದಿದ್ದ ಮೊಳೆಗಳನ್ನು ಈವರೆಗೆ ಹೊರ ತೆಗೆದಿಲ್ಲ. ಇದರ ನಂತರ ನಾನಾ ಕಾರ್ಯಕ್ರಮಗಳು ಮೈದಾನದಲ್ಲಿ ನಡೆದವು. ಅವರು ಸಹ ಇದನ್ನು ಮುಂದುವರಿಸಿದ್ದು, ಮೊಳೆ ಮತ್ತಷ್ಟು ಜಾಸ್ತಿಯಾದವು. ಇದರ ಪರಿಣಾಮ ಈಗ ವಿದ್ಯಾರ್ಥಿಗಳು, ಕ್ರೀಡಾಪಟುಗಳ ಮೇಲೆ ಬೀಳುತ್ತಿದೆ. ಅಪಾಯದಲ್ಲಿ


ಉದಯವಾಹಿನಿ ಚಿತ್ರ

ಆಟವಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ತುಮಕೂರು ದಸರಾ ಅಂಗವಾಗಿ ಧಾರ್ಮಿಕ ಮಂಟಪ, ಮುಖ್ಯ ವೇದಿಕೆ ನಿರ್ಮಿಸಿದ್ದ ಜಾಗದಲ್ಲಿ ಮೊಳೆಗಳ ರಾಶಿಯೇ ಇದೆ. ಇನ್ನೂ ಹಲವು ನೆಲದಲ್ಲಿಯೇ ಮರೆಯಾಗಿವೆ. ಕಳೆದ ಎರಡು ದಿನಗಳಿಂದ ನಗರದಲ್ಲಿ ಉತ್ತಮ ಮಳೆಯಾಗುತ್ತಿದ್ದು ನೀರಿನ ಹರಿವಿಗೆ ಕೆಲ ಮೊಳೆಗಳು ಕಿತ್ತು ಬಂದಿವೆ. ಕ್ರೀಡಾಪಟುಗಳು, ಮೈದಾನದಲ್ಲಿ ವಾಕಿಂಗ್ ಮಾಡುವವರು ಇದನ್ನು ಗಮನಿಸದೆ ಮುಂದೆ ನಡೆದರೆ ಅಪಾಯ ಕಟ್ಟಿಟ್ಟ ಬುತ್ತಿ. ಪೋಷಕರು ತಮ್ಮ ಮಕ್ಕಳನ್ನು ಮೈದಾನಕ್ಕೆ ಕರೆ ತಂದು ಕ್ರಿಕೆಟ್, ಓಟದ ಅಭ್ಯಾಸ ನಡೆಸುತ್ತಾರೆ. ಕೆಲವರು ಬರಿಗಾಲಿನಲ್ಲಿ ಅಭ್ಯಾಸ ಮಾಡುತ್ತಾರೆ. ಸ್ವಲ್ಪ ಹೆಚ್ಚು ಕಡಿಮೆಯಾದರೆ ಯಾರು ಹೊಣೆ ಮೊಳೆಗಳು ಮಳೆಗೆ ಒದ್ದೆಯಾಗಿ ತುಕ್ಕು ಹಿಡಿದಿವೆ. ಇವು ಕಾಲಿಗೆ ಚುಚ್ಚಿದರೆ ಸೀದಾ ಆಸ್ಪತ್ರೆ, ಶಸ್ತ್ರಚಿಕಿತ್ಸೆ ಹೀಗೆ ಹಲವು

> **ಮಿನಿ ಕ್ರೀಡಾಂಗಣದಲ್ಲಿ ಚರಂಡಿಯ ಚಪ್ಪಡಿ ಕುಸಿದಿದ್ದು, ವಿಲೇವಾರಿಗೆ ಕ್ರಮಕೈಗೊಂಡಿಲ್ಲ. ಮಳೆ ನೀರು ಸರಾಗವಾಗಿ ಹರಿಯಲು ವ್ಯವಸ್ಥೆ ಮಾಡಿಲ್ಲ. ಕೊಕ್ಕೊ, ಕಬಡ್ಡಿ, ವಾಲಿಬಾಲ್ ಅಂಕಣದಲ್ಲಿ ನೀರು ನಿಲ್ಲುತ್ತಿದೆ. ಮಳೆ ಬಂದಾಗ ಪ್ರತಿ ಸಾರಿ ಅಭ್ಯಾಸಕ್ಕೆ ಅಡ್ಡಿಯಾಗುತ್ತಿದೆ. ಇದು ಅಧಿಕಾರಿಗಳ ಗಮನದಲ್ಲಿ ಇದ್ದರೂ ಸರಿಪಡಿಸುವತ್ತ ಗಮನ ಹರಿಸುತ್ತಿಲ್ಲ ಎಂದು ಕ್ರೀಡಾಪಟುಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.**


ಬಗೆಯ ಸಮಸ್ಯೆಗಳು ಎದುರಾಗುತ್ತವೆ. ಮಕ್ಕಳು ತಮ್ಮ ಬದುಕಿನ ಬಗ್ಗೆ ಕಂಡ ಕನಸುಗಳು ಬಾಲ್ಯದಲ್ಲಿಯೇ ಕಮರಿ ಹೋಗುತ್ತವೆ. ಮೈದಾನದಲ್ಲಿ ಕ್ರೀಡಾಕೂಟಕ್ಕಿಂತ ಖಾಸಗಿ ಕಾರ್ಯಕ್ರಮಗಳು ಹೆಚ್ಚಾಗಿ ಜರುಗುತ್ತಿವೆ. ಮೈದಾನದ ಉಸ್ತುವಾರಿಗೆ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಒಂದು ಸಮಿತಿ ಕೂಡ ರಚಿಸಲಾಗಿದೆ. ಇದರ ಬಳಕೆಗೆ ಜಿಲ್ಲಾಧಿಕಾರಿ ಅನುಮತಿ ನೀಡಬೇಕು ಖಾಸಗಿ ಕಾರ್ಯಕ್ರಮಗಳಿಗೆ ನಿಯಂತ್ರಣ ಹೇರಿ ಕೇವಲ ಕ್ರೀಡಾ ಚಟುವಟಿಕೆಗಳಿಗೆ ಮಾತ್ರ ಬಳಸುವ ಬಗ್ಗೆ ಯಾರೊಬ್ಬರೂ ಚಿಂತಿಸಿಲ್ಲ.

## ಮಾದಪ್ಪನ ಸನ್ನಿಧಿಯಲ್ಲಿ ಹಾಲರವೆ ಉತ್ಸವ

• **ಉದಯವಾಹಿನಿ, ಮಹದೇಶ್ವರ ಬೆಟ್ಟ**

ನಾಡಿನ ಪ್ರಸಿದ್ಧ ಧಾರ್ಮಿಕ ಯಾತ್ರಾ ಸ್ಥಳವಾದ ಹನೂರು ತಾಲ್ಲೂಕಿನ ಮಲೆ ಮಹದೇಶ್ವರನ ಬೆಟ್ಟದಲ್ಲಿ ದೀಪಾವಳಿ ಜಾತ್ರಾ ಮಹೋತ್ಸವದ ಸಂಭ್ರಮ ಕಳೆಗಟ್ಟಿದೆ. ಐದು ದಿನಗಳ ವಿಜೃಂಭಣೆಯ ದೀಪಾವಳಿ ಜಾತ್ರೆಯಲ್ಲಿ ನಾಡಿನ ಮೂಲೆಗಳಿಂದ ಹಾಗೂ ಹೊರ ರಾಜ್ಯಗಳಿಂದಲೂ ಲಕ್ಷಾಂತರ ಭಕ್ತರು ಭಾಗವಹಿಸಿ ಮಾದಪ್ಪನ ದರ್ಶನ ಪಡೆಯುತ್ತಿದ್ದಾರೆ. ಉತ್ಸವದ ನಾಲ್ಕನೇ ದಿನವಾದ ತಲತಲಾಂತರಗಳಿಂದ ನಡೆದುಕೊಂಡು ಬಂದಿರುವ ಸಂಪ್ರದಾಯದಂತೆ ಹಾಲರುವ ಉತ್ಸವ ಅದ್ದೂರಿಯಾಗಿ ನೆರವೇರಿತು. ಮಾದಪ್ಪನ ಪೂಜಿಸುವ ಬೇಡಗಂಪಣ ಸಮುದಾಯದ 10ರಿಂದ 12ವರ್ಷದೊಳಗಿನ 101 ಬಾಲೆಯರಿಂದ ಹಾಲರುವೆ ಉತ್ಸವ ನೆರವೇರಿದ್ದು ವಿಶೇಷವಾಗಿತ್ತು.

ಬೇಡಗಂಪಣ ಸಮುದಾಯದ ಸರದಿ ಅರ್ಚಕರು ಹಾಗೂ ಸಾಲೂರು ಮಠದ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ನೇತೃತ್ವದಲ್ಲಿ ನಡೆದ ಹಾಲರವೆ ಉತ್ಸವ ಭಕ್ತರ ಕಣ್ಮನ ಸೆಳೆಯಿತು. ಹಸಿರು ಸೀರೆಯುಟ್ಟ ಬಾಲೆಯರು ಹಾಲರವಿಯನ್ನು ತಲೆಯ ಮೇಲೆ ಹೊತ್ತು ಸಾಗಿದ ದೃಶ್ಯವನ್ನು ಕಂಡು ಭಕ್ತರು ಭಕ್ತಿಪರವಶರಾದರು. ಸಂಪ್ರದಾಯದಂತೆ ಮಡಿಯುಟ್ಟು ಉಪವಾಸವಿದ್ದ ಬಾಲೆಯರು ಮಲೆ ಬೆಟ್ಟದಿಂದ 7 ಕಿ.ಮೀ ದೂರದ ಅರಣ್ಯ ಹಾದಿಯಲ್ಲಿರುವ ಹಾಲರ ಹಳ್ಳ ತಲುಪಿ ಪೂಜೆ ಪುರಸ್ಕಾರ ಮಾಡಿ ಕಳಸಗಳನ್ನು ಹೊತ್ತು ಕ್ಷೇತ್ರದತ್ತ ನಡೆದರು. ವಾದ್ಯ ಮೇಳದೊಂದಿಗೆ ಬೆಟ್ಟಕ್ಕೆ ಮೆರವಣಿಗೆ ಸಾಗುವಾಗ ಪಟ್ಟದ ಆನೆ, ಡೊಳ್ಳು ಕುಣಿತ, ಛತ್ರಿ, ಚಾಮರಗಳು



> **ಕತ್ತಿ ಪವಾಡ**
>
> **ಬೇಡಗಂಪಣ ಸಮುದಾಯದ ಬಾಲೆಯರು ಹಾಲುಹಳ್ಳದಿಂದ ಪುಟ್ಟ ಬಿಂದಿಗೆಗಳಲ್ಲಿ ಹಾಲರವೆ ಹೊತ್ತು ತಂಬಡಿಗೇರಿ ಗ್ರಾಮದ ಮುಖ್ಯದ್ವಾರದ ಬಳಿ ಇರಿಸಿದರು. ಈ ಸಂದರ್ಭ ದೊಡ್ಡಪಾಲಿಗೆ ಸೇರಿದ ಬೇಡಗಂಪಣ ಸಮುದಾಯದವರು ಕತ್ತಿ ಪವಾಡ ಪ್ರದರ್ಶಿಸಿದರು. ಬೇಡಗಂಪಣರಲ್ಲಿ ಈ ಬಾರಿ ಭಾರಿ ದೊಡ್ಡ ಪಾಲಿನ ಸಮುದಾಯದಿಂದ ಕತ್ತಿ ಪವಾಡ ನಡೆಯಿತು.**

ಇದ್ದವು. ದೇವಾಲಯದ ಸುತ್ತಲೂ ಪ್ರದಕ್ಷಿಣೆ ಹಾಕಿ ಕಳಸಗಳಲ್ಲಿ ತಂದಿದ್ದ ಪವಿತ್ರ ನೀರನ್ನು ಮಾದಪ್ಪನಿಗೆ ಅಭಿಷೇಕ ಮಾಡುವ ಮೂಲಕ ಹಾಲರವೆ ಉತ್ಸವ ಸಂಪನ್ನವಾಯಿತು. 22ರಂದು ಕ್ಷೇತ್ರದಲ್ಲಿ ಅದ್ದೂರಿ ಮಹಾ ರಥೋತ್ಸವ ನಡೆಯಲಿದೆ.

56 ಅಡಿ ಎತ್ತರದ ರಥವನ್ನು ಭಕ್ತರು ಎಳೆದು ಭಕ್ತಿ ಸಮರ್ಪಿಸಲಿದ್ದಾರೆ. ರಾತ್ರಿ ತೆಪ್ಪೋತ್ಸವ ನಡೆಯಲಿದ್ದು ದೀಪಾವಳಿ ಜಾತ್ರೆಗೆ ತೆರೆ ಬೀಳಲಿದೆ.

## ಸಮಾಜಕ್ಕಾಗಿ ಮಡಿದವರಿಗೆ ಗೌರವ ಸಮರ್ಪಣೆ: ನ್ಯಾಯಾಧೀಶೆ ಜಿ.ಪ್ರಭಾವತಿ

• **ಉದಯವಾಹಿನಿ, ಚಾಮರಾಜನಗರ**

ಕರ್ತವ್ಯ ನಿರ್ವಹಿಸುವ ವೇಳೆ ಹುತಾತ್ಮರಾದ ಪೊಲೀಸರಿಗೆ ಗೌರವ ಸಲ್ಲಿಸುವ ಸಲುವಾಗಿ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ನಗರದ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಕವಾಯತು ಮೈದಾನದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಪೊಲೀಸ್ ಹುತಾತ್ಮರ ದಿನಾಚರಣೆಯಲ್ಲಿ ಪೊಲೀಸ್ ಸ್ಮಾರಕಕ್ಕೆ ಪುಷ್ಪನಮನ ಸಲ್ಲಿಸಲಾಯಿತು.ನೂತನವಾಗಿ ನಿರ್ಮಾಣ ಮಾಡಲಾಗಿರುವ ರಾಜ್ಯದ ಅತಿ ಎತ್ತರದ (27ಅಡಿ) ಹುತಾತ್ಮರ ಸ್ಮಾರಕಕ್ಕೆ ಜಿಲ್ಲಾ ಪ್ರಧಾನ ಸೆಷನ್ಸ್ ನ್ಯಾಯಾಧೀಶೆ ಜಿ.ಪ್ರಭಾವತಿ ಪುಷ್ಪಗುಚ್ಛ ಇರಿಸಿ ಗೌರವ ಸಲ್ಲಿಸಿದರು. ಬಳಿಕ ಮಾತನಾಡಿ 'ಸಮಾಜಕ್ಕಾಗಿ ಮಡಿದವರನ್ನು ಸ್ಮರಿಸುವ ಸಮಾಜದ ಕರ್ತವ್ಯವಾಗಿದೆ. ಅರಣ್ಯ ಸಂಪತ್ತನ್ನು ರಕ್ಷಣೆ ಮಾಡುವುದು ಅರಣ್ಯ ಪಾಲಕರ ಕರ್ತವ್ಯವಾದರೆ, ನಾಡಿನ ಜನರ ರಕ್ಷಣೆಗೆ ಟೊಂಕಕಟ್ಟಿ ನಿಂತಿರುವ ಪೊಲೀಸರ ಸೇವೆ


ಉದಯವಾಹಿನಿ ಚಿತ್ರ

ಅವಿಸ್ಮರಣೀಯ ಹಾಗೂ ಶ್ಲಾಘನೀಯ' ಎಂದರು. ಸಮಾಜದಲ್ಲಿ ಶಾಂತಿ, ಸಾಮರಸ್ಯ, ಸಹಬಾಳ್ವೆ ನೆಲೆಸಲು ಪೊಲೀಸರ ಪಾತ್ರ ಬಹಳ ಮುಖ್ಯವಾಗಿದೆ. ಕಾನೂನು ಸುವ್ಯವಸ್ಥೆ ಕಾಪಾಡುವುದರ ಜೊತೆಗೆ ಸಾರ್ವಜನಿಕರು ಶಾಂತಿ, ನೆಮ್ಮದಿಯಿಂದ ಜೀವನ ನಡೆಸಲು ಪೊಲೀಸರ ಕರ್ತವ್ಯ ದಕ್ಷತೆ ಹಾಗೂ ಪ್ರಾಮಾಣಿಕತೆ ಕಾರಣವಾಗಿದೆ ಎಂದರು.

# ಪದವೀಧರ ಮತದಾರರ ಪಟ್ಟಿಗೆ ನೋಂದಣಿಗೆ ನಿರುತ್ಸಾಹ

## ಪದವೀಧರರನ್ನು ಹುಡುಕಿ ಅವರಿಂದ ಅಗತ್ಯ ದಾಖಲೆ ಪಡೆದು ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ

• **ಉದಯವಾಹಿನಿ, ಚಿಂತಾಮಣಿ**

ವಿಧಾನ ಪರಿಷತ್‌ನ ಆಗ್ನೇಯ ಪದವೀಧರರ ಕ್ಷೇತ್ರದ ಚುನಾವಣಾ ಪ್ರಕ್ರಿಯೆ ಆರಂಭವಾಗಿದೆ. ಚುನಾವಣಾ ಅಧಿಕಾರಿಗಳ ನೇಮಕವಾಗಿದ್ದು, ಮತದಾರರ ಪಟ್ಟಿ ತಯಾರಿ ನಡೆಯುತ್ತಿದೆ. ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಮಾಡಲು ನವೆಂಬರ್ 6 ಕೊನೆ ದಿನ.

ತಾಲ್ಲೂಕಿನಲ್ಲಿ ಸಾವಿರಾರು ಮಂದಿ ಪದವೀಧರರಿದ್ದರೂ ನೋಂದಣಿಗೆ ಹಿಂದೇಟು ಹಾಕುತ್ತಿದ್ದಾರೆ. ವಿಧಾನ ಪರಿಷತ್ ಆಗ್ನೆಯ ಪದವೀಧರರ ಕ್ಷೇತ್ರಕ್ಕೆ 5 ವರ್ಷಗಳ ನಂತರ ಮತದಾರರ ಪಟ್ಟಿ ಪರಿಷ್ಕರಣೆ ಆರಂಭವಾಗಿದೆ. ರಾಜಕೀಯ ಪಕ್ಷಗಳು ಮತ್ತು ಸ್ಪರ್ಧಿಸಲು ಆಸಕ್ತಿಯುಳ್ಳವರು ಮತದಾರರ ಹುಡುಕಾಟದಲ್ಲಿ ತೊಡಗಿದ್ದಾರೆ. 2020ರಲ್ಲಿ ನಡೆದಿದ್ದ ಚುನಾವಣೆಗೆ ಮುನ್ನ ಸಿದ್ಧಗೊಂಡಿದ್ದ ಮತದಾರರ ಪಟ್ಟಿಯಲ್ಲಿ ತಾಲ್ಲೂಕಿನಿಂದ 3,276 ಪುರುಷ, 1,836 ಮಹಿಳೆಯರು ಸೇರಿ ಒಟ್ಟು 5,110 ಮಂದಿ ಮತದಾರರು ನೋಂದಣಿ ಮಾಡಿಕೊಂಡಿದ್ದರು.

2026ರಲ್ಲಿ ಮತ್ತೆ ಚುನಾವಣೆ ನಡೆಯಲಿದೆ. ಹೊಸದಾಗಿ ಮತದಾರರ ಪಟ್ಟಿ ಸಿದ್ಧಪಡಿಸುವ ಕೆಲಸ ಆರಂಭವಾಗಿದೆ. ಪದವೀಧರ ಮತದಾರ ಆಗಲು ಅರ್ಹತೆ ಹೊಂದಿರುವ ಸಾವಿರಾರು ಜನರು ಇದ್ದಾರೆ. ಅವರಲ್ಲಿ ಎಷ್ಟು ಮಂದಿ ಮತದಾನದ ಹಕ್ಕು ಪಡೆಯಲು


ಉದಯವಾಹಿನಿ ಚಿತ್ರ

ಮುಂದೆ ಬರುತ್ತಾರೆ ಎಂಬುದು ಪ್ರಶ್ನೆಯಾಗಿದೆ.

ಪದವೀಧರರು ತಾವಾಗಿಯೇ ಮತದಾರರ ಪಟ್ಟಿಗೆ ನೋಂದಣಿ ಮಾಡಿಸಲು ಮುಂದೆ ಬರುತ್ತಿಲ್ಲ. ಪದವೀಧರರನ್ನು ಹುಡುಕಿ ಅವರಿಂದ ಅಗತ್ಯ ದಾಖಲೆ ಪಡೆದು ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ಸಾಕಷ್ಟು ಕಸರತ್ತು ನಡೆಸಬೇಕಾಗುತ್ತದೆ. ಬಹುತೇಕ ಪದವೀಧರರು ಸ್ವಯಂಪ್ರೇರಣೆಯಿಂದ ನೋಂದಣಿ ಮಾಡಿಸುವುದಿಲ್ಲ. ಅಂತಹವರ ಬೆನ್ನಿಗೆ ಬಿದ್ದು ಹೆಸರು ನೋಂದಾಯಿಸುವ ಕೆಲಸವನ್ನು ಸ್ಪರ್ಧೆ ಆಕಾಂಕ್ಷಿಗಳೇ ಮಾಡಬೇಕಾಗುತ್ತದೆ ಎಂದು ಕಳೆದ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಮುಖಂಡರೊಬ್ಬರು ತಿಳಿಸಿದರು.

ಪದವೀಧರ ಮತಕ್ಷೇತ್ರದ ಚುನಾವಣೆಯಲ್ಲಿ ಮತದಾರರಾಗಿ ಅರ್ಹತೆ ಪಡೆಯಲು ದೇಶದ ಯಾವುದೇ ಅಧಿಕೃತ ವಿಶ್ವವಿದ್ಯಾಲಯದ ಪದವಿ ಹೊಂದಿರಬೇಕು.

ಪದವಿ ಪಡೆದ ಕೂಡಲೇ ಮತದಾರನಾಗಲು ಸಾಧ್ಯವಿಲ್ಲ. ಮತದಾರರ ಪಟ್ಟಿ ಸಿದ್ಧಗೊಳ್ಳುವ ಪ್ರಕ್ರಿಯೆ ಕೊನೆಗೊಳ್ಳುವ ದಿನಕ್ಕಿಂತ ಮೂರು ವರ್ಷ ಮೊದಲು ಪದವಿ ಪಡೆದಿರಬೇಕು ಎಂದು ಚುನಾವಣಾ ಶಾಖೆ ಅಧಿಕಾರಿ ಚೇತನ್ ತಿಳಿಸಿದರು. ಪ್ರತಿ ಐದು ವರ್ಷಗಳಿಗೊಮ್ಮೆ ಪದವೀಧರ ಕ್ಷೇತ್ರದ ಮತದಾರರ ಪಟ್ಟಿಯನ್ನು ಹೊಸದಾಗಿ ಸಿದ್ಧಪಡಿಸಲಾಗುತ್ತದೆ. ಸಾಮಾನ್ಯವಾಗಿ ಪದವೀಧರರು ಉದ್ಯೋಗದ ನಿಮಿತ್ತ ಪದೇ ಪದೇ ವಲಸೆ ಹೋಗುವುದರಿಂದ ಅವರ ಸ್ಥಳ ಬದಲಾವಣೆಯಾಗುತ್ತಿರುತ್ತದೆ. ಇತರೆ ಪದವೀಧರ ಕ್ಷೇತ್ರಗಳಿಗೆ ಬೇರೆ ಬೇರೆ ಕಾಲದಲ್ಲಿ ಚುನಾವಣೆ ನಡೆಯುತ್ತದೆ. ಹೀಗಾಗಿ ಕ್ಷೇತ್ರದ ಚುನಾವಣೆ ನಡೆಯುವ ಕೆಲ ತಿಂಗಳ ಮುಂಚೆ ಮತದಾರರ ಪಟ್ಟಿ ಸಿದ್ಧಪಡಿಸಲಾಗುತ್ತದೆ. ಪದವೀಧರ ಒಂದು ಬಾರಿ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಮಾಡಿದರೆ ಬದುಕಿರುವವರೆಗೂ ಮತದಾರನಾಗಿರುತ್ತಾನೆ.

ಕ್ಷೇತ್ರವನ್ನು ಬದಲಿಸಿದ. ವಿಳಾಸ ಬದಲಾವಣೆಯಾದವರಿಗೆ ತಿದ್ದುಪಡಿ ಮಾಡಿಸಿಕೊಳ್ಳಲು ಅವಕಾಶ ನೀಡಬೇಕು. ಪ್ರತಿ

> **ಮತದಾರರ ಪಟ್ಟಿಯಲ್ಲಿ ಹೆಸರಿದ್ದರೂ ಮತ್ತೆ ಅಗತ್ಯ ದಾಖಲೆ ನೀಡಿ ಹೆಸರು ನೋಂದಾಯಿಸಿಕೊಳ್ಳಬೇಕು. ಹೊಸ ಮತದಾರರನ್ನು ನೋಂದಣಿ ಮಾಡಿಸಿ ಪಟ್ಟಿಗೆ ಸೇರ್ಪಡೆಗೊಳಿಸಲಾಗುತ್ತದೆ. ಸ್ಪರ್ಧಿಸುವ ಅಭ್ಯರ್ಥಿಗಳ ಬೆಂಬಲಿಗರು ಮನೆ ಮನೆಗೂ ತೆರಳಿ ಪದವೀಧರರಿಂದ ಅರ್ಜಿಗೆ ಸಹಿ ಪಡೆದು, ಅಗತ್ಯ ದಾಖಲೆ ಪಡೆದು ಚುನಾವಣಾ ಅಧಿಕಾರಿಗೆ ಸಲ್ಲಿಸುತ್ತಾರೆ. ಸ್ವಯಂಪ್ರೇರಣೆಯಿಂದ ಆಗಮಿಸಿ ಮತದಾರರಾಗುವುದು ಬೆರಳಣಿಕೆಯಷ್ಟು ಮಂದಿ ಮಾತ್ರ ಎಂದು ತಾಲ್ಲೂಕು ಕಚೇರಿ ಚುನಾವಣೆ ಶಾಖೆ ಅಧಿಕಾರಿಯೊಬ್ಬರು ತಿಳಿಸಿದರು.**

ಚುನಾವಣೆಗೂ ಹೊಸದಾಗಿ ಮತದಾರರ ಪಟ್ಟಿ ಸಿದ್ಧಪಡಿಸುವ ಪದ್ಧತಿ ಬದಲಾವಣೆ ಆಗಬೇಕು. ಲೋಕಸಭೆ, ವಿಧಾನಸಭೆ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ ಚುನಾವಣೆಗೆ ಇದೇ ಪದ್ಧತಿ ಜಾರಿಯಲ್ಲಿದೆ ಎಂದು ಬಹುತೇಕ ಪದವೀಧರರು ಅಭಿಪ್ರಾಯ ವ್ಯಕ್ತಪಡಿಸುತ್ತಾರೆ.

## ಮಿನಿ ನ್ಯೂಸ್

### ಅಕ್ರಮ ಸಾಗಾಟ; ಜಾನುವಾರು ರಕ್ಷಣೆ

• **ಉದಯವಾಹಿನಿ, ನಂಜನಗೂಡು**

ತಾಲ್ಲೂಕಿನ ಹುಲ್ಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಜಾನುವಾರುಗಳನ್ನು ಅಕ್ರಮವಾಗಿ ಸಾಗಿಸುತ್ತಿದ್ದ ವಾಹನವನ್ನು ಪೊಲೀಸರು ವಶಪಡಿಸಿಕೊಂಡಿದ್ದು, 20 ಕರುಗಳನ್ನು ರಕ್ಷಿಸಿದ್ದಾರೆ.

ತಾಲ್ಲೂಕಿನ ಜಯಪುರ ಪೊಲೀಸರಿಗೆ ಅಕ್ರಮವಾಗಿ ಜಾನುವಾರು ಸಾಗಾಟದ ಮಾಹಿತಿ ದೊರೆತಿದ್ದು, ಪಿಎಸ್‌ಐ ಹೇಮಾವತಿ ಅವರು ವಾಹನವನ್ನು ಹಿಂಬಾಲಿಸಿದ್ದಾರೆ. ಅತಿವೇಗದಿಂದ ಚಾಲನೆ ಮಾಡುತ್ತಿದ್ದ ಖದೀಮರು ಹುಲ್ಲಹಳ್ಳಿ ರಸ್ತೆ ಕಡೆಗೆ ತಿರುಗಿದ್ದಾರೆ, ಕೂಡಲೇ ಹೇಮಾವತಿ ಅವರು ಹುಲ್ಲಹಳ್ಳಿ ಪಿಎಸ್‌ಐ ಚೇತನ್ ಕುಮಾರ್ ಅವರಿಗೆ ಮಾಹಿತಿ ನೀಡಿದ್ದು, ಅವರು ತಮ್ಮ ಸಿಬ್ಬಂದಿಯೊಂದಿಗೆ ಹಿಡಿಯಲು ಮುಂದಾದಾಗ ಅಹಲ್ಯಾ ಗ್ರಾಮದ ಬಳಿ ವಾಹನ ಪಲ್ಟಿಯಾಗಿದೆ. ಆರೋಪಿಗಳು ಪರಾರಿಯಾಗಿದ್ದಾರೆ. ಸ್ಥಳೀಯರ ಸಹಾಯದಿಂದ 20 ಕರುಗಳನ್ನ ರಕ್ಷಿಸಿ, ಮೈಸೂರಿನ ಪಿಂಜರಾಪೋಲ್‌ಗೆ ರವಾನಿಸಿ ಸಾಗಿಸುತ್ತಿದ್ದ ವಾಹನವನ್ನು ವಶಪಡಿಸಿಕೊಂಡಿದ್ದಾರೆ. ಹುಲ್ಲಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### 29ಕ್ಕೆ ಪಿಂಚಣಿ, ಜಿಪಿಎಫ್ ಅದಾಲತ್

• **ಉದಯವಾಹಿನಿ, ರಾಮನಗರ**

ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾಧಿಕಾರಿ ಕಚೇರಿಯ ವೀಡಿಯೋ ಕಾನ್ಫರೆನ್ಸ್ ಹಾಲ್‌ನಲ್ಲಿ ಅ. 29ರಂದು ಬೆಳಿಗ್ಗೆ 10.30ಕ್ಕೆ ಪಿಂಚಣಿ ಅದಾಲತ್ ಹಾಗೂ ಜಿಪಿಎಫ್ ಅದಾಲತ್ ಕಾರ್ಯಕ್ರಮನು ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಮಹಾಲೇಖಪಾಲರ ಕಚೇರಿ ಅಧಿಕಾರಿ, ಸಿಬ್ಬಂದಿ, ರಾಷ್ಟ್ರೀಕೃತ ಬ್ಯಾಂಕ್ ಶಾಖೆಗಳಾದ ಎಸ್‌ಬಿಐ, ಕೆನರಾ ಬ್ಯಾಂಕ್, ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ, ಬ್ಯಾಂಕ್ ಆಫ್ ಬರೋಡಾದ ಸಿಪಿಪಿಸಿಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಬೆಂಗಳೂರಿನ ರಾಜ್ಯ ಪಿಂಚಣಿ ಪಾವತಿ ಖಜಾನೆಯ ಹೆಚ್ಚುವರಿ ನಿರ್ದೇಶಕರು ಭಾಗವಹಿಸಿ ಪಿಂಚಣಿ ಪಾವತಿಯ ಕುಂದುಕೊರತೆಗಳ ಬಗ್ಗೆ ಚರ್ಚಿಸಲಿದ್ದಾರೆ ಎಂದು ಬೆಂಗಳೂರು ದಕ್ಷಿಣ ಜಿಲ್ಲಾ ಖಜಾನೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭ್ರೂಣ ಲಿಂಗ ಪತ್ತೆ ಗ್ಯಾಂಗ್, ಮಹಿಳೆ ಸೇರಿ ಮೂವರು ಆರೆಸ್ಟ್

• **ಉದಯವಾಹಿನಿ, ಮೈಸೂರು**

ರಾಜ್ಯದಲ್ಲಿ ಮತ್ತೊಂದು ಬೆಚ್ಚಿ ಬೀಳಿಸುವ ಕೃತ್ಯ ಬೆಳಕಿಗೆ ಬಂದಿದ್ದು, ಹೆಣ್ಣು ಭ್ರೂಣ ಲಿಂಗ ಪತ್ತೆ ಮಾಡಿಕೊಟ್ಟು ಹತ್ಯೆ ಮಾಡುತ್ತಿದ್ದ ಗ್ಯಾಂಗ್‌ನ ಕಾರ್ಯಾಚರಣೆ ಪತ್ತೆಯಾಗಿದೆ. ಮೈಸೂರು ತಾಲ್ಲೂಕಿನ ಹುನಗನಹಳ್ಳಿಯಲ್ಲಿ ಗರ್ಭದಲ್ಲೇ ಶಿಶುಗಳನ್ನು ಕೊಲ್ಲುವ ಗ್ಯಾಂಗ್ ಪತ್ತೆಯಾಗಿದ್ದು, ಭ್ರೂಣ ಲಿಂಗ ಪತ್ತೆ ಮತ್ತು ಹತ್ಯೆ ಪ್ರಕರಣ ಸಂಬಂಧ ಇದೀಗ ಪೊಲೀಸರು ಓರ್ವ ಮಹಿಳೆ ಸೇರಿದಂತೆ ಮೂವರನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಮೈಸೂರು ತಾಲ್ಲೂಕಿನ ಹುನಗನಹಳ್ಳಿಯಲ್ಲಿರುವ ತೋಟದ ಮನೆಯಲ್ಲಿ ಕಾನೂನು ಬಾಹಿರವಾಗಿ ಸ್ಕ್ಯಾನಿಂಗ್ ಮಾಡಲಾಗುತ್ತಿತ್ತು. ಹೆಣ್ಣು ಭ್ರೂಣ ಲಿಂಗ ಪತ್ತೆಯಾದರೆ ಭ್ರೂಣವನ್ನು ಹತ್ಯೆ ಮಾಡುತ್ತಿದ್ದರು. ಗ್ರಾಮೀಣ ಭಾಗದ ಮಹಿಳೆಯರನ್ನೇ ಟಾರ್ಗೆಟ್ ಮಾಡಿ ಸ್ಕ್ಯಾನಿಂಗ್ ಮಾಡುತ್ತಿದ್ದರು. ಸ್ಕ್ಯಾನಿಂಗ್‌ಗೆ ಬಂದಿದ್ದ ಇಬ್ಬರು ಗರ್ಭಿಣಿಯರನ್ನು ಪೊಲೀಸರು ರಕ್ಷಿಸಿದ್ದಾರೆ. ಆರೋಗ್ಯ ಇಲಾಖೆ ಡಿಡಿ ವಿವೇಕ್ ದೊರೈ ನೇತೃತ್ವದಲ್ಲಿ ಮಂಡ್ಯ ಡಿಹೆಚ್ ಓ ಮೋಹನ್, ಮೈಸೂರು ಡಿಹೆಚ್ ಓ ಕುಮಾರಸ್ವಾಮಿ ದಾಳಿ ನಡೆದ್ದಾರೆ. ದಾಳಿ ವೇಳೆ ಲಾಕರ್‌ನಲ್ಲಿದ್ದ ಮೂರು ಲಕ್ಷಕ್ಕೂ ಹೆಚ್ಚು ನಗದು ವಶಕ್ಕೆ ಪಡೆಯಲಾಗಿದೆ. ಸ್ಥಳದಲ್ಲಿ ಭ್ರೂಣ ಹತ್ಯೆಗೆ ಬಳಸುತ್ತಿದ್ದ ಕಿಟ್‌ಗಳು, ಔಷಧಿಗಳು ಪತ್ತೆಯಾಗಿವೆ. ಭ್ರೂಣ ಲಿಂಗ ಪತ್ತೆಗೆ 25 ಸಾವಿರ ರೂ. ನಿಗದಿ ಮಾಡಿದ್ದರು ಎಂದು ಗೊತ್ತಾಗಿದೆ.

### ಹುಲಿಪತ್ತೆ ಕಾರ್ಯಾಚರಣೆಗೆ ವಿಳಂಭ : ರೈತ ಸಂಘ ಆರೋಪ



• **ಉದಯವಾಹಿನಿ, ಗುಂಡ್ಲುಪೇಟೆ**

ಇಂಗಲವಾಡಿ ಗ್ರಾಮದಲ್ಲಿ ಹಸುವನ್ನ ಬಲಿ ಪಡೆದಿದ್ದ ವ್ಯಾಘ್ರನ ಪತ್ತೆಗೆ ಕೂಂಬಿಗ್ ಕಾರ್ಯಚರಣೆಯನ್ನ ನಡೆಸದೆ ಅರಣ್ಯಾಧಿಕಾರಿಗಳು ವಿಳಂಭ ನೀತಿ ಅನುಸರಿಸುತ್ತಿದ್ದಾರೆ ಎಂದು ರೈತ ಸಂಘ ಸದಸ್ಯರು ಆರೋಪಿಸಿದ್ದಾರೆ.

> **ಹುಲಿ ಪತ್ತೆ ಕಾರ್ಯಾಚರಣೆ ವಿಲಂಭವಾಗಿಲ್ಲ, ಹೆಜ್ಜೆ ಗುರುತುಗಳನ್ನ ಆಧರಿಸಿ ಕೂಂಬಿಗ್ ನಡೆಸಲಾಗುತ್ತಿದೆ, ಇಂಗಲವಾಡಿ ರೈತರ ಜಮೀನಿನಲ್ಲಿ ಓಡಾಡಿರುವ ಹುಲಿ ಮಲ್ಲಮ್ಮನಹುಂಡಿ ,ಪಡಗೂರಿನ ಮೂಲಕ ತೆರಕಣಾಂಬಿ ಗುಡ್ಡದ ಕಡೆಗೆ ಹೋಗಿರುವ ಕುರುಹು ಪತ್ತೆಯಾಗಿರುವುದರಿಂದ ಇಂಗಲವಾಡಿ ಸುತ್ತಲಿನ ವ್ಯಾಪ್ತಿಯಲ್ಲಿ ಕಂಡುಬಂದ ಕೂಡಲೇ ಕ್ರಮ ಕೈಗೊಳ್ಳಲಾಗುವುದು.**
>
> **ಶಿವಕುಮಾರ್. ಉಪವಲಯ ಅರಣ್ಯಾಧಿಕಾರಿ ಗುಂಡ್ಲುಪೇಟೆ.**

ಇಂಗಲವಾಡಿ ಅಪರೇಷನ್ ಟೈಗರ್ ಸರ್ಚಿಂಗ್ ಕಾರ್ಯಾಚರಣೆ ಆರಂಭಗೊಂಡು ನಾಲ್ಕು ದಿನಗಳೇ ಕಳೆದರೂ ಸಹ ಹುಲಿಯನ್ನ ಪತ್ತೆಹಚ್ಚುವಲ್ಲಿ ಅರಣ್ಯ ಇಲಾಖೆ ವಿಫಲವಾಗಿದೆ ಎಂದು ರೈತ ಸಂಘ ಸದಸ್ಯರು ಅಸಮಧಾನ ಹೊರಹಾಕಿದ್ದಾರೆ. ಇಂಗಲವಾಡಿ ಹಾಗೂ ಅಗತಗೌಡನಹಳ್ಳಿ ಗ್ರಾಮದ ರೈತರ ಜಮೀನಿನಲ್ಲಿ ಪ್ರತ್ಯಕ್ಷವಾಗಿದ್ದ ವ್ಯಾಘ್ರ ಹಸುಗಳನ್ನ ಕೊಂದು ಮುಗಿಸಿ ಗ್ರಾಮಸ್ಥರನ್ನ ಭಯಭೀತಿಗೊಳಿಸಿತ್ತು, ವ್ಯಾಘ್ರನ ಸರಣಿ ದಾಳಿಯಿಂದ ಎಚ್ಚೆತ್ತ ಅರಣ್ಯ ಇಲಾಖೆ ಪಾರ್ಥಸಾರಥಿ ಆನೆ ಕರೆತಂದು ಕೂಂಬಿಗ್ ಕಾರ್ಯಾಚರಣೆ ಶುರು ಮಾಡಿ ನಾಲ್ಕೈದು ದಿನಗಳಾದರು ಯಾವುದೆ ಪ್ರಯೋಜನವಾಗಿಲ್ಲ, ಇತ್ತ ಪತ್ತೆಕಾರ್ಯವು ಸಹ ಆಮೆಗತಿಯಲ್ಲಿ ಸಾಗುತ್ತಿದೆ ಎಂದು ಆಕ್ರೋಶಿತರಾಗಿದ್ದಾರೆ. ಗ್ರಾಮದ ಅಣತಿ ದೂರದಲ್ಲೇ ವ್ಯಾಘ್ರನ ಚಲನವಲನ ಕಂಡಿರುವ ಸ್ಥಳೀಯರು ಆತಂಕಕ್ಕೊಳಗಾಗಿದ್ದಾರೆ ಆದುದರಿಂದ ಹುಲಿಯನ್ನ ಪತ್ತೆಹಚ್ಚುವ ಕಾರ್ಯದ ಜೊತೆಯಲ್ಲೇ ಸೆರೆಹಿಡಿದು ಸ್ಥಳಾಂತರಿಸಬೇಕು ಎಂದು ಆಗ್ರಹಿಸಿದ್ದಾರೆ.

## ಅಂತರಾಳದಿಂದ... EDITORIAL

# ಜೀವ ನದಿಗಳ ಜೀವಕ್ಕೆ ಕುತ್ತು



ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ನಡೆಸುವ ನೀರಿನ ಪರೀಕ್ಷೆಯಲ್ಲಿ ರಾಜ್ಯದ ಬಹುತೇಕ ನದಿಗಳು ಅನುತ್ತೀರ್ಣಗೊಂಡಿವೆ. ರಾಜ್ಯದ ಸುಮಾರು 12 ನದಿಗಳ ಪೈಕಿ ಯಾವ ನದಿಯಗಳ ನೀರೂ ನೇರವಾಗಿ ಕುಡಿಯುವುದಕ್ಕೆ ಯೋಗ್ಯವಲ್ಲ ಎಂದು ಮಂಡಳಿಯ ವರದಿ ಹೇಳುತ್ತಿದೆ. ನೇರವಾಗಿ ಕುಡಿಯುವುದಕ್ಕೆ ಯೋಗ್ಯವಾಗಿರುವ ನದಿಯ ನೀರನ್ನು ಎ ದರ್ಜೆಗೆ ಸೇರಿಸಲಾಗುತ್ತದೆ. ರಾಜ್ಯದ ಯಾವೊಂದು ನದಿಯೂ ಎ ದರ್ಜೆಯೊಳಗಿಲ್ಲ.

ಇದೇ ಸಂದರ್ಭದಲ್ಲಿ ಬಿ ದರ್ಜೆಯಲ್ಲಿ ನೇತ್ರಾವತಿ ನದಿ ಮಾತ್ರ ಗುರುತಿಸಲ್ಪಡುತ್ತಿದೆ. ನೇತ್ರಾವತಿ ನದಿ ನೀರನ್ನು ಸ್ನಾನ, ಗೃಹ ಬಳಕೆಗೆ ನೇರವಾಗಿ ಬಳಸಬಹುದಾದರೂ ಕುಡಿಯುವುದಕ್ಕೆ ಶುದ್ಧೀಕರಿಸಿಯೇ ಬಳಸಬೇಕಾಗುತ್ತದೆ. ಕರ್ನಾಟಕದ ರೈತರ ಪಾಲಿನ ಜೀವ ನದಿ ಎಂದು ಕರೆಯಲ್ಪಡುವ ಕಾವೇರಿ ನದಿಯು ಸಿ ದರ್ಜೆಗೆ ಸೇರಿಸಲ್ಪಟ್ಟಿದೆ. ತುಂಗಾ, ಭದ್ರಾ, ಲಕ್ಷ್ಮಣತೀರ್ಥ, ಕೃಷ್ಣಾ ಶಿಂಷಾ ನದಿಗಳನ್ನು ಸಿ ದರ್ಜೆಗೆ ಸೇರಿಸಲಾಗಿದೆ.

**ದಿಲ್ಲಿ ಬೆಂಗಳೂರು ಸೇರಿದಂತೆ 21 ನಗರಗಳಲ್ಲಿ 2030ರ ವೇಳೆಗೆ ಅಂತರ್ಜಲ ಸಂಪೂರ್ಣ ಬತ್ತುವ ಸಾಧ್ಯತೆಗಳಿವೆ. ಇಂದು ಭಾರತದ ನದಿಗಳು ತ್ಯಾಜ್ಯಗಳನ್ನು ಬಿಡುವ ಚರಂಡಿಗಳಾಗಿ ಪರಿವರ್ತನೆಗೊಂಡಿವೆ. ಇಲ್ಲಿ ಪ್ರತಿ ದಿನ 40 ದಶಲಕ್ಷ ಲೀಟರ್ ತ್ಯಾಜ್ಯ ನೀರು ಜಲಮೂಲಗಳನ್ನು ಸೇರುತ್ತಿವೆ. ಇದರಲ್ಲಿ ಶೇ. 90ರಷ್ಟು ಒಳಚರಂಡಿಯ ನೀರನ್ನು ಸಂಸ್ಕರಣೆ ಮಾಡದೇ ಬಿಡುಗಡೆ ಮಾಡಲಾಗುತ್ತದೆ ಎಂದು ಅಧ್ಯಯನಗಳು ತಿಳಿಸುತ್ತವೆ.**

ಇದೇ ಸಂದರ್ಭದಲ್ಲಿ ಭೀಮಾ, ಅರ್ಕಾವತಿ ನದಿಗಳನ್ನು ಡಿ ದರ್ಜೆಗೆ ಸೇರಿಸಲಾಗಿದೆ. ಸಿ ದರ್ಜೆಯ ನದಿಗಳ ನೀರನ್ನು ಸಂಸ್ಕರಿಸಿ ಬಳಸುವುದು ಕಡ್ಡಾಯವಾಗಿದೆ. ಇದೇ ಸಂದರ್ಭದಲ್ಲಿ ಡಿ ದರ್ಜೆಯ ನದಿಗಳ ನೀರನ್ನು ಸಂಸ್ಕರಿಸಿ ಬಳಸುವುದೂ ಸಾಧ್ಯವಿಲ್ಲ. ಬಹುತೇಕ ನದಿಗಳು ಆಮ್ಲಜನಕ ಕೊರತೆ, ಬಯೋ ಕೆಮಿಕಲ್ ಆಕ್ಸಿಜನ್, ಮಲಗಳಲ್ಲಿರುವ ಬ್ಯಾಕ್ಟೀರಿಯಾ, ಫೆಕಲ್ ಕೋಲಿಫಾರ್ಮ್‌ಗಳನ್ನು ಹೊಂದಿವೆ ಎಂದು ಸೆಪ್ಟಂಬರ್ ತಿಂಗಳಲ್ಲಿ ಹೊರ ಬಿದ್ದ ವರದಿ ಹೇಳುತ್ತಿದೆ. ಅಂತರ್ಜಲದ ಕೊರತೆಯ ಬಗ್ಗೆ ಚರ್ಚೆ ನಡೆಯುತ್ತಿರುವಾಗಲೇ, ನಮ್ಮ ನದಿಗಳಲ್ಲಿರುವ ನೀರನ್ನೇ ನಾವು ಹೇಗೆ ಕುಡಿಯುವುದಕ್ಕೆ ಅನರ್ಹವಾಗಿಸುತ್ತಿದ್ದೇವೆ ಎನ್ನುವ ಕಳವಳಕಾರಿ ಸಂಗತಿಯನ್ನು ಈ ವರದಿ ಬಹಿರಂಗ ಪಡಿಸಿದೆ. ಒಂದು ರೀತಿಯಲ್ಲಿ ಪರೀಕ್ಷೆಯಲ್ಲಿ ಸೋತಿರುವುದು ನದಿಗಳಲ್ಲ ಮನುಷ್ಯರು ಎನ್ನುವುದು ಕಟು ಸತ್ಯವಾಗಿದೆ.ಇದು ಬರೇ ರಾಜ್ಯದ ಸಮಸ್ಯೆಯಾಗಿ ಉಳಿದಿಲ್ಲ. ಕಳೆದ ಕುಂಭಮೇಳದ ಸಂದರ್ಭದಲ್ಲಿ ಗಂಗಾನದಿಯ ನೀರು ಕುಡಿಯುವುದಕ್ಕೆ ಮಾತ್ರವಲ್ಲ, ಸ್ನಾನ ಮಾಡುವುದಕ್ಕೂ ಅನರ್ಹವಾಗಿದೆ ಎನ್ನುವ ಮಾಲಿನ್ಯ ನಿಯಂತ್ರಣ ಮಂಡಳಿಯ ವರದಿಯು ಸಾಕಷ್ಟು ಚರ್ಚೆಗೆ ಕಾರಣವಾಗಿತ್ತು. ಉತ್ತರ ಪ್ರದೇಶ ಸರಕಾರ ಅದನ್ನು ಮುಚ್ಚಿಡಲು ಹರ ಸಾಹಸ ಮಾಡಿತಾದರೂ, ಗಂಗಾನದಿ ಮಾತ್ರವಲ್ಲ ಉತ್ತರ ಭಾರತದ ಬಹುತೇಕ ನದಿಗಳ ಸ್ಥಿತಿ ಚಿಂತಾಜನಕವಾಗಿದೆ ಎನ್ನುವುದು ಜಗತ್ತಿಗೇ ಗೊತ್ತಿರುವ ಸತ್ಯವಾಗಿದೆ. ಭಾರತದ ಶೇ. 70ರಷ್ಟು ನದಿ ನೀರು ಕುಡಿಯುವುದಕ್ಕೆ ಅನರ್ಹವಾಗಿದೆ ಎಂದು ವರದಿ ಹೇಳುತ್ತದೆ. ಹಸಿವಿನ ಸೂಚ್ಯಂಕದಲ್ಲಿ ಭಾರತದ ಕಳಪೆ ಸಾಧನೆ ಸಾಕಷ್ಟು ಸುದ್ದಿಯಾಯಿತು. ಭಾರತ ಸರಕಾರವು ಈ ಸೂಚ್ಯಂಕದ ವರದಿಯನ್ನೇ ಅಲ್ಲಗಳೆದು ಮುಖ ಉಳಿಸಿಕೊಳ್ಳುವ ಪ್ರಯತ್ನ ನಡೆಸಿತು.

ಇದೇ ಸಂದರ್ಭದಲ್ಲಿ ಜಲ ಗುಣಮಟ್ಟದಲ್ಲಿ ಭಾರತದ ಕಳಪೆ ಸಾಧನೆಯ ಬಗ್ಗೆ ಸರಕಾರ ಈವರೆಗೆ ತುಟಿ ಬಿಚ್ಚಿಲ್ಲ. ಜಲ ಗುಣ ಮಟ್ಟ ಸೂಚ್ಯಂಕದಲ್ಲಿ ಭಾರತವು 122 ದೇಶಗಳಲ್ಲಿ 120ನೇ ಸ್ಥಾನವನ್ನು ಹೊಂದಿದೆ ಎನ್ನುವುದು ಭಾರತದ ಪಾಲಿಗೆ ಬಹುದೊಡ್ಡ ಕಳಂಕವೇ ಸರಿ.ವರದಿಗಳ ಪ್ರಕಾರ ಈ ದೇಶದ 605 ನದಿಗಳಲ್ಲಿ ಅರ್ಧಕ್ಕಿಂತ ಹೆಚ್ಚು ನದಿಗಳು ಕಲುಷಿತಗೊಂಡಿವೆ. ಪ್ರತಿ ದಿನ 2 ದಶಲಕ್ಷ ಟನ್ ಒಳಚರಂಡಿ ಮತ್ತು ಕಾರ್ಖಾನೆಗಳ ತ್ಯಾಜ್ಯವನ್ನು ಬಿಡುಗಡೆ ಮಾಡಲಾಗುತ್ತದೆ. ಪ್ರತಿವರ್ಷ ಕೈಗಾರಿಕೆಗಳು 300ರಿಂದ 400 ದಶಲಕ್ಷ ಟನ್ ತ್ಯಾಜ್ಯವನ್ನು ನೀರಿನ ಮೂಲಗಳಿಗೆ ಸುರಿಯುತ್ತಿವೆ. 2024ರಲ್ಲಿ 20 ಲಕ್ಷಕ್ಕೂ ಹೆಚ್ಚು ಜನರು ನೀರಿನ ಕಲುಷಿತ ಅಂಶಗಳಿಂದ ಆರೋಗ್ಯವನ್ನು ಕೆಡಿಸಿಕೊಂಡಿದ್ದಾರೆ. 2023ರ ಡಿಸೆಂಬರ್ ಮಾಸಾಂತ್ಯದವರೆಗೆ 25 ರಾಜ್ಯಗಳ 230 ಜಿಲ್ಲೆಗಳು ಆರ್ಸೆನಿಕ್ ಮಾಲಿನ್ಯಕ್ಕೆ ಮತ್ತು 27 ರಾಜ್ಯಗಳ 469 ಜಿಲ್ಲೆಗಳು ಫ್ಲೋರೈಟ್ ಮಾಲಿನ್ಯಕ್ಕೆ ತುತ್ತಾಗಿವೆ. ಸೆಂಟರ್ ಫಾರ್ ಸೈನ್ಸ್ ಆಂಡ್ ಎನ್ವಿರಾನ್ಮೆಂಟ್ ವರದಿಯ ಪ್ರಕಾರ, ಈ ದೇಶದಲ್ಲಿ ಪ್ರತಿ ವರ್ಷ ಸುಮಾರು 3.70 ಕೋಟಿ ಜನರು ನೀರಿನಿಂದ ಹರಡುವ ಕಾಯಿಲೆಗಳಿಂದ ನರಳುತ್ತಿದ್ದಾರೆ.

ಕೇವಲಭೇದಿ ಕಾಯಿಲೆಯಿಂದಲೇ 15 ಲಕ್ಷಕ್ಕೂ ಅಧಿಕ ಮಕ್ಕಳು ಸಾಯುತ್ತಿದ್ದಾರೆ. ನೀರಿನ ಮಾಲಿನ್ಯದ ಕಾರಣದಿಂದಲೇ ಹರ್ಯಾಣದಲ್ಲಿ 'ಕ್ಯಾನ್ಸರ್ ಗ್ರಾಮವೊಂದು ಸೃಷ್ಟಿಯಾಗಿದೆ. ಇಲ್ಲಿ ಪ್ರತಿ ಕುಟುಂಬ ಕನಿಷ್ಠ ಒಬ್ಬ ಸದಸ್ಯನನ್ನು ಕ್ಯಾನ್ಸರ್ ರೋಗದಿಂದ ಕಳೆದುಕೊಂಡಿದೆ.



## ರಾಮಾಯಣ

**ಮಾರೀಚನು ಮಾಯಾ ಮೃಗರೂಪದಿಂದ ಸೀತಾದೇವಿಯ ಬಳಿಗೆ ಬಂದದ್ದು**

• ಹಿಂದಿನ ಸಂಚಿಕೆಯಿಂದ

### 120 ನೆಯ ಅಧ್ಯಾಯ

ಆ ಆಶ್ರಮದ ಸಮೀಪದಲ್ಲಿದ್ದ ಮರಗಳ ಎಳೆದಳಿರುಗಳನ್ನು ಭಕ್ಷಿಸುತ್ತ ಕದಳೀವನವನ್ನು ಹೊಕ್ಕು ಗೊರಟೆಗಿಡಗಳನ್ನು ಕದಲಿಸುತ್ತ ಸೀತಾದೇವಿಯ ದೃಷ್ಟಿಗೆ ಗೋಚರವಾಗುವಂತೆ ಸಮೀಪಕ್ಕೆ ಹೋಯಿತು. ಪುನಃ ಓಡಿಹೋಗಿ ಅತ್ತಿತ್ತ ಸಂಚರಿಸುತ್ತ ಕುಣಿದಾಡುತ್ತ ಭೂಮಿಯ ಮೇಲೆ ಮಲಗಿ ಏಳುತ್ತ ಆಶ್ರಮದ ಬಾಗಿಲಲ್ಲಿದ್ದ ಮೃಗಗಳ ಸಮೀಪಕ್ಕೆ ಹೋಗಿ ಅವುಗಳಿಂದ ಸುತ್ತಲ್ಪಟ್ಟಿತು. ಅಲ್ಲಿಂದ ಸೀತಾದೇವಿಯ ಮುಂದೆ ಚಕ್ರಾಕಾರವಾಗಿ ತಿರುಗುತ್ತ ಮೇಲಕ್ಕೆ ನೆಗೆದು ನಾನಾದಿಕ್ಕುಗಳನ್ನೂ ನೋಡತೊಡಗಿತು. ಆ ವನದಲ್ಲಿದ್ದ ಮೃಗಗಳು ಅದ್ಭುತವಾದ ಆ ಮೃಗವನ್ನು ಕಂಡು ಹತ್ತಿರಕ್ಕೆ ಬಂದು ಆಘ್ರಾಣಿಸಿ ಹೊಸಬಗೆಯಾಗಿದ್ದ ವಾಸನೆಯನ್ನು ಕಂಡು ಬೆದರಿ ನಾನಾದಿಕ್ಕುಗಳಿಗೂ ಓಡಲಾರಂಭಿಸಿದವು. ಮಾರೀಚನು ತನ್ನ ಸ್ವರೂಪವನ್ನು ತೋರಿಸಿಕೊಳ್ಳಬಾರದೆಂದು ತನ್ನ ಸಮೀಪಕ್ಕೆ ಬಂದ ಮೃಗಗಳನ್ನು ಭಕ್ಷಣಮಾಡದೆ ನಾಲಿಗೆಯಿಂದ ನೆಕ್ಕುತ್ತ ವಿನೋದವನ್ನು ಮಾಡುತ್ತಿದ್ದನು. ಆ ಸಮಯದಲ್ಲಿ ಆಶ್ರಮದ ಸಮೀಪದಲ್ಲಿದ್ದ ಕುಸುಮವನದಲ್ಲಿ ಗೊರಟೆ ಸುರಹೊನ್ನೆ ಅಶೋಕ ಮಾವು ಮೊದಲಾದ ಮರಗಳ ಪುಷ್ಪಗಳನ್ನು ಕೊಯ್ಯುತ್ತಿದ್ದ ಸೀತಾದೇವಿಯು ಮುತ್ತಿನಮಣಿಗಳಂತೆಯೂ ರತ್ನಗಳಂತೆಯೂ ನಾನಾವರ್ಣವಾದ ತನುಕಾಂತಿಯುಳ್ಳದ್ದಾಗಿ ಅತಿರಮಣೀಯವಾಗಿದ್ದ ಆ ಮೃಗವನ್ನು ಕಂಡು ಅತ್ಯಂತ ಪ್ರೀತಿ ಯುಳ್ಳವಳಾಗಿ ಶುಭದೃಷ್ಟಿಯಿಂದ ನೋಡತೊಡಗಿದಳು. ಅದನ್ನು ಕಂಡು ಆ ಮಾಯಾಮೃಗವು ತಾನು ಇನ್ನೂ ಹತ್ತಿರಕ್ಕೆ ಬಂದು ಸಂಚರಿಸುತ್ತಿರಲು, ಮೊದಲೆಂದೂ ದೃಷ್ಟಿಗೋಚರವಾಗದಿದ್ದ ಅಪೂರ್ವವಾದ ಆ ಮೃಗವನ್ನು ಸೀತೆಯು ಅತ್ಯಂತ ಆಶ್ಚರ್ಯದಿಂದ ನೋಡುತ್ತಿದ್ದಳು.

**ಸೀತಾದೇವಿಯು ಮಾಯಾಮೃಗವನ್ನು ಬಯಸಿದ್ದು**

ಆಮೇಲೆ ಸೀತಾದೇವಿಯು ಪುಷ್ಪಗಳನ್ನು ಕೊಯಿದುಕೊಂಡು ಸುವರ್ಣ ರಜತ ಬಿಂದುಗಳಿಂದ ಹೊಳೆಯುತ್ತಿದ್ದ ಆ ಮೃಗವನ್ನು ನೋಡಿ ಶ್ರೀರಾಮನ ಬಳಿಗೆ ಹೋದಳು. ಅಲ್ಲಿ ತನ್ನ ಮೈದುನನಾದ ಲಕ್ಷ್ಮಣನ ಸಂಮುಖದಲ್ಲಿ ಶ್ರೀರಾಮನನ್ನು ಕುರಿತು ಪ್ರಾಣಕಾಂತ, ಅಗೋ ಅಲ್ಲಿ ಒಂದು ವಿಚಿತ್ರವೂ ಮನೋಹರವೂ ಆದ ಜಿಂಕೆಯು ಕಾಣುತ್ತಿದೆ, ನೋಡು ಎಂದು ಹೇಳಿದಳು. ಅದನ್ನು ಕೇಳಿ ಲಕ್ಷ್ಮಣನು ಮನಸ್ಸಿನಲ್ಲಿ ಸಂಶಯಪಟ್ಟು ಶ್ರೀರಾಮನನ್ನು ಕುರಿತು ಅಣ್ಣ, ಮಾರೀಚನು ಈ ಮಾಯಾ ಮೃಗ ಸ್ವರೂಪನಾಗಿ ಇಲ್ಲಿಗೆ ಬಂದನೆಂದು ನನ್ನ ಮನಸ್ಸಿಗೆ ತೋರುತ್ತಿದೆ. ಮಾರೀಚನು ಯಾವಾಗ ಯಾವ ರೂಪವನ್ನು ಬಯಸುವನೋ ಆಗ ಆ ರೂಪವನ್ನು ತಾಳಬಲ್ಲನು. ಕಾಮರೂಪಿಯಾದ ಮಾರೀಚನು ಮಾಯೆಯಿಂದ ಈ ಮೃಗಸ್ವರೂಪವಾಗಿ ಇಲ್ಲಿಗೆ ಬಂದಿದ್ದಾನೆ ಶ್ರೀರಾಮ, ಆಕಾಶದಲ್ಲಿ ಕಾಣಿಸುವ ಗಂಧರ್ವನಗರದಂತೆ ನಾನಾವರ್ಣವಾಗಿ ರತ್ನಮಯವಾದ ಇಂಥ ಮೃಗವನ್ನು ಲೋಕದಲ್ಲಿ ಎಲ್ಲಿಯೂ ಕಂಡದ್ದಿಲ್ಲ.

ಮುಂದುವರಿಯುವುದು...

# ಹೆಚ್. ಎಸ್. ಪ್ರತಿಮಾ ಹಾಸನ್ ರವರು ಕೆಂಪಮ್ಮ ಪ್ರಶಸ್ತಿಗೆ ಆಯ್ಕೆ



ಸಾಮಾಜಿಕ ಕಳಕಳಿ

ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ
ಶಿಕ್ಷಕಿ, ಹಾಸನ

• ಉದಯವಾಹಿನಿ, ಬೆಂಗಳೂರು




26:10:2026 ಭಾನುವಾರ ಅಕ್ಕಮಹಾದೇವಿ ಸಭಾಂಗಣ ಕನ್ನಡ ಸಾಹಿತ್ಯ ಪರಿಷತ್ ಬೆಂಗಳೂರು ಇಲ್ಲಿ 25 ವರ್ಷದ ಸಂಸ್ಥೆ ಜಾಗೃತಿ ಟ್ರಸ್ಟ್ ವತಿಯಿಂದ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ನಡೆಯುತ್ತಿರುವ ನಗೆ ಹಬ್ಬ ಕಾರ್ಯಕ್ರಮದಲ್ಲಿ ಪುಸ್ತಕ ಬಿಡುಗಡೆ, ಹಾಗೂ ಮಹಿಳಾ ಸಾಧಕೀಯರಿಗೆ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಹಾಸನ ನಗರದ ಶಿಕ್ಷಕಿ. ಸಾಮಾಜಿಕ ಚಿಂತಕಿ. ಸಾಹಿತಿ.ಪತ್ರಕರ್ತರು ಹಾಗೂ ಸಂಸ್ಥಾಪಕ ಅಧ್ಯಕ್ಷರು ಪ್ರತಿಮಾ ಸಾಮಾಜಿಕ ಸಾಂಸ್ಕೃತಿಕ ಅಭಿವೃದ್ಧಿ ಪ್ರತಿಷ್ಠಾನದ' ಬಹುಮುಖ ಪ್ರತಿಭೆ, ಸದಾ ಕ್ರಿಯಾಶೀಲರಾಗಿರುವ ಹಾಗೂ ಜಿಲ್ಲೆ, ರಾಜ್ಯ,ಮಟ್ಟದಲ್ಲಿ ಹಲವಾರು ಸಂಘ ಸಂಸ್ಥೆಯಲ್ಲಿ ಪದಾಧಿಕಾರವನ್ನು ಪಡೆದು ಕಾರ್ಯನಿರ್ವಹಿಸುತ್ತಿದ್ದು, ನೂರಾರು ಪ್ರಶಸ್ತಿಗಳನ್ನು ಪಡೆದಿರುವ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದ ಪ್ರಶಸ್ತಿಗಳನ್ನು ಪಡೆದಿರುವ ಮಹಿಳಾ ಸಾಧಕಿಯಾದ, ಮಹಿಳಾ ಹೋರಾಟಗಾರ್ತಿಯಾಗಿ, ಸಮಾಜ ಸೇವಕಿಯಾಗಿ ಸಾಮಾಜಿಕ,ಸಾಂಸ್ಕೃತಿಕ, ಶೈಕ್ಷಣಿಕ, ಸಾಹಿತಿಕವಾಗಿ ಸೇವೆ ಸಲ್ಲಿಸಿದ್ದು ಹಲವಾರು ಪ್ರಕಾರಗಳಲ್ಲಿ ಕೃತಿಗಳನ್ನು ಲೋಕಾರ್ಪಣೆಗೊಳಿಸಿ ಸಾಹಿತ್ಯ ಕ್ಷೇತ್ರಕ್ಕೆ ಕೊಡುಗೆ ನೀಡಿರುವುದನ್ನು ಗಮನಿಸಿದ್ದು ಹಾಗೂ ಅಂಕಣಗಾರ್ತಿಯಾಗಿ, ಹಲವಾರು ಪ್ರಕಾರಗಳಲ್ಲಿ ಪತ್ರಿಕೆಗಳಿಗೆ ಬರೆಯುತ್ತಿರುವುದನ್ನು ಗಮನಿಸಿದ್ದು ಹೆಚ್. ಎಸ್. ಪ್ರತಿಮಾ ಹಾಸನ್ ರವರನ್ನು ಸಾಹಿತ್ಯ ಕ್ಷೇತ್ರಕ್ಕೆ ಆಯ್ಕೆ ಮಾಡಿ ಪ್ರತಿಷ್ಠಿತವಾದ 'ಕೆಂಪಮ್ಮ ಪ್ರಶಸ್ತಿ ' ನೀಡಿ ಸನ್ಮಾನಿಸಿ ಗೌರವಿಸಲಾಗುವುದು ಎಂದು ಜಾಗೃತಿ ಟ್ರಸ್ಟ್ ಅಧ್ಯಕ್ಷರಾದಂತಹ ನಾಗೇಶ್ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಪ್ರಶಸ್ತಿಯನ್ನು ಪಡೆಯುತ್ತಿರುವ ಇವರಿಗೆ ಗಣೇಶ್ ಕಾಸರಗೋಡು ಹಿರಿಯ ಪತ್ರಕರ್ತರು, ಸಾಹಿತಿ ಗೊರೂರು ಅನಂತರಾಜುರವರು, ಚು. ಸಾ. ಪ ದ ಬಾ. ನಂ. ಲೋಕೇಶ್ ರವರು ಹೆಚ್. ಎಸ್. ಮಂಜುನಾಥ್ ( ಆರೋಗ್ಯ ನಿರೀಕ್ಷಣಾಧಿಕಾರಿಗಳು ) ತಾಯಿ ನೀಲಮ್ಮ ಸುರೇಶ್. ಹಾಗೂ ಶ್ರೀ ವಿವೇಕಾನಂದ ಆಂಗ್ಲ ಮಾಧ್ಯಮ ಶಾಲೆಯ ಅಧ್ಯಕ್ಷರು ಉದಯ್ ಕುಮಾರ್, ಕುಟುಂಬಸ್ಥರು, ಪತ್ರಿಕಾ ಬಳಗದವರು, ಸಂಘ-ಸಂಸ್ಥೆಯವರು, ಹಿರಿಯ ಮತ್ತು ಕಿರಿಯ ಸಾಹಿತಿಗಳು ಸಮಾಜ ಸೇವಕರು ಇನ್ನೂ ಹಲವರು ಅಭಿನಂದನೆಗಳನ್ನು ತಿಳಿಸಿದ್ದಾರೆ.



# ರಾಯರ ಬೃಂದಾವನಕ್ಕೆ ನವರತ್ನ ಕವಚದ ಅಲಂಕಾರ, ಸಂಜೆ ಕಾರ್ತಿಕ ದೀಪೋತ್ಸವ

• ಉದಯವಾಹಿನಿ, ಬೆಂಗಳೂರು

ಜಯನಗರದ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆಶೀರ್ವಾದದೊಂದಿಗೆ ಕಾರ್ತಿಕ ಮಾಸದ ಪ್ರಯುಕ್ತ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್ ಕೆ ವಾದಿಂದ್ರಚಾರ್ಯರ ನೇತೃತ್ವದಲ್ಲಿ ಅಕ್ಟೋಬರ್ 22 ರಿಂದ ನವಂಬರ್ 20ನೇ ತಾರೀಖಿನವರೆಗೆ ಪ್ರತಿನಿತ್ಯ ಸಾಯಂಕಾಲ



6:30ಕ್ಕೆ ಕಾರ್ತಿಕ ದೀಪೋತ್ಸವ ನೆರವೇರಲಿದೆ ಭಕ್ತಾದಿಗಳು ಈ ದೀಪೋತ್ಸವದಲ್ಲಿ ಭಾಗವಹಿಸಿ ಶ್ರೀ ರಾಘವೇಂದ್ರ ಸ್ವಾಮಿಗಳ ಅನುಗ್ರಹಕ್ಕೆ ಪಾತ್ರರಾಗಬಹುದು ವಿಶೇಷವಾಗಿ 5-11-25 ರಂದು ಲಕ್ಷ ದೀಪೋತ್ಸವ ದ ಕಾರ್ಯಕ್ರಮ ನೆರವೇರಲಿದೆ ಈ ಸೇವೆಯಲ್ಲಿ ಭಾಗವಹಿಸುವಂತ ಭಕ್ತರು ಶ್ರೀ ಮಠದ 9449133929 ವಾಟ್ಸಾಪ್ ನಂಬರ್ ಮುಖಾಂತರ ಸೇವೆ ಸಲ್ಲಿಸಿ ದೀಪಗಳನ್ನು ಪ್ರಜ್ವಲಿಸಿ ಪ್ರಸಾದ ಸ್ವೀಕರಿಸಿ ಗುರುಗಳ ಅನುಗ್ರಹಕ್ಕೆ ಪಾತ್ರಾಗಬಹುದು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು, ವಿಶೇಷವಾಗಿ ದೀಪಾವಳಿ ಬಲಿಪಾಡ್ಯಮಿ ಹಬ್ಬದ ಪ್ರಯುಕ್ತ ಹಾಗೂ ಕಾರ್ತಿಕ ಮಾಸದ ಅಂಗವಾಗಿ ಶ್ರೀ ಗುರು ರಾಯರ ಬೃಂದಾವನಕ್ಕೆ ನವರತ್ನ ಕವಚವದ ಅಲಂಕಾರವನ್ನು ಮಾಡಲಾಗಿ ವಿದ್ವಾನ್ ಉಮರ್ಜಿ ಪ್ರಹ್ಲಾದ ಆಚಾರ್ಯರು ಪ್ರವಚನವನ್ನು ನೀಡಿದರು, ಹಾಗೂ ಈ ದಿನ ಸಂಜೆ ವಿಶೇಷ ದೀಪೋತ್ಸವದ ಉದ್ಘಾಟನೆ ಯನ್ನು ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್.ಕೆ ವಾದಿಂದ್ರಾಚಾರ್ಯರು ಲೋಕಕಲ್ಯಾಣಕ್ಕಾಗಿ ಪ್ರಾರ್ಥಿಸಿ ನೆರವೇರಿಸಿದರು ಈ ಸಂದರ್ಭದಲ್ಲಿ ಭಕ್ತರು ಸಂಕಲ್ಪಿಸಿ ದೀಪಗಳನ್ನು ಪ್ರಜ್ವಲಿಸಿ ಪ್ರಸಾದವನ್ನು ಸ್ವೀಕರಿಸಿ ಶ್ರೀ ರಾಘವೇಂದ್ರ ಸ್ವಾಮಿಗಳ ಅನುಗ್ರಹಕ್ಕೆ ಪಾತ್ರರಾದರು,

# ಈ ಎಣ್ಣೆ ಕೂದಲಿಗೆ ಹಚ್ಚೋದ್ರಿಂದ ಡ್ಯಾಂಡ್ರಫ್ ಸಮಸ್ಯೆ ನಿವಾರಣೆಯಾಗುತ್ತಂತೆ

ಬ್ರಾಹ್ಮಿ ಒಂದು ಆಯುರ್ವೇದಿಕ್ ಗಿಡಮೂಲಿಕೆಯಾಗಿದ್ದು, ಕೂದಲಿನ ಬೆಳವಣಿಗೆಗೆ ಬ್ರಾಹ್ಮಿ ಎಣ್ಣೆಯನ್ನು ಹಚ್ಚೋದು ಪ್ರಯೋಜನಕಾರಿಯಾಗಿದೆ.

ಇದು ತಲೆಹೊಟ್ಟನ್ನು ನಿವಾರಿಸೋದಲ್ಲದೆ, ಕೂದಲನ್ನು ದಪ್ಪವಾಗಿಸುತ್ತದೆ. ಆಯುರ್ವೇದದಲ್ಲಿ ಬ್ರಾಹ್ಮಿಯನ್ನು ಬೋಳುತನಕ್ಕೆ ಚಿಕಿತ್ಸೆ ನೀಡಲು ಪರಿಣಾಮಕಾರಿ ಗಿಡಮೂಲಿಕೆ ಎಂದು ಪರಿಗಣಿಸಲಾಗಿದೆ. ಜನರು ಇದನ್ನು ಎಣ್ಣೆಯಾಗಿ ಬಳಸಿ ಕೂದಲಿಗೆ ಹಚ್ಚುತ್ತಾರೆ. ಬ್ರಾಹ್ಮಿ ಎಣ್ಣೆ ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸುತ್ತದೆ. ಇದು ಕೂದಲಿನ ಕಿರುಚೀಲಗಳನ್ನು ಒಳಗಿನಿಂದ ಸ್ವಚ್ಛಗೊಳಿಸುತ್ತದೆ ಮತ್ತು ಮುಚ್ಚುತ್ತದೆ, ಕೂದಲನ್ನು ಪೋಷಿಸುತ್ತದೆ ಮತ್ತು ಬಲವಾದ, ದಪ್ಪವಾದ ಕೂದಲಿಗೆ ಸಹಕಾರಿಯಾಗಿದೆ.

**ಬ್ರಾಹ್ಮಿ ಎಣ್ಣೆ ಕೂದಲು ಮತ್ತೆ ಬೆಳೆಯುವುದನ್ನು ಉತ್ತೇಜಿಸುತ್ತದೆ:** ಬ್ರಾಹ್ಮಿ ಕೂದಲನ್ನು ಪೋಷಿಸುತ್ತದೆ ಮತ್ತು ಬಲಪಡಿಸುತ್ತದೆ. ಇದು ಕಿರುಚೀಲಗಳು ಮತ್ತು ಬೇರುಗಳನ್ನು ಬಲಪಡಿಸುತ್ತದೆ, ದಪ್ಪವಾದ, ಆರೋಗ್ಯಕರ ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸುತ್ತದೆ. ಇದು ಕೂದಲು ಉದುರುವಿಕೆಯನ್ನು ತಡೆಯುತ್ತದೆ, ಕೂದಲು ಬೋಳಾಗಿರುವ ಜಾಗಕ್ಕೆ ಪರಿಣಾಮಕಾರಿಯಾಗಿದೆ.

**ದಪ್ಪ ಕೂದಲಿಗೆ ಬ್ರಾಹ್ಮಿ ಎಣ್ಣೆಯನ್ನು ಹಚ್ಚಿ:** ಕೂದಲಿಗೆ ಬ್ರಾಹ್ಮಿ ಎಣ್ಣೆ ಬೇರುಗಳನ್ನು ಪೋಷಿಸಲು ಸಹಾಯ ಮಾಡುತ್ತದೆ ಮತ್ತು ಬೇರುಗಳನ್ನು ದಪ್ಪವಾಗಿಸುವ ಮೂಲಕ ಕೂದಲಿನ ಬೆಳವಣಿಗೆಯನ್ನು ವೇಗಗೊಳಿಸುತ್ತದೆ. ಬ್ರಾಹ್ಮಿ ನೆತ್ತಿಯನ್ನು ತಂಪಾಗಿಸಲು ಮತ್ತು ಕೂದಲನ್ನು ದಪ್ಪವಾಗಿಸಲು ಸಹಾಯ ಮಾಡುತ್ತದೆ.

**ವಿಭಜಿತ ತುದಿಗಳಿಗೆ ಪ್ರಯೋಜನಕಾರಿ:** ಬ್ರಾಹ್ಮಿ ಎಣ್ಣೆ ವಿಭಜಿತ ತುದಿಗಳಿಗೆ ತುಂಬಾ ಪರಿಣಾಮಕಾರಿಯಾಗಿದೆ. ಇದು ಒಣ ಮತ್ತು ನಿರ್ಜೀವ ಕೂದಲನ್ನು ತೇವಗೊಳಿಸುತ್ತದೆ ಮತ್ತು ಅದರ ವಿನ್ಯಾಸವನ್ನು ಸುಧಾರಿಸುತ್ತದೆ, ವಿಭಜಿತ ತುದಿಗಳ ಸಮಸ್ಯೆಯನ್ನು ಕಡಿಮೆ ಮಾಡುತ್ತದೆ.

**ತಲೆಹೊಟ್ಟು ನಿವಾರಣೆಗೆ ಪರಿಣಾಮಕಾರಿ**

**ಬ್ರಾಹ್ಮಿ ಎಣ್ಣೆ ತಲೆಹೊಟ್ಟಿಗೆ ತುಂಬಾ ಪ್ರಯೋಜನಕಾರಿಯಾಗಿದೆ. ತಲೆಹೊಟ್ಟು ಹೆಚ್ಚಾಗಿ ಶಿಲೀಂಧ್ರ ಸೋಂಕಿನಿಂದ ಉಂಟಾಗುತ್ತದೆ ಅಂತಹ ಸಂದರ್ಭಗಳಲ್ಲಿ, ಇದು ತಲೆಹೊಟ್ಟು ಕಡಿಮೆ ಮಾಡುತ್ತದೆ ಮತ್ತು ನೆತ್ತಿಯನ್ನು ಸ್ವಚ್ಛಗೊಳಿಸುತ್ತದೆ. ಇದು ಮೇದೋಗ್ರಂಥಿಗಳ ಸ್ರಾವದ ಮಟ್ಟವನ್ನು ಸಮತೋಲನಗೊಳಿಸುತ್ತದೆ. ಬ್ರಾಹ್ಮಿ ಎಣ್ಣೆಯನ್ನು ಕೂದಲಿಗೆ ಹಚ್ಚೋದ್ರಿಂದ ತಲೆಹೊಟ್ಟು ನಿವಾರಣೆಯಾಗುತ್ತದೆ.**





# ಶುಗರ್‌ಗೆ ಮಾತ್ರವಲ್ಲ ಹೈ ಬಿಪಿಗೂ ಹಾಗಲಕಾಯಿ ಮದ್ದು

ಹಾಗಲಕಾಯಿ ಕಹಿಯಾಗಿರುವ ಒಂದು ತರಕಾರಿಯಾಗಿದೆ. ಹಾಗಾಗಿ ಇದು ಮಧುಮೇಹಿಗಳಿಗೆ ಬಹಳ ಒಳ್ಳೆಯದು, ಇದು ರಕ್ತದಲ್ಲಿನ ಸಕ್ಕರೆಯ ಮಟ್ಟವನ್ನು ಕಂಟ್ರೋಲ್‌ನಲ್ಲಿಡಲು ಸಹಕಾರಿಯಾಗಿದೆ. ಆದರೆ ನಿಮಗೆ ಗೊತ್ತಾ ಹಾಗಲಕಾಯಿ ಬರೀ ಮಧುಮೇಹಿಗಳಿಗೆ ಮಾತ್ರವಲ್ಲ, ಅಧಿಕ ರಕ್ತದೊತ್ತಡದ ಸಮಸ್ಯೆ ಇರುವವರಿಗೂ ಒಳ್ಳೆಯದು. ಅಧಿಕ ರಕ್ತದೊತ್ತಡದ ಸಮಸ್ಯೆ ಹೊಂದಿರುವವರು ತಮ್ಮ ಜೀವನಶೈಲಿಯಲ್ಲಿ ಕೆಲವೊಂದು ಬದಲಾವಣೆಗಳನ್ನು ಮಾಡುವುದು ಮುಖ್ಯ. ಸಮತೋಲಿತ ಆಹಾರ ಸೇವನೆ, ವ್ಯಾಯಾಮ ಅಧಿಕ ರಕ್ತದೊತ್ತಡವನ್ನು ಕಂಟ್ರೋಲ್‌ನಲ್ಲಿಡಲು ಸಹಕರಿಸುವುದು.

**ಆಹಾರ ತಜ್ಞೆಯ ಸಲಹೆ:** ಎಸ್ಸೆಂಟ್ರಿಕ್ಸ್ ಡಯಟ್ ಕ್ಲಿನಿಕ್‌ನ ಆಹಾರ ತಜ್ಞೆ ಶಿವಾಲಿ ಗುಪ್ತಾ ಅವರು, ಹಾಗಲಕಾಯಿ ಅಧಿಕ ರಕ್ತದೊತ್ತಡವನ್ನು ನಿಯಂತ್ರಿಸಲು ಹೇಗೆ ಸಹಾಯ ಮಾಡುತ್ತದೆ. ಹೈ ಬಿಪಿ ಸಮಸ್ಯೆ ಇರುವವರು ತಮ್ಮ ಆಹಾರದಲ್ಲಿ ಯಾವೆಲ್ಲಾ ಬದಲಾವಣೆಯನ್ನು ಮಾಡಬೇಕು ಎನ್ನುವುದನ್ನು ನಾವಿಲ್ಲಿ ತಿಳಿಯೋಣ.



**ಹಾಗಲಕಾಯಿಯಲ್ಲಿರುವ ಪೌಷ್ಟಿಕಾಂಶಗಳು:** ಹಾಗಲಕಾಯಿ ರುಚಿಯಲ್ಲಿ ಕಹಿಯಾಗಿರಬಹುದು, ಆದರೆ ಇದು ಅನೇಕ ಆರೋಗ್ಯ ಪ್ರಯೋಜನಗಳನ್ನು ಹೊಂದಿದೆ. ವಿಶೇಷವಾಗಿ ಅಧಿಕ ರಕ್ತದೊತ್ತಡ ರೋಗಿಗಳಿಗೆ ತುಂಬಾ ಪ್ರಯೋಜನ ಕಾರಿಯಾಗಿದೆ. ಇದು ಔಷಧೀಯ ಗುಣಗಳಿಂದ ಸಮೃದ್ಧವಾಗಿದ್ದು, ಆಯುರ್ವೇದದಲ್ಲಿ ಅನೇಕ ರೋಗಗಳಿಗೆ ಚಿಕಿತ್ಸೆ ನೀಡಲು ಬಳಸಲಾಗುತ್ತಿದೆ. ಇದರಲ್ಲಿ ವಿಟಮಿನ್ ಸಿ, ಕಬ್ಬಿಣ, ಮೆಗ್ನೀಸಿಯಮ್, ಪೊಟ್ಯಾಸಿಯಮ್, ಫೈಬರ್ ಮತ್ತು ಉತ್ಕರ್ಷಣ ನಿರೋಧಕಗಳು ಸಮೃದ್ಧವಾಗಿವೆ. ಇದು ಪಾಲಿಪೆಪ್ಟೈಡ್-ಪಿ, ಚರಂಟಿನ್ ವಿಸಿನ್‌ನಂತಹ ಸಕ್ರಿಯ ಸಂಯುಕ್ತಗಳನ್ನು ಹೊಂದಿದ್ದು ರಕ್ತದಲ್ಲಿನ ಸಕ್ಕರೆ, ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

**ರಕ್ತದೊತ್ತಡವನ್ನು ನಿಯಂತ್ರಿಸಲು:** ಹಾಗಲಕಾಯಿಯಲ್ಲಿರುವ ಪೊಟ್ಯಾಸಿಯಮ್ ಮೆಗ್ನೀಸಿಯಮ್ ಅಧಿಕ ರಕ್ತದೊತ್ತಡವನ್ನು ನಿಯಂತ್ರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಈ ಎರಡೂ ಖನಿಜಗಳು ನರಗಳನ್ನು ವಿಶ್ರಾಂತಿ ಮಾಡುವುದಲ್ಲದೆ ಇದು ರಕ್ತ ಪರಿಚಲನೆಯನ್ನು ಸುಧಾರಿಸುತ್ತದೆ, ಒತ್ತಡವನ್ನು ನಿಯಂತ್ರಣದಲ್ಲಿಡುತ್ತದೆ.

**ದೇಹವನ್ನು ನಿರ್ವಿಷಗೊಳಿಸುತ್ತದೆ:** ಹಾಗಲಕಾಯಿ ನೈಸರ್ಗಿಕ ನಿರ್ವಿಶೀಕರಣ ಕಾರಕವಾಗಿ ಕಾರ್ಯನಿರ್ವಹಿಸುತ್ತದೆ. ಇದು ದೇಹದಿಂದ ವಿಷವನ್ನು ತೆಗೆದುಹಾಕಲು ಕೆಲಸ ಮಾಡುತ್ತದೆ, ಇದರಿಂದಾಗಿ ರಕ್ತವನ್ನು ಶುದ್ಧೀಕರಿಸುತ್ತದೆ ಮತ್ತು ರಕ್ತನಾಳಗಳಲ್ಲಿ ಸಂಗ್ರಹವಾಗಿರುವ ಕೊಬ್ಬು ಮತ್ತು ಕೊಳೆಯನ್ನು ತೆಗೆದುಹಾಕುತ್ತದೆ. ಶುದ್ಧ ರಕ್ತ ಮತ್ತು ರಕ್ತನಾಳಗಳು ಅಧಿಕ ರಕ್ತದೊತ್ತಡದ ಅಪಾಯವನ್ನು ಕಡಿಮೆ ಮಾಡುತ್ತದೆ.

**ಒತ್ತಡವನ್ನು ಕಡಿಮೆ ಮಾಡಲು ಸಹಾಯಕವಾಗಿದೆ:** ಹಾಗಲಕಾಯಿಯಲ್ಲಿ ಉತ್ಕರ್ಷಣ ನಿರೋಧಕಗಳು ಸಮೃದ್ಧವಾಗಿವೆ. ಇದು ದೇಹದಲ್ಲಿ ಫ್ರೀ ರಾಡಿಕಲ್‌ಗಳ ಪರಿಣಾಮವನ್ನು ಕಡಿಮೆ ಮಾಡುತ್ತದೆ. ಇದು ಒತ್ತಡವನ್ನು ಕಡಿಮೆ ಮಾಡುತ್ತದೆ ಮತ್ತು ಹೃದಯವನ್ನು ಆರೋಗ್ಯವಾಗಿಡುತ್ತದೆ. ಮಾನಸಿಕ ಒತ್ತಡವು ಅಧಿಕ ರಕ್ತದೊತ್ತಡವನ್ನು ಹೆಚ್ಚಿಸುತ್ತದೆ, ಆದ್ದರಿಂದ ಹಾಗಲಕಾಯಿ ಒತ್ತಡವನ್ನು ಕಡಿಮೆ ಮಾಡುವ ಮೂಲಕ ರಕ್ತದೊತ್ತಡವನ್ನು ಕಂಟ್ರೋಲ್‌ನಲ್ಲಿಡುತ್ತದೆ.

**ತೂಕವನ್ನು ಕಡಿಮೆ ಮಾಡಲು:** ಅಧಿಕ ರಕ್ತದೊತ್ತಡದ ಪ್ರಮುಖ ಕಾರಣಗಳಲ್ಲಿ ಬೊಜ್ಜು ಕೂಡಾ ಒಂದು. ಹಾಗಲಕಾಯಿಯಲ್ಲಿ ಕ್ಯಾಲೋರಿಗಳು ಕಡಿಮೆ ಮತ್ತು ನಾರಿನಂಶ ಹೆಚ್ಚಿದ್ದು, ತೂಕ ಇಳಿಸಲು ಸಹಾಯ ಮಾಡುತ್ತದೆ. ಇದರ ಸೇವನೆಯು ಹಸಿವನ್ನು ನಿಯಂತ್ರಿಸುತ್ತದೆ, ಚಯಾಪಚಯ ಕ್ರಿಯೆಯನ್ನು ವೇಗಗೊಳಿಸುತ್ತದೆ.

**ಇನ್ಸುಲಿನ್ ಸೂಕ್ಷ್ಮತೆಯನ್ನು ಹೆಚ್ಚಿಸುತ್ತದೆ:** ಹಾಗಲಕಾಯಿಯಲ್ಲಿರುವ ಚರಂಟಿನ್ ಸಂಯುಕ್ತವು ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸುತ್ತದೆ ಇನ್ಸುಲಿನ್ ಚಟುವಟಿಕೆಯನ್ನು ಹೆಚ್ಚಿಸುತ್ತದೆ. ಮಧುಮೇಹ ಅಧಿಕ ಬಿಪಿ ಒಂದಕ್ಕೊಂದು ಸಂಬಂಧ ಹೊಂದಿದೆ.

**ಹಾಗಲಕಾಯಿಯನ್ನು ಹೇಗೆ ಸೇವಿಸುವುದು**


**ಮಧ್ಯಾಹ್ನ ಅಥವಾ ರಾತ್ರಿ ಊಟಕ್ಕೆ ಕಡಿಮೆ ಎಣ್ಣೆ ಮತ್ತು ಕಡಿಮೆ ಮಸಾಲೆಗಳಲ್ಲಿ ಬೇಯಿಸಲಾದ ಹಾಗಲಕಾಯಿಯನ್ನು ಸೇವಿಸಿ. ಪ್ರತಿದಿನ ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಒಂದು ಲೋಟ ತಾಜಾ ಹಾಗಲಕಾಯಿ ರಸವನ್ನು ಕುಡಿಯುವುದು ಹೆಚ್ಚು ಪ್ರಯೋಜನಕಾರಿ. ರುಚಿಯನ್ನು ಸಮತೋಲನಗೊಳಿಸಲು, ಸ್ವಲ್ಪ ನಿಂಬೆಯನ್ನು ಇದಕ್ಕೆ ಸೇರಿಸಬಹುದು. ಅಥವಾ ಹಾಗಲಕಾಯಿಯನ್ನು ಒಣಗಿಸಿ ಅದರ ಪುಡಿಯನ್ನು ತಯಾರಿಸಿ, ಪ್ರತಿದಿನ ಒಂದು ಟೀಚಮಚ ಪುಡಿಯನ್ನು ಉಗುರು ಬೆಚ್ಚಗಿನ ನೀರಿನೊಂದಿಗೆ ಸೇವಿಸಿ.**

# ಗೊಂದಲಗಳ ಸೃಷ್ಟಿಸುವುದರಲ್ಲಿ ಕಾಂಗ್ರೆಸ್ ನಾಯಕರೇ ಮುಂಚೂಣಿಯಲ್ಲಿದ್ದಾರೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಆಡಳಿತ ಮಾಡುತ್ತಿರುವ ಸರ್ಕಾರವು ಇಡೀ ರಾಜ್ಯದಲ್ಲಿ ಅಭಿವೃದ್ಧಿಯನ್ನು ಕುಂಠಿತಗೊಳಿಸಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಟೀಕಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಅಭಿವೃದ್ಧಿ ಬಗ್ಗೆ ಕೇಳಿದರೆ ದಾರಿ ತಪ್ಪಿಸುವ ಉತ್ತರಗಳನ್ನು ಕೊಡುತ್ತ ಬೇರೆ ಬೇರೆ ವಿಚಾರಗಳನ್ನು ಮಾತನಾಡುತ್ತಾರೆ. ರಸ್ತೆ ಗುಂಡಿ ಮುಚ್ಚಲು ಇವರಿಗೆ ಸಾಧ್ಯವಾಗಿಲ್ಲ. ಈಗ ರಸ್ತೆಯಲ್ಲಿ ಗುಂಡಿ ಇದೆಯ ಎಂದರೆ ಸರ್ಕಾರದಲ್ಲೇ ಗುಂಡಿ ಬಿದ್ದಿದೆ ಎಂದು ಆರೋಪಿಸಿದರು.




ನಾಯಕರ ಮಕ್ಕಳಲ್ಲಿ ಒಂದು ಕಡೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಗ ಯತೀಂದ್ರ, ಮತ್ತೊಂದು ಕಡೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ಮಗ ಇಬ್ಬರೂ ಸೇರಿ ಕಾಂಗ್ರೆಸ್‌ಗೇ ಗುಂಡಿ ತೋಡುತ್ತಿದ್ದಾರೆ ಎಂದು ವ್ಯಂಗ್ಯವಾಡಿದರು.

ಕಾಂಗ್ರೆಸ್‌ಗೇ ಗುಂಡಿ ತೋಡಿ ಈಗ ತಂದೆಯವರನ್ನೇ ಅಪಮಾನಗೊಳಿಸುವ ಮತ್ತು ಅವರನ್ನೇ ಜನರು ಈಗ ಅನುಮಾನದಿಂದ ನೋಡುವ ಪರಿಸ್ಥಿತಿಯನ್ನು ಅವರೇ ಉದ್ಭವ ಮಾಡುತ್ತಿದ್ದಾರೆ ಎಂದು ದೂರಿದರು.

**ಕಾಲಹರಣ ಮಾಡುವುದನ್ನು ಬಿಡಲು ಒತ್ತಾಯ:** ನಿಮ್ಮಿಂದ ಯಾರಿಗೆ ಪ್ರಯೋಜನವಾಗುತ್ತಿದೆ? ಇಡೀ ರಾಜ್ಯದ ಜನರು ನಿಮಗೆ ಹಿಡಿಶಾಪ ಹಾಕುತ್ತಿದ್ದಾರೆ. ಆದರೂ ನೀವು ಎಚ್ಚೆತ್ತುಕೊಂಡಿಲ್ಲ. ಕಾಲಹರಣ ಮಾಡುವುದನ್ನು ಬಿಡಿ; ಮಳೆಗಾಲದ ಪರಿಸ್ಥಿತಿ ಎದುರಿಸುವುದು, ಇವತ್ತು ರಾಜ್ಯದ ರೈತರ ಸಮಸ್ಯೆಗಳಿಗೆ ಪರಿಹಾರ ಕೊಡುವುದು ಅಗತ್ಯವಿದ್ದು ನೀವು ಯಾವುದರ ಬಗ್ಗೆಯೂ ತಲೆ ಕೆಡಿಸಿಕೊಳ್ಳುತ್ತಿಲ್ಲ ಎಂದು ದೂರಿದರು. ಕಾಂಗ್ರೆಸ್ ಸರ್ಕಾರ ಈ ರಾಜ್ಯಕ್ಕೆ ಮಾರಕವಾಗಿದೆ ಎಂದು ಜನರು ಮಾತನಾಡುತ್ತಿದ್ದಾರೆ. ಜನರ ಸಮಸ್ಯೆಗಳಿಗೆ ಪರಿಹಾರ ಕೊಡುವ ಸರ್ಕಾರ ಇದಲ್ಲ ಎಂದು ಹೇಳಲು ಬಯಸುವುದಾಗಿ ತಿಳಿಸಿದರು. ದಾರಿ ತಪ್ಪಿಸುವ ಮಾತನಾಡುವುದು ಮತ್ತು ಹೊಣೆಗೇಡಿ ಸರ್ಕಾರವಾಗಿ ಇವರು ವರ್ತಿಸುತ್ತಾರೆ ಎಂದು ಆಕ್ಷೇಪಿಸಿದರು.

# ಜ್ಯೂಸ್‌ಗಳನ್ನು ಕುಡಿಯುತ್ತಾ ಬಂದರೆ, ಹಿಮೋಗ್ಲೋಬಿನ್ ಮಟ್ಟ ಹೆಚ್ಚಾಗುತ್ತದೆ



ದೇಹದ ಕೆಂಪು ರಕ್ತ ಕಣಗಳಲ್ಲಿ ಹಿಮೋಗ್ಲೋಬಿನ್ ಅಂಶ ಹೆಚ್ಚಾಗಿರಬೇಕು ಎನ್ನುವುದು ತಜ್ಞರೂ ಕೂಡ ಹೇಳುತ್ತಾರೆ. ಆದರೆ ಕೆಲವೊಮ್ಮೆ ನಾವು ಅನುಸರಿಸಿಕೊಂಡು ಹೋಗುತ್ತಿರುವ ಜೀವನ ಶೈಲಿ ಆಹಾರ ಪದ್ಧತಿಯ ಕಾರಣಗಳಿಂದಾಗಿ ದೇಹದಲ್ಲಿ ಕಬ್ಬಿಣಾಂಶದ ಕೊರತೆ ಕಾಣಿಸಿಕೊಂಡು ಹಿಮೋಗ್ಲೋಬಿನ್ ಮಟ್ಟ ಕಡಿಮೆಯಾಗುತ್ತದೆ ಕೊನೆಗೆ ಇದೇ ಕಾರಣಕ್ಕೆ ಕೆಂಪು ರಕ್ತ ಕಣಗಳು ಕೂಡ ಕಡಿಮೆಯಾಗಿ, ದೇಹದ ರೋಗ ನಿರೋಧಕ ಶಕ್ತಿಯೂ ಕೂಡ ದುರ್ಬಲಗೊಳ್ಳುತ್ತದೆ. ದೇಹದಲ್ಲಿ ಹಿಮೋಗ್ಲೋಬಿನ್ ಮಟ್ಟ ಕಡಿಮೆ ಆಗಲು ಅನೇಕ ಕಾರಣಳಿರಬಹುದು, ಅದರಲ್ಲಿ ಪ್ರಮುಖವಾಗಿ ನಾವು ಅನುಸರಿಸಿಕೊಂಡು ಹೋಗು ತ್ತಿರುವ ಜೀವನಶೈಲಿ ಆಹಾರ ಪದ್ಧತಿಯಿಂದ ಆಗಿರಬಹುದು, ದೀರ್ಘಕಾಲಿನ ಕಾಯಿಲೆಗಳು ಇರಬಹುದು ಅಥವಾ ಪೌಷ್ಟಿಕಾಂಶ ಹೆಚ್ಚಿರುವ ಆಹಾರಗಳ ಸೇವನೆ ಮಾಡದೆ ಇದ್ದರೂ ಕೂಡ ರಕ್ತದಲ್ಲಿ ಕೆಂಪು ರಕ್ತಕಣಗಳ ಸಂಖ್ಯೆ ಕಡಿಮೆ ಆಗುತ್ತದೆ ಎನ್ನುತ್ತಾರೆ ತಜ್ಞರು. ದೇಹದಲ್ಲಿ ಹಿಮೋಗ್ಲೋಬಿನ್ ಹೆಚ್ಚಿಸಲು ಬೀಟ್ರೂಟ್ ತುಂಬಾನೇ ಪ್ರಯೋಜನಕಾರಿ ಎನ್ನುತ್ತಾರೆ ಆರೋಗ್ಯ ತಜ್ಞರು.. ಇದರಲ್ಲಿ ಕಬ್ಬಿಣ, ವಿಟಮಿನ್ ಸಿ, ಫೈಬರ್ ಮತ್ತು ಪೊಟ್ಯಾಸಿಯಮ್ ನಂತಹ ಅಂಶಗಳಿವೆ. ಆರೋಗ್ಯ ತಜ್ಞರ ಪ್ರಕಾರ, ಬೀಟ್ರೂಟ್ ಅನ್ನು ರಕ್ತ ಶುದ್ಧೀಕರಣಕಾರಕ ಎಂದೂ ಕರೆಯಲಾಗುತ್ತದೆ. ಇದರಲ್ಲಿರುವ ವಿಟಮಿನ್ ಸಿ ಕಬ್ಬಿಣವನ್ನು ಪರಿಣಾಮಕಾರಿಯಾಗಿ ಹೀರಿಕೊಳ್ಳುತ್ತದೆ , ರಕ್ತ ಸಂಚಾರದಲ್ಲಿ ಕೆಂಪು ರಕ್ತ ಕಣಗಳನ್ನು ಕೂಡ ಹೆಚ್ಚು ಮಾಡುತ್ತದೆ.

**ಟೊಮೆಟೊ ಹಣ್ಣುಗಳ ಜ್ಯೂಸ್ :** ಮನೆಯಲ್ಲಿ ರೆಡಿ ಮಾಡುವ ಸಾಂಬರ್ ರುಚಿಯನ್ನು ಹೆಚ್ಚಿಸುವ ಟೊಮೆಟೊ ಹಣ್ಣುಗಳು ಕೂಡ ಹಿಮೋಗ್ಲೋಬಿನ್ ಮಟ್ಟವನ್ನು ವೇಗವಾಗಿ ಹೆಚ್ಚಿಸಲು ನೆರವಿಗೆ ಬರುತ್ತದೆಯಂತೆ. ತಜ್ಞರ ಪ್ರಕಾರ, ಅಡುಗೆಯಲ್ಲಿ ಟೊಮೆಟೊ ಬಳಸುವ ಅಭ್ಯಾಸ ಮಾಡಿ ಕೊಳ್ಳುವುದರ ಜೊತೆಗೆ, ದಿನಾ ಒಂದು ಲೋಟ ಟೊಮೆಟೊ ಹಣ್ಣುಗಳ ಜ್ಯೂಸ್ ಮಾಡಿ ಕುಡಿಯುವ ಅಭ್ಯಾಸ ಮಾಡಿಕೊಂಡರೆ ಒಳ್ಳೆಯದು.



**ಪಾಲಕ್ ಸೊಪ್ಪಿನ ಜ್ಯೂಸ್:** ಪಾಲಕ್ ಸೊಪ್ಪಿನಲ್ಲಿ ಮನುಷ್ಯನ ಆರೋಗ್ಯಕ್ಕೆ ಬೇಕಾಗುವಂತಹ ಪೋಷಕಾಂಶಗಳು ಕಂಡು ಬರುವುದರಿಂದ, ಇದೊಂದು ಆರೋಗ್ಯಕಾರಿ ಸೊಪ್ಪು ಎನ್ನುವುದರಲ್ಲಿ ಎರಡು ಮಾತಿಲ್ಲ. ಪ್ರಮುಖವಾಗಿ ಈ ಹಸಿರೆಲೆ ಸೊಪ್ಪಿನಲ್ಲಿ ಅಧಿಕ ಪ್ರಮಾನದಲ್ಲಿ ಕಬ್ಬಿಣಾಂಶ, ವಿಟಮಿನ್ಸ್‌ಗಳಾದ ವಿಟಮಿನ್ ಎ, ವಿಟಮಿನ್ ಇ, ವಿಟಮಿನ್ ಕೆ, ಹಾಗೂ ಖನಿಜಾಂಶಗಳಾದ ಪೊಟ್ಯಾಸಿ ಯಮ್ ಮತ್ತು ಮೆಗ್ನೀಸಿಯಮ್ ಅಗಾಧ ಪ್ರಮಾಣದಲ್ಲಿ ಕಂಡು ಬರುವುದರಿಂದ, ಪ್ರತಿದಿನ ಒಂದು ಲೋಟ ಪಾಲಕ್ ಜ್ಯೂಸ್ ಸೇವನೆ ಕುಡಿಯುವ ಅಭ್ಯಾಸ ಮಾಡಿಕೊಂಡರೆ, ಹಿಮೋಗ್ಲೋಬಿನ್ ಮಟ್ಟವನ್ನು ಹೆಚ್ಚಿಸಿ ಕೊಳ್ಳಬಹುದು.

**ದಿನಾ ಒಂದು ಗ್ಲಾಸ್ ಬೀಟ್ರೂಟ್ ಜ್ಯೂಸ್**

**ಬೀಟ್ರೂಟ್ ಚೆನ್ನಾಗಿ ತೊಳೆದು, ಅದರ ಮೇಲ್ಭಾಗದ ಸಿಪ್ಪೆ ತೆಗೆದು ಸಣ್ಣ ಸಣ್ಣ ಹೋಳುಗಳನ್ನಾಗಿ ಕತ್ತರಿಸಿ ಸಲಾಡ್ ಮಾಡಿ ಕೊಂಡು ಸೇವನೆ ಮಾಡಬಹುದು. ಇಲ್ಲಾಂದ್ರೆ ದಿನಾ ಒಂದು ಗ್ಲಾಸ್ ಬೀಟ್ರೂಟ್ ಜ್ಯೂಸ್ ಕುಡಿಯುವ ಅಭ್ಯಾಸ ಮಾಡಿಕೊಳ್ಳಿ. ಇದರಿಂದ ಬೀಟ್ರೂಟ್ ಆರೋಗ್ಯ ಪ್ರಯೋಜನಗಳನ್ನು ನಿಮ್ಮದಾಗಿಸಿಕೊಳ್ಳಬಹುದು.**

**ಪ್ಲಮ್ ಹಣ್ಣಿನ ಜ್ಯೂಸ್:** ಒಣಗಿದ ಪ್ಲಮ್ ನಿಂದ ತಯಾರಿಸಿದ ಜ್ಯೂಸ್ ಅನ್ನು ಕುಡಿಯುವುದರಿಂದ ಹಿಮೋಗ್ಲೋಬಿನ್ ಮಟ್ಟವು ವೇಗವಾಗಿ ಹೆಚ್ಚಾಗುತ್ತದೆ.

ಇದನ್ನು ತಯಾರಿಸಲು, 5 ಒಣಗಿದ ಪ್ಲಮ್‌ಗಳನ್ನು ತೆಗೆದುಕೊಂಡು ನೀರಿನಲ್ಲಿ ಇರಿಸಿ. ಈಗ ಇವೆಲ್ಲಾವನ್ನೂ ಕೂಡ ಜ್ಯೂಸರ್‌ಗೆ ಹಾಕಿಕೊಂಡು, ಒಂದು ಚಮಚ ನಿಂಬೆ ರಸ ಹಾಗೂ ರುಚಿಗೆ ತಕ್ಕಷ್ಟು ಸಕ್ಕರೆಯನ್ನು ಬೆರೆಸಿ, ದಿನಕ್ಕೆ ಒಂದು ಲೋಟ ಕುಡಿಯುವ ಅಭ್ಯಾಸ ಮಾಡಿಕೊಂಡರೆ ರಕ್ತಹೀನತೆಯ ಹೊರತಾಗಿ, ಆಯಾಸ ಸುಸ್ತು, ಇತರ ಆರೋಗ್ಯ ಸಮಸ್ಯೆಗಳು ಕೂಡ ದೂರವಾಗುತ್ತದೆ.

# ಶಕ್ತಿದೇವತೆ ಹಾಸನಾಂಬೆ ಜಾತ್ರೆಗೆ ವಿಧ್ಯುಕ್ತ ತೆರೆ; ಶಾಸ್ತ್ರೋಕ್ತವಾಗಿ ಗರ್ಭಗುಡಿ ಬಾಗಿಲು ಬಂದ್

• ಉದಯವಾಹಿನಿ, ಹಾಸನ

ವರ್ಷಕ್ಕೊಮ್ಮೆ ಮಾತ್ರ ದರ್ಶನ ಕರುಣಿಸುವ ಶಕ್ತಿದೇವತೆ, ಹಾಸನದ ಅಧಿದೇವತೆ ಹಾಸನಾಂಬೆ ದೇವಿ ಗರ್ಭಗುಡಿ ಬಾಗಿಲು ಶಾಸ್ತ್ರೋಕ್ತವಾಗಿ ಬಂದ್ ಆಗಿದೆ. ಪ್ರಧಾನ ಅರ್ಚಕ ನಾಗರಾಜ್ ನೇತೃತ್ವದಲ್ಲಿ ಅಂತಿಮ ಪೂಜೆ ನಡೆದಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರ ಸಮ್ಮುಖದಲ್ಲಿ ಗರ್ಭಗುಡಿಗೆ ಅರ್ಚಕರು ಬೀಗ ಹಾಕಿದರು. ಈ ಮೂಲಕ 15 ದಿನಗಳ ಕಾಲ ನಡೆದ ಹಾಸನಾಂಬೆ ಜಾತ್ರಾ ಮಹೋತ್ಸವಕ್ಕೆ ತೆರೆ ಬಿದ್ದಿದೆ. ಅ.9ರಿಂದ ಆರಂಭವಾಗಿ ಅ.23ರವರೆಗೆ ದರ್ಶನ ಭಾಗ್ಯ ಕರುಣಿಸಿದ ಹಾಸನಾಂಬೆ ಮತ್ತೆ ಒಂದು ವರ್ಷಗಳ ಕಾಲ ಮರೆಗೆ ಸರಿದಳು. ಗುರುವಾರ ಮಧ್ಯಾಹ್ನ 1:06ಕ್ಕೆ ಶಾಸ್ತ್ರೋಕ್ತವಾಗಿ ಗರ್ಭಗುಡಿ ಬಾಗಿಲನ್ನು ಮುಚ್ಚಲಾಯಿತು. ಈ ವೇಳೆ ಪಂಜಿನ ಪೂಜೆ, ಮಂಗಳವಾದ್ಯ ಮೊಳಗಿತು.

ಸಿಎಂ ಸಿದ್ಧರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ರಾಜ್ಯ ಸರ್ಕಾರದ ಸಚಿವರು, ಶಾಸಕರು, ನಟ, ನಟಿಯರು ವಿವಿಧ ಕ್ಷೇತ್ರದ ಗಣ್ಯರು ದೇವಿಯ ದರ್ಶನ ಪಡೆದು ಪುನೀತರಾಗಿದ್ದಾರೆ.


ಉದಯವಾಹಿನಿ ಚಿತ್ರ

ಈ ಬಾರಿಯ 13 ದಿನಗಳ ಸಾರ್ವಜನಿಕ ದರ್ಶನದಲ್ಲಿ ವಿವಿಐಪಿ ಪಾಸ್‌ಗಳ ರದ್ದು ಮಾಡಿ ಗೋಲ್ಡ್ ಪಾಸ್, ಪ್ರೋಟೋಕಾಲ್‌ಗೆ ಸಮಯ ನಿಗದಿ ಮಾಡಿದ್ದರಿಂದ ಸಾರ್ವಜನಿಕರಿಗೆ ಸುಗಮವಾಗಿ ಹಾಸನಾಂಬ ದೇವಿಯ ದರ್ಶನ ಆಗಿದೆ. ನಿರೀಕ್ಷೆಗೂ ಮೀರಿದ ಸಂಖ್ಯೆಯಲ್ಲಿ ಭಕ್ತರು ಬಂದಿದ್ದರಿಂದ ದರ್ಶನ ಸಮಯ ವಿಳಂಬ ಬಿಟ್ಟರೆ ಉಳಿದಂತೆ ಜಾತ್ರಾ ಮಹೋತ್ಸವ ಯಶಸ್ವಿಯಾಗಿ ನಡೆದಿದೆ.

ಕಳೆದ ಬಾರಿ ಜಾತ್ರೆ ವೇಳೆ ಅವ್ಯವಸ್ಥೆ ಆಗಿತ್ತು. ಇದನ್ನು ಸರಿಪಡಿಸಿ ಶಾಂತಿಯುತವಾಗಿ ದರ್ಶನ ಆಗಲು ಜಿಲ್ಲಾಡಳಿತ, ಸಚಿವರ ಜಾಣ್ಮೆ ಕಾರ್ಯವೈಖರಿಯಿಂದ ಎಲ್ಲವನ್ನೂ ಕಾಲಕಾಲಕ್ಕೆ ಸರಿಪಡಿಸಿ ಯಶಸ್ವಿಯಾದ ಜಾತ್ರೆ ನಡೆಸಿದ್ದಾರೆ. ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಕಂದಾಯ ಇಲಾಖೆ, ಪೌರಕಾರ್ಮಿಕರು, ವಿದ್ಯುತ್ ಇಲಾಖೆ, ಅಗ್ನಿಶಾಮಕದಳ, ಡಿಎಫ್‌ಓ ಸೇರಿ ಎಲ್ಲಾ ಇಲಾಖೆಯವರು ಪ್ರಮಾಣಿಕವಾಗಿ ಕೆಲಸ ಮಾಡಿದ್ದಾರೆ. ಹಗಲು ರಾತ್ರಿ ದುಡಿದಿದ್ದಾರೆ. ಈ ಬಾರಿಯ ಉತ್ಸವದ ವೇಳೆ ಒಂದು ವಾರಗಳ ಕಾಲ ಪ್ರತಿನಿತ್ಯ ಸುರಿಯುತ್ತಿದ್ದ ಮಳೆಯನ್ನೂ ಲೆಕ್ಕಿಸದೆ ದೇವಿ ದರ್ಶನ ಪಡೆದಿದ್ದಾರೆ. ಬುಧವಾರ ಸಂಜೆಯವರೆಗೂ 26.13 ಲಕ್ಷಕ್ಕೂ ಹೆಚ್ಚು ಭಕ್ತರು ದೇವಿಯ ದರ್ಶನ ಪಡೆದಿದ್ದಾರೆ. ಶೀಘ್ರ ದರ್ಶನದ ಟಿಕೆಟ್ ಮಾರಾಟದಿಂದ 21.82 ಕೋಟಿ ರೂ. ಹಣ ಸಂಗ್ರಹವಾಗಿದೆ. ಉಳಿದಂತೆ ಹುಂಡಿ ಎಣಿಕೆ ಕಾರ್ಯ ಬಾಕಿಯಿದ್ದು, 25 ಕೋಟಿ ತಲುಪಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ಕೃಷ್ಣ ಬೈರೇಗೌಡ ಹೇಳಿದ್ದಾರೆ.

### ಮುಂದಿನ ವರ್ಷದ ಹಾಸನಾಂಬೆ ಉತ್ಸವಕ್ಕೆ ದಿನಾಂಕ ನಿಗದಿ

**ಈ ಬಾರಿಯ ಹಾಸನಾಂಬೆ ದರ್ಶನೋತ್ಸವ ಇತಿಹಾಸ ನಿರ್ಮಿಸಿ, ದಾಖಲೆ ಬರೆಯುವ ಜೊತೆಗೆ ಅತ್ಯಂತ ಯಶಸ್ವಿ ಮತ್ತು ಅಚ್ಚುಕಟ್ಟಾಗಿ ನಡೆಯಿತು. ಮುಂದಿನ ವರ್ಷದ ಹಾಸನಾಂಬೆ ಉತ್ಸವ ದಿನಾಂಕವನ್ನು ಪಂಚಾಂಗದ ಪ್ರಕಾರ, ನಿಗದಿ ಮಾಡಲಾಗಿದೆ. 2026ರ ಅಕ್ಟೋಬರ್ 29ರಿಂದ ನವೆಂಬರ್ 11ರವರೆಗೆ ನಡೆಯಲಿದೆ. ಒಟ್ಟು 14 ದಿನ ಗರ್ಭಗುಡಿ ತೆರೆದಿರಲಿದ್ದು, ಈ ಪೈಕಿ 12 ದಿನ ಭಕ್ತರ ದರ್ಶನಕ್ಕೆ ಅವಕಾಶ ನೀಡಲಾಗುತ್ತದೆ. ಒಟ್ಟಿನಲ್ಲಿ ಹಾಸನಾಂಬೆಯ ಈ ಬಾರಿಯ ಉತ್ಸವಕ್ಕೆ ವಿದ್ಯುಕ್ತ ತೆರೆ ಬಿದ್ದಿದೆ. 13 ದಿನಗಳ ಕಾಲ ಜನ ಜಂಗುಳಿಯಿಂದ ತುಂಬಿ ತುಳುಕುತ್ತಿದ್ದ ಹಾಸನಾಂಬೆ ದೇಗುಲ ಆವರಣ ಈಗ ಭಣಗುಡುತ್ತಿದೆ.**

# ಸರ್ಕಾರ ಪತನಕ್ಕೆ ಬೆಳಗಾವಿಯಲ್ಲಿ ಯತೀಂದ್ರ ಗುದ್ದಲಿ ಪೂಜೆ; ಡಿಕೆಶಿ ಟೆಂಪಲ್ ರನ್

• ಉದಯವಾಹಿನಿ, ದಾವಣಗೆರೆ

ರಾಜ್ಯದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಜ್ಯಾದ್ಯಂತ ನಡೆಸುತ್ತಿರುವ ದೇವಸ್ಥಾನಗಳ ಭೇಟಿ ಬಿಟ್ಟು, ಇಟಲಿ ಮಾತೆಯ ಟೆಂಪಲ್ ಸುತ್ತಿದರೆ ಮುಖ್ಯಮಂತ್ರಿ ಆಗುತ್ತಾರೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಲೇವಡಿ ಮಾಡಿದ್ದಾರೆ. ದಾವಣಗೆರೆಯಲ್ಲಿ ಮಾಧ್ಯಮಗಳೊಂದಿಗೆ ಗುರುವಾರ ಮಾತನಾಡಿದ ಅವರು, ಡಿಸಿಎಂ ಡಿ.ಕೆ. ಶಿವಕುಮಾರ್ ದಾರಿ ತಪ್ಪಿದ ಮಗ. ಅವರು ಚಾಮುಂಡಿ, ಮಾರಮ್ಮ, ಗೌರಮ್ಮ, ರಾಘವೇಂದ್ರ ಸ್ವಾಮಿ ಎಂದು ಟೆಂಪಲ್ ರನ್ ಮಾಡುವುದರಿಂದ ಏನೂ ಪ್ರಯೋಜನವಿಲ್ಲ. ಈ ಟೆಂಪಲ್‌ಗಳಿಗಿಂತ ದೊಡ್ಡ ಟೆಂಪಲ್ ಇಟಲಿ ಟೆಂಪಲ್ ಇದೆ. ಆ ಟೆಂಪಲ್ ಸುತ್ತಬೇಕು. ಅಲ್ಲಿ ಸರಿಯಾದ ಕಪ್ಪ ಕಾಣಿಕೆ ಕೊಟ್ಟು, ದೇವರನ್ನು ಪ್ರದಕ್ಷಿಣೆ ಹಾಕಿದರೆ ಮಾತ್ರ ಅವರು ಮುಖ್ಯಮಂತ್ರಿ ಆಗುತ್ತಾರೆ ಎಂದು ವ್ಯಂಗ್ಯವಾಡಿದ್ದಾರೆ. ನಾಯಕತ್ವ ವಿಚಾರವಾಗಿ ಯತೀಂದ್ರ ಸಿದ್ದರಾಮಯ್ಯ ಆಡಿರುವ ಮಾತು ಡಿ.ಕೆ ಶಿವಕುಮಾರ್ ರನ್ನ ಗಂಗಾನದಿಯಲ್ಲಿ ಮುಳುಗಿಸಿದಂತಾಗಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಲೇವಡಿ ಮಾಡಿದ್ದಾರೆ. ಕರ್ನಾಟಕದಲ್ಲಿ ನವೆಂಬರ್ ಕ್ರಾಂತಿ ಆಗಿತ್ತೆ ಎಂದು ನಾವು ಹೇಳಿದ್ದಕ್ಕೆ, ಕಾಂಗ್ರೆಸ್ ನಾಯಕರು ಕ್ರಾಂತಿನೂ ಇಲ್ಲ ಭ್ರಾಂತಿನೂ ಇಲ್ಲ ಎನ್ನುತ್ತಿದ್ದರು. ಆದರೆ ಹೀಗ್ಯಾಕೆ ಈ ರೀತಿ ಮಾತಾಡಿದ್ದಾರೆ ಎಂದು ಆರ್.ಅಶೋಕ್ ಪ್ರಶ್ನಿಸಿದ್ದಾರೆ. ಅಷ್ಟಲ್ಲದೇ ಯತೀಂದ್ರ ಸಿದ್ದರಾಮಯ್ಯ ತಮ್ಮ ಮಾತಿನ ಮೂಲಕ ಬೆಳಗಾವಿಯಿಂದಲೇ ಸರ್ಕಾರ ಬೀಳುವುದಕ್ಕೆ ಗುದ್ದಲಿ ಪೂಜೆ ಮಾಡಿದ್ದಾರೆ ಎಂದು ಆರ್.ಅಶೋಕ್ ಭವಿಷ್ಯ ನುಡಿದಿದ್ದಾರೆ.



ಇತ್ತೀಚೆಗೆ ಸಿಎಂ ಪುತ್ರ ಯತೀಂದ್ರ ಸಿದ್ದರಾಮಯ್ಯ ಅವರು ನೀಡಿದ್ದ ನವೆಂಬರ್ ಕ್ರಾಂತಿ ಹೇಳಿಕೆ ಕುರಿತು ಮಾತನಾಡಿದ ಅಶೋಕ್, 'ಯತೀಂದ್ರ ಈ ವಿಚಾರ ಹೇಳಿದಾಗ ಕಾಂಗ್ರೆಸ್‌ನವರಿಗೆ ಸರಿ ಇರುತ್ತದೆ. ಆದರೆ, ರಾಜಣ್ಣ ಹೇಳಿದಾಗ ಅವರನ್ನು ಓಡಿಸಿಬಿಟ್ಟರು. ಈ ಹೇಳಿಕೆ ಸಿದ್ದರಾಮಯ್ಯನವರೇ ಹೇಳಿ ಮಾಡಿಸಿರುವುದು. ಬೆಳಗಾವಿಗೆ ಹೋಗಿ ಯತೀಂದ್ರ ಅವರ ಮನೆಯಲ್ಲೇ ಹೇಳಿದ್ದಾರೆ ಎಂದರೆ, ಡಿ.ಕೆ. ಶಿವಕುಮಾರ್ ಅವರಿಗೆ ಪಂಗನಾಮ (ವಂಚನೆ) ಪಕ್ಕಾ. ಕಾಂಗ್ರೆಸ್ ಒಂದು ಒಡೆದ ಮನೆಯಾಗಿದೆ ಎಂದರು.

# ಶಿಕ್ಷಣ ಇಲಾಖೆಯ ಮಾಸ್ಟರ್ ಪ್ಲ್ಯಾನ್

## ಸರಕಾರಿ ಜಯಂತಿ ರಜೆಗಳಲ್ಲಿ ತರಗತಿ ನಡೆಸುವ ಬಗ್ಗೆ ಚಿಂತನೆ, ಯಾವ ರಜೆಗಳಿಗೆ ಕತ್ತರಿ ಗೊತ್ತಾ?

• ಉದಯವಾಹಿನಿ, ಮಂಗಳೂರು

2025ರ ಶೈಕ್ಷಣಿಕ ವರ್ಷ ಆರಂಭ ಆದಾಗಿನಿಂದಲೂ ಭಾರಿ ಮಳೆಯ ಹಿನ್ನೆಲೆ ಹಲವು ದಿನ ರಜೆ ಘೋಷಿಸಲಾಗಿದೆ. ಇನ್ನೊಮದೆಡೆ ಜಾತಿ ಸಮೀಕ್ಷೆ ಮುಂದುವರಿಸಿದ ಹಿನ್ನೆಲೆ, ದೀಪಾವಳಿ ಹಬ್ಬದ ರಜವೂ ಮುಗಿಸಿ ಶಾಲೆಗಳು ಪುನರಾರಂಭ ಆಗಿದ್ದು, ಪಾಠಗಳನ್ನು ನಿಗದಿ ಅವಧಿಯೊಳಗೆ ಮುಗಿಸುವುದು ಸವಾಲಾಗಿದೆ. ಹೀಗಾಗಿ ಶಿಕ್ಷಣ ಇಲಾಖೆಯ ಮಾಸ್ಟರ್ ಪ್ಲ್ಯಾನ್ ಒಂದು ಸಿದ್ಧವಾಗ್ತಿದೆ. ದಸರಾ ರಜೆ ಮುಗಿಸಿ ಮಂಗಳವಾರ ಶಾಲೆಗಳಿಗೆ ವಿದ್ಯಾರ್ಥಿಗಳು ಮರಳಬೇಕಿತ್ತು, ಆದರೆ ಕೆಲವು ಶಾಲೆಗಳಿಗೆ ದೀಪಾವಳಿ ರಜೆಯ ಕಾರಣ ಶಾಲೆಗಳು ಹಲವೆಡೆ ಗುರುವಾರ ಆರಂಭ ಆಗಿದೆ. ರಾಜ್ಯಾದ್ಯಂತ ನಡೆಯುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಿಂದಾಗಿ ದಸರಾ ರಜೆಯನ್ನು ಅ. 18 ರವರೆಗೆ ವಿಸ್ತರಿಸಲಾಗಿತ್ತು.

**ಒಮ್ಮತದ ಅಭಿಪ್ರಾಯ ಮೂಡುತ್ತಿಲ್ಲ**

ಇದರ ಜೊತೆಗೆ, ಕರಾವಳಿ ಭಾಗದಲ್ಲಿ ಮಳೆಯಿಂದಾಗಿ ಹತ್ತಕ್ಕೂ ಹೆಚ್ಚು ರಜೆಗಳನ್ನು ಜಿಲ್ಲಾಡಳಿತ ನೀಡಿದ್ದರಿಂದ, ಈ ಬಾರಿ ಶೈಕ್ಷಣಿಕ ಕ್ಯಾಲೆಂಡರ್ ಅನ್ನು ಸರಿದೂಗಿಸಲು ಶಿಕ್ಷಣ ಇಲಾಖೆಗೆ ದೊಡ್ಡ ಸವಾಲು ಎದುರಾಗಿದೆ. ಅಂತಿಮ ಪರೀಕ್ಷೆಗಳು ಮುಗಿಯುವ ಮುನ್ನವೇ ಪಠ್ಯಕ್ರಮವನ್ನು ಪೂರ್ಣಗೊಳಿಸುವ ಅನಿವಾರ್ಯತೆ ಸೃಷ್ಟಿಯಾಗಿದೆ.

**ಶನಿವಾರ ಪೂರ್ತಿ, ಭಾನುವಾರ ಡೌಟ್:** ಕಳೆದ ಕೆಲವು ವರ್ಷಗಳಿಂದ ಶನಿವಾರ ಪೂರ್ಣ ರೂಪದಲ್ಲಿ ತರಗತಿಗಳನ್ನು ನಡೆಸುವ ಬಗ್ಗೆ ಶಿಕ್ಷಣ ಇಲಾಖೆ ಚಿಂತನೆ ನಡೆಸುತ್ತಿದೆ. ಪ್ರತಿ ವರ್ಷವೂ ಮಳೆಗಾಲದಲ್ಲಿ ಜಿಲ್ಲಾಡಳಿತ ರಜೆ ನೀಡಿದಾಗ, ಮಳೆ ಮುಗಿದ ನಂತರ ತರಗತಿಗಳನ್ನು ಸರಿದೂಗಿಸಲು ಶನಿವಾರದಂದು ತರಗತಿಗಳನ್ನು ನಡೆಸಲಾಗುತ್ತಿತ್ತು. ಆದರೆ ಈ ಬಾರಿ ಮಳೆಯ ರಜೆಯ ಜೊತೆಗೆ ಸಾಮಾಜಿಕ ಸಮೀಕ್ಷೆಯಿಂದಾಗಿ ಮತ್ತೆ ಕೆಲವು ರಜೆಗಳನ್ನು ವಿದ್ಯಾರ್ಥಿಗಳಿಗೆ ನೀಡಲಾಗಿದೆ. ಈ ಮೂಲಕ, ರಜೆಗಳನ್ನು ಸರಿದೂಗಿಸಲು ಮತ್ತೆ ತರಗತಿಗಳನ್ನು ನಡೆಸುವ ಕೆಲಸವನ್ನು ಶಿಕ್ಷಣ ಇಲಾಖೆ ಮಾಡಬೇಕಾಗುತ್ತದೆ. ಆದರೆ ಈ ಬಾರಿ ಭಾನುವಾರ ತರಗತಿಗಳನ್ನು ನಡೆಸುವ ವಿಚಾರದಲ್ಲಿ ಇಲಾಖೆಯಲ್ಲಿ ಒಮ್ಮತದ ಅಭಿಪ್ರಾಯ ಮೂಡುತ್ತಿಲ್ಲ. ಕಾರಣ, ಈಗಾಗಲೇ ಸಾಮಾಜಿಕ ಗಣತಿಯಿಂದಾಗಿ ಶಿಕ್ಷಕರು ಹೈರಾಣರಾಗಿರುವುದರಿಂದ, ಸರಕಾರಿ ರಜೆಗಳು, ಅದರಲ್ಲೂ ತಿಂಗಳಲ್ಲಿ ಬರುವ ಒಂದೆರಡು ಜಯಂತಿ ರಜೆಗಳಲ್ಲಿ ತರಗತಿಗಳು ಸಾಗುವ ಸಾಧ್ಯತೆಯಿದೆ.

ಆದರೆ ಸರಕಾರಿ ಶಾಲೆ ಮಕ್ಕಳಿಗೆ ಹಾಗೂ ಶಿಕ್ಷಕರಿಗೆ ಮಾತ್ರ ಈ ರಜೆಗಳಿಗಾಗಿ ಹೆಚ್ಚುವರಿ ತರಗತಿಗಳು ನಡೆಯುತ್ತವೆ. ಖಾಸಗಿ ಶಾಲೆಗಳು ಈಗಾಗಲೇ ನೀಡಿದ ರಜೆಯನ್ನು ಸರಿದೂಗಿಸಲು ತರಗತಿಗಳನ್ನು ನಡೆಸಿ ಪಠ್ಯಕ್ರಮ ಮುಗಿಸುತ್ತಿರುವುದು ವಿಶೇಷ. ಶಿಕ್ಷಕರು ಈಗಾಗಲೇ ಗಣತಿಯ ಕೆಲಸ ಮುಗಿಸಿಕೊಂಡು ಶಾಲೆಗೆ ಮರಳುವುದರಿಂದ, ಅವರಿಗೂ ಸಾಕಷ್ಟು ಒತ್ತಡದಲ್ಲಿಯೇ ಕೆಲಸ ಮಾಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಲಿದೆ.


ಉದಯವಾಹಿನಿ ಚಿತ್ರ

**ಎರಡು ದಿನಗಳಲ್ಲಿ ಶಿಕ್ಷಣ ಇಲಾಖೆಯ ಇತರ ಅಧಿಕಾರಿಗಳು ಮತ್ತು ವಿಷಯ ತಜ್ಞರೊಂದಿಗೆ ಸಭೆ ನಡೆಸಿ, ಈ ಬಳಿಕವೇ ರಜೆಗಳಿಂದಾದ ತರಗತಿಗಳನ್ನು ಸರಿದೂಗಿಸುವ ವಿಚಾರದಲ್ಲಿ ಅಂತಿಮ ನಿರ್ಧಾರಕ್ಕೆ ಬರಲಾಗುವುದು. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಸಂಜೆಯ ಬಳಿಕ ತರಗತಿ ನಡೆಸುವುದು ಎಷ್ಟು ಸೂಕ್ತವಾಗಲಿದೆ ಎನ್ನುವ ಚಿಂತನೆ ಕೂಡ ಸಾಗಲಿದೆ.**

**-ಜಿ.ಎಸ್.ಶಶಿಧರ್**
**ಶಿಕ್ಷಣ ಇಲಾಖೆಯ ಉಪನಿರ್ದೇಶಕ**

### ಎರಡು ತಿಂಗಳು ಪೂರ್ಣ ಸವಾಲು

**ಈ ಶೈಕ್ಷಣಿಕ ವರ್ಷದಲ್ಲಿ, ಮುಖ್ಯವಾಗಿ ನವೆಂಬರ್ ಮತ್ತು ಡಿಸೆಂಬರ್ ತಿಂಗಳಲ್ಲಿ ಪಠ್ಯಕ್ರಮವನ್ನು ಮುಗಿಸಲೇಬೇಕಾಗುತ್ತದೆ. ಜನವರಿಯಿಂದ ಫೆಬ್ರವರಿಯೊಳಗೆ ಪಠ್ಯಕ್ರಮ ಮುಗಿಸುವುದಕ್ಕಿಂತ ಹೆಚ್ಚಾಗಿ ಪರೀಕ್ಷೆಗಳನ್ನು ಮುಗಿಸಿಕೊಳ್ಳುವುದೇ ಕಷ್ಟಕರವಾಗಬಹುದು. ಆದರೂ, ಈ ಸಮಯದಲ್ಲಿ ಕೆಲವು ದಿನಗಳನ್ನು ಒಟ್ಟು ಸೇರಿಸಿಕೊಂಡು ವಿಶೇಷ ತರಗತಿಗಳನ್ನು ಮಾಡಲೇಬೇಕಾಗುತ್ತದೆ. ಮಾರ್ಚ್‌ನಲ್ಲಿ ಅಂತಿಮ ಪರೀಕ್ಷೆಗಳು ನಡೆಯಲಿವೆ.**

# ದೀಪಾವಳಿ ಹಬ್ಬದ ನಡುವೆ ದುರಂತ, ಕೊಬ್ಬರಿ ಹೋರಿ ತಿವಿತಕ್ಕೆ ಮೂವರು ಬಲಿ

• ಉದಯವಾಹಿನಿ, ಹಾವೇರಿ

ದೀಪಾವಳಿ ಹಬ್ಬದ ಅಂಗವಾಗಿ ಹಾವೇರಿ ಜಿಲ್ಲೆಯ ನಾನಾ ಕಡೆ ಏರ್ಪಡಿಸಲಾಗಿದ್ದ ಹೋರಿ ಹಬ್ಬದಲ್ಲಿ ಕೊಬ್ಬರಿ ಹೋರಿಗಳ ತಿವಿತಕ್ಕೆ ಮೂವರು ದುರ್ಮರಣ ಹೊಂದಿದ್ದಾರೆ. ಜಿಲ್ಲೆಯ ವಿವಿಧೆಡೆ ನಡೆದ ಕೊಬ್ಬರಿ ಹೋರಿ ಓಟದ ಸ್ಪರ್ಧೆಯ ವೇಳೆ ಭಾರೀ ಪ್ರಮಾಣದಲ್ಲಿ ಅನಾಹುತಗಳು ನಡೆದಿದ್ದು, ಒಂದೇ ದಿನ ಮೂವರು ಉಸಿರು ಚೆಲ್ಲಿರುವ ಘಟನೆಗಳು ನಡೆದಿವೆ. ಹಾವೇರಿ ನಗರದ ದಾನೇಶ್ವರಿ ನಗರದ ನಿವಾಸಿ, ನಿವೃತ್ತ ಹೆಸ್ಕಾಂ ನೌಕರ ಚಂದ್ರಶೇಖರ್ ಕೋಡಿಹಳ್ಳಿ (70) ಎನ್ನುವವರು ಹಳೆ ಪಿ.ಬಿ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ವೇಳೆ ಕೊಬ್ಬರಿ ಹೋರಿ ಹಾಯ್ದು ಮೃತಪಟ್ಟಿದ್ದಾರೆ. ಹಾವೇರಿಯ ವೀರಭದ್ರೇಶ್ವರ ದೇವಸ್ಥಾನದ ಜಾತ್ರೆಯ ಅಂಗವಾಗಿ ವೀರಭದ್ರೇಶ್ವರ ದೇವಸ್ಥಾನದ ಮುಂಭಾಗದ ರಸ್ತೆಯಲ್ಲಿ ಆಯೋಜಿಸಲಾಗಿದ್ದ ಹೋರಿ ಬೆದರಿಸುವ ಸ್ಪರ್ಧೆಯಲ್ಲಿ ಓಡಿದ ಹೋರಿಯಿಂದ ಈ ಅವಘಡ ನಡೆದಿದೆ. ಹಾವೇರಿ ತಾಲ್ಲೂಕಿನ ದೇವಿಹೊಸೂರ ಗ್ರಾಮದಲ್ಲಿ ದೀಪಾವಳಿ ಹಬ್ಬದ ಆಚರಣೆ ಸಂದರ್ಭ ಎತ್ತುಗಳನ್ನು ಸಾರ್ವಜನಿಕವಾಗಿ ಮರವಣಿಗೆ ಮಾಡುವ ಕಾರ್ಯಕ್ರಮದಲ್ಲಿ ಒಂದು ಎತ್ತು ಬೆದರಿ ಓಡಿಬಂದು ತಿವಿದ ಪರಿಣಾಮ ಘನಿಸಾಬ ಮಹಮ್ಮದ ಹುಸೇನ ಬಂಕಾಪೂರ (75) ಎಂಬವರು ಮೃತಪಟ್ಟಿದ್ದಾರೆ. ಹೊಂಡದ ಓಣಿಯಲ್ಲಿರುವ ಮನೆಯ ಕಟ್ಟೆಯ ಮೇಲೆ ಕುಳಿತುಕೊಂಡಿದ್ದ ಘನಿಸಾಬ ಅವರ ಕುತ್ತಿಗೆಗೆ ಮತ್ತು ಎದೆಗೆ ಎತ್ತು ಕೊಂಬಿನಿಂದ ತಿವಿದು ಗಾಯಗೊಳಿಸಿದೆ. ಚಿಕಿತ್ಸೆಗಾಗಿ ಹಾವೇರಿಯ ಆಸ್ಪತ್ರೆಗೆ ಕರೆದುಕೊಂಡು ಹೋಗಲಾಯಿತಾದರೂ ದಾರಿಯಲ್ಲೇ ಮರಣ ಹೊಂದಿದರು.

ಮತ್ತೊಂದು ಘಟನೆಯಲ್ಲಿ ಹಾನಗಲ್ ತಾಲ್ಲೂಕಿನ ತಿಳವಳ್ಳಿ ಗ್ರಾಮದ ಭರತ ರಾಮಪ್ಪ ಹಿಂಗಮೇರಿ (24) ಎನ್ನುವ ಯುವಕ ಹೋರಿ ತಿವಿದು ಮೃತಪಟ್ಟಿದ್ದಾರೆ. ಬುಧವಾರ ಸಾಯಂಕಾಲ ತಿಳವಳ್ಳಿ ಗ್ರಾಮದ ಮುಖ್ಯ ರಸ್ತೆಯಲ್ಲಿ ಹಮ್ಮಿಕೊಂಡಿದ್ದ ಹೋರಿ ಬೆದರಿಸುವ ಕಾರ್ಯಕ್ರಮವನ್ನು ನೋಡಲು ಹೋಗಿದ್ದಾಗ, ತಿಳವಳ್ಳಿ ಗ್ರಾಮದ ದುರ್ಗಾಂಬಾ ರೆಸ್ಟೋರೆಂಟ್ ಬಳಿ ಒಂದು ಹೋರಿ ಓಡಿ ಬಂದು ಭರತ ಅವರ ಎದೆಗೆ ಗುದ್ದಿದೆ. ಕೂಡಲೇ ರಸ್ತೆಗೆ ಬಿದ್ದುದರಿಂದ ತಲೆಗೂ ಭಾರಿ ಗಾಯವಾಗಿದೆ. ಚಿಕಿತ್ಸೆಗಾಗಿ ಹಾವೇರಿ ಜಿಲ್ಲಾ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರೂ, ಚಿಕಿತ್ಸೆ ಫಲಿಸದೆ ರಾತ್ರಿ 8 ಘಂಟೆಯ ಸುಮಾರಿಗೆ ಮೃತಪಟ್ಟಿದ್ದಾರೆ. ಇದಲ್ಲದೆ, ಹೋರಿ ಓಟದ ವೇಳೆ ಇನ್ನೂ ಇಬ್ಬರಿಗೆ ಗಂಭೀರ ಗಾಯವಾಗಿದೆ. ಈ ಕುರಿತು ಪ್ರಕರಣ ಹಾವೇರಿ ಶಹರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.


ಉದಯವಾಹಿನಿ ಚಿತ್ರ

# 6,000 ಮತದಾರರ ಹೆಸರು ಡಿಲೀಟ್ ಮಾಡಲು ಸಂಚು

• ಉದಯವಾಹಿನಿ, ಕಲಬುರಗಿ

ಆಳಂದ ವಿಧಾನಸಭಾ ಕ್ಷೇತ್ರದ 2023ರ ಚುನಾವಣೆಯ ಸಂದರ್ಭದಲ್ಲಿ ನಡೆದಿರುವ ಮತ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿ ಎಸ್‌ಐಟಿ ತನಿಖೆಯನ್ನು ತೀವ್ರಗೊಳಿಸಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿ ಜಿಲ್ಲೆಯ ಮಾಜಿ ಬಿಜೆಪಿ ಶಾಸಕ ಸುಭಾಷ್ ಗುತ್ತೇದಾರ್‌ಅವರ ನಿವಾಸದ ಬಳಿ ಸುಟ್ಟ ಮತದಾರರ ದಾಖಲೆಗಳ ರಾಶಿ ಪತ್ತೆಯಾಗಿದೆ. ಇದರ ಮೂಲಕ ಸುಮಾರು 6,000 ಮತದಾರರನ್ನು ಅಳಿಸಲು ಸಂಚು ರೂಪಿಸಿರುವುದು ಬೆಳಕಿಗೆ ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಿಜೆಪಿ ಮಾಜಿ ಶಾಸಕ ಸುಭಾಷ್ ಗುತ್ತೇದಾರ್ ಮನೆ ಬಳಿ ಸುಟ್ಟ ಮತದಾರರ ದಾಖಲೆಗಳು ಪತ್ತೆಯಾಗಿದೆ. ಈ ದಾಖಲೆಗಳ ಬಗ್ಗೆ ಯಾವುದೇ ಮಾಹಿತಿ ಇಲ್ಲ ಎಂದು ಗುತ್ತೇದಾರ್ ತನಿಖಾಧಿಕಾರಿಗಳಿಗೆ ತಿಳಿಸಿದ್ದಾರೆ. ಇದು ಅವರ ಮನೆಗೆಲಸದ ಸಿಬ್ಬಂದಿಯ ಕಾರ್ಯವೆಂದು ಅವರು ದೂರಿದ್ದಾರೆ ಎನ್ನಲಾಗಿದೆ.



ಸ್ವಚ್ಛತಾ ಅಭಿಯಾನದ ಪ್ರಯುಕ್ತ ಮನೆಯ ಸ್ವಚ್ಛತಾ ಸಿಬ್ಬಂದಿ ಅದನ್ನು ಹೊರಗೆ ಎಸೆದು ಸುಟ್ಟು ಹಾಕಿದರು. ಯಾವುದಾದರೂ ದುರುದ್ದೇಶವಿದ್ದಿದ್ದರೆ ನಾವು ಅದನ್ನು ಮನೆಯಿಂದ ದೂರ ಸುಟ್ಟು ಹಾಕುತ್ತಿದ್ದೆವು. ಯಾರಾದರೂ ಅದನ್ನು ಮನೆಯ ಮುಂದೆ ಏಕೆ ಮಾಡುತ್ತಾರೆ? ಇದರ ಹಿಂದೆ ಯಾವುದೇ ದುರುದ್ದೇಶಗಳಿರಲಿಲ್ಲ ಎಂದು ಅವರು ಸುದ್ದಿಗಾರರಿಗೆ ತಿಳಿಸಿದ್ದಾರೆ. ಗುತ್ತೇದಾರ್ ಅವರ ಪುತ್ರರು, ಚಾರ್ಟರ್ಡ್ ಅಕೌಂಟೆಂಟ್ ಸಂಬಂಧಿಸಿದ ಹಲವಾರು ಸ್ಥಳಗಳ ಮೇಲೆ ಎಸ್‌ಐಟಿ ದಾಳಿ ನಡೆಸಿದೆ.

**ಏನಾಗಿತ್ತು?:** 2023ರ ರಾಜ್ಯ ಚುನಾವಣೆಗೆ ಮುಂಚಿತವಾಗಿ ಮತದಾರರ ಪಟ್ಟಿಯಿಂದ 6,000ಕ್ಕೂ ಹೆಚ್ಚು ಮತದಾರರ ಹೆಸರುಗಳನ್ನು ಅಳಿಸಲು ಸಂಚು ರೂಪಿಸಲಾಗಿತ್ತು. ಪೊಲೀಸ್ ಮೂಲಗಳ ಪ್ರಕಾರ, ಪಟ್ಟಿಯಿಂದ ನಿಜವಾದ ಮತದಾರರನ್ನು ತೆಗೆದುಹಾಕಲು ಡೇಟಾ ಎಂಟ್ರಿ ಆಪರೇಟರ್‌ಗಳಿಗೆ ಮೂರರಿಂದ ನಾಲ್ಕು ಲಕ್ಷ ರೂಪಾಯಿಗಳನ್ನು ನೀಡಲಾಗಿತ್ತು. ಇದನ್ನು ಮೊದಲಿಗೆ ಹೇಳಿದ್ದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ. 2023ರ ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ಆಳಂದ ಕ್ಷೇತ್ರವನ್ನು ಉಲ್ಲೇಖಿಸಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ದೊಡ್ಡ ಪ್ರಮಾಣದಲ್ಲಿ ಮತ ಕಳ್ಳತನ ಮಾಡಲಾಗಿದೆ ಎನ್ನುವ ಆರೋಪ ಹೊರಿಸಿದ್ದರು. ಇದರ ಬಳಿಕ ಈ ಕುರಿತು ತನಿಖೆಗೆ ಎಸ್‌ಐಟಿಯನ್ನು ರಚಿಸಲಾಯಿತು. 6,018 ಮತದಾರರ ಡಿಲೀಟ್ ಅರ್ಜಿಗಳಲ್ಲಿ 24 ಮಾತ್ರ ಮೃತ ಅಥವಾ ಸ್ಥಳಾಂತರಗೊಂಡ ಮತದಾರರದ್ದಾಗಿದೆ ಎಂಬುದು ತನಿಖೆಯಿಂದ ತಿಳಿದುಬಂದ ಬಳಿಕ ಬಿ.ಆರ್. ಪಾಟೀಲ್ ವಿರುದ್ಧ ಸೋತ ಗುತ್ತೇದಾರ್‌ಗೆ ಸಂಬಂಧಿಸಿದ ಆಸ್ತಿಗಳ ಮೇಲೆ ಎಸ್‌ಐಟಿ ದಾಳಿ ನಡೆಸಿದೆ.

**ಎಸ್‌ಐಟಿ ತನಿಖೆ ವೇಳೆ ಬಹಿರಂಗ**

**ಕಾಂಗ್ರೆಸ್ ಮತದಾರರ ಹೆಸರನ್ನು ಪಟ್ಟಿಯಿಂದ ಡಿಲೀಟ್ ಮಾಡಲು ಕೆಲವು ಮತದಾರರ ಮೂಲಕ ವಂಚನೆಯ ಫೋನ್ ಕರೆಗಳನ್ನು ಮಾಡಲಾಗಿದೆ ಎಂದು ಕೈ ಪಕ್ಷ ಆರೋಪಿಸಿತ್ತು. ಇದನ್ನು ಸರಿಯಾದ ಸಮಯದಲ್ಲಿ ಪತ್ತೆ ಹಚ್ಚಿದ್ದರಿಂದ ಕಾಂಗ್ರೆಸ್ ಅಭ್ಯರ್ಥಿ ಬಿ.ಆರ್. ಪಾಟೀಲ್ ಗೆದ್ದು ಬಿಜೆಪಿ ಅಭ್ಯರ್ಥಿ ಸುಭಾಷ್ ಗುತ್ತೇದಾರ್ ಸೋತರು ಎನ್ನುತ್ತಾರೆ ಕಾಂಗ್ರೆಸ್ ನಾಯಕರು.**

# ಹುಬ್ಬಳ್ಳಿ-ಧಾರವಾಡ ಮಂದಿಗೆ ದೀಪಾವಳಿ ಲಾಟರಿ

• ಉದಯವಾಹಿನಿ, ಹುಬ್ಬಳ್ಳಿ

**ಗ್ರೇಟರ್ ಆಗಲಿದೆ ಛೋಟಾ ಬಾಂಬೆ**

ಬೆಂಗಳೂರು ಬೆಳೆಯುತ್ತಾ ಬೆಳೆಯುತ್ತಾ ಹನುಮಂತನ ಬಾಲದಂತೆ ದಕ್ಷಿಣ, ದಕ್ಷಿಣೋತ್ತರ ಅಂತೆಲ್ಲಾ ಹಿಗ್ಗುತ್ತಾ ಗ್ರೇಟರ್ ಬೆಂಗಳೂರು ಅಥಾರಿಟಿ ಆಗಿಬಿಟ್ಟಿತು. ಈಗ ಅದೇ ದಾರಿಯಲ್ಲಿ ಛೋಟಾ ಬಾಂಬೆ ಹುಬ್ಬಳ್ಳಿ ಕಾಲಿಡುತ್ತಿದೆ! ಹೌದು, ನಿಜಕ್ಕೂ ಇದು ಆತಂಕಕಾರಿಯೋ ಆಶಾದಾಯಕವೋ ಗೊತ್ತಿಲ್ಲ ಆದರೆ, ಹುಬ್ಬಳ್ಳಿಯೂ ಕೂಡ ತನ್ನ ಗಾತ್ರ ಹೆಚ್ಚಿಸಿಕೊಳ್ಳಲು ಮುಂದಾಗಿದೆ.

ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರವು ಸ್ಥಳೀಯ ಯೋಜನಾ ಪ್ರದೇಶ ಅಂದ್ರೆ ಲೋಕಲ್ ಪ್ಲ್ಯಾನಿಂಗ್ ಏರಿಯಾ ಎಂಬ ಹೊಸ ಯೋಜನೆಯನ್ನು ಕೈಗೆತ್ತಿಕೊಂಡಿದೆ. ಇದರನ್ವಯ ಈ ಮುಂಚೆ 408 ಚದರ ಕಿಲೋ ಮೀಟರ್ ಎಂದರೆ 40,208 ಹೆಕ್ಟೇರ್ ಪ್ರದೇಶದಲ್ಲಿ ಹುಬ್ಬಳ್ಳಿ-ಧಾರವಾಡ ಸಿಟಿ ಇತ್ತು.

ಆದರೆ ನಗರದ ಬಡಾವಣೆಗಳ ಪಕ್ಕದಲ್ಲೇ ಇರುವ ಹಳ್ಳಿಗಳು ಗ್ರಾಮ ಪಂಚಾಯತ್ ವ್ಯಾಪ್ತಿಗೆ ಬಂದು ಗ್ರಾಮಗಳಾಗಿಯೇ ಉಳಿದುಕೊಂಡಿದ್ದವು. ಉದಾಹರಣೆಗೆ ಕುಸುಗಲ್ ನೀವೆಲ್ಲಾ ನೋಡಿರಬಹುದು, ನಗರಕ್ಕೆ ತಾಗಿಕೊಂಡಿದ್ದರೂ ಕುಸುಗಲ್ ಹಾಗೂ ಸುತ್ತಮುತ್ತಲಿನ ಪ್ರದೇಶ ಹಳ್ಳಿಗಳಾಗಿದ್ದವು.

**ಮುಂದಿನ ಬದಲಾವಣೆ ಏನು? ಉಪಯೋಗ ಏನು?:** ಹಾಗಾದರೆ ಹುಬ್ಬಳ್ಳಿಯ ಮೇಜರ್ ಸರ್ಜರಿ ನಂತರ ಆಗುವ ಬದಲಾವಣೆ ಏನು? ಎಂದು ಗಮನಿಸಿದಾಗ 408 ಚ. ಕಿಲೋಮೀಟರ್ ನ ಸಿಟಿ ಈಗ 712 ಚ.ಕಿಲೋಮೀಟರ್ ವ್ಯಾಪ್ತಿಗೆ ತೆರೆದುಕೊಳ್ಳಲಿದೆ. ಒಟ್ಟಾರೆ ಹುಬ್ಬಳ್ಳಿ ಧಾರವಾಡ 75,754 ಹೆಕ್ಟೇರ್ ಪ್ರದೇಶದ ಬೃಹತ್ ಯಾನೆ ಗ್ರೇಟರ್ ಆಗಲಿದೆ ಸುಮಾರು 17

### ಏರಲಿದೆ ರಿಯಲ್ ಎಸ್ಟೇಟು

**ಇನ್ನು ಪಾಲಿಕೆಯು ಈ ಬಗ್ಗೆ ರೈತರ ಜೊತೆ 50:50 ನಿಬಂಧನೆಯೊಂದಿಗೆ ಜಮೀನು ಖರೀದಿಗೆ ಮುಂದಾಗಿದ್ದು ಬಡಾವಣೆಗಳನ್ನು ಮಾಡಲು ಸಿದ್ಧತೆ ನಡೆಸಿದೆ. ಈಗಾಗಲೇ ಹುಬ್ಬಳ್ಳಿ-ಧಾರವಾಡದಲ್ಲಿ ಜಮೀನಿದ್ದರೆ ಅವರು ಮೂರು ತಲೆಮಾರು ಕೂತು ತಿನ್ನುವಂತಹ ಭಾಗ್ಯವಂತರು ಎಂಬ ಮಾತಿದೆ. ರೋಡ್ ಪಕ್ಕ ಇದ್ದರಂತೂ ಕೋಟಿಗೆ ಕಮ್ಮಿ ತೂಗೋಲ್ಲ ಜಾಗಗಳು. ಈಗ ಅದಕ್ಕೆ ಮತ್ತಷ್ಟೂ ಬೂಮ್ ಸಿಗಲಿದೆ.**

## ಮಹಾತ್ಮ ಗಾಂಧಿ ಕೂತ ಸ್ಥಾನದಲ್ಲಿ ಇಂದು ಖರ್ಗೆ ಕೂತಿದ್ದಾರೆ; ಅಡ್ವಾಣಿ ಸಾಧ್ಯವಿಲ್ಲ ಎಂದಿದ್ದನ್ನು ಖರ್ಗೆ ಮಾಡಿ ತೋರಿಸಿದ್ದಾರೆ: ಡಿಕೆಶಿ

# ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಹೆಚ್ಚುವರಿಯಾಗಿ 5 ಸಾವಿರ ಕೋಟಿ ಅನುದಾನ

• ಉದಯವಾಹಿನಿ, ರಾಯಚೂರು

ನೂರು ವರ್ಷಗಳ ಹಿಂದೆ ಮಹಾತ್ಮ ಗಾಂಧಿ ಅವರು ಕೂತ ಸ್ಥಾನದಲ್ಲಿ ಮಲ್ಲಿಕಾರ್ಜುನ ಖರ್ಗೆ ಇಂದು ಕೂತಿದ್ದಾರೆ. ಅವರು ಈ ಭಾಗಕ್ಕೆ ಆರ್ಟಿಕಲ್ 371ಜೆ ಕೊಟ್ಟರು. ಅಡ್ವಾಣಿ ಅವರು ಇದು ಸಾಧ್ಯವಿಲ್ಲ ಎಂದು ಹೇಳಿದ್ದನ್ನು ಖರ್ಗೆ ಅವರು ಮಾಡಿ ತೋರಿಸಿದ್ದಾರೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ.

ರಾಯಚೂರಿನಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ಯೋಜನೆಗಳು ಕೇವಲ ಕಾಂಗ್ರೆಸ್ ಸರ್ಕಾರಕ್ಕೆ ಮಾತ್ರವಲ್ಲ, ಎಲ್ಲಾ ಪಕ್ಷದವರಿಗೂ ತಲುಪುತ್ತಿದೆ. ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಪ್ರತಿ ವರ್ಷ ಹೆಚ್ಚುವರಿಯಾಗಿ 5 ಸಾವಿರ ಕೋಟಿ ಅನುದಾನ ನೀಡಲಾಗುತ್ತಿದೆ ಎಂದು ತಿಳಿಸಿದರು.

ನೀರಾವರಿ ಯೋಜನೆ ಮೂಲಕ ನಿಮಗೆ ಸಹಾಯ ಮಾಡಲು ರೈತರ ಪಂಪ್ ಸೆಟ್ ಗಳಿಗೆ ಉಚಿತ ವಿದ್ಯುತ್ ನೀಡುತ್ತಿದ್ದೇವೆ. ಅದಕ್ಕೆ ಪ್ರತಿ ವರ್ಷ 20 ಸಾವಿರ ಕೋಟಿ ನೀಡುತ್ತಿದ್ದೇವೆ. 53 ಸಾವಿರ ಕೋಟಿ ಗ್ಯಾರಂಟಿ ಯೋಜನೆಗೆ ವೆಚ್ಚ ಮಾಡಿದ್ದೇವೆ. ಇನ್ನು ಬೇರೆ ಇಲಾಖೆಗಳ ಕಲ್ಯಾಣ ಯೋಜನೆಗಳು ಸೇರಿಸಿದರೆ ಪ್ರತಿ ವರ್ಷ ನಮ್ಮ ಸರ್ಕಾರ 1 ಲಕ್ಷ ಕೋಟಿ ಹಣವನ್ನು ಜನರ ಜೇಬಿಗೆ ಹಾಕುತ್ತಿದೆ. ಆ ಮೂಲಕ ನಿಮಗೆ ಸರ್ಕಾರ ಶಕ್ತಿ ನೀಡಿದೆ. ಕಾಂಗ್ರೆಸ್ ಸರ್ಕಾರ ಇದ್ದಾಗ ಬ್ಯಾಂಕ್ ರಾಷ್ಟ್ರೀಕರಣ, ಆಹಾರ ಭದ್ರತಾ ಕಾಯ್ದೆ, ಶಾಲಾ ಮಕ್ಕಳಿಗೆ ಮಧ್ಯಾಹ್ನ ಬಿಸಿಯೂಟ, ಪಿಂಚಣಿ ವ್ಯವಸ್ಥೆ, ನರೇಗಾ ನೀಡಿದೆವು. ಇಂತಹ ಒಂದು ಯೋಜನೆ ಬಿಜೆಪಿ ಅವರು ನೀಡಿದ್ದಾರಾ? ಬಡವರಿಗೆ ಸಹಾಯ ಮಾಡುವ ಸರ್ಕಾರ ಇದ್ದರೆ ಅದು ಕಾಂಗ್ರೆಸ್ ಸರ್ಕಾರ ಮಾತ್ರ ಎಂದು ತಿಳಿಸಿದರು. ಕಳೆದ ವರ್ಷ ಟಿಬಿ ಆಣೆಕಟ್ಟು ಗೇಟ್ ಮುರಿದಾಗ ವಿರೋಧ ಪಕ್ಷಗಳ ನಾಯಕರು ಟೀಕೆ ಮಾಡಿದರು.

ನಾವು ಒಂದೇ ವಾರದಲ್ಲಿ ಹಗಲಿರುಳು ಶ್ರಮಿಸಿ ಗೇಟ್ ದುರಸ್ಥಿ ಮಾಡಿದೆವು. ಈಗ ಎಲ್ಲಾ ಗೇಟ್ ಗಳ ಬದಲಾವಣೆಗೆ ಆದೇಶ ನೀಡಿದ್ದೇವೆ. ಈ ಆಣೆಕಟ್ಟು ವಿಚಾರವಾಗಿ ಆಂಧ್ರ ಸಿಎಂ ಜೊತೆ ಚರ್ಚೆ ಮಾಡಲು ಮೂರು ಬಾರಿ ಪ್ರಯತ್ನ ಮಾಡಿದೆ. ಆದರೆ ಅವರು ಸಮಯ ನೀಡಲಿಲ್ಲ. ಈ ಅಣೆಕಟ್ಟಿನಲ್ಲಿ ಹೂಳು ತುಂಬಿರುವ ಪರಿಣಾಮ 30 ಟಿಎಂಸಿ ನೀರು ವ್ಯರ್ಥವಾಗುತ್ತಿದೆ. ಇದನ್ನು ಬಳಸಿಕೊಳ್ಳಲು ಪರ್ಯಾಯ ವ್ಯವಸ್ಥೆ ಮಾಡಲು ಪ್ರಯತ್ನಿಸುತ್ತಿದ್ದೇವೆ. ಆದರೆ ಆಂಧ್ರ ಪ್ರದೇಶ ಸಹಕಾರ ನೀಡುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.



**ಕಾರ್ಯಕರ್ತರಲ್ಲಿ ಯಾವುದೇ ರೀತಿಯ ಭಿನ್ನಾಭಿಪ್ರಾಯ ಇರಬಾರದು. ನೀವೆಲ್ಲರೂ ಒಗ್ಗಟ್ಟಿನಿಂದ ಸಂಘಟನೆ ಮಾಡಬೇಕು. ಯಾವ ಗುಂಪು ಇರಬಾರದು. ಇಲ್ಲಿ ಕೇವಲ ಒಂದೇ ಗುಂಪು ಅದು ಕಾಂಗ್ರೆಸ್ ಗುಂಪು. ಎಲ್ಲರೂ ಒಂದೇ ತಾಯಿ ಮಕ್ಕಳಂತೆ ಇರಬೇಕು. 2028ಕ್ಕೆ ಮತ್ತೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲಿದೆ. ಅದಕ್ಕೆ ನೀವು ಸಿದ್ಧತೆ ಮಾಡಿಕೊಳ್ಳಬೇಕು. ಬಿಜೆಪಿ ತೊರೆದು ಕಾಂಗ್ರೆಸ್ ಸೇರಲು ಅನೇಕ ಜನರು ಪ್ರಯತ್ನಿಸುತ್ತಿದ್ದಾರೆ. ಹಳ್ಳಿಗಳಲ್ಲೂ ಪಕ್ಷ ಸೇರಲು ಜನ ಮುಂದೆ ಬರುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ಸಿದ್ಧಾಂತ, ನಾಯಕತ್ವದ ಮೇಲೆ ನಂಬಿಕೆ ಇಟ್ಟು ಬರುವ ಎಲ್ಲರನ್ನು ಸೇರಿಸಿಕೊಳ್ಳಿ.**

**- ಡಿಕೆ ಶಿವಕುಮಾರ್, ಉಪಮುಖ್ಯಮಂತ್ರಿ**

### ಪಂಚಾಯಿತಿ ಸೀಟು ಬಿಟ್ಟುಕೊಡುತ್ತೀರಾ?

**ರಾಹುಲ್ ಗಾಂಧಿ ಭಾರತ ಜೋಡೋ ಯಾತ್ರೆ ಮಾಡಿದ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಸೋತಿಲ್ಲ. ರಾಹುಲ್ ಗಾಂಧಿ ನಮಗೆ ಅಷ್ಟು ಶಕ್ತಿ ನೀಡಿದ್ದಾರೆ. ಸೋನಿಯಾ ಗಾಂಧಿ ಅವರು ಎರಡು ಬಾರಿ ಪ್ರಧಾನಮಂತ್ರಿ ಹುದ್ದೆ ತ್ಯಾಗ ಮಾಡಿದ್ದಾರೆ. ಈ ದೇಶಕ್ಕೆ ಆರ್ಥಿಕ ತಜ್ಞ ಮನಮೋಹನ್ ಸಿಂಗ್ ಅವರು ಪ್ರಧಾನಮಂತ್ರಿಯಾಗಬೇಕು, ನಿಮ್ಮಲ್ಲಿ ಯಾರಾದರೂ ಪಂಚಾಯಿತಿ ಸೀಟು ಬಿಟ್ಟುಕೊಡುತ್ತೀರಾ? ಎಂದು ಪ್ರಶ್ನಿಸಿದರು.**

## ಮಿನಿ ನ್ಯೂಸ್

### ಪರದಾರ ಮೋತಕಪಲ್ಲಿ ಗ್ರಾಮದಲ್ಲಿ ಸಿಲಿಂಡರ್ ಸ್ಪೋಟ ಮನೆ ಛಿದ್ರ ಛಿದ್ರ


• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಪರದಾರ ಮೋತಕಪಳ್ಳಿ ಗ್ರಾಮದಲ್ಲಿ ಮಧ್ಯರಾತ್ರಿ ಅಡುಗೆ ಅನಿಲ ಸಿಲಿಂಡರ್ ಸ್ಪೋಟಗೊಂಡು ಮನೆ ಛಿದ್ರ ಛಿದ್ರವಾದ ಘಟನೆ ಜರುಗಿದ್ದು ಈ ಕುರಿತು ಸುಲೇಪೇಟ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


ಉದಯವಾಹಿನಿ ಚಿತ್ರ

ಪರದಾರ ಮೋತಕಪಳ್ಳಿ ಗ್ರಾಮದ ನಾಗಮ್ಮ ಕಂಟೆಪ್ಪ ಪೂಜಾರಿ ಕುಟುಂಬದ ನಾಲ್ಕು ಜನ ಸದಸ್ಯರು ಮನೆಯಲ್ಲಿರುವಾಗ ಸಿಲಿಂಡರ್ ಸೋರಿಕೆ ವಾಸನೆ ಬರುತ್ತಿರುವಾಗ ತಕ್ಷಣವೇ ಮನೆಯವರು ಹೊರಗಡೆ ಬಂದಿದ್ದಾರೆ ಬಂದ ಕೆಲವೆ ಕ್ಷಣದಲ್ಲಿ ಸಿಲಿಂಡರ್ ಸ್ಪೋಟಗೊಂಡಿದೆ ಇದರಿಂದ ಮನೆಯು ಛಿದ್ರ ಛಿದ್ರಗೊಂಡಿದ್ದು ಧವಸ ಧಾನ್ಯಗಳನ್ನು, ಚಿನ್ನಾಭರಣ ಸೇರಿದಂತೆ ನಗದು ಹಣ ಸೇರಿದಂತೆ ಇತರೆ ವಸ್ತುಗಳನ್ನು ಸುಟ್ಟು ಬೂದಿಯಾಗಿವೆ, ಯಾರಿಗೂ ಪ್ರಾಣಹಾನಿ ಸಂಭವಿಸಿಲ್ಲ, ಅಗ್ನಿಶಾಮಕ ದಳ ಸಿಬ್ಬಂದಿ ವರ್ಗದವರು ಆಗಮಿಸಿ ಬೆಂಕಿ ನಂದಿಸುವ ಕಾರ್ಯ ಮಾಡಿದ್ದಾರೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

### ಕೊಳ್ಳೂರ ಪಿಕೆಪಿಎಸ್ ಸಂಘಕ್ಕೆ ಗೋಪಾಲರೆಡ್ಡಿ ಅಧ್ಯಕ್ಷರಾಗಿ ಆಯ್ಕೆ


ಉದಯವಾಹಿನಿ ಚಿತ್ರ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ಕೊಳ್ಳೂರ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ-ಉಪಾಧ್ಯಕ್ಷರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಗೋಪಾಲರೆಡ್ಡಿ ವೀರಾರೆಡ್ಡಿ, ಉಪಾಧ್ಯಕ್ಷ ಸ್ಥಾನಕ್ಕೆ ರಂಗನಾಥ ಕುಸರಂಪಳ್ಳಿ ಅವರು ತಲಾ ಒಂದೊಂದು ನಾಮಪತ್ರ ಸಲ್ಲಿಕೆ ಆಗಿರುವುದರಿಂದ ಇವರನ್ನು ಅವಿರೋಧವಾಗಿ ಆಯ್ಕೆಗೊಳಿಸಿ ಘೋಷಿಸಲಾಗಿದೆ ಎಂದು ಚುನಾವಣಾಧಿಕಾರಿ ಹಣಮಂತ ದಸ್ವಾಳೆ ತಿಳಿಸಿದ್ದಾರೆ.

**ಆಡಳಿತ ಮಂಡಳಿ ನಿರ್ದೇಶಕರು:** ನಾಗರೆಡ್ಡಿ ಸಂಗರೆಡ್ಡಿ, ಪ್ರಕಾಶರೆಡ್ಡಿ ಸಂಗರೆಡ್ಡಿ, ಬಸವರಾಜ, ಶಿವರಾಜ, ಅನಂತಮ್ಮ, ಈರಮ್ಮ, ಮಲ್ಲಶೆಟ್ಟಿ, ರಾಜು ನಂದು, ರಾಜು ರಾಮಚಂದ್ರ, ಕಾವೇರಿ ಆಯ್ಕೆಯಾಗಿದ್ದಾರೆ ಎಂದು ಸಂಘದ ಸಿಇಓ ಸಂಜೀವಕುಮಾರ ಮೂಲಗಿ ತಿಳಿಸಿದ್ದಾರೆ. ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆ ಪ್ರಕ್ರಿಯೆ ನಂತರ ಬೆಂಬಲಿಗರು ಅಭಿಮಾನಿಗಳು ಸಿಹಿ ಹಂಚಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಸತೀಶ ಇಟಗಿ, ಆಕಾಶ ಕೊಳ್ಳೂರ, ಸಂತೋಷರೆಡ್ಡಿ, ಪರ್ವತಕುಮಾರ ದೇಸಾಯಿ ಅನೇಕರಿದ್ದರು.

### ನಮ್ದೇನಿದ್ದರೂ 2028ಕ್ಕೆ ಸಿಎಂ ಕ್ಲೈಮ್, ಯತೀಂದ್ರ ಹೇಳಿಕೆ ಅದು ವೈಯಕ್ತಿಕ

• ಉದಯವಾಹಿನಿ, ಬೆಳಗಾವಿ

ನಮ್ಮದು ಏನೇ ಇದ್ದರೂ 2028ಕ್ಕೆ ಸಿಎಂ ಸ್ಥಾನದ ಕ್ಲೈಮ್‌ಮಾಡುತ್ತೇವೆ. ಯತೀಂದ್ರ ಹೇಳಿಕೆ ಅದು ಅವರ ವೈಯಕ್ತಿಕ ಅಭಿಪ್ರಾಯ ಎಂದು ಲೋಕೋಪಯೋಗಿ ಇಲಾಖೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಸಿದ್ದರಾಮಯ್ಯ ಪುತ್ರ ಯತೀಂದ್ರ ಹೇಳಿಕೆಗೆ ಸಂಬಂಧಿಸಿದಂತೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ಎಲ್ಲರನ್ನು ಜೊತೆಗೆ ಕರೆದುಕೊಂಡು ಹೋಗುವ ಕೆಲಸ ಮಾಡುತ್ತೇವೆ. ಏನೇ ಆಗಲಿ ಅದನ್ನು ಪಕ್ಷ ನಿರ್ಧಾರ ಮಾಡಲಿದೆ ಎಂದು ತಿಳಿಸಿದರು.

ಯತಿಂದ್ರ ಅವರು ಅವರ ವೈಯಕ್ತಿಕ ಹೇಳಿಕೆ ನೀಡಿದ್ದಾರೆ. ಅಂತಿಮವಾಗಿ ಯಾರು ನಾಯಕ ಎನ್ನುವುದನ್ನು ಪಕ್ಷದ ಶಾಸಕರು ನಿರ್ಧಾರ ಮಾಡುತ್ತಾರೆ. ಅಹಿಂದ ನಾಯಕತ್ವ ಇಲ್ಲದೇ ಪಕ್ಷ ಸಂಘಟನೆ ಮಾಡಲು ಸಾಧ್ಯವಿಲ್ಲ ಎಂದು ಹೇಳಿದರು. ಎಲ್ಲವನ್ನೂ ಕಾಕತಿಯಲ್ಲಿ ನಿಂತು ನಿರ್ಧಾರ ಮಾಡಲು ಸಾಧ್ಯವಿಲ್ಲ. ಡಿಸೆಂಬರ್ ಕ್ರಾಂತಿಯ ಬಗ್ಗೆ ನಮಗೆ ಗೊತ್ತೇ ಇಲ್ಲ ಎಂದು ತಿಳಿಸಿದರು. ಸಿದ್ದರಾಮಯ್ಯನವರ ನಂತರ ಪಕ್ಷವನ್ನು ಮುನ್ನಡೆಸುವ ವಿಚಾರಕ್ಕೆ, ಎಲ್ಲವನ್ನೂ ಕಾದು ನೋಡೋಣ ಎಂದು ಜಾರಕಿಹೊಳಿ ಉತ್ತರಿಸಿದರು.

### ಪೊಲೀಸ್ ಚೆಕ್‌ಪೋಸ್ಟ್ ಮೇಲೆ ಹರಿದ ಲಾರಿ; ಬಚಾವ್ ಆದ ಪೊಲೀಸ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕಾರವಾರ

ರಾಷ್ಟ್ರೀಯ ಹೆದ್ದಾರಿ 66ರ ಕುಮಟಾ-ಅಂಕೋಲ ಹೆದ್ದಾರಿಯಲ್ಲಿ ಸರಕು ತುಂಬಿಕೊಂಡು ಬಂದ ಲಾರಿ ನಿಯಂತ್ರಣ ತಪ್ಪಿ ನೇರವಾಗಿ ಪೊಲೀಸ್ ಚೆಕ್‌ಪೋಸ್ಟ್ ಮೇಲೆ ಹರಿದು ಬಿದ್ದಿದ್ದು, ಚೆಕ್‌ಪೋಸ್ಟ್ ಸಂಪೂರ್ಣ ನುಜ್ಜುಗುಜ್ಜಾಗಿದೆ. ಅದೃಷ್ಟವಶಾತ್ ಕರ್ತವ್ಯದಲ್ಲಿದ್ದ ಪೊಲೀಸ್ ಸಿಬ್ಬಂದಿ ಪ್ರಾಣಪಾಯದಿಂದ ಪಾರಾದ ಘಟನೆ ನಡೆದಿದೆ. ಅತಿ ವೇಗದಲ್ಲಿ ಬಂದ ಲಾರಿ ಚಾಲಕನ ನಿದ್ದೆಗಣ್ಣಿನಲ್ಲಿ ನಿಯಂತ್ರಣ ತಪ್ಪಿದ ಪರಿಣಾಮ ಈ ಘಟನೆ ನಡೆದಿದೆ. ಚೆಕ್‌ಪೋಸ್ಟ್ ಬಳಿಯೇ ಇದ್ದ ಪೊಲೀಸರಿಗೆ ಚಿಕ್ಕಪುಟ್ಟ ಗಾಯಗಳಾಗಿದ್ದು, ಪ್ರಾಣಪಾಯದಿಂದ ಪಾರಾಗಿದ್ದಾರೆ. ಹೆದ್ದಾರಿಯಲ್ಲಿ ರಸ್ತೆ ಕಾಮಗಾರಿ ಪೂರ್ಣಗೊಂಡಿಲ್ಲ.

ದ್ವಿಮುಖ ರಸ್ತೆ ನಿರ್ಮಾಣವಾಗಿದ್ದು, ಒಂದು ಭಾಗ ಬಂದ್ ಮಾಡಲಾಗಿದೆ. ಆದರೆ, ವೇಗವಾಗಿ ಬರುವ ವಾಹನಗಳಿಗೆ ಈ ರಸ್ತೆಯಲ್ಲಿ ಸಾಗುವಾಗ ಅರ್ಥೈಸಿಕೊಳ್ಳಲು ಕಷ್ಟವಾಗುತ್ತದೆ. ಸಮರ್ಪಕ ನಾಮಫಲಕ ಇಲ್ಲದ ಕಾರಣ ಕನ್ಫೂಸ್‌ಗೆ ಒಳಗಾಗುವ ಸವಾರರು ಈ ಭಾಗದಲ್ಲಿ ಹೇಗೆ ಬೇಕೋ ಹಾಗೆ ನುಗ್ಗುತ್ತಿದ್ದಾರೆ. ಹೀಗಾಗಿ, ಈ ರೀತಿಯ ಘಟನೆ ನಡೆಯುತ್ತಿದ್ದು, ಈ ಅಪಘಾತಗಳಿಗೆ IRB ಕಂಪನಿ ನೇರ ಹೊಣೆ ಎಂಬುದು ಸ್ಥಳೀಯರ ಆರೋಪ. ಸದ್ಯ ಘಟನೆ ಸಂಬಂಧ ಗೋಕರ್ಣ ಪೊಲೀಸರು ದೂರು ದಾಖಲಿಸಿಕೊಂಡಿದ್ದು, ತನಿಖೆ ಕೈಗೊಂಡಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ನೀವು ನಿಮ್ಮ ಮನೆಯ ಯಾವುದೇ ಸದಸ್ಯರಿಂದ ಹಣವನ್ನು ಸಾಲ ತೆಗೆದುಕೊಂಡಿದ್ದರೆ ಅದನ್ನು ಇಂದು ಮರುಪಾವತಿಸಿ ಇಲ್ಲದಿದ್ದರೆ ನಿಮ್ಮ ವಿರುದ್ಧವಾಗಿ ಕಾನೂನು ಪ್ರಕರಣ ಮಾಡಬಹುದು.

**ವೃಷಭ** ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು, ನೀವು ಹಣದಿಂದ ಲಾಭ ಪಡೆಯಬಹುದು. ಸಂತೋಷದ ಚೈತನ್ಯದಾಯಕ ಪ್ರಿಯವಾದ ಚಿತ್ತದ ಖುಷಿಯ ಸ್ವಭಾವ ನಿಮ್ಮ ಸುತ್ತಲಿನವರಿಗೆ ಸಂತೋಷ ತರುತ್ತದೆ.

**ಮಿಥುನ** ಹಾಸ್ಯಪ್ರಜ್ಞೆಯಿರುವ ಸಂಬಂಧಿಕರ ಸಂಗ ನಿಮ್ಮ ಉದ್ವೇಗವನ್ನು ಕಡಿಮೆ ಮಾಡುತ್ತದೆ ಮತ್ತು ನಿಮಗೆ ತುಂಬಾ ಅಗತ್ಯವಾಗಿರುವ ಶಮನವನ್ನು ನೀಡುತ್ತದೆ. ಈ ರೀತಿಯ ಸಂಬಂಧಿಗಳನ್ನು ಹೊಂದಿದ ನೀವೇ ಅದೃಷ್ಟವಂತರು. ಯಾವುದೇ ಹಳೆಯ ಸ್ನೇಹಿತ ಇಂದು ನಿಮ್ಮ ಬಳಿ ಹಣವನ್ನು ಕೇಳಬಹುದು.

**ಕರ್ಕಾಟಕ** ತೊಂದರೆಯಲ್ಲಿರುವ ಯಾರಿಗಾದರೂ ಸಹಾಯ ಮಾಡಲು ಚೈತನ್ಯವನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಕಾಳಜಿವಹಿಸುವವರ ಜತೆಗಿನ ಸಂವಹನದ ಕೊರತೆ ಖಿನ್ನತೆ ಉಂಟುಮಾಡುತ್ತದೆ.

**ಸಿಂಹ** ಸ್ನೇಹಿತನ ಜೊತೆಗಿನ ನಿಮ್ಮ ಅಪಾರ್ಥ ಕೆಲವು ಅಹಿತಕರ ಪ್ರತಿಕ್ರಿಯೆಗಳನ್ನು ಉಂಟುಮಾಡಬಹುದು – ಯಾವುದೇ ನಿರ್ಧಾರ ಕೈಗೊಳ್ಳುವ ಮೊದಲು ಸಮತೋಲಿತ ನೋಟ ಹೊಂದಿ. ನಿಮ್ಮ ಸಹೋದರ–ಸಹೋದರಿಯರಲ್ಲಿ ಒಬ್ಬರು ಇಂದು ನಿಮ್ಮಿಂದ ಹಣವನ್ನು ಎರವಲು ಪಡೆಯಬಹುದು.

**ಕನ್ಯಾ** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ನಿಮ್ಮ ನೆರವು ಅಗತ್ಯವಿರುವ ಒಬ್ಬ ಸ್ನೇಹಿತರನ್ನು ಭೇಟಿ ಮಾಡಿ.

**ತುಲಾ** ಇತರರ ವಿರುದ್ಧ ದ್ವೇಷಕಾರುವುದು ಮಾನಸಿಕ ಒತ್ತಡವನ್ನು ನೀಡುತ್ತದೆ. ಇವುಗಳು ಜೀವನವನ್ನು ವ್ಯರ್ಥಗೊಳಿಸುವುದರಿಂದ ಮತ್ತು ನಿಮ್ಮ ಸಾಮರ್ಥ್ಯವನ್ನು ಕೊಲ್ಲುವುದರಿಂದ ನೀವು ಈ ರೀತಿಯ ಆಲೋಚನೆಗಳನ್ನು ತಪ್ಪಿಸಬೇಕು. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ.

**ವೃಶ್ಚಿಕ** ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ, ಯೋಗ ಪ್ರಾರಂಭಿಸಿ. ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ತ್ಯರಾಗಿರುತ್ತೀರಿ. ನಿಮ್ಮ ಜ್ಞಾನ, ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು. ನಿಮ್ಮ ಪ್ರೀತಿ ಒಂದು ಹೊಸ ಎತ್ತರವನ್ನು ತಲುಪುತ್ತದೆ.

**ಧನಸ್ಸು** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ. ಇಂದು ನೀವು ಹಣದ ಪ್ರಯೋಜನವನ್ನು ಪಡೆಯಬಹುದು ಆದರೆ ಇದಕ್ಕಾಗಿ ನೀವು ಕಠಿಣ ಪರಿಶ್ರಮ ಮಾಡಬೇಕಾಗುತ್ತದೆ.

**ಮಕರ** ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು ಹಳೆಯ ಸಂಪರ್ಕಗಳು, ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

**ಕುಂಭ** ಮಾದಕವಸ್ತುವಿನ ಅವಲಂಬನೆ ಹೆಚ್ಚುವ ಸಾಧ್ಯತೆಗಳಿರುವುದರಿಂದ ಸ್ವಯಂ ಔಷಧೋಪಚಾರ ಮಾಡಬೇಡಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ.


**ಮೀನ** ನೀವು ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳು ಹೆಚ್ಚಿದ್ದು ಇದು ನಿಮ್ಮನ್ನು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಕ್ರಿಯಗೊಳಿಸುತ್ತದೆ. ಆರ್ಥಿಕ ಜೀವನದಲ್ಲಿ ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಸಾಲಗಳಿಂದ ಮುಕ್ತರಾಗಬಹುದು. ನೀವು ಮಕ್ಕಳೊಡನೆ ಸ್ವಲ್ಪ ಸಮಯ ಕಳೆಯಬೇಕು.

# ಹಸಿಬರ; ರೈತರ ಸಂಕಷ್ಟ ಕೇಳದ ಸರ್ಕಾರ: ಭೀಮುನಾಯಕ ಆಕ್ರೋಶ

• ಉದಯವಾಹಿನಿ, ಯಾದಗಿರಿ

ಈ ಬಾರಿ ರಾಜ್ಯೋತ್ಸವ ಸಮಾರಂಭ ಅದ್ದೂರಿಯಾಗಿ ಆಚರಿಸಲು ಕರವೇ ಸೇನಾನಿಗಳು ಸಮರೋಪಾದಿಯಲ್ಲಿ ಕೆಲಸ ಮಾಡಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ ತಾಲ್ಲೂಕು ಅಧ್ಯಕ್ಷ ಮಲ್ಲು ಮಾಳಿಕೇರಿ ಕರೆ ನೀಡಿದರು. ನಗರದ ಜಿಲ್ಲಾ ಕರವೇ ಕಾರ್ಯಾಲಯದಲ್ಲಿ ಜರುಗಿದ ತಾಲ್ಲೂಕು ಕರವೇ ಸಮಿತಿಯಿಂದ ಕರೆಯಲಾಗಿದ್ದ ಪೂರ್ವಭಾವಿ ಸಭೆಯ ನೇತೃತ್ವವಹಿಸಿ ಮಾತನಾಡಿದರು, ಪ್ರತಿವರ್ಷವೂ ರಾಜ್ಯೋತ್ಸವ ಕಾರ್ಯಕ್ರಮ ಗಿರಿನಾಡಿನಲ್ಲಿ ಪ್ರತಿಧ್ವನಿಸಿದೆ. ಈ ಬಾರಿ ಇನ್ನು ಹೆಚ್ಚಿನ ಪ್ರಮಾಣದಲ್ಲಿ ಕರವೇ ಸೇನಾನಿಗಳು ಶ್ರಮವಹಿಸಬೇಕೆಂದು ಅವರು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕರವೇ ಜಿಲ್ಲಾಧ್ಯಕ್ಷ ಟಿ.ಎನ್. ಭೀಮುನಾಯಕ ನಾಡಿನಲ್ಲಿ ವಿಶೇಷವಾಗಿ ಕಲ್ಯಾಣ ಕರ್ನಾಟಕದ ಭೀಮಾನದಿ ಪಾತ್ರದ ರೈತರು ಸತತ ಮಳೆಯಿಂದ ನೆರೆ ಹಾವಳಿಯಿಂದ ಹಸಿಬರದ ಸಂಕಷ್ಟದಲ್ಲಿದ್ದಾರೆ. ಬೆಳೆದ ಬೆಳೆಗಳು ನೀರು ಪಾಲಾಗಿವೆ.


ಉದಯವಾಹಿನಿ ಚಿತ್ರ

**ರಾಜ್ಯೋತ್ಸವ ಆಚರಿಸಲು ಕೈಜೋಡಿಸಿ**

ಸರ್ಕಾರ ರೈತರ ಕಣ್ಣೀರು ಒರೆಸುವ ಕೆಲಸ ಮಾಡಬೇಕಿತ್ತು ಆದರೆ ಇದುವರೆಗೆ ಪರಿಹಾರ ವಿತರಣೆ ಕೆಲಸ ಆಗಿಲ್ಲ. ಹಸಿಬರ ಘೋಷಣೆ ಮಾಡಿ ತಕ್ಷಣದ ಪರಿಹಾರವಾಗಿ ಮತ್ತು ಮುಂಗಡವಾಗಿ ರೈತರ ಖಾತೆಗಳಿಗೆ 10ಸಾವಿರ ರೂ. ಹಾಕುವಂತಹ ಕೆಲಸವಾದರೂ ಮಾಡುವಂತೆ ಒತ್ತಾಯಿಸಿದರೂ ಅದಕ್ಕೆ ಸ್ಪಂದಿಸುವುದಿರಲಿ ಕಿಂಚಿತ್ತು ಪರಿಹಾರ ನೀಡುವ ನಿಟ್ಟಿನಲ್ಲಿ ಸರ್ಕಾರ ಕೆಲಸ ಮಾಡದೇ ಇರುವುದು ಖಂಡನೀಯ ಎಂದರು. ಸಚಿವರು ಶಾಸಕರು ಈ ಬಗ್ಗೆ ಮಾತನಾಡಬೇಕಿತ್ತು ಆದರೆ ಮೌನವಹಿಸಿರುವುದರಿಂದ ಸರ್ಕಾರ ಕುಂಭಕರ್ಣ ನಿದ್ರೆಯಲ್ಲಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಒಂದು ವಾರದಲ್ಲಿ ಪರಿಹಾರ ನೀಡುವುದಾಗಿ ಹೇಳಿದ ಮಂತ್ರಿ ಮುಖ್ಯಮಂತ್ರಿಗಳು ಕಾಣೆಯಾಗಿದ್ದಾರೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ತಕ್ಷಣ ಪರಿಹಾರ ವಿತರಣೆ ಮಾಡಬೇಕು ಎಂದು ಸರ್ಕಾರಕ್ಕೆ ಈ ಸಂದರ್ಭದಲ್ಲಿ ಒತ್ತಾಯಿಸುವುದಾಗಿ ಹೇಳಿದ ಅವರು, ರಾಜ್ಯೋತ್ಸವ ಸಮಾರಂಭದ ಯಶಸ್ಸಿಗೆ ಎಲ್ಲಾ ಕರವೇ ಸೇನಾನಿಗಳು ಶ್ರಮಿಸಬೇಕು ಎಲ್ಲಾ ಅಗತ್ಯ ಕಾರ್ಯಗಳನ್ನು ಎಂದಿನಂತೆ ಮಾಡಬೇಕು ಎಂದು ಹೇಳಿದರು.

ಕರವೇ ತಾಲ್ಲೂಕು ಮುಖಂಡರಾದ ಸುರೇಶ ಬೆಳಗುಂದಿ, ಮಲ್ಲಿಕಾರ್ಜುನ ಕನ್ನಡಿ, ಶರಣು ಮಡಿವಾಳ, ಬಸ್ಸು ನಾಯಕ ಸೈದಾಪೂರ, ರಫೀಕ್ ವರ್ಕನಳ್ಳಿ, ಸಲೀಮ್ ಚಾವುಸ್, ಸೈದಪ್ಪ ಗೌಡಗೇರಾ, ಮಹೇಶ ಠಾಣಗುಂದಿ, ಸಾಗರ ಸೈದಾಪೂರ, ಮಲ್ಲು ಬಾಡಿಯಾಲ್, ಹಣಮಂತ ಯಡ್ಡಳ್ಳಿ, ರಾಜು ಗೌಡಗೇರಿ, ವೆಂಕಟೇಶ ಕೌಳೂರು, ದುರುಗಪ್ಪ ಬಳಿಚಕ್ರ, ಸಾಬು ನಾಗರಬಂಡಿ, ಹಣಮಂತ ಮುಂಡರಗಿ, ಈಶಪ್ಪ,

# ತಸ್ತಿಕ್ ಹಣ ಪಾವತಿಗೆ ಮುಜರಾಯಿ ಸಚಿವರ ಭರವಸೆ


## ಪಡುವಳ್ಳಿಯ ಶ್ರೀ ಏಳು ಮಕ್ಕಳ ಚೌಡೇಶ್ವರಿ ದೇವಸ್ಥಾನದಲ್ಲಿ ಗೋಪೂಜೆ

• ಉದಯವಾಹಿನಿ, ಶಿವಮೊಗ್ಗ

ಜಿಲ್ಲೆಯಲ್ಲಿರುವ ಮುಜರಾಯಿ ದೇವಸ್ಥಾನಗಳ ಸಮಸ್ಯೆ ಹಾಗೂ ಅರ್ಚಕರ ತಸ್ತಿಕ್ ಹಣ ಬಿಡುಗಡೆಗೊಳಿಸುವ ಸಂಬಂಧ ಮುಜರಾಯಿ ಸಚಿವರಾದ ರಾಮಲಿಂಗ ರೆಡ್ಡಿ ಅವರ ಗಮನ ಸೆಳೆಯಲಾಗಿದ್ದು, ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಸಚಿವರು ಭರವಸೆ ನೀಡಿದ್ದಾರೆಂದು ಧಾರ್ಮಿಕ ದತ್ತಿ ಮತ್ತು ಧರ್ಮದಾಯ ಇಲಾಖೆಯ ಜಿಲ್ಲಾ ಧಾರ್ಮಿಕ ಪರಿಷತ್ ಸದಸ್ಯೆ ಬಿ. ವರಲಕ್ಷ್ಮಿ ಪ್ರಕಾಶ್ ತಿಳಿಸಿದರು.

ಮುಜರಾಯಿ ಸಚಿವರ ನಿರ್ದೇಶನದಂತೆ ಧಾರ್ಮಿಕ ದತ್ತಿ ಆಯುಕ್ತರು ಬಲಿಪಾಡ್ಯಮಿ ಅಂಗವಾಗಿ ಮುಜರಾಯಿ ದೇವಸ್ಥಾನಗಳಲ್ಲಿ ಗೋಪೂಜೆ ನೆರವೇರಿಸಲು ಸುತ್ತೋಲೆ ಹೊರಡಿಸಿದ್ದ ಹಿನ್ನೆಲೆಯಲ್ಲಿ 22-10-2025ರ ತೀರ್ಥಹಳ್ಳಿ ತಾಲ್ಲೂಕಿನ ಪಡುವಳ್ಳಿಯ ಶ್ರೀ ಏಳು ಮಕ್ಕಳ ಚೌಡೇಶ್ವರಿ ದೇವಸ್ಥಾನದ ಆವರಣದಲ್ಲಿ ಗೋಗ್ರಾಸ ನೀಡಿ, ಗೋಪೂಜೆ ನೆರವೇರಿಸಿ ಅವರು ಮಾತನಾಡಿದರು.


ಉದಯವಾಹಿನಿ ಚಿತ್ರ


ಉದಯವಾಹಿನಿ ಚಿತ್ರ

ಮುಜರಾಯಿ ದೇವಸ್ಥಾನಗಳಲ್ಲಿ ದೇವರ ಪೂಜಾ ಕೈಂಕರ್ಯಗಳನ್ನು ನಡೆಸುತ್ತಿರುವ ಅರ್ಚಕ ಸಮುದಾಯಕ್ಕೆ ತಸ್ತಿಕ್ ಹಣ ಬಿಡುಗಡೆ ವಿಳಂಬದಿಂದ ತೊಂದರೆ ಆಗುತ್ತಿರುವುದರ ಬಗ್ಗೆ ಸರ್ಕಾರಕ್ಕೆ, ಜಿಲ್ಲಾಧಿಕಾರಿಯವರೇ ಅಧ್ಯಕ್ಷರಾಗಿರುವ ಜಿಲ್ಲಾ ಧಾರ್ಮಿಕ ಪರಿಷತ್‌ಗೆ ಸಹಾನುಭೂತಿ ಇದೆ ಎಂದರು. ಹಿಂದೂ ಧರ್ಮದಲ್ಲಿ ಗೋವನ್ನು ಗೋಮಾತೆ ಎಂಬ ಹೆಸರಿನಿಂದ ವಿಶೇಷ ಸ್ಥಾನಮಾನ ನೀಡಿ ಪೂಜಿಸಲಾಗುತ್ತದೆ. ಧಾರ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಯ ಅವಿಭಾಜ್ಯ ಅಂಗವಾಗಿರುವ ಗೋವುಗಳ ಮಹತ್ವ ಮತ್ತು ಸಂರಕ್ಷಣೆ ಬಗ್ಗೆ ಜನಜಾಗೃತಿ ಮೂಡಿಸಬೇಕಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಶ್ರೀ ಏಳು ಮಕ್ಕಳ ಚೌಡೇಶ್ವರಿ ಸೇವಾ ಸಮಿತಿಯ ಆಡಳಿತ ಮಂಡಳಿ ಹಾಗೂ ಗ್ರಾಮಸ್ಥರ ಪರವಾಗಿ ಜಿಲ್ಲಾ ಧಾರ್ಮಿಕ ಪರಿಷತ್ ಸದಸ್ಯೆ ಬಿ. ವರಲಕ್ಷ್ಮಿ ಪ್ರಕಾಶ್ ಇವರನ್ನು ಅಭಿನಂದಿಸಲಾಯಿತು. ಸಫಾಯಿ ಕರ್ಮಚಾರಿ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯ ಪಡುವಳ್ಳಿ ಹರ್ಷೇಂದ್ರ ಕುಮಾರ್, ತೀರ್ಥಹಳ್ಳಿ ಬ್ಲಾಕ್ ಕಾಂಗ್ರೆಸ್ ಎಸ್ಸಿ ಘಟಕದ ಅಧ್ಯಕ್ಷ ಕಿಟ್ಟಪ್ಪ, ಹೊನ್ನತಾಳ ಗ್ರಾಪಂ ಸದಸ್ಯೆ ಭಾಗ್ಯಮ್ಮ, ಭರತ್ ಕುಮಾರ್, ಇ. ಪ್ರಕಾಶ್, ಪ್ರೀತಂ ಕುಮಾರ್, ರಮೇಶ್ ಮತ್ತಿತರರು ಉಪಸ್ಥಿತರಿದ್ದರು.

**ಮುಜರಾಯಿ ಇಲಾಖೆ ಕಾರ್ಯೋನ್ಮುಖ**

**ಹಿಂದಿನ ಸರ್ಕಾರದ ಅವಧಿಯಲ್ಲಿಯೂ ತಸ್ತಿಕ್ ಹಣ ಸಕಾಲಕ್ಕೆ ಬಿಡುಗಡೆ ಆಗುತ್ತಿರಲಿಲ್ಲ. ಈಗಿರುವ ಸರ್ಕಾರವು ನಿಗಧಿತ ಸಮಯಕ್ಕೆ ಹಣ ಪಾವತಿಸಲು ಪ್ರಯತ್ನಿಸುತ್ತಿದೆ. ಧಾರ್ಮಿಕ ಶ್ರದ್ಧೆಯಿಂದ ಕಾರ್ಯನಿರ್ವಹಿಸುತ್ತಿರುವ ಅರ್ಚಕರಿಗೆ ಸರ್ಕಾರದಿಂದ ಸೌಲಭ್ಯವನ್ನು ಕ್ರಮಬದ್ಧಗೊಳಿಸಲು ಮುಜರಾಯಿ ಇಲಾಖೆ ಕಾರ್ಯೋನ್ಮುಖವಾಗಿದೆ ಎಂದು ತಿಳಿಸಿದರು.**

**ಸಚಿವರಾದ ರಾಮಲಿಂಗ ರೆಡ್ಡಿ ಅವರು ಮುಜರಾಯಿ ದೇವಸ್ಥಾನಗಳ ಜಾಗ ಒತ್ತುವರಿ ಸೇರಿದಂತೆ ವಿವಿಧ ಸಮಸ್ಯೆ ಮತ್ತು ಬೇಡಿಕೆಗಳ ಬಗ್ಗೆಯೂ ಗಮನ ಹರಿಸುವುದಾಗಿ, ದೇವಸ್ಥಾನದ ಜಾಗ ಒತ್ತುವರಿ ಸಂಬಂಧ ಅಗತ್ಯ ದಾಖಲೆ ಸಮೇತ ಜಿಲ್ಲಾ ಧಾರ್ಮಿಕ ಪರಿಷತ್‌ಗೆ ದೂರು ನೀಡಬಹುದಾಗಿದೆ. ಇದನ್ನು ಸಚಿವರ ಗಮನಕ್ಕೂ ತರಲಾಗುವುದು ಎಂದು ಹೇಳಿದರು.**

# ದೇಶದ ಆಂತರಿಕ ಭದ್ರತೆಗೆ ಪೊಲೀಸರ ಕೊಡುಗೆ ಅಪಾರ

• ಉದಯವಾಹಿನಿ, ಬೀದರ

ದೇಶದಲ್ಲಿ ಶಾಂತಿ, ಸುವ್ಯವಸ್ಥೆ ಜೊತೆಗೆ ಆಂತರಿಕ ಭದ್ರತೆಗಾಗಿ ಪೊಲೀಸರು ಹಗಲಿರುಳು ಶ್ರಮಿಸುವ ಮೂಲಕ ಅಪಾರ ಕೊಡುಗೆ ನೀಡಿದ್ದಾರೆ ಎಂದು ಕರ್ನಲ್ ಶರಣಪ್ಪ ಸಿಕೆನಪುರೆ ತಿಳಿಸಿದರು. ಅವರು ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ನಡೆದ ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಪೊಲೀಸ್ ಹುತಾತ್ಮರ ಸ್ಮಾರಕಕ್ಕೆ ಹೂದಂಡೆ (ರೀಥ) ಸಮರ್ಪಿಸಿ ಗೌರವ ಸಲ್ಲಿಸಿ ಮಾತನಾಡಿದರು. ಪೊಲೀಸರು ನಿಷ್ಠೆಯಿಂದ ಕೆಲಸ ಮಾಡುತ್ತಿರುವದರಿಂದ ದೇಶದ ಜನ ನೆಮ್ಮದಿಯಿಂದ ಇದ್ದೇವೆ. ಪ್ರತಿ ವರ್ಷ ಸಾವಿರಾರು ಪೊಲೀಸರು ಕರ್ತವ್ಯದ ಸಮಯದಲ್ಲಿ ಹುತಾತ್ಮರಾಗುತ್ತಾರೆ ಅವರ ಸ್ಮರಣೆಯನ್ನು ಕೇವಲ ಒಂದು ದಿನಕ್ಕೆ ಸೀಮಿತಗೊಳಿಸಬೇಡಿ. ಪೊಲೀಸ್ ಕರ್ತವ್ಯ ನಿಷ್ಠೆಗೆ ಅವರ ಕುಟುಂಬ ಸದಸ್ಯರ ಸಹಕಾರ ಸಾಕಷ್ಟಿದೆ. ಪೊಲೀಸ್ ಹುತಾತ್ಮರ ಮಕ್ಕಳಿಗೆ ತಮ್ಮ ಶಾಲೆಯಲ್ಲಿ ಕಡಿಮೆ ಶುಲ್ಕದಲ್ಲಿ ಶಿಕ್ಷಣ ನೀಡಲಾಗುವುದು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಮಾತನಾಡಿ, 1959 ರ ಅಕ್ಟೋಬರ್ 21ರಂದು ಲಡಾಕ್ ಪ್ರದೇಶದಲ್ಲಿ ಎಸ್.ಐ ಕರಂ ಸಿಂಗ್ ನೇತೃತ್ವದ 21 ಜನ ಕೇಂದ್ರ ಪೊಲೀಸ್ ಮೀಸಲು ಪಡೆಯ ಸಿಬ್ಬಂದಿಗಳ ತಂಡ ಗಸ್ತು ತಿರುಗುವ ಸಂದರ್ಭದಲ್ಲಿ ಚೀನಾ ಸೈನ್ಯ ಏಕಾಏಕಿ ದಾಳಿ ನಡೆಸಿತು.

ಈ ಸಮಯದಲ್ಲಿ ವೀರಾವೇಶದಿಂದ ಹೋರಾಡಿ ನಮ್ಮ 10 ಜನ ಪೊಲೀಸ್ ಸಿಬ್ಬಂದಿಗಳು ಮಡಿದರು, 11 ಜನ ಒತ್ತೆಯಾಳಾದರು, ಅವರ ತ್ಯಾಗ ಬಲಿದಾನದ ಸಂಕೇತವಾಗಿ ಪೊಲೀಸ್ ಹುತಾತ್ಮರ ಆಚರಣೆ ಮಾಡಲಾಗುತ್ತಿದೆ ಎಂದರು. ಇದೇ ಸಮಯದಲ್ಲಿ ಅವರ ಕಳೆದ ಒಂದು ವರ್ಷದಲ್ಲಿ ದೇಶದ ವಿವಿಧ ರಾಜ್ಯಗಳಲ್ಲಿ ಹುತಾತ್ಮರಾದ ಪೊಲೀಸರ ಹೆಸರುಗಳನ್ನೂ ವಾಚಿಸಿದರು. ಕಾರ್ಯಕ್ರಮದಲ್ಲಿ ಪೊಲೀಸ್ ಅಧೀಕ್ಷಕರು ಮತ್ತು ಹೆಚ್ಚುವರಿ ಪೊಲೀಸ್ ಅಧೀಕ್ಷಕರಿಂದ ಹಾಗೂ ಇತರೆ ಪೊಲೀಸ್ ಅಧಿಕಾರಿ ಸಿಬ್ಬಂದಿಗಳು ಮತ್ತು ಗಣ್ಯರಿಂದ ಹುತಾತ್ಮ ಸ್ಮಾರಕಕ್ಕೆ ಹೂದಂಡೆ(ರೀಥ) ಸಮರ್ಪಣೆ ಮಾಡಿ ಗೌರವ ಸಲ್ಲಿಸಲಾಯಿತು.


ಉದಯವಾಹಿನಿ ಚಿತ್ರ

# ರಾಜ್ಯೋತ್ಸವ ರತ್ನ ಪ್ರಶಸ್ತಿಗೆ 22 ಜನರ ಆಯ್ಕೆ

• ಉದಯವಾಹಿನಿ, ಬೀದರ್


ಎಂ ಎಸ್ ಜನವಾಡಕರ


ಅಶ್ವಜೀತ ದಂಡಿನ


ಎಸ್ ಬಿ ಕುಚಬಾಳ

ಪ್ರಗತಿಪರ ಸಾಹಿತಿಗಳಾದ ಎಂ. ಎಸ್. ಜನವಾಡಕರ, ಎಸ್. ಬಿ. ಕುಚಬಾಳ, ಅಶ್ವಜೀತ ದಂಡಿನ ಸೇರಿದಂತೆ ಒಟ್ಟು 22 ಜನರನ್ನು 'ರಾಜ್ಯೋತ್ಸವ ರತ್ನ' ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ವಿಶ್ವ ಕನ್ನಡಿಗರ ಸಂಸ್ಥೆಯ ರಾಜ್ಯಾಧ್ಯಕ್ಷರಾದ ಡಾ. ಸುಬ್ಬಣ್ಣ ಕರಕನಳ್ಳಿ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿದ ಅವರು ಪ್ರತಿ ವರ್ಷದಂತೆ ಈ ವರ್ಷವು ಕೂಡ ಕರ್ನಾಟಕ ರಾಜ್ಯೋತ್ಸವ ನಿಮಿತ್ತ ವಿಶ್ವ ಕನ್ನಡಿಗರ ಸಂಸ್ಥೆಯಿಂದ ಕೊಡಮಾಡುವ ಕರ್ನಾಟಕ ರಾಜ್ಯೋತ್ಸವ ರತ್ನ ಪ್ರಶಸ್ತಿ ಪ್ರಕಟಿಸಲಾಗಿದೆ. ನವೆಂಬರ್ ಕೊನೆಯ ವಾರದಲ್ಲಿ ಅತ್ಯಂತ ವೈಭವದಿಂದ ಬೀದರ ನಗರದಲ್ಲಿ ನಡೆಯಲಿರುವ 70ನೇ ಕರ್ನಾಟಕ ರಾಜ್ಯೋತ್ಸವ, ಗಡಿ ಭಾಗದ ಕನ್ನಡಿಗರ ಸಾಹಿತ್ಯ ಸಾಂಸ್ಕೃತಿ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಗಣ್ಯರ ಉಪಸ್ಥಿತಿಯಲ್ಲಿ ಪ್ರಶಸ್ತಿ ಪ್ರದಾನಗೊಳ್ಳಲಿದೆ.

ಇದು ಕನ್ನಡ ಸಾಹಿತ್ಯ, ಸಂಸ್ಕೃತಿಯ ಸಾಧಕರನ್ನು ಗೌರವಿಸುವ ಉದ್ದೇಶವನ್ನು ಹೊಂದಿದೆ ಎಂದು ಸಂಸ್ಥೆಯ ರಾಜ್ಯಾಧ್ಯಕ್ಷರಾದ ಡಾ. ಸುಬ್ಬಣ್ಣ ಕರಕನಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಿಯಾಂಕ್ ಖರ್ಗೆ ಪ್ರಶ್ನೆಗಳಿಗೆ ಸ್ಪಷ್ಟನೆ ಕೊಡಿ ಆರೋಪ ನಿಲ್ಲಿಸಿ: ಮಂಜುನಾಥ ಭಂಡಾರಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಂಗಳೂರು

ಆರ್‌ಎಸ್‌ಎಸ್ ಕುರಿತು ಸಚಿವ ಪ್ರಿಯಾಂಕ್ ಖರ್ಗೆ ಅವರು ಸಿಎಂಗೆ ಪತ್ರ ಬರೆದಿದ್ದರಲ್ಲಿ ಯಾವುದೇ ತಪ್ಪಿಲ್ಲ. ಅವರು ಹೇಳಿರುವ ವಿಚಾರಕ್ಕೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸುತ್ತೇವೆ. ಪ್ರಿಯಾಂಕ್ ಖರ್ಗೆ ಎತ್ತಿರುವ ಪ್ರಶ್ನೆಗಳಿಗೆ ಆರ್‌ಎಸ್‌ಎಸ್, ಬಿಜೆಪಿಯವರು ಸ್ಪಷ್ಟನೆ ಕೊಡಲಿ. ಅದು ಬಿಟ್ಟು ಇಲ್ಲಸಲ್ಲದ ಆರೋಪ ಮಾಡುವುದು, ಕೊಲೆ ಬೆದರಿಕೆಯೊಡ್ಡುವುದು, ಅವಹೇಳನ ಮಾಡುವುದನ್ನು ನಿಲ್ಲಿಸಬೇಕು ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಎಂಎಲ್ಸಿ ಮಂಜುನಾಥ ಭಂಡಾರಿ ಹೇಳಿದ್ದಾರೆ.

ಮಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್‌ಎಸ್‌ಎಸ್‌ನವರು ಬುದ್ಧ, ಗಾಂಧಿ, ಬಸವಣ್ಣನವರ ತತ್ವಗಳನ್ನು ಒಪ್ತಾರಾ ಎಂದು ಪ್ರಿಯಾಂಕ್ ಖರ್ಗೆ ಪ್ರಶ್ನೆ ಮಾಡಿದ್ದಾರೆ. ಆರ್‌ಎಸ್‌ಎಸ್‌ನವರು ಸಮಾನತೆಯನ್ನೇ ಒಪ್ಪಲ್ಲ, ರಾಷ್ಟ್ರ ಧ್ವಜ, ರಾಷ್ಟ್ರಗೀತೆಗಿಂತ ಬೇರೆ ಧ್ವಜ, ಗೀತೆಗೆ ಗೌರವ ಕೊಡುತ್ತಾರೆ ಎಂಬಿತ್ಯಾದಿ ಪ್ರಶ್ನೆಗಳನ್ನೂ ಕೇಳಿದ್ದಾರೆ. ಇಂಥ ಮೂಲಭೂತ ಪ್ರಶ್ನೆಗಳಿಗೆ ಸ್ಪಷ್ಟನೆ ನೀಡುವುದು ಬಿಟ್ಟು ಅವಹೇಳನ, ಆರೋಪ ಮಾಡುವುದು ಸರಿಯಾ ಎಂದು ಆಕ್ಷೇಪಿಸಿದರು. ಬಿಜೆಪಿ ಆದೇಶವನ್ನೇ ಜಾರಿ ಮಾಡ್ತಿದ್ದೇವೆ.

ಪ್ರಿಯಾಂಕ್ ಖರ್ಗೆ ಅವರು ಹೊಸದಾಗಿ ಏನನ್ನೂ ಹೇಳಿಲ್ಲ. 2013ರಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ಹೊರಡಿಸಿದ್ದ ಆದೇಶವನ್ನೇ ಜಾರಿ ಮಾಡಲಾಗುತ್ತಿದೆ ಅಷ್ಟೇ. ಅವರದ್ದೇ ಸರ್ಕಾರ ಮಾಡಿದರೆ ಮಾಸ್ಟರ್ ಸ್ಟ್ರೋಕ್ ಅಂತಾರೆ, ಅವರ ಆದೇಶವನ್ನೇ ನಾವು ಜಾರಿ ಮಾಡಿದರೆ ತಪ್ಪೇನು ಎಂದು ಮಂಜುನಾಥ ಭಂಡಾರಿ ಪ್ರಶ್ನಿಸಿದರು.ಮಹಿಳೆಯರನ್ನು ಪೂಜನೀಯ ಎನ್ನುತ್ತಾರೆ. ಮಂಗಳೂರಿನಲ್ಲಿರುವ ತಮ್ಮ ಶಿಕ್ಷಣ ಸಂಸ್ಥೆಯಲ್ಲಿ ಇದುವರೆಗೆ ಯಾವುದೇ ರೀತಿಯ ಆರ್‌ಎಸ್‌ಎಸ್ ಚಟುವಟಿಕೆ ನಡೆದಿಲ್ಲ ಎಂದು ಸ್ಪಷ್ಟನೆ ನೀಡಿರುವ ಮಂಜುನಾಥ ಭಂಡಾರಿ, ಇನ್ನು ಮುಂದೆ ಹೀಗೆ ಆರೋಪ ಮಾಡಿದರೆ ಮಾನನಷ್ಟ ಮೊಕದ್ದಮೆ ಹಾಕುವುದಾಗಿ ಹೇಳಿದರು.

# ಆರ್‌ಎಸ್‌ಎಸ್ ಮನವಿ ಪತ್ರದ ಬೆನ್ನಲ್ಲೇ ಭೀಮ್ ಆರ್ಮಿ, ಪ್ಯಾಂಥರ್ ಅರ್ಜಿ

• ಉದಯವಾಹಿನಿ, ಕಲಬುರಗಿ

ಜಿಲ್ಲೆಯ ಚಿತ್ತಾಪುರ ಪಟ್ಟಣದಲ್ಲಿ ನ.2ರಂದು ಪಥ ಸಂಚಲನ ಕೈಗೊಳ್ಳುವುದಾಗಿ ಕಲಬುರಗಿ ಜಿಲ್ಲಾಧಿಕಾರಿಗಳಿಗೆ ಆರ್‌ಎಸ್‌ಎಸ್ ಮುಖಂಡರು ಮಂಗಳವಾರ ಮನವಿ ಪತ್ರ ಸಲ್ಲಿಸಿದ ಬೆನ್ನಲ್ಲೇ ಭೀಮ್ ಆರ್ಮಿ ಮತ್ತು ಭಾರತೀಯ ದಲಿತ ಪ್ಯಾಂಥರ್ ಸಂಘಟನೆಯ ಮುಖಂಡರು ಸಹ ಅದೇ ದಿನ ತಮಗೂ ಪಥ ಸಂಚಲನಕ್ಕೆ ಅವಕಾಶ ಮಾಡಿಕೊಡುವಂತೆ ಮನವಿ ಪತ್ರ ಸಲ್ಲಿಸಿರುವುದು ಇದೀಗ ತೀವ್ರ ಕುತೂಹಲ ಕೆರಳಿಸಿದೆ.


ಉದಯವಾಹಿನಿ ಚಿತ್ರ

ಆರ್‌ಎಸ್‌ಎಸ್ ಬೆನ್ನಲ್ಲೇ ಭೀಮ್ ಆರ್ಮಿ, ದಲಿತ ಪ್ಯಾಂಥರ್ ಮನವಿ ಸಲ್ಲಿಸಿದ ಕಾರಣಕ್ಕಾಗಿ ಇದೀಗ ಪಥ ಸಂಚಲನ ಕುರಿತಂತೆ ತ್ರಿಕೋನ ಸ್ಪರ್ಧೆ ಏರ್ಪಟ್ಟಿರುವ ಹಿನ್ನೆಲೆಯಲ್ಲಿ ಈಗಿನಿಂದಲೇ ಚಿತ್ತಾಪುರ ಪಟ್ಟಣದಲ್ಲಿ ವ್ಯಾಪಕ ಬಂದೋಬಸ್ತ್ ಮಾಡಿಕೊಳ್ಳಲು ಪೊಲೀಸ್ ಇಲಾಖೆ ಮುಂದಾಗಿದೆ. ಈ ಮಧ್ಯೆ, ಪಥ ಸಂಚಲನ ನಡೆಸುವ ಯಾವುದೇ ಸಂಘಟನೆಗೆ ಪ್ರತ್ಯೇಕ ದಿನಾಂಕಗಳನ್ನು ನೀಡುವಂತೆ ಈಗಾಗಲೇ ಕಲಬುರಗಿ ಹೈಕೋರ್ಟ್ ಪೀಠ ಜಿಲ್ಲಾಡಳಿತ ಮತ್ತು ರಾಜ್ಯ ಸರ್ಕಾರಕ್ಕೆ ಮೌಖಿಕವಾಗಿ ನಿರ್ದೇಶನ ನೀಡಿದ್ದರೂ ಒಂದೇ ದಿನ ಪಥ ಸಂಚಲನಕ್ಕೆ ಅವಕಾಶ ನೀಡುವಂತೆ ಎಲ್ಲಾ ಮೂರು ಸಂಘಟನೆಗಳ ಮುಖಂಡರು ಮನವಿ ಮಾಡಿರುವುದರಿಂದ ಜಿಲ್ಲಾಧಿಕಾರಿಗಳು ಈ ನಿಟ್ಟಿನಲ್ಲಿ ಯಾವ ನಿರ್ಧಾರ ಕೈಗೊಳ್ಳುತ್ತಾರೆ ಎಂಬುದರ ಮೇಲೆ ಎಲ್ಲರ ನಿಗಾ ನೆಟ್ಟಿದೆ. ಈ ಮಧ್ಯೆ, ಒಂದೇ ದಿನ ಮೂರು ಮನವಿ ಪತ್ರಗಳು ಸಲ್ಲಿಕೆ ಆಗಿರುವ ಕಾರಣಕ್ಕಾಗಿ ಅನುಮತಿ ನೀಡುವ, ನೀಡುವುದರಿಂದ ಎದುರಾಗಬಹುದಾದ ವಿದ್ಯಮಾನಗಳ ಕುರಿತು ಅಧ್ಯಯನ ಕೈಗೊಂಡು ವರದಿ ನೀಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಸೇಡಂ ಸಹಾಯಕ ಆಯುಕ್ತರು ಹಾಗೂ ಚಿತ್ತಾಪುರ ತಹಶೀಲ್ದಾರ್ ಅವರಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದ್ದಾರೆ.

**ಯಾರ‍್ಯಾರ ಮನವಿಯಲ್ಲಿ ಏನಿದೆ?:** ಆರ್‌ಎಸ್‌ಎಸ್ ಮುಖಂಡರು ಕಲಬುರಗಿ ಹೈಕೋರ್ಟ್ ಪೀಠದ ನಿರ್ದೇಶನದಂತೆ ಅ.19ರಂದು ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅವರನ್ನು ಭೇಟಿ ಮಾಡಿ ಲಿಖಿತ ಮನವಿ ಪತ್ರ ಸಲ್ಲಿಸಲು ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿದ್ದರಾದರೂ ಆ ದಿನ ಜಿಲ್ಲಾಧಿಕಾರಿಗಳು ಕಚೇರಿಯಲ್ಲಿ ಲಭ್ಯವಾಗದ ಕಾರಣ ಮನವಿ ಪತ್ರವನ್ನು ಇ-ಮೇಲ್ ಮತ್ತು ವಾಟ್ಸಾಪ್ ಮೂಲಕ ಸಲ್ಲಿಸಿದ್ದರು.

ಈ ಮಧ್ಯೆ, ಜಿಲ್ಲಾಧಿಕಾರಿಗಳ ಕಚೇರಿ ತೆರಳಿದ ಆರ್‌ಎಸ್‌ಎಸ್ ಮುಖಂಡರು ಮನವಿ ಪತ್ರವನ್ನು ಮತ್ತೊಮ್ಮೆ ಅಧಿಕೃತವಾಗಿ ಸಲ್ಲಿಸಿದರು. ಒಟ್ಟು 600 ಸ್ವಯಂ ಸೇವಕರು ನ.2ರಂದು ಚಿತ್ತಾಪುರದಲ್ಲಿ ನಡೆಸಲು ಉದ್ದೇಶಿಸಿರುವ ಪಥ ಸಂಚಲನದಲ್ಲಿ ಪಾಲ್ಗೊಳ್ಳುತ್ತಿದ್ದು, ಎಲ್ಲರ ಕೈಯಲ್ಲೂ ಬಿದಿರಿನ ಲಾಠಿ ಇರಲಿವೆ ಎಂದು ಸ್ಪಷ್ಟವಾಗಿ ಆರ್‌ಎಸ್‌ಎಸ್ ಮುಖಂಡರು ಸಲ್ಲಿಸಿರುವ ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ ಎಂದು ಹೇಳಲಾಗಿದೆ.

ಇನ್ನೊಂದೆಡೆ, ಭೀಮ್ ಆರ್ಮಿ ಭಾರತ್ ಏಕತಾ ಮಿಷನ್ ರಾಜ್ಯ ಯುವ ಘಟಕದ ಮುಖಂಡರು ಸಲ್ಲಿಸಿರುವ ಮನವಿ ಪತ್ರದಲ್ಲಿಯೂ ಸಹ ಬಿದಿರಿನ ಕೋಲು, ಬೌದ್ಧ ಧರ್ಮದ ಪಂಚಶೀಲ ಧ್ವಜ ಹಾಗೂ ಸಂವಿಧಾನ ಪೀಠಿಕೆ ಹಿಡಿದು ಪಥ ಸಂಚಲನ ನಡೆಸುವುದಾಗಿ ಸ್ಪಷ್ಟವಾಗಿ ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

ಏತನ್ಮಧ್ಯೆ, ತನ್ನ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಕೂಡ ಕೈಯಲ್ಲಿ ಬಿದಿರಿನ ಕೋಲು ಹಾಗೂ ಸಂವಿಧಾನದ ಪೀಠಿಕೆ ಹಿಡಿದು ಪಥ ಸಂಚಲನ ಕೈಗೊಳ್ಳುವುದಾಗಿ ದಲಿತ ಪ್ಯಾಂಥರ್ ಚಿತ್ತಾಪುರ ಘಟಕದ ಮುಖಂಡರು ಸಲ್ಲಿಸಿರುವ ಮನವಿ ಪತ್ರದಲ್ಲಿ ಮನದಟ್ಟು ಮಾಡಿಸಿದ್ದಾರೆ. ಎಲ್ಲರ ಮನವಿ ಪತ್ರಗಳನ್ನು ಸ್ವೀಕರಿಸಿರುವ ಜಿಲ್ಲಾಧಿಕಾರಿಗಳು ಅನುಮತಿ ನೀಡುವ ನಿರ್ಧಾರವನ್ನು ಇನ್ನೂ ಗೌಪ್ಯವಾಗಿರಿಸಿದ್ದಾರೆ.

**ಇಂದು ಮತ್ತೆ ಹೈಕೋರ್ಟ್ ವಿಚಾರಣೆ**

**ಈ ಎಲ್ಲಾ ಬೆಳವಣಿಗೆಗಳ ಮಧ್ಯೆ, ಅ.18ರಂದು ಆರ್.ಎಸ್.ಎಸ್ ಸಲ್ಲಿಸಿದ ಅರ್ಜಿಯ ವಿಚಾರಣೆ ನಡೆಸಿದ್ದ ಕಲಬುರಗಿ ಹೈಕೋರ್ಟ್ ಪೀಠ ಇದೇ ಅರ್ಜಿಯ ಮುಂದುವರೆದ ವಿಚಾರಣೆಯನ್ನು ಶುಕ್ರವಾರ ಕೈಗೆತ್ತಿಕೊಳ್ಳಲಿದೆ. ಆರ್.ಎಸ್.ಎಸ್ ಪರವಾಗಿ ಅಶೋಕ ಪಾಟೀಲ್ ಅವರು ಸಲ್ಲಿಸಿರುವ ಅರ್ಜಿಯ ವಿಚಾರಣೆಯ ವೇಳೆ ರಾಜ್ಯ ಸರಕಾರವೂ ತನ್ನ ವರದಿಯನ್ನು ನ್ಯಾಯಪೀಠದ ಎದುರು ಸಲ್ಲಿಸಲಿದೆ. ಹೀಗಾಗಿ, ಅಕ್ಟೋಬರ್ 24ರಂದು ನಡೆಯಲಿರುವ ಹೈಕೋರ್ಟ್ ವಿಚಾರಣೆಯ ಮೇಲೆ ಎಲ್ಲರ ಗಮನ ಕೇಂದ್ರೀಕೃತಗೊಂಡಿದೆ. ಇದೇವೇಳೆ, ನ.18ರಂದು ಆರ್.ಎಸ್.ಎಸ್. ಪಥ ಸಂಚಲನ ನಡೆಯಬಹುದು ಎಂಬ ಲೆಕ್ಕಾಚಾರದಿಂದ ಚಿತ್ತಾಪುರ ಪಟ್ಟಣದಲ್ಲಿ ಏರ್ಪಡಿಸಿದ್ದ ಪೊಲೀಸ್ ಬಂದೋಬಸ್ತ್ ಇನ್ನೂ ಮುಂದುವರೆದಿದ್ದು, ಬಿಗಿ ವಾತಾವರಣ ಹಾಗೆಯೇ ಮುಂದುವರೆದಿದೆ.**

**ಒಂದೇ ದಿನ ಮೂರು ಮನವಿ**

# ಬಂಜಾರ ಯುವತಿಯರು ಹೂವು ತಂದು ದೀಪಾವಳಿ ಆಚರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ಪಟ್ಟಣದ ಗಂಗೂನಾಯಕ ತಾಂಡಾದಲ್ಲಿ ವಿಜೃಂಭಣೆಯಿಂದ ದೀಪಾವಳಿ ಹಬ್ಬವನ್ನು ಆಚರಿಸಿದರು. ಗಂಗೂನಾಯಕ ತಾಂಡಾದ ಯುವತಿಯರು ಬೆಳಿಗ್ಗೆ ಬುಟ್ಟಿಗಳನ್ನು ತೆಗೆದುಕೊಂಡು ಜಮೀನುಗಳಿಗೆ ತೆರಳಿ ಬರುವಾಗ ಹಾಡುಗಳು ಹಾಡುತ್ತಾ ಬುಟ್ಟೆಯಲ್ಲಿ ಹೂವು ತೆಗೆದುಕೊಂಡು ಸೇವಾಲಾಲ್ ಮಂದಿರಕ್ಕೆ ಆಗಮಿಸಿದರು, ತದನಂತರ ದೀಪಾವಳಿ ಹಬ್ಬದ ವಿವಿಧ ವಿಶೇಷತೆಗಳನ್ನು ಮಾಡಿ ಯುವತಿಯರು ಹೂವುಗಳನ್ನು ತಂದು ವಿವಿಧ ಬಗೆಯ ಉಡುಪುಗಳನ್ನು ತೊಟ್ಟು ಯುವತಿಯರು ಮಹಿಳೆಯರು ಒಂದೆಡೆ ಸೇರಿ ನೃತ್ಯ ಮಾಡಿ ಸಂಭ್ರಮಿಸಿದರು.

# ಸತೀಶ್ ಜಾರಕಿಹೊಳಿ ಸಿಎಂ ಆಗೋದಿಲ್ಲ: ಗೋವಿಂದ ಕಾರಜೋಳ

## ಸಿಎಂ ಬದಲಾವಣೆ ಚರ್ಚೆಗೆ ಹೈಕಮಾಂಡ್ ತಡೆ ನೀಡಿದೆ ಎಂದು ಶಾಸಕ ರಾಘವೇಂದ್ರ ಹಿಟ್ನಾಳ್ ಸ್ಪಷ್ಟನೆ

• ಉದಯವಾಹಿನಿ, ಹುಬ್ಬಳ್ಳಿ

ಸಚಿವ ಸತೀಶ್ ಜಾರಕಿಹೊಳಿ ಅವರು ಕಾಂಗ್ರೆಸ್‌ನಲ್ಲಿ ಯಾವುದೇ ಕಾರಣಕ್ಕೂ ಮುಖ್ಯಮಂತ್ರಿ ಆಗುವುದಿಲ್ಲ, ಈ ಚರ್ಚೆ ಕೇವಲ ಚರ್ಚೆಯಾಗಿಯೇ ಉಳಿಯಲಿದೆ ಎಂದು ಮಾಜಿ ಡಿಸಿಎಂ, ಬಿಜೆಪಿ ಹಿರಿಯ ನಾಯಕ ಗೋವಿಂದ ಕಾರಜೋಳ ಭವಿಷ್ಯ ನುಡಿದಿದ್ದಾರೆ.




ಹುಬ್ಬಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷವು ದಲಿತರನ್ನು ಎಂದಿಗೂ ಮುಖ್ಯಮಂತ್ರಿ ಮಾಡುವುದಿಲ್ಲ, ಬದಲಾಗಿ ಅವರನ್ನು ತಮ್ಮ ಮತ ಬ್ಯಾಂಕ್ ಆಗಿ ಮಾತ್ರ ಬಳಸಿಕೊಳ್ಳುತ್ತದೆ ಎಂದು ಅವರು ಗಂಭೀರ ಆರೋಪ ಮಾಡಿದ್ದಾರೆ.

**ಒಳ ಮೀಸಲಾತಿ ವಿಷಯದಲ್ಲಿ ಮೋಸದ ಆರೋಪ:** ಒಳ ಮೀಸಲಾತಿ ವಿಷಯ ಪ್ರಸ್ತಾಪಿಸಿದ ಅವರು, ಕಳೆದ 35 ವರ್ಷಗಳಿಂದ ನಾವು ಒಳ ಮೀಸಲಾತಿಗಾಗಿ ಹೋರಾಡುತ್ತಿದ್ದೇವೆ. ಇದನ್ನೇ ಅಸ್ತ್ರವಾಗಿಸಿಕೊಂಡು ಅಧಿಕಾರಕ್ಕೆ ಬಂದ ಕಾಂಗ್ರೆಸ್ ಈಗ ಅದರ ಜಾರಿಗೆ ಸಿದ್ಧವಿಲ್ಲ. ಪ್ರಧಾನಿ ಮೋದಿ ಅವರು ಒಳ ಮೀಸಲಾತಿಗೆ ಬದ್ಧ ಎಂದು ಹೇಳಿದ್ದರು. ಆದರೆ ಸಿದ್ದರಾಮಯ್ಯ ಸರ್ಕಾರವು ಈ ವಿಷಯವನ್ನು ಕಗ್ಗಂಟಾಗಿಯೇ ಇಟ್ಟು, ದಲಿತರಿಗೆ ಅನ್ಯಾಯ ಮತ್ತು ಮೋಸ ಮಾಡುವ ಪ್ರಕ್ರಿಯೆಯನ್ನು ಮುಂದುವರಿಸಿದೆ. ಈ ಸರ್ಕಾರ ಸಾಮಾಜಿಕ ನ್ಯಾಯದ ಹೆಸರಿನಲ್ಲಿ ಕಣ್ಣೊರೆಸುವ ತಂತ್ರ ಮಾಡುತ್ತಿದೆ ಮತ್ತು ಸಮಾಜದಲ್ಲಿ ವಿಷ ಬೀಜ ಬಿತ್ತುವ ಕೆಲಸ ಮಾಡುತ್ತಿದೆ, ಎಂದು ಆರೋಪಿಸಿದರು.

**ಸಿದ್ದರಾಮಯ್ಯನವರಿಗಾಗಿ ಅಭಿಮಾನಿಗಳ ಹರಕೆ:** ಈ ಎಲ್ಲಾ ರಾಜಕೀಯ ಬೆಳವಣಿಗೆಗಳ ನಡುವೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಐದು ವರ್ಷಗಳ ಅಧಿಕಾರಾವಧಿಯನ್ನು ಪೂರ್ಣಗೊಳಿಸಲಿ ಎಂದು ಯಾದಗಿರಿ ಜಿಲ್ಲೆಯ ಕಲ್ಯಾಣ ಕರ್ನಾಟಕ ಸಿದ್ದರಾಮಯ್ಯ ಅಭಿಮಾನಿಗಳ ಬ್ರಿಗೇಡ್ ವತಿಯಿಂದ ಹರಕೆ ಹೊರಲಾಗಿದೆ. ಮಹಾರಾಷ್ಟ್ರದ ಮಾಳಿಂಗರಾಯ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದ ಅಭಿಮಾನಿಗಳು, ಸಿದ್ದರಾಮಯ್ಯ ಅವರ ಆಡಳಿತಕ್ಕೆ ಯಾವುದೇ ಅಡೆತಡೆಗಳು ಬಾರದಿರಲಿ ಎಂದು ಪ್ರಾರ್ಥಿಸಿದರು.

**ಮಲ್ಲಿಕಾರ್ಜುನ ಖರ್ಗೆಯವರು 40 ವರ್ಷ ಹಾಗೂ ಡಾ. ಜಿ. ಪರಮೇಶ್ವರ್ 20 ವರ್ಷಗಳಿಂದ ಮುಖ್ಯಮಂತ್ರಿಯಾಗಲು ಹೋರಾಟ ಮಾಡುತ್ತಿದ್ದಾರೆ. ಆದರೆ ಕಾಂಗ್ರೆಸ್ ಅವರಿಗೆ ಅವಕಾಶ ನೀಡಲಿಲ್ಲ. ಸ್ವಾತಂತ್ರ್ಯ ಬಂದು 65 ವರ್ಷ ಆಡಳಿತ ನಡೆಸಿದರೂ ಕಾಂಗ್ರೆಸ್ ದಲಿತರನ್ನು ಸಿಎಂ ಮಾಡಲಿಲ್ಲ. ಅವರು ದಲಿತರಿಗೆ ಮೋಸ ಮಾಡುತ್ತಲೇ ಬಂದಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಸಿದ್ದರಾಮಯ್ಯ ಸರ್ಕಾರದ ಉದ್ದೇಶವೇ ಒಳಜಗಳ ಸೃಷ್ಟಿಸುವುದು. ದೆಹಲಿಯ ನಾಯಕರು ಇಲ್ಲಿನ ಬೆಳವಣಿಗೆಗಳನ್ನು ನೋಡುತ್ತಾ ಕಡಲೆ ತಿನ್ನುತ್ತಾ ಕೂರುತ್ತಾರೆ.**

**– ಗೋವಿಂದ ಕಾರಜೋಳ**
ಬಿಜೆಪಿ ಹಿರಿಯ ನಾಯಕ



**ಸಿಎಂ ಬದಲಾವಣೆ ಕುರಿತು ಯಾರೂ ಮಾತನಾಡಬಾರದೆಂದು ಸೂಚನೆ**



**ಮುಖ್ಯಮಂತ್ರಿ ಬದಲಾವಣೆ ಕುರಿತು ಯಾರೂ ಮಾತನಾಡಬಾರದೆಂದು ಹೈಕಮಾಂಡ್ ಕಟ್ಟುನಿಟ್ಟಿನ ಸೂಚನೆ ನೀಡಿದೆ ಎಂದು ಸ್ಪಷ್ಟಪಡಿಸಿದರು. ಡಾ. ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ. ಅವರು ಸಂಘಟನೆಗೆ ಸಮರ್ಥರು ಬೇಕು ಎಂಬರ್ಥದಲ್ಲಿ ಮಾತನಾಡಿದ್ದಾರೆ. ಸಿದ್ದರಾಮಯ್ಯನವರೇ ಮುಖ್ಯಮಂತ್ರಿಯಾಗಿ ಮುಂದುವರಿಯಬೇಕು ಎಂಬುದು ನನ್ನ ವೈಯಕ್ತಿಕ ಅಭಿಪ್ರಾಯವಾದರೂ, ಅಂತಿಮ ನಿರ್ಧಾರ ಹೈಕಮಾಂಡ್‌ಗೆ ಬಿಟ್ಟಿದ್ದು, ಎಂದರು.**

# ನಿನ್ನ ತಾಯಿಯ ಎದೆ ಹಾಲನ್ನು ಕುಡಿದಿದ್ದಾರೆ ನಮ್ಮೊಂದಿಗೆ ಹೋರಾಡು: ಮುನೀರ್‌ಗೆ ಚಾಲೆಂಜ್

**ಬಿಸಿ ತಟ್ಟಲು ಆರಂಭ**

**ಇಸ್ಲಾಮಾಬಾದ್:** ವಿಶ್ವದ ಉಗ್ರರಿಗೆ ಆಶ್ರಯತಾಣದಂತಿರುವ ಪಾಕಿಸ್ತಾನಕ್ಕೆ ಈಗ ತನ್ನದೇ ನೆಲದಲ್ಲಿ ನಡೆಯುತ್ತಿರುವ ಭಯೋತ್ಪಾದಕಾ ಕೃತ್ಯದ ಬಿಸಿ ತಟ್ಟಲು ಆರಂಭಿಸಿದೆ. ಒಂದು ಕಡೆ, ಬಲೂಚಿಸ್ಥಾನದ ಪಡೆಗಳು ಇನ್ನೊಂದು ಕಡೆ, ತೆಹ್ರಿಕ್-ಇ-ತಾಲಿಬಾನ್ ಪಾಕಿಸ್ತಾನದ ಬಣದ ಸತತ ಬೆದರಿಕೆಗಳು. ಪಾಕಿಸ್ತಾನದ ಸೇನಾ ಮುಖ್ಯಸ್ಥರಿಗೆ ಟಿಟಿಪಿ, ಬಹಿರಂಗ ಬೆದರಿಕೆಯನ್ನು ಹಾಕಿದೆ. ಪಾಕಿಸ್ತಾನದ ಆರ್ಮಿ ಮುಖ್ಯಸ್ಥ, ಫೀಲ್ಡ್ ಮಾರ್ಷಲ್ ಆಸೀಮ್ ಮುನೀರ್‌ಗೆ ಟಿಟಿಪಿ ಬಹಿರಂಗ ಸವಾಲನ್ನು ಹಾಕಿದೆ. ಆ ಸಂಘಟನೆಯ ಕಮಾಂಡರ್ ಒಬ್ಬರು, ನೀನು ಗಂಡಸಾಗಿದ್ದರೆ ನಮ್ಮನ್ನು ಎದುರಿಸು ಎಂದು ವಿಡಿಯೋ ಮೂಲಕ ಸವಾಲು ಹಾಕಿದ್ದಾನೆ.

ಅ. ಎಂಟರಂದು ಖೈಬರ್ ಪಂಖ್ತುಖ್ವಾದ ಕುರ್ರಂನಲ್ಲಿ ನಡೆದ ದಾಳಿಯಲ್ಲಿ 22 ಪಾಕಿಸ್ತಾನದ ಸೈನಿಕರನ್ನು ಕೊಂದಿರುವುದಾಗಿ ಟಿಟಿಪಿ ಸಂಘಟನೆ ಹೇಳಿಕೊಂಡಿದೆ. ಇಂತಹ ವಿದ್ಯಮಾನಗಳು, ನಿಮ್ಮ ಸೇನಾ ವೈಫಲ್ಯಕ್ಕೆ ಇರುವ ಸಾಕ್ಷಿ, ಇದು ಇತರ ಉಗ್ರಗಾಗಿ ಸಂಘಟನೆಗಳಿಗೆ ಉತ್ತೇಜನ ನೀಡಿದಂತಾಗುತ್ತದೆ ಎಂದು ಟಿಟಿಪಿ



ಕಮಾಂಡರ್ ವಿಡಿಯೋದಲ್ಲಿ ಹೇಳಿದ್ದಾನೆ. ಪಾಕಿಸ್ತಾನ, ಅಫ್ಘಾನಿಸ್ತಾನದ ತಾಲಿಬಾನ್ ಆಡಳಿತದ ನಡುವಿನ ಕದನ ವಿರಾಮ ಏರ್ಪಟ್ಟಿರುವ ಈ ಹೊತ್ತಿನಲ್ಲಿ ಬಿಡುಗಡೆಯಾಗಿರುವ ಈ ವಿಡಿಯೋ, ಪ್ರತಿಕೂಲ ಪರಿಣಾಮವನ್ನು ಬೀರುವ ಸಾಧ್ಯತೆ ದಟ್ಟವಾಗಿದೆ. ಪಾಕಿಸ್ತಾನದಲ್ಲಿ ಫುಲ್ ವೈರಲ್ ಆಗಿರುವ ಈ ವಿಡಿಯೋದಿಂದಾಗಿ, ಆಸಿಮ್ ಮುನೀರ್ ತೀವ್ರ ಮುಜುಗರಕ್ಕೆ ಒಳಗಾಗಿದ್ದಾರೆ.


ಈ ವಿಡಿಯೋದಲ್ಲಿ, ನೀನು ಗಂಡಸಾಗಿದ್ದರೆ, ನಿನ್ನ ತಾಯಿಯ ಎದೆ ಹಾಲನ್ನು ಕುಡಿದಿದ್ದರೆ, ನಮ್ಮನ್ನು ಎದುರಿಸು ಎಂದು ಸವಾಲನ್ನು ಪಾಕ್ ಸೇನಾ ಮುಖ್ಯಸ್ಥರಿಗೆ ಹಾಕಲಾಗಿದೆ. ಬೆದರಿಕೆ ಹಾಕಿರುವ ಕಮಾಂಡರ್ ಅನ್ನು ಕಮಾಂಡರ್ ಖಾಜಿಂ ಎಂದು ಗುರುತಿಸಲಾಗಿದೆ. ಈತನ ಮಾಹಿತಿಯನ್ನು ನೀಡಿದವರಿಗೆ ಹತ್ತು ಕೋಟಿ ರೂಪಾಯಿಯ ಬಹುಮಾನವನ್ನು ಪಾಕಿಸ್ತಾನದ ಸೇನೆ ಘೋಷಿಸಿದೆ. ಕಮಾಂಡರ್ ಖಾಜಿಂ ಮಾತನಾಡಿರುವ ಈ ವಿಡಿಯೋದಲ್ಲಿ, ಅಕ್ಟೋಬರ್ ಎಂಟರಂದು ಖೈಬರ್ ಪಂಖ್ತುಖ್ವಾದ ಭೀಕರ ದಾಳಿಯ ದೃಶ್ಯವನ್ನೂ ಹಾಕಲಾಗಿದೆ. ಅಪಾರ ಪ್ರಮಾಣದ ನಷ್ಟವನ್ನು ಪಾಕಿಸ್ತಾನದ ಸೇನೆಗೆ ಮಾಡಿದ್ದೇವೆ ಎಂದು ಇದರಲ್ಲಿ ಹೇಳಿಕೊಳ್ಳಲಾಗಿದೆ. ಅಲ್ಲದೇ, ಟಿಟಿಪಿಯ ದಾಳಿಯಲ್ಲಿ ವಶ ಪಡಿಸಿಕೊಂಡ ಶಸ್ತ್ರಾಸ್ತ್ರ ಮತ್ತು ವಾಹನಗಳನ್ನೂ ತೋರಿಸಲಾಗಿದೆ. ಟಿಟಿಪಿ ದಾಳಿಯನ್ನು ಹನ್ನೊಂದು ನಮ್ಮ ಸೈನಿಕರು ಹತರಾಗಿದ್ದಾರೆ ಎಂದು ಪಾಕಿಸ್ತಾನದ ಆರ್ಮಿ ಕೂಡ ಒಪ್ಪಿಕೊಂಡಿತ್ತು. ಪಾಕಿಸ್ತಾನ, ಅಫ್ಘಾನಿಸ್ತಾನದ ನಡುವೆ ಉದ್ವಿಗ್ನತೆ ತೀವ್ರ ರೂಪ ಪಡೆಯುತ್ತಿದ್ದ ವೇಳೆ, ಕತಾರ್ ಮತ್ತು ಟರ್ಕಿ ದೇಶದ ಮಧ್ಯಸ್ಥಿಕೆಯಿಂದ ಕದನ ವಿರಾಮ ಏರ್ಪಟ್ಟಿತ್ತು. ಈ ಎರಡು ದೇಶಗಳು ವಿಶೇಷ ಮುತುವರ್ಜಿ ಪಾಕ್ - ಅಫ್ಘಾನ್ ನಡುವೆ ಒಪ್ಪಂದವನ್ನು ಮಾಡಿಸಿದ್ದವು.

ಈಗ, ಈ ಬೆದರಿಕೆಯ ವಿದ್ಯಮಾನವನ್ನು ಪಾಕಿಸ್ತಾನ, ಗಂಭೀರವಾಗಿ ತೆಗೆದುಕೊಂಡಿದೆ. ಟಿಟಿಪಿಯಂತಹ ಉಗ್ರ ಸಂಘಟನೆಯ ವಿರುದ್ಧ ಕ್ರಮ ತೆಗೆದುಕೊಂಡರೆ ಮಾತ್ರ ಕದನ ವಿರಾಮ ಜಾರಿಯಲ್ಲಿ ಇರುತ್ತದೆ ಎಂದು ಪಾಕಿಸ್ತಾನ ಈಗಾಗಲೇ ಸ್ಪಷ್ಟನೆಯನ್ನು ನೀಡಿದೆ. ಅಫ್ಘಾನಿಸ್ತಾನದ ನೆಲೆಯಿಂದ, ಈ ಉಗ್ರ ಸಂಘಟನೆಗಳು ಕಾರ್ಯ ನಿರ್ವಹಿಸುತ್ತಿದೆ ಎನ್ನುವುದು ಪಾಕಿಸ್ತಾನದ ಆರೋಪವಾಗಿದೆ. ಯುದ್ಧಭೂಮಿಯಲ್ಲಿ ಟಿಟಿಪಿಗೆ ಸಿಗುತ್ತಿರುವ ಯಶಸ್ಸು, ಇನ್ನೊಂದು ಕಡೆ ಬಲೂಚಿಸ್ಥಾನ ಲಿಬರೇಷನ್ ನಡೆಸುತ್ತಿರುವ ವ್ಯವಸ್ಥಿತ ಹಿಂಸಾ ಕೃತ್ಯಗಳು, ಇತರ ಉಗ್ರ ಸಂಘಟನೆಗಳಿಗೂ ಉತ್ತೇಜನ ನೀಡಿದಂತಾಗುತ್ತದೆ. ಪರಿಸ್ಥಿತಿ ಕೈಮೀರಿ ಹೋಗುವ ಮುನ್ನ ಎಚ್ಚೆತ್ತುಕೊಳ್ಳಿ, ಎಂದು ಪಾಕಿಸ್ತಾನದ ಮಾಧ್ಯಮಗಳು, ಸರ್ಕಾರಕ್ಕೆ ಎಚ್ಚರಿಕೆ ನೀಡಿವೆ.

# ಆಸಿಯಾನ್ ಶೃಂಗಕ್ಕೆ ಮೋದಿ ಗೈರು ವರ್ಚುವಲ್ ಭಾಷಣ

**ನವದೆಹಲಿ:** ಮುಂದಿನ ವಾರ ಮಲೇಷ್ಯಾದಲ್ಲಿ ನಡೆಯಲಿರುವ ಆಸಿಯಾನ್-ಭಾರತ ಶೃಂಗಸಭೆಯಲ್ಲಿ ವರ್ಚುವಲ್ ಆಗಿ ಭಾಗವಹಿಸುವುದಾಗಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಈ ವಿಷಯವನ್ನು ದೂರವಾಣಿ ಕರೆಯಲ್ಲಿ ಮೋದಿ ಮಲೇಷ್ಯಾದ ಪ್ರಧಾನಿ ಅನ್ವರ್ ಇಬ್ರಾಹಿಂ ಅವರಿಗೆ ಈ ವಿಷಯವನ್ನು ತಿಳಿಸಿದರು. ನನ್ನ ಆತ್ಮೀಯ ಸ್ನೇಹಿತ, ಮಲೇಷ್ಯಾದ ಪ್ರಧಾನಿ ಅನ್ವರ್ ಇಬ್ರಾಹಿಂ ಅವರೊಂದಿಗೆ ಆತ್ಮೀಯ ಸಂಭಾಷಣೆ ನಡೆಸಿದೆ. ಮಲೇಷ್ಯಾದ ಆಸಿಯಾನ್ ಅಧ್ಯಕ್ಷತೆಗಾಗಿ ಅವರನ್ನು ಅಭಿನಂದಿಸಿದೆ ಮತ್ತು ಮುಂಬರುವ ಶೃಂಗಸಭೆಗಳ ಯಶಸ್ಸಿಗೆ ಶುಭಾಶಯಗಳನ್ನು ತಿಳಿಸಿದೆ ಎಂದು ಮೋದಿ xನಲ್ಲಿ ತಿಳಿಸಿದ್ದಾರೆ.

ಆಸಿಯಾನ್-ಭಾರತ ಶೃಂಗಸಭೆಯಲ್ಲಿ ವರ್ಚುವಲ್ ಆಗಿ ಸೇರಲು ಮತ್ತು ಆಸಿಯಾನ್-ಭಾರತ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಆಳಗೊಳಿಸಲು ಎದುರು ನೋಡುತ್ತಿದ್ದೇನೆ ಎಂದು ಮೋದಿ ಹೇಳಿದರು. ಆಸಿಯಾನ್ ಸಭೆಗಳು ಅಕ್ಟೋಬರ್ 26-28 ರಿಂದ ನಿಗದಿಯಾಗಿವೆ. ಆಸಿಯಾನ್ ಗುಂಪಿನ ಸಂವಾದ ಪಾಲುದಾರರಾದ ಹಲವಾರು ದೇಶಗಳ ನಾಯಕರನ್ನು ಮಲೇಷ್ಯಾ ಆಹ್ವಾನಿಸಿದೆ. ಟ್ರಂಪ್ ಅಕ್ಟೋಬರ್ 26 ರಂದು ಎರಡು ದಿನಗಳ ಪ್ರವಾಸಕ್ಕಾಗಿ ಕೌಲಾಂಪುರಕ್ಕೆ ಪ್ರಯಾಣಿಸಲಿದ್ದಾರೆ. 1992ರಲ್ಲಿ ವಲಯ ಪಾಲುದಾರಿಕೆ ಸ್ಥಾಪನೆಯೊಂದಿಗೆ ಆಸಿಯಾನ್-ಭಾರತ ಸಂವಾದ ಸಂಬಂಧಗಳು ಪ್ರಾರಂಭವಾದವು. ಇದು ಡಿಸೆಂಬರ್ 1995 ರಲ್ಲಿ ಪೂರ್ಣ ಸಂವಾದ ಪಾಲುದಾರಿಕೆಗೆ ಮತ್ತು 2002ರಲ್ಲಿ ಶೃಂಗಸಭೆ ಮಟ್ಟದ ಪಾಲುದಾರಿಕೆಗೆ ಏರಿತು. ಈ ಸಂಬಂಧಗಳನ್ನು 2012ರಲ್ಲಿ ಕಾರ್ಯತಂತ್ರದ ಪಾಲುದಾರಿಕೆಗೆ ಏರಿಸಲಾಯಿತು.



ಆಸಿಯಾನ್‌ನ 10 ಸದಸ್ಯ ರಾಷ್ಟ್ರಗಳು ಇಂಡೋನೇಷ್ಯಾ, ಮಲೇಷ್ಯಾ, ಫಿಲಿಪೈನ್ಸ್, ಸಿಂಗಾಪುರ್, ಥೈಲ್ಯಾಂಡ್, ಬ್ರೂನಿ, ವಿಯೆಟ್ನಾಂ, ಲಾವೋಸ್, ಮ್ಯಾನ್ಮಾರ್ ಮತ್ತು ಕಾಂಬೋಡಿಯಾ. ಭಾರತ ಮತ್ತು ಆಸಿಯಾನ್ ನಡುವಿನ ದ್ವಿಪಕ್ಷೀಯ ಸಂಬಂಧಗಳು ಕಳೆದ ಕೆಲವು ವರ್ಷಗಳಿಂದ ಗಮನಾರ್ಹ ಏರಿಕೆಯನ್ನು ಕಂಡಿದ್ದು, ವ್ಯಾಪಾರ ಮತ್ತು ಹೂಡಿಕೆ ಹಾಗೂ ಭದ್ರತೆ ಮತ್ತು ರಕ್ಷಣಾ ಕ್ಷೇತ್ರಗಳಲ್ಲಿ ಸಹಕಾರವನ್ನು ಹೆಚ್ಚಿಸುವತ್ತ ಗಮನ ಹರಿಸಲಾಗಿದೆ.

# ಗಗನಕ್ಕೇರಿದ ಕಚ್ಚಾ ತೈಲ ಬೆಲೆ


## ರಷ್ಯಾದ ಬೃಹತ್ ತೈಲ ಕಂಪನಿಗಳ ಮೇಲೆ ನಿರ್ಬಂಧ

**ವಾಷಿಂಗ್ಟನ್:** ಉಕ್ರೇನ್ ಯುದ್ಧದ ವಿಚಾರದಲ್ಲಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಪ್ರಾಮಾಣಿಕವಾಗಿ ನಡೆದುಕೊಳ್ಳುತ್ತಿಲ್ಲ ಎಂದು ಅಮೆರಿಕ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಇದರ ಬೆನ್ನಲ್ಲೇ ರಷ್ಯಾದ ಎರಡು ಅತಿದೊಡ್ಡ ತೈಲ ಕಂಪನಿಗಳ ಮೇಲೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕಠಿಣ ನಿರ್ಬಂಧಗಳನ್ನು ವಿಧಿಸಿದ್ದಾರೆ.

ಈ ದಿಢೀರ್ ಬೆಳವಣಿಗೆಯಿಂದಾಗಿ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಗಣನೀಯವಾಗಿ ಏರಿಕೆಯಾಗಿದೆ. ಟ್ರಂಪ್, ಪುಟಿನ್ ನಡುವೆ ಬುಡಾಪೆಸ್ಟ್‌ನಲ್ಲಿ ನಡೆಯಬೇಕಿದ್ದ ಮಹತ್ವದ ಶೃಂಗಸಭೆ ರದ್ದಾದ ಕೇವಲ ಒಂದು ದಿನದ ಬಳಿಕ ಅಮೆರಿಕ ಈ ಕಠಿಣ ಕ್ರಮವನ್ನು ಪ್ರಕಟಿಸಿದೆ.

**ಪುಟಿನ್‌ಗೆ ಟ್ರಂಪ್ ಶಾಕ್**

ಮಾಸ್ಕೋದೊಂದಿಗೆ ಕದನ ವಿರಾಮ ಮಾತುಕತೆಗಳಲ್ಲಿ ಯಾವುದೇ ಪ್ರಗತಿ ಕಾಣದ ಹಿನ್ನೆಲೆಯಲ್ಲಿ ವಾಷಿಂಗ್ಟನ್ ಈ ನಿರ್ಧಾರಕ್ಕೆ ಬಂದಿದೆ. ಯುದ್ಧಕ್ಕೆ ಹಣಕಾಸು ಒದಗಿಸುತ್ತಿರುವ ರಷ್ಯಾದ ಎರಡು ಅತಿದೊಡ್ಡ ತೈಲ ಕಂಪನಿಗಳಾದ ರಾಸ್ನೆಫ್ಟ್ ಮತ್ತು ಲುಕ್‌ಆಯಿಲ್ ಮೇಲೆ ನಿರ್ಬಂಧ ಹೇರಲಾಗಿದೆ ಎಂದು ಅಮೆರಿಕದ ಹಣಕಾಸು ಸಚಿವ ಸ್ಕಾಟ್‌ಬೆಸೆಂಟ್ ಖಚಿತಪಡಿಸಿದ್ದಾರೆ. ಅಧ್ಯಕ್ಷ ಪುಟಿನ್ ಈ ಅರ್ಥಹೀನ ಯುದ್ಧವನ್ನು ಕೊನೆಗಾಣಿಸಲು ನಿರಾಕರಿಸುತ್ತಿರುವ ಕಾರಣ, ಕ್ರೆಮ್ಲಿನ್‌ನ ಯುದ್ಧ ಯಂತ್ರಕ್ಕೆ ಹಣ ನೀಡುವ ಈ ಕಂಪನಿಗಳ ಮೇಲೆ ನಿರ್ಬಂಧ ವಿಧಿಸಲಾಗುತ್ತಿದೆ. ಅಗತ್ಯಬಿದ್ದರೆ ಮತ್ತಷ್ಟು ಕಠಿಣ ಕ್ರಮಗಳನ್ನು ತೆಗೆದುಕೊಳ್ಳಲು ನಾವು ಸಿದ್ಧ, ಎಂದು ಅವರು ಎಚ್ಚರಿಸಿದ್ದಾರೆ. ಕಳೆದ ಕೆಲವು ತಿಂಗಳುಗಳಿಂದ ಅಧ್ಯಕ್ಷ ಟ್ರಂಪ್, ಶಾಂತಿ



**ರಷ್ಯಾದ ವಿರುದ್ಧ ಹೊಸ ನಿರ್ಬಂಧ**

**ಉಕ್ರೇನ್ ಯುದ್ಧದ ವಿಚಾರದಲ್ಲಿ ರಷ್ಯಾ ಅಧ್ಯಕ್ಷ ಪುಟಿನ್ ಪ್ರಾಮಾಣಿಕತೆ ತೋರುತ್ತಿಲ್ಲ ಎಂದು ಆರೋಪಿಸಿರುವ ಅಮೆರಿಕ, ರಷ್ಯಾದ ಎರಡು ಬೃಹತ್ ತೈಲ ಕಂಪನಿಗಳ ಮೇಲೆ ಕಠಿಣ ನಿರ್ಬಂಧಗಳನ್ನು ಹೇರಿದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಪುಟಿನ್ ನಡುವಿನ ಶೃಂಗಸಭೆ ರದ್ದಾದ ಬೆನ್ನಲ್ಲೇ ಈ ಕ್ರಮ ಕೈಗೊಳ್ಳಲಾಗಿದ್ದು, ಇದರಿಂದ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಗಣನೀಯವಾಗಿ ಏರಿಕೆ ಆಗಿದೆ. ಯುರೋಪಿಯನ್ ಯೂನಿಯನ್ ಕೂಡ ರಷ್ಯಾದ ವಿರುದ್ಧ ಹೊಸ ನಿರ್ಬಂಧಗಳನ್ನು ಘೋಷಿಸಿದೆ.**

ಮಾತುಕತೆಗೆ ಅವಕಾಶ ನೀಡುವ ಸಲುವಾಗಿ ರಷ್ಯಾದ ಮೇಲೆ ಹೊಸ ನಿರ್ಬಂಧಗಳನ್ನು ಹೇರಲು ಹಿಂದೇಟು ಹಾಕುತ್ತಿದ್ದರು. ಆದರೆ, ಕಳೆದ ಗುರುವಾರ ಪುಟಿನ್ ಜೊತೆಗಿನ ದೂರವಾಣಿ ಸಂಭಾಷಣೆಯ ನಂತರ ಅವರ ತಾಳ್ಮೆ ಕಟ್ಟೆಯೊಡೆದಿದೆ. ನಾವು ಆಶಿಸಿದಂತೆ ಅಧ್ಯಕ್ಷ ಪುಟಿನ್ ಪ್ರಾಮಾಣಿಕವಾಗಿ ಮಾತುಕತೆಗೆ ಬರುತ್ತಿಲ್ಲ ಎಂದು ಬೆಸೆಂಟ್ ಹೇಳಿದ್ದಾರೆ. ಇದೇ ವೇಳೆ, ಯುರೋಪಿಯನ್ ಯೂನಿಯನ್ ಕೂಡ ರಷ್ಯಾದ ಮೇಲೆ ಹೊಸ ನಿರ್ಬಂಧಗಳನ್ನು ವಿಧಿಸುವುದಾಗಿ ಘೋಷಿಸಿದೆ. 2027ರ ವೇಳೆಗೆ ರಷ್ಯಾದಿಂದ ದ್ರವೀಕೃತ ನೈಸಗಿಕ ಅನಿಲ (ಎಲ್‌ಎನ್‌ಜಿ) ಆಮದನ್ನು ನಿಷೇಧಿಸುವುದು

- ರಷ್ಯಾದ 2 ಬೃಹತ್ ತೈಲ ಕಂಪನಿಗಳಾದ ರಾಸ್ನೆಫ್ಟ್ ಮತ್ತು ಲುಕ್‌ಆಯಿಲ್ ಮೇಲೆ ಅಮೆರಿಕ ನಿರ್ಬಂಧ
- ಉಕ್ರೇನ್ ಶಾಂತಿ ಮಾತುಕತೆಯಲ್ಲಿ ಪುಟಿನ್ ಪ್ರಾಮಾಣಿಕವಾಗಿಲ್ಲ ಎಂದು ಟ್ರಂಪ್ ಸರ್ಕಾರದ ಆರೋಪ
- ಬುಡಾಪೆಸ್ಟ್‌ನಲ್ಲಿ ನಡೆಯಬೇಕಿದ್ದ ಟ್ರಂಪ್-ಪುಟಿನ್ ಮಹತ್ವದ ಶೃಂಗಸಭೆ ರದ್ದಿನ ಬೆನ್ನಲ್ಲೇ ಈ ಕ್ರಮ
- ನಿರ್ಬಂಧದ ಬಳಿಕ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ದರದಲ್ಲಿ ಭಾರೀ ಏರಿಕೆ
- ರಷ್ಯಾದ ಮೇಲೆ ಯುರೋಪಿಯನ್ ಯೂನಿಯನ್‌ನಿಂದಲೂ ಹೊಸ ನಿರ್ಬಂಧಗಳ ಘೋಷಣೆ

ಮತ್ತು ರಷ್ಯಾದ ತೈಲ ಟ್ಯಾಂಕರ್‌ಗಳನ್ನು ಕಪ್ಪುಪಟ್ಟಿಗೆ ಸೇರಿಸುವುದು ಇದರಲ್ಲಿ ಸೇರಿದೆ.

ಈ ನಿರ್ಬಂಧಗಳ ಸುದ್ದಿಯಿಂದಾಗಿ ಅಂತಾರಾಷ್ಟ್ರೀಯ ತೈಲ ಮಾರುಕಟ್ಟೆಯಲ್ಲಿ ತಲ್ಲಣ ಉಂಟಾಗಿದೆ. ಬ್ರೆಂಟ್ ಕಚ್ಚಾತೈಲದ ಬೆಲೆ ಪ್ರತಿ ಬ್ಯಾರೆಲ್‌ಗೆ 2.65 ಡಾಲರ್‌ಗಳಷ್ಟು ಏರಿಕೆಯಾಗಿ 63.97 ಡಾಲರ್‌ಗೆ ತಲುಪಿದೆ. ಅದೇ ರೀತಿ, ಡಬ್ಲ್ಯುಟಿಐ ಕಚ್ಚಾ ತೈಲದ ಬೆಲೆಯು 2.14 ಡಾಲರ್ ಹೆಚ್ಚಳವಾಗಿ 59.38 ಡಾಲರ್‌ಗೆ ಮುಟ್ಟಿದೆ. ಅಮೆರಿಕದಲ್ಲಿ ಇಂಧನ ಬೇಡಿಕೆ ಹೆಚ್ಚುತ್ತಿರುವುದು ಮತ್ತು ಕಚ್ಚಾ ತೈಲ ದಾಸ್ತಾನು ಕಡಿಮೆಯಾಗಿರುವುದು ಕೂಡ ಬೆಲೆ ಏರಿಕೆಗೆ ಕಾರಣವಾಗಿದೆ.

# ಮಿನಿ ನ್ಯೂಸ್

## ಹಳಿ ದಾಟುವಾಗ ರೈಲು ಹರಿದು ನಾಲ್ವರ ದುರ್ಮರಣ

**ಬೇಗುಸರಾಯ್:** ಹಳಿ ದಾಟುತ್ತಿದ್ದವರ ಮೇಲೆ ರೈಲು ಹರಿದ ಪರಿಣಾಮ ತಾಯಿ-ಮಗಳು ಸೇರಿದಂತೆ ನಾಲ್ವರು ಬಲಿಯಾಗಿರುವ ಘಟನೆ ಬಿಹಾರದಲ್ಲಿ ನಡೆದಿದೆ. ಬಿಹಾರದ ಬೇಗುಸರೈ ಜಿಲ್ಲೆಯಲ್ಲಿ ಹಳಿ ದಾಟಲು ಯತ್ನಿಸುತ್ತಿದ್ದ ಮಹಿಳೆ ಮತ್ತು ಅವರ ಮಗಳು ಸೇರಿದಂತೆ ನಾಲ್ವರು ರೈಲು ಹರಿದು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಸಾಹೇಬ್‌ಪುರ ಕಮಲ್ ಪೊಲೀಸ್ ಠಾಣೆಯ ಎಸ್‌ಎಚ್‌ಒ ಸಿಂಟು ಕುಮಾರ್ ಅವರು ತಡರಾತ್ರಿ ಬರೌನಿ-ಕತಿಹಾರ್ ವಿಭಾಗದಲ್ಲಿ ಈ ಘಟನೆ ಸಂಭವಿಸಿದೆ ಎಂದು ಹೇಳಿದ್ದಾರೆ. ರಾಹುವಾ ಗ್ರಾಮದ ನಾಲ್ವರು ನಿವಾಸಿಗಳು ಹತ್ತಿರದ ಪ್ರದೇಶದಲ್ಲಿ ನಡೆದ ಜಾತ್ರೆಯಲ್ಲಿ ಭಾಗವಹಿಸಿ ಮನೆಗೆ ಹಿಂತಿರುಗುತ್ತಿದ್ದಾಗ, ಅಮ್ರಪಾಲಿ ಎಕ್ಸ್‌ಪ್ರೆಸ್ ಹಾದುಹೋಗುವಾಗ ರೈಲ್ವೆ ಹಳಿಗಳನ್ನು ದಾಟಲು ಪ್ರಯತ್ನಿಸಿದರು ಎಂದು ಎಸ್‌ಎಚ್‌ಒ ಹೇಳಿದರು. ಮೃತರನ್ನು ರೀತಾ ದೇವಿ (40), ಅವರ ಮಗಳು ರೋಶ್ನಿ ಕುಮಾರಿ (14), ಏಳು ವರ್ಷದ ಆರೋಹಿ ಕುಮಾರಿ ಮತ್ತು ಅವರ ಚಿಕ್ಕಪ್ಪ ಧರ್ಮ ದೇವ್ ಮಹ್ತೊ (35) ಎಂದು ಗುರುತಿಸಲಾಗಿದೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ. ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಮತ್ತು ಅವರ ಕುಟುಂಬ ಸದಸ್ಯರಿಗೆ ಮಾಹಿತಿ ನೀಡಲಾಗಿದೆ.

## ಚಿನ್ನ ನಾಪತ್ತೆ ಪ್ರಕರಣ: ಮಾಜಿ ಆಡಳಿತಾಧಿಕಾರಿ ಎಸ್‌ಐಟಿ ವಶಕ್ಕೆ

**ಪತ್ತನಂತಿಟ್ಟ:** ಶಬರಿಮಲೆ ದೇವಸ್ಥಾನದಿಂದ ಕಾಣೆಯಾದ ಚಿನ್ನ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ ಗುರುವಾರ ಮಾಜಿ ಆಡಳಿತ ಅಧಿಕಾರಿ ಬಿ ಮುರಾರಿ ಬಾಬು ಅವರನ್ನು ವಶಕ್ಕೆ ಪಡೆದಿದೆ ಎಂದು ಮೂಲಗಳು ತಿಳಿಸಿವೆ. ಚಿನ್ನ ನಾಪತ್ತೆ ಪ್ರಕರಣದ ನಂತರ ತಿರುವಾಂಕೂರು ದೇವಸ್ವಂ ಮಂಡಳಿಯಿಂದ ಅಮಾನತುಗೊಂಡಿದ್ದ ಬಾಬು ಅವರನ್ನು ತಡರಾತ್ರಿ ಚಂಗನಶ್ಶೇರಿಯಲ್ಲಿರುವ ಅವರ ನಿವಾಸದಿಂದ ವಶಕ್ಕೆ ಪಡೆಯಲಾಗಿದೆ ಎಂದು ಅವರು ತಿಳಿಸಿದ್ದಾರೆ. ನಂತರ ಅವರನ್ನು ವಿಚಾರಣೆಗಾಗಿ ತಿರುವನಂತಪುರಂನಲ್ಲಿರುವ ಅಪರಾಧ ಶಾಖೆಯ ಕಚೇರಿಗೆ ಸ್ಥಳಾಂತರಿಸಲಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬಾಬು ಅವರ ಸಂಬಂಧಿಕರು ಇಂದು ಬೆಳಿಗ್ಗೆ ಅಪರಾಧ ಶಾಖೆಯ ಕಚೇರಿಗೆ ತಲುಪಿದರು. ದ್ವಾರಪಾಲಕ ವಿಗ್ರಹಗಳ ಚಿನ್ನದ ಹೊದಿಕೆಯ ತಟ್ಟೆಗಳು ಮತ್ತು ದೇವಾಲಯದ ಶ್ರೀಕೋವಿಲ್ ಬಾಗಿಲು ಚೌಕಟ್ಟುಗಳಿಂದ ಚಿನ್ನ ನಾಪತ್ತೆಯಾದ ಎರಡು ಪ್ರಕರಣಗಳಲ್ಲಿ ಅವರು ಆರೋಪಿಯಾಗಿದ್ದಾರೆ.

2019ರಲ್ಲಿ, ಪ್ರಮುಖ ಆರೋಪಿ ಉನ್ನಿಕೃಷ್ಣನ್ ಪಾಟಿ, ದ್ವಾರಪಾಲಕ ವಿಗ್ರಹಗಳಿಗೆ ಎಲೆಕ್ಟ್ರೋಪ್ಲೇಟಿಂಗ್ ಮಾಡಲು ಟಿಡಿಬಿಗೆ ಪ್ರಸ್ತಾವನೆ ಸಲ್ಲಿಸಿದಾಗ, ಬಾಬು ಆ ಪ್ರಸ್ತಾವನೆಯನ್ನು ಮಂಡಳಿಗೆ ರವಾನಿಸಿದರು, ಚಿನ್ನದ ಹೊದಿಕೆಯ ತಟ್ಟೆಗಳು ತಾಮ್ರದಿಂದ ಮಾಡಲ್ಪಟ್ಟಿವೆ ಎಂದು ಹೇಳಿಕೊಂಡರು. 2025ರಲ್ಲಿ ಅವರು ಪಾಟಿಯಿಂದ ಮತ್ತೆ ಇದೇ ರೀತಿಯ ಪ್ರಸ್ತಾವನೆಯನ್ನು ಕಳುಹಿಸಿದ್ದಾರೆ ಎಂದು ವರದಿಯಾಗಿದೆ. ಇತ್ತೀಚೆಗೆ ಸೇವೆಯಿಂದ ಅಮಾನತುಗೊಂಡಾಗ ಬಾಬು ಹರಿಪಾಡ್‌ನಲ್ಲಿ ಉಪ ದೇವಸ್ವಂ ಆಯುಕ್ತರಾಗಿ ಸೇವೆ ಸಲ್ಲಿಸುತ್ತಿದ್ದರು.


ಪ್ರಾಥಮಿಕ ತನಿಖೆ ನಡೆಸಿದ ಟಿಡಿಬಿ ವಿಜಿಲೆನ್ಸ್, ದ್ವಾರಪಾಲಕ ವಿಗ್ರಹಗಳು, ಶ್ರೀಕೋವಿಲ್‌ನ ಬಾಗಿಲು ಚೌಕಟ್ಟುಗಳಿಂದ ಚಿನ್ನವನ್ನು ತೆಗೆಯುವಲ್ಲಿ ಕೆಲವು ಮಂಡಳಿಯ ಅಧಿಕಾರಿಗಳ ಭಾಗಿಯಾಗಿರುವ ಬಗ್ಗೆ ಅನುಮಾನ ವ್ಯಕ್ತಪಡಿಸುವ ವರದಿಯನ್ನು ಸಲ್ಲಿಸಿತ್ತು. ಪಾಟಿಗೆ ಚಿನ್ನದ ಹೊದಿಕೆಯ ತಟ್ಟೆಗಳನ್ನು ಹಸ್ತಾಂತರಿಸುವಲ್ಲಿ ಬಾಬು ಮತ್ತು ಇತರ ಏಳು ಟಿಡಿಬಿ ಅಧಿಕಾರಿಗಳ ಗಂಭೀರ ಲೋಪಗಳನ್ನು ವಿಜಿಲೆನ್ಸ್ ಸಹ ಎತ್ತಿ ತೋರಿಸಿದೆ.

# ಅಯ್ಯಪ್ಪನಿಗೆ ಕೈಮುಗಿಯದ ಸಚಿವರ ವಿರುದ್ಧ ಭಾರೀ ಟೀಕೆ

**ತಿರುವನಂತಪುರಂ:** ದೇವರು, ದೈವಗಳನ್ನು ನಂಬದ ನೀವು ಯಾಕೆ ದೇವಸ್ವಂ ಬೋರ್ಡ್ ಸಚಿವರಾಗಿದ್ದೀರಿ ಎಂದು ಕೇರಳ ಬಿಜೆಪಿ ಘಟಕದ ಪ್ರಧಾನ ಕಾರ್ಯದರ್ಶಿ ಅನೂಪ್ ಆಂಟನಿ ಜೋಸೆಫ್, ಕೇರಳದ ಸಚಿವರನ್ನು ಪ್ರಶ್ನಿಸಿದ್ದಾರೆ. ಶಬರಿಮಲೆಯಲ್ಲಿ ನಡೆದ ವಿದ್ಯಮಾನವನ್ನು ಉಲ್ಲೇಖಿಸಿ, ಅವರು ಟ್ವೀಟ್ ಮಾಡಿದ್ದಾರೆ.

ದೇವರನ್ನು ನಂಬುವುದು ಬಿಡುವುದು ಅವರವರಿಗೆ ಬಿಟ್ಟ ವಿಚಾರ, ಅದನ್ನು ನಾನು ಪ್ರಶ್ನಿಸಲು ಹೋಗುವುದಿಲ್ಲ. ಆದರೆ, ದೇವರ ಖಾತೆಯನ್ನು ನಿಭಾಯಿಸುವ ಮುನ್ನ ಎಂತವರಿಗೆ ಆ ಸಚಿವ ಸ್ಥಾನವನ್ನು ಕೊಡಬೇಕು ಎನ್ನುವ ಜ್ಞಾನ ನಿಮ್ಮ ಮುಖ್ಯಮಂತ್ರಿಗಳಿಗೆ ಇರಬೇಕಲ್ಲವೇ ಎಂದು ಅನೂಪ್, ಕೇರಳ ಸರ್ಕಾರವನ್ನು ಪ್ರಶ್ನಿಸಿದ್ದಾರೆ.

**ಏನಿದು ವಿದ್ಯಮಾನ:** ದೇಶದ ಅತ್ಯಂತ ಹಳೆಯ ಮತ್ತು ಪುರಾಣ ಪ್ರಸಿದ್ದ ದೇವಾಲಯಗಳಲ್ಲಿ ಒಂದಾದ, ಕೇರಳ ರಾಜ್ಯದ ಪತ್ತನಂತಿಟ್ಟ ಜಿಲ್ಲೆಯಲ್ಲಿರುವ ಶಬರಿಮಲೆ ಅಯ್ಯಪ್ಪಸ್ವಾಮಿ ದೇವಾಲಯಕ್ಕೆ



ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ನೀಡಿದ್ದರು. ಶಿಷ್ಟಾಚಾರದ ಭಾಗವಾಗಿ, ರಾಜ್ಯದ ಸಚಿವರು ಅವರ ಜೊತೆಗಿದ್ದರು. ಕೇರಳದ ಮುಜರಾಯಿ ಇಲಾಖೆಯ ಸಚಿವರಾದ ವಿಎನ್ ವಾಸವನ್, ರಾಷ್ಟ್ರಪತಿಗಳ ಜೊತೆಗೆ ಇದ್ದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಶಬರಿಮಲೆ ದೇವಸ್ಥಾನಕ್ಕೆ ಹೋಗಿದ್ದರು. ಆ ಮೂಲಕ, ದೇಶದ ಮೊದಲ ರಾಷ್ಟ್ರಪತಿ ಶಬರಿಮಲೆಗೆ ಭೇಟಿ ನೀಡಿದವರು ಎನ್ನುವ ಹೆಗ್ಗಳಿಕೆಗೂ ಪಾತ್ರರಾದರು. ಗಣಪತಿ ದೇಗುಲದ ವಿಷ್ಣು ನಂಬೂದಿರಿಯವರು, ರಾಷ್ಟ್ರಪತಿಗಳಿಗೆ ಇರುಮುಡಿಯನ್ನು ಕಟ್ಟಿದರು. ಕಪ್ಪು ಸೀರೆಯನ್ನು ಧರಿಸಿ, ಹದಿನೆಂಟು ಮೆಟ್ಟಲನ್ನು ಏರಿ, ದ್ರೌಪದಿ ಮುರ್ಮು, ಅಯ್ಯಪ್ಪನ ದರ್ಶನ ಪಡೆದರು. ರಾಷ್ಟ್ರಪತಿಗಳ ಜೊತೆಗೆ ಇದ್ದ ಸಚಿವ ವಿಎನ್ ವಾಸವನ್, ದೇವರಿಗೆ ಅರ್ಚನೆಯನ್ನು ಮಾಡಿದರೂ, ದೇವರಿಗೆ ಕೈಮುಗಿಯಲಿಲ್ಲ. ಈ ದೃಶ್ಯ ಸ್ಪಷ್ಟವಾಗಿ ದಾಖಲಾಗಿತ್ತು. ರಾಷ್ಟ್ರಪತಿಗಳು ದೇವರಿಗೆ ಪ್ರಾರ್ಥನೆಯನ್ನು ಸಲ್ಲಿಸಿದಾಗ ಮತ್ತು ಅವರ ಜೊತೆಗಿದ್ದ ಇತರ ಅಧಿಕಾರಿಗಳು ಕೈಮುಗಿದು ನಿಂತಿದ್ದಾಗ, ಯಾವುದೇ ಗೌರವ ಸೂಚಿಸದೇ ಸಚಿವರು ನಿಂತಿದ್ದರು ಎಂದು ಬಿಜೆಪಿ ಆರೋಪಿಸಿದೆ. ಆಸ್ತಿಕರು ಅಥವಾ ನಾಸ್ತಿಕರಾಗಿರುವುದು ನಿಮಗೆ ಬಿಟ್ಟ ವಿಚಾರ, ನಿಮ್ಮ ವೈಯಕ್ತಿಕ ನಂಬಿಕೆಯನ್ನು ನಾನು ಪ್ರಶ್ನಿಸಲು ಬರುವುದಿಲ್ಲ. ಶಬರಿಮಲೆ ಹಿಂದೂಗಳ ಪವಿತ್ರ ಧಾರ್ಮಿಕ ಶ್ರದ್ಧಾಕೇಂದ್ರ. ದೇವಾಲಯಕ್ಕೆ ತನ್ನದೇ ಪದ್ದತಿಯಿದೆ, ಕೋಟ್ಯಾಂತರ ಭಕ್ತರಿದ್ದಾರೆ. ನಿಮಗೆ ದೇವರ ಮೇಲೆ ನಂಬಿಕೆ ಇಲ್ಲದಿದ್ದರೆ, ದೇವಾಲಯಕ್ಕೆ ಯಾತಕ್ಕಾಗಿ ಪ್ರವೇಶಿಸಿದ್ದೀರಿ ಎಂದು ಬಿಜೆಪಿಯ ಪ್ರಧಾನ ಕಾರ್ಯದರ್ಶಿ ಪ್ರಶ್ನಿಸಿದ್ದಾರೆ.

# ಎಂಟು ವಾಹನಗಳ ಸರಣಿ ಅಪಘಾತ ಮೂರು ಸಾವು

**ಕ್ಯಾಲಿಫೋರ್ನಿಯಾ:** ಕ್ಯಾಲಿಫೋರ್ನಿಯಾದ ಐ-10 ಫ್ರೀ ವೇನಲ್ಲಿ ಅ 21ರಂದು ಸಂಭವಿಸದ್ದ ಎಂಟು ವಾಹನಗಳ ಸರಣಿ ಅಪಘಾತದಲ್ಲಿ ಮೂವರು ಬಲಿಯಾಗಿ, ನಾಲ್ವರು ಗಾಯಗೊಂಡಿದ್ದರು. ಆ ಘಟನೆಗೆ ಸಂಬಂಧಿಸಿದಂತೆ, ಅಲ್ಲಿನ ಪೊಲೀಸರ ಭಾರತ ಮೂಲದ ಜಶನ್ ಪ್ರೀತ್ (21) ಎಂಬಾತನನ್ನು ಬಂಧಿಸಿದ್ದಾರೆ. ಅಪಘಾತ ನಡೆದ ದಿನ ಆತ ಐ-10 ಹೆದ್ದಾರಿಯಲ್ಲಿ ನಿರ್ಲಕ್ಷ್ಯತೆಯಿಂದ ವಾಹನ ಚಾಲನೆ ಮಾಡಿರುವುದರಿಂದ ಈ ಸರಣಿ ಅಪಘಾತ ಸಂಭವಿಸಿರುವುದನ್ನು ಪೊಲೀಸರು ತನಿಖೆಯಲ್ಲಿ ಪತ್ತೆ ಮಾಡಿದ್ದು ಅದರ ಆಧಾರದಲ್ಲಿ ಆತನನ್ನು ಬಂಧಿಸಲಾಗಿದೆ.




ಇದೇ ಆ.ನಲ್ಲಿ ಅಮೆರಿಕದ ಫ್ಲೋರಿಡಾದಲ್ಲಿ ಭಾರತ ಮೂಲದ ಟ್ರಕ್ ಡ್ರೈವರ್ ಹರ್ಜಿಂದರ್ ಸಿಂಗ್ ಎಂಬಾತನ ನಿರ್ಲಕ್ಷ್ಯತನದಿಂದ ಸರಣಿ ಅಪಘಾತವಾಗಿ ಆ ಪ್ರಕರಣದಲ್ಲೂ ಮೂವರ ಸಾವಾಗಿತ್ತು. ಆ ಘಟನೆ ಮಾಸುವ ಮುನ್ನವೇ ಮತ್ತೊಬ್ಬ ಭಾರತೀಯನಿಂದ ಕ್ಯಾಲಿಫೋರ್ನಿಯಾದಲ್ಲಿ ಅಪಘಾತವಾಗಿರುವುದು ಅಮೆರಿಕದಲ್ಲಿ ಟ್ರಕ್ ಚಾಲಕರಾಗಿ ಕೆಲಸ ಮಾಡುತ್ತಿರುವ ಭಾರತೀಯರ ಕಾರ್ಯಕ್ಷಮತೆಯನ್ನು ಅನುಮಾನಿಸುವಂತಾಗಿದೆ. ಪ್ರಾಥಮಿಕ ವಿಚಾರಣೆಯಲ್ಲಿ ಜಶನ್ ಪ್ರೀತ್ ಸಿಂಗ್, ಹೆದ್ದಾರಿಯಲ್ಲಿ ತನ್ನ ಟ್ರಕ್ ನಲ್ಲಿ ಸಾಗುವಾಗ ಮಾದಕ ವಸ್ತುಗಳನ್ನು ಸೇವಿಸಿದ್ದ. ಅದೇ ನಶೆಯಲ್ಲಿ ಆತ ವಾಹನ ಚಲಾಯಿಸುತ್ತಿದ್ದ.

ಒಂಟಾರಿಯೋ ಬಳಿಯಲ್ಲಿ ಪಶ್ಚಿಮದ ಕಡೆಗೆ ಸಾಗುತ್ತಿದ್ದ ಐ-10 ಫ್ರೀ ವೇ ಹೆದ್ದಾರಿಯಲ್ಲಿ ಸಾಗುವಾಗ ಮುಂದೆ ಚಲಿಸುತ್ತಿದ್ದ ವಾಹನ ಏಕಾಏಕಿ ಬ್ರೇಕ್ ಹಾಕಿದೆ. ಅದು ನಶೆಯಲ್ಲಿದ್ದ ಜಸ್ ಪ್ರೀತ್ ಗಮನಕ್ಕೆ ಬಂದಿಲ್ಲ. ತಾನು ಸಾಗುತ್ತಿದ್ದ ವಾಹನವನ್ನು ಹಾಗೇ ಚಲಾಯಿಸಿಕೊಂಡು ಹೋಗಿ ಹಲವಾರು ವಾಹನಗಳಿಗೆ ಡಿಕ್ಕಿ ಹೊಡೆದಿದ್ದಾನೆ.

ಮಾದಕ ವಸ್ತು ಸೇವಿಸಿ ವಾಹನ ಚಲಾಯಿಸಿದ್ದುದರ ಜೊತೆಗೆ ಈತ ಕಳ್ಳದಾರಿಯ ಮೂಲಕ ಅಮೆರಿಕ ಪ್ರವೇಶಿಸಿರುವುದೂ ಬೆಳಕಿಗೆ ಬಂದಿದೆ. ಹಾಗಾಗಿ, ಅಪಘಾತದ ಕೇಸ್ ಜೊತೆಗೆ ಅಕ್ರಮ ವಲಸಿಗ ಕೇಸನ್ನೂ ಸಿಂಗ್ ವಿರುದ್ಧ ದಾಖಲಿಸಿಕೊಳ್ಳಲಾಗಿದೆ. ಈ ತಪ್ಪುಗಳಿಗೆ ಸದ್ಯಕ್ಕೆ ಜಾಮೀನು ಸಿಕ್ಕುವ ಹಾಗಿಲ್ಲ. ಹಾಗಾಗಿ, ಅವರು ಕೆಲವು ದಿನ ವಿಚಾರಣಾಧೀನ ಕೈದಿಯಾಗಿ ಜೈಲಿನಲ್ಲೇ ಇರಬೇಕಿದೆ. 45 ವರ್ಷ ಜೈಲಿಗೆ ಹೋಗಲಿರುವ ಹರ್ಜಿಂದರ್ ಸಿಂಗ್ ಪರ ಸಹಿ ಅಭಿಯಾನ ಇದೇ ಆಗಸ್ಟ್‌ನಲ್ಲಿ ಅಮೆರಿಕದ ಫ್ಲೋರಿಡಾದಲ್ಲಿ ನಡೆದ ರಸ್ತೆ ಅಪಘಾತದಲ್ಲಿ ಮೂವರ ಸಾವಿಗೆ ಕಾರಣನಾದ ಭಾರತೀಯ ಮೂಲದ ಟ್ರಕ್ ಚಾಲಕ ಹರ್ಜಿಂದರ್ ಸಿಂಗ್ 45 ವರ್ಷಗಳ ಜೈಲು ಶಿಕ್ಷೆ ಭೀತಿ ಎದುರಿಸುತ್ತಿದ್ದಾನೆ.

ಆದರೆ, ಸಿಂಗ್ ಉದ್ದೇಶಪೂರ್ವಕವಾಗಿ ಅಪಘಾತ ಮಾಡಿಲ್ಲದ ಕಾರಣ, ಆತನಿಗೆ ಕ್ಷಮಾದಾನ ನೀಡಬೇಕು ಎಂದು ಕೋರಿ ಆನ್‌ಲೈನ್‌ನಲ್ಲಿ ಅಭಿಯಾನ ಶುರುವಾಗಿದೆ. ಇದರ ನಡುವೆಯೇ, ಹರ್ಜಿಂದರ್ ಸಿಂಗ್‌ನ ಅಕ್ರಮ ಪ್ರವೇಶದ ಬಗ್ಗೆಯೂ ಅಮೆರಿಕದಲ್ಲಿ ಅಪಸ್ವರ ಕೇಳಿಬಂದಿದೆ. ರಾಜಕೀಯ ಸ್ವರೂಪ ಪಡೆದುಕೊಂಡಿರುವ ಈ ಪ್ರಕರಣವು ನ್ಯಾಯ, ಮಾನವೀಯತೆಯ ನಡುವೆ ಚರ್ಚೆಗೆ ಗ್ರಾಸವಾಗಿದೆ.

# ವಿಶ್ವಸಂಸ್ಥೆಯಲ್ಲಿ ಪಾಕಿಸ್ತಾನದ ಚಳಿ ಬಿಡಿಸಿದ ಭಾರತ

**ವಿಶ್ವಸಂಸ್ಥೆ:** ಸ್ವಾತಂತ್ರ್ಯ ಹೋರಾಟದ ಸೋಗಿನಲ್ಲಿ ತನ್ನ ಗಡಿಯಾಚೆಗಿನ ಭಯೋತ್ಪಾದನೆಯನ್ನು ಕಾನೂನು ಬದ್ಧಗೊಳಿಸಲು ಮತ್ತು ತನ್ನ ಭಯೋತ್ಪಾದಕ ದಳಗಳನ್ನು ಸ್ವಾತಂತ್ರ್ಯ ಹೋರಾಟಗಾರರು ಎಂದು ಹಣೆಪಟ್ಟಿ ಕಟ್ಟಲು ಪ್ರಯತ್ನಿಸುತ್ತಿರುವ ಪಾಕಿಸ್ತಾನವನ್ನು ಭಾರತ ವಿಶ್ವಸಂಸ್ಥೆಯಲ್ಲಿ ತರಾಟೆಗೆ ತೆಗೆದುಕೊಂಡಿದೆ.



ಭಯೋತ್ಪಾದನೆಯನ್ನು ಎದುರಿಸುವಾಗ ಮೂಲಭೂತ ಸ್ವಾತಂತ್ರ್ಯಗಳ ಕುರಿತಾದ ವಿಶ್ವಸಂಸ್ಥೆಯ ವಿಶೇಷ ವರದಿಗಾರ ಬೆನ್ ಸೌಲ್ ಅವರೊಂದಿಗಿನ ಸಂವಾದಾತ್ಮಕ ಸಂವಾದದಲ್ಲಿ ಮಾತನಾಡಿದ ಪಾಕಿಸ್ತಾನದ ವಿಶ್ವಸಂಸ್ಥೆಯ ಮಿಷನ್‌ನ ಕೌನ್ಸಿಲರ್ ಮುಹಮ್ಮದ್ ಜವಾದ್ ಅಜ್ಮಲ್, ರಾಷ್ಟ್ರಗಳು ಭಯೋತ್ಪಾದನೆ ಮತ್ತು ವಿದೇಶಿ ಆಕ್ರಮಣವನ್ನು ವಿರೋಧಿಸುವ ಜನರ ಕಾನೂನುಬದ್ಧ ಹಕ್ಕನ್ನು ಚಲಾಯಿಸುವುದರ ನಡುವೆ ವ್ಯತ್ಯಾಸವನ್ನು ಗುರುತಿಸಬೇಕು ಎಂದು ಹೇಳಿದರು. ಪ್ರತ್ಯುತ್ತರವಾಗಿ, ವಿಶ್ವಸಂಸ್ಥೆಗೆ ಭಾರತದ ಶಾಶ್ವತ ಮಿಷನ್‌ನ ಮೊದಲ ಕಾರ್ಯದರ್ಶಿ ರಘು ಪುರಿ, ಅಜ್ಮಲ್ ಅವರ ಹೇಳಿಕೆಯನ್ನು ಖಂಡಿಸಿದರು, ಜಾಗತಿಕ ಭಯೋತ್ಪಾದನೆಯ ಕೇಂದ್ರಬಿಂದು ಪಾಕ್ ಎಂದು ಕರೆದರು.

ಭಯೋತ್ಪಾದನೆಯು ಮಾನವೀಯತೆಯ ಮೂಲವನ್ನು ಮೂಲಭೂತವಾಗಿ ಉಲ್ಲಂಘಿಸುವ ಅತ್ಯಂತ ಗಂಭೀರ ಅಪರಾಧಗಳಲ್ಲಿ ಒಂದಾಗಿದೆ. ಇದು ಧರ್ಮಾಂಧತೆ, ಹಿಂಸೆ, ಅಸಹಿಷ್ಣುತೆ, ಭಯದ ಕೆಟ್ಟದ್ದನ್ನು ಪ್ರತಿನಿಧಿಸುತ್ತದೆ, ಭಯೋತ್ಪಾದಕರು ಮಾನವಕುಲದ ಕೆಟ್ಟದ್ದರಲ್ಲಿ ಕೆಟ್ಟವರು ಎಂದು ಅವರು ಹೇಳಿದರು.

ಪಾಕಿಸ್ತಾನವು ಮುಗ್ಧ ನಾಗರಿಕರನ್ನು ಗುರಿಯಾಗಿಸಿಕೊಂಡು ಪ್ರಪಂಚದಾದ್ಯಂತ ಅನೇಕ ಭಯೋತ್ಪಾದಕ ದಾಳಿಗಳಿಗೆ ಸ್ಥಾಪಿತ ಸಂಪರ್ಕ ಹೊಂದಿರುವ ಭಯೋತ್ಪಾದನೆಯ ಪ್ರಸಿದ್ಧ ಕೇಂದ್ರ ಬಿಂದುವಾಗಿದೆ ಎಂದು ಕರೆದ ಇಸ್ಲಾಮಾಬಾದ್‌ನ ದ್ವಂದ್ವ ಮಾತು, ಬೂಟಾಟಿಕೆ ನಿಲುವು ಬಹಿರಂಗವಾಗಿದೆ ಎಂದು ಪುರಿ ಒತ್ತಿ ಹೇಳಿದರು.

1991ರಲ್ಲಿ ಅಂಗೀಕರಿಸಲಾದ ಅಜ್ಮಲ್ ಉಲ್ಲೇಖಿಸಿದ 46/51 ರ ಸಭೆಯ ನಿರ್ಣಯವು ವಿಮೋಚನಾ ಹೋರಾಟಗಳ ಬಗ್ಗೆ ಒಂದು ಸಣ್ಣ ಉಲ್ಲೇಖವನ್ನು ನೀಡುತ್ತದೆ ಆದರೆ ಆ ಹಕ್ಕಿನ ಅಡಿಯಲ್ಲಿ ನಡೆಸಲಾದ ಭಯೋತ್ಪಾದನೆಯನ್ನು ಕಾನೂನು ಬದ್ಧಗೊಳಿಸುವುದಿಲ್ಲ ಮತ್ತು ಅದು ಎಲ್ಲಿ ಮತ್ತು ಯಾರೇ ಮಾಡಿದರೂ ಭಯೋತ್ಪಾದನೆಯ ಎಲ್ಲಾ ಕೃತ್ಯಗಳು, ವಿಧಾನಗಳು ಮತ್ತು ಅಭ್ಯಾಸಗಳನ್ನು ಅಪರಾಧ, ಅಸಮರ್ಥನೀಯ ಎಂದು ಮತ್ತೊಮ್ಮೆ ನಿಸ್ಸಂದಿಗ್ಧವಾಗಿ ಖಂಡಿಸುತ್ತದೆ ಎಂದು ಅವರು ಒತ್ತಿ ಹೇಳಿದರು.

## ಪೊಲೀಸ್ ಕಸ್ಟಡಿಯಲ್ಲಿದ್ದಾಗಲೇ ಪ್ರಾಣ ಕಳೆದುಕೊಂಡ ಅತ್ಯಾಚಾರಿ

**ಹೈದರಾಬಾದ್:** ಅಪ್ರಾಪ್ತೆ ಬಾಲಕಿ ಮೇಲೆ ಅತ್ಯಾಚಾರ ನಡೆಸಿದ್ದ 62 ವರ್ಷದ ಆರೋಪಿ ಪೊಲೀಸ್ ಕಸ್ಟಡಿಯಲ್ಲಿದ್ದಾಗಲೇ ಕೊಳಕ್ಕೆ ಜಿಗಿದು ಆತಹತ್ಯೆ ಮಾಡಿಕೊಂಡಿದ್ದಾರೆ. ಕಾಕಿನಾಡ ಜಿಲ್ಲೆಯಲ್ಲಿ 13 ವರ್ಷದ ಸರ್ಕಾರಿ ಶಾಲಾ ಬಾಲಕಿಯನ್ನು ತನ್ನ ನೆರೆಮನೆಯ ಹಾಸ್ಟೆಲ್‌ನಿಂದ ಆಮಿಷವೊಡ್ಡಿ ತೋಟಕ್ಕೆ ಕರೆದೊಯ್ದು ಅತ್ಯಾಚಾರ ಎಸಗಿದ್ದಕ್ಕಾಗಿ ನಾರಾಯಣ ರಾವ್ ಅವರನ್ನು ನಿನ್ನೆ ಬಂಧಿಸಲಾಗಿತ್ತು. ಸ್ಥಳೀಯ ಮ್ಯಾಜಿಸ್ಟ್ರೇಟ್ ಬಳಿಗೆ ಕರೆದೊಯ್ಯುವಾಗ ರಾವ್ ಕೊಳಕ್ಕೆ ಹಾರಿದ್ದಾರೆ. ಶೌಚಾಲಯಕ್ಕೆ ಹೋಗುವ ನೆಪದಲ್ಲಿ ಅವರು ತಪ್ಪಿಸಿಕೊಂಡಿದ್ದಾರೆ ಎಂದು ಪೆದ್ದಾಪುರಂ ಉಪ-ವಿಭಾಗೀಯ ಪೊಲೀಸ್ ಅಧಿಕಾರಿ ಶ್ರೀಹರಿ ರಾಜು ಪಿಟಿಐಗೆ ತಿಳಿಸಿದ್ದಾರೆ. ರಾತ್ರಿ 10 ಗಂಟೆ ಸುಮಾರಿಗೆ ತುನಿಯಲ್ಲಿ ರಾವ್ ಕೊಳಕ್ಕೆ ಹಾರಿದ್ದು, ಗುರುವಾರ ಅವರ ಶವವನ್ನು ಹೊರತೆಗೆಯಲಾಗಿದೆ ಎಂದು ಅವರು ಹೇಳಿದರು. ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ ಕಾಯ್ದೆ ಸೆಕ್ಷನ್ 2 ಮತ್ತು 4, ಬಿಎನ್‌ಎಸ್ ಸೆಕ್ಷನ್ 63 ಮತ್ತು ಇತರ ಅಪ್ರಾಪ್ತ ಬಾಲಕಿಯ ಮೇಲೆ ಅತ್ಯಾಚಾರ ಎಸಗಿದಕ್ಕಾಗಿ ರಾವ್ ಅವರನ್ನು ಬಂಧಿಸಲಾಗಿದೆ. ಪೊಲೀಸರ ಪ್ರಕಾರ, ಹುಡುಗಿ ಅವನೊಂದಿಗೆ ಹೋಗಲು ಒಪ್ಪಿಕೊಂಡಳು, ಆದರೆ ಅಪ್ರಾಪ್ತ ವಯಸ್ಕರ ಒಪ್ಪಿಗೆ ಇದರಿಂದಾಗಿ ಪೊಲೀಸರು ರಾವ್ ವಿರುದ್ಧ ತೀವ್ರ ಲೈಂಗಿಕ ದೌರ್ಜನ್ಯ ಮತ್ತು ಅಪಹರಣ ಆರೋಪಗಳನ್ನು ಹೊರಿಸಿದರು.

## ಬಿಹಾರ ಸಿಎಂ ಅಭ್ಯರ್ಥಿ ಬಾಣ ಮೊದಲು ಬಿಟ್ಟ ಮಹಾಘಟಬಂಧನ್; ತೇಜಸ್ವಿ ಯಾದವ್ ಪ್ಲಸ್ ಆ್ಯಂಡ್ ಮೈನಸ್ ಒಂದು ಅವಲೋಕನ

# ತೇಜಸ್ವಿ ಯಾದವ್ ಸಿಎಂ ಅಭ್ಯರ್ಥಿ ಮೈತ್ರಿಕೂಟಕ್ಕೆ ಲಾಭವೋ, ನಷ್ಟವೋ?

**ಪಾಟ್ನಾ:** ಬಿಹಾರ ವಿಧಾನಸಭೆ ಚುನಾವಣೆ 2025ರ ಕಾವು ಇಡೀ ದೇಶವನ್ನು ವ್ಯಾಪಿಸುತ್ತಿದೆ. ಲೋಕತಂತ್ರದ ಹಬ್ಬದ ಪೂರ್ವ ತಯಾರಿಯಲ್ಲಿ ಬಡಿಸಲಾಗುತ್ತಿರುವ ಭಕ್ಷ್ಯ ಭೋಜನಗಳೇ ಇಷ್ಟೊಂದು ರುಚಿಕರ ಆಗಿರುವಾಗ, ಹಬ್ಬದ ದಿನ ಏನೆಲ್ಲಾ ರಸದೌತಣ ಬಡಿಸಲಾಗುತ್ತದೆ ಎಂದು ಜನತಂತ್ರ ಕಾತರದಿಂದ ಕಾಯುತ್ತಿದೆ. ಈ ಬಾರಿಯ ಬಿಹಾರ ವಿಧಾನಸಭೆ ಚುನಾವಣೆ ಕೇವಲ ಬಿಹಾರಕ್ಕಷ್ಟೇ ಸೀಮಿತವಾಗಿಲ್ಲ.

**ಎರಡು ಪ್ರಬಲ ಬಣ**

ಅದರ ಕಾವು ರಾಷ್ಟ್ರ ರಾಜಕಾರಣದ ಪಡಸಾಲೆಗಳಲ್ಲೂ ಹರಿದಾಡುತ್ತಿದೆ. ಎನ್‌ಡಿಎ ಮತ್ತು ಮಹಾಘಟಬಂಧನ್ ನಡುವಿನ ಪ್ರತಿಷ್ಠೆಯ ಕಣವಾಗಿರುವ ಬಿಹಾರದಲ್ಲಿ, ಪ್ರಶಾಂತ್ ಕಿಶೋರ್ ಅವರ ಜನ ಸ್ವರಾಜ್, ಅಸಾದುದ್ದೀನ್ ಓವೈಸಿ ಅವರ ಎಐಎಂಐಎಂ ನಂತಹ ಪಕ್ಷಗಳೂ ತನ್ನ ಅಸ್ತಿತ್ವವನ್ನು ತೋರುತ್ತಿವೆ. ಅಲ್ಲದೇ ಎರಡು ಪ್ರಬಲ ಬಣಗಳಲ್ಲಿರುವ ಸಣ್ಣ ಪಕ್ಷಗಳೂ ಬೃಹತ್ ಮೈತ್ರಿಕೂಟದ ಅಡಿಪಾಯವಾಗಿ ಮಿಂಚುತ್ತಿವೆ.

ಬಿಹಾರ ವಿಧಾನಸಭೆ ಚುನಾವಣೆಗೆ ಮಹಾಘಟಬಂಧನ್ ಸೀಟು ಹಂಚಿಕೆ ಗೊಂದಲಮಯವಾಗಿದೆ. ಆದರೆ ಈ ವಿಚಾರದಲ್ಲಿ ಎನ್‌ಡಿಎ ಸ್ಪಷ್ಟ ರಣತಂತ್ರದೊಂದಿಗ ಕಣಕ್ಕೆ ಧುಮುಕಿದೆ. ಆದರೀಗ ಮಹಾಘಟಬಂಧನ್ ಸಿಎಂ ಅಭ್ಯರ್ಥಿ ಘೋಷಣೆ ಮಾಡುವುದರಲ್ಲಿ, ಎನ್‌ಡಿಎ ಮೈತ್ರಿಕೂಟವನ್ನು ಹಿಂದಿಕ್ಕಿದೆ.

**ತೇಜಸ್ವಿಯೇ ಕಿಂಗ್:** ಹೌದು, ಬಿಹಾರ ವಿಧಾನಸಭೆ ಚುನಾವಣೆಗೆ



ಮಹಾಘಟಬಂಧನ್ ಮೈತ್ರಿಕೂಟವು ತನ್ನ ಅಭ್ಯರ್ಥಿಯನ್ನು ಘೋಷಿಸಿದೆ. ಆರ್‌ಜೆಡಿ ಮುಖ್ಯಸ್ಥ ಮತ್ತು ಲಾಲೂ ಪ್ರಸಾದ್ ಯಾದವ್ ಪುತ್ರ ತೇಜಸ್ವಿ ಯಾದವ್ ಮಹಾಘಟಬಂಧನ್ ಸಿಎಂ ಅಭ್ಯರ್ಥಿ ಎಂದು ಮೈತ್ರಿಕೂಟ ಘೋಷಣೆ ಮಾಡಿದೆ. ಈ ಘೋಷಣೆ ಬೆನ್ನಲ್ಲೇ ವಿಪಕ್ಷ ಮೈತ್ರಿಕೂಟದಲ್ಲಿ ಒಂದು ರೀತಿಯ ಅಧಿಕ ಚುನಾವಣಾ ಹುಮ್ಮಸ್ಸು ಕಂಡುಬರುತ್ತಿದೆ.

ಈ ಜೋಶ್‌ನಲ್ಲಿ ಮಹಾಘಟಬಂಧನ್ ಮೈತ್ರಿಕೂಟವು ನಮ್ಮ ಅಭ್ಯರ್ಥಿ ತೇಜಸ್ವಿ ಯಾದವ್, ನಿಮ್ಮ ಅಭ್ಯರ್ಥಿ ಯಾರು? ಎಂದು ಸವಾಲು ಎಸೆದಿದೆ. ಎನ್‌ಡಿಎ ಈ ಸವಾಲಿಗೆ ಉತ್ತರ ಹುಡುಕಲಿದ್ದು, ಪ್ರತ್ಯುತ್ತರ ನೀಡಲು ಕಾಯುತ್ತಿದೆ. ಆದರೆ ಮಹಾಘಟಬಂಧನ್ ಮಾತ್ರ ಸಿಎಂ ಅಭ್ಯರ್ಥಿ ಘೋಷಣೆ ವಿಚಾರದಲ್ಲಿ ಎನ್‌ಡಿಎಗಿಂತ ಮುಂದಿರುವುದಾಗಿ ಖುಷಿಪಡುತ್ತಿದೆ. ಆರ್‌ಜೆಡಿ ಮುಖ್ಯಸ್ಥರಾಗಿರುವ ತೇಜಸ್ವಿ ಯಾದವ್, ನಿಸ್ಸಂದಹವಾಗಿ ಮಹಾಘಟಬಂಧನ್ ಮೈತ್ರಿಕೂಟದ ಪ್ರಮುಖ ಮುಖ. ಬಿಹಾರದ ಉಪಮುಖ್ಯಮಂತ್ರಿಯಾಗಿ, ವಿಧಾನಸಭೆ ವಿರೋಧ ಪಕ್ಷದ ನಾಯಕರಾಗಿ ಮತ್ತು ಮುಖ್ಯಸ್ಥರಾಗಿ ಪಕ್ಷವನ್ನು ಮುನ್ನಡೆಸಿದ ಅನುಭವ ಹೊಂದಿದ್ದಾರೆ.

ಅಲ್ಲದೇ ಆರ್‌ಜೆಡಿ ಬಿಹಾರದಲ್ಲಿ ಎಂವೈ ಸೂತ್ರದ ಮೇಲೆ ರಾಜಕಾರಣ ಮಾಡುತ್ತದೆ. ಎಂ ಎಂದರೆ ಮುಸ್ಲಿಂ ಮತ್ತು ವೈ ಎಂದರೆ ಯಾದವ್. ಆದರೆ ಈ ಬಾರಿ ಮುಸ್ಲಿಂ ಮತಗಳನ್ನು ಇಡೀಯಾಗಿ ಸೆಳೆಯುವುದು ಅಷ್ಟು ಸುಲಭವಲ್ಲ. ಏಕೆಂದರೆ ಮುಸ್ಲಿಂ ಮತಗಳತ್ತ ಪ್ರಶಾಂತ್ ಕಿಶೋರ್ ಅವರ ಜನ್ ಸ್ವರಾಜ್ ಮತ್ತು ಅಸಾದುದ್ದೀನ್ ಓವೈಸಿ ಅವರ ಎಐಎಂಐಎಂ ಕೂಡ ಕಣ್ಣಿಟ್ಟಿವೆ.

**ನಕಾರಾತ್ಮಕ ಅಂಶಗಳೇನು?**

**ತೇಜಸ್ವಿ ಯಾದವ್ ಬಿಹಾರ ರಾಜಕಾರಣದಲ್ಲಿ ಪಳಗಿದ ರಾಜಕಾರಣಿಯಾದರೂ, ಸರ್ಕಾರ ರಚಿಸಲು, ಮುಖ್ಯಮಂತ್ರಿಯಾಗಲು, ಬಿಹಾರ ಆಡಳಿತದ ಅಧಿಪತಿಯಾಗಲು ಮಹಾಘಟಬಂಧನ್ ಎಂಬ ಬೃಹತ್ ಮೈತ್ರಿಕೂಟವನ್ನು ಅವಲಂಬಿಸಿದ್ದಾರೆ. ಈ ಮೈತ್ರಿಕೂಟದ ಎರಡನೇ ದೊಡ್ಡ ಪಕ್ಷವಾಗಿರುವ ಕಾಂಗ್ರೆಸ್, ಮೈತ್ರಿಕೂಟದ ಇತಿಮಿತಿಗಳ ಹೊರತಾಗಿಯೂ ತನ್ನ ಪ್ರತ್ಯೇಕ ಅಸ್ತಿತ್ವವನ್ನು ಆಗ್ಗಾಗ್ಗೆ ತೋರಿಸಲು ಪ್ರಯತ್ನಿಸುತ್ತದೆ. ಮೈತ್ರಿಕೂಟದ ಸಣ್ಣ ಪಕ್ಷಗಾಳಾದ ಎಡಪಕ್ಷಗಳು ವಿಷಯಾಧಾರಿತ ರಾಜಕಾರಣಕ್ಕಾಗಿ ಒತ್ತಡ ಹೇರುತ್ತಲೇ ಇರುತ್ತವೆ. ಅದೇ ರೀತಿ ಮುಖೇಶ್ ಸಾಹ್ನಿ ಅವರ ವಿಕಾಸಶೀಲ್ ಇನ್ಸಾನ್ ಪಕ್ಷ, ಆಗಾಗ್ಗೆ ಮೈತ್ರಿಕೂಟದಲ್ಲಿ ತನ್ನ ಹಕ್ಕಿನ ಪಾಲನ್ನು ಕೇಳುತ್ತಲೇ ಇರುತ್ತದೆ. ಒಂದು ವೇಳೆ ಮಹಾಘಟಬಂಧನ್ ಚುನಾವಣೆಯಲ್ಲಿ ಜಯಗಳಿಸಿ ಸರ್ಕಾರ ರಚಿಸಿದರೂ, ಇಡೀ ಮೈತ್ರಿಕೂಟವನ್ನು ಹಿಡಿದಿಟ್ಟುಕೊಂಡು ಆಡಳಿತ ಮಾಡಬೇಕಾದ ಅನಿವಾರ್ಯತೆ ತೇಜಸ್ವಿ ಯಾದವ್ ಅವರಿಗೆ ಇದ್ದೇ ಇದೆ.**

# ಬ್ಯಾಟ್ ಚಿತ್ರದ ಟ್ರೇಲರ್ ಬಂತು

ಡಾಲ್ಫಿನ್ ಎಂಟರ್ಟೈನ್ಮೆಂಟ್ ಲಾಂಛನದಲ್ಲಿ ಮಂಜುನಾಥ್ ಕಂದಕೂರ್ ನಿರ್ಮಿಸಿರುವ, ಶಶಾಂಕ್ ನಿರ್ದೇಶನದ ಹಾಗೂ ಡಾರ್ಲಿಂಗ್ ಕೃಷ್ಣ ನಾಯಕನಾಗಿ ನಟಿಸಿರುವ ಬ್ಯಾಟ್ ಚಿತ್ರದ ಟ್ರೇಲರ್ ಬಿಡುಗಡೆಯಾಗಿದೆ.

ಕಿಚ್ಚ ಸುದೀಪ್ ಚಿತ್ರದ ಟ್ರೇಲರ್ ಅನ್ನು ಅನಾವರಣ ಮಾಡಿದರು. ನಂತರ ಸುದೀಪ್ ಹಾಗೂ ಚಿತ್ರತಂಡದ ಸದಸ್ಯರು ಮಾತನಾಡಿದರು. ಶಶಾಂಕ್ ಒಬ್ಬರು ಒಳ್ಳೆಯ ಕಥೆಗಾರ. ಅವರ ನಿರ್ದೇಶನದ ಚಿತ್ರ ಎಂದ ಮೇಲೆ ಚೆನ್ನಾಗಿರುತ್ತದೆ. ಹಾಗೆ ಡಾರ್ಲಿಂಗ್ ಕೃಷ್ಣ ಕೂಡ ಉತ್ತಮ ನಟ. ಇವರಿಬ್ಬರ ಕಾಂಬಿನೇಶನ್ ನಲ್ಲಿ ಮೂಡಿಬಂದಿದ್ದ ಕೌಸಲ್ಯ ಸುಪ್ರಜ ರಾಮ ಚಿತ್ರ ಕೂಡ ಬಿಗ್ ಹಿಟ್ ಆಗಿತ್ತು. ಈ ಚಿತ್ರ ಕೂಡ ಸೂಪರ್ ಹಿಟ್ ಆಗಲಿ ಎಂದು ಸುದೀಪ್ ಹಾರೈಸಿದರು. ಸುದೀಪ್ ಅವರು, ನನಗೆ ಹಾಗೂ ಕೃಷ್ಣ ಇಬ್ಬರಿಗೂ ಬಹಳ ಲಕ್ಕಿ. ಏಕೆಂದರೆ ನಮ್ಮಿಬ್ಬರ ಕಾಂಬಿನೇಶನ್ ನಲ್ಲಿ ಬಂದ ಹಿಂದಿನ ಚಿತ್ರ ಕೌಸಲ್ಯ ಸುಪ್ರಜ ರಾಮ ಚಿತ್ರದ ಟ್ರೇಲರ್ ಅನ್ನು ಸುದೀಪ್ ಅವರೆ ಅನಾವರಣ ಮಾಡಿದ್ದು. ಅದು ಎಷ್ಟು ಹಿಟ್ ಆಯಿತು ಅಂತ ಎಲ್ಲರಿಗೂ ಗೊತ್ತೆ ಇದೆ. ಇಂದು ಬ್ಯಾಟ್ ಚಿತ್ರದ ಟ್ರೇಲರ್ ಕೂಡ ಸುದೀಪ್ ಅವರಿಂದಲೇ ಅನಾವರಣವಾಗಿದೆ. ಇದು ಕೂಡ ದೊಡ್ಡ ಹಿಟ್ ಅಗುವ ನಂಬಿಕೆ ಇದೆ. ಸುದೀಪ್ ಅವರಿಗೆ ಧನ್ಯವಾದ. ಇನ್ನೂ ನಾವು ಈ ಚಿತ್ರವನ್ನು ಪ್ಯಾನ್ ಇಂಡಿಯಾ ಚಿತ್ರ ಅಂತಲೇ ನಿರ್ಮಾಣ ಮಾಡಿದ್ದು. ಅದೇ ತರಹ ಈವರೆಗೂ ಟೀಸರ್ ಹಾಗೂ ಹಾಡುಗಳನ್ನು ಎಲ್ಲಾ ಭಾಷೆಗಳಲ್ಲೂ ಬಿಡುಗಡೆ ಮಾಡಿಕೊಂಡು ಬಂದಿದ್ದೇವೆ. ಆದರೆ ಟ್ರೇಲರ್ ಇಂದು ಕನ್ನಡದಲ್ಲಿ ಮಾತ್ರ ಬಿಡುಗಡೆಯಾಗಿದೆ. ನಂತರದ ದಿನಗಳಲ್ಲಿ ಬೇರೆ ಭಾಷೆಗಳ ಟ್ರೇಲರ್ ಅನಾವರಣವಾಗಲಿದೆ. ಚಿತ್ರತಂಡದ ಸಹಕಾರದಿಂದ ಬ್ಯಾಟ್ ಒಂದೊಳ್ಳೆ ಚಿತ್ರವಾಗಿ ನಿರ್ಮಾಣವಾಗಿದೆ. ಇದೇ ಅಕ್ಟೋಬರ್ 31 ರಂದು ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಎಲ್ಲರ ಪ್ರೋತ್ಸಾಹವಿರಲಿ ಎಂದರು ನಿರ್ದೇಶಕ ಶಶಾಂಕ್. ಸುದೀಪ್ ಅವರಿಗೆ ಧನ್ಯವಾದ ತಿಳಿಸಿ ಮಾತನಾಡಿದ ಬ್ಯಾಟ್ ಚಿತ್ರದ ನಾಯಕ ಡಾರ್ಲಿಂಗ್ ಕೃಷ್ಣ, ಕೌಸಲ್ಯ ಸುಪ್ರಜ ರಾಮ ಚಿತ್ರದ ನಂತರ ಶಶಾಂಕ್ ಅವರು ನನಗೆ ನಾಲ್ಕೈದು ಕಥೆಗಳನ್ನು ಹೇಳಿದರು. ಈ ಕಥೆ ನನಗೆ ಬಹಳ ಇಷ್ಟವಾಯಿತು. ಈಗಾಗಲೇ ಅರ್ಜುನ್ ಜನ್ಯ ಅವರ ಸಂಗೀತ ಸಂಯೋಜನೆಯಲ್ಲಿ ಮೂಡಿಬಂದಿರುವ ಹಾಡುಗಳು ಹಾಗೂ ಚಿತ್ರದ ಟೀಸರ್ ನಿರೀಕ್ಷೆಗೂ ಮೀರಿ ಯಶಸ್ವಿಯಾಗಿದೆ. ಟ್ರೇಲರ್ ಗೂ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ. ಈ ಚಿತ್ರದ ನನ್ನ ಲುಕ್ ಕೂಡ ಅಭಿಮಾನಿಗಳಿಗೆ ಇಷ್ಟವಾಗಿದೆ.





ಸಿನಿ ವಾಹಿನಿ

# ಡ್ಯಾಡ್ ಪೋಸ್ಟರ್ ಬಂತು

ಶಿವರಾಜ್‌ಕುಮಾರ್ ನಾಯಕನಾಗಿ ನಟಿಸುತ್ತಿರುವ ಬಹು ನಿರೀಕ್ಷಿತ ಡ್ಯಾಡ್ ಚಿತ್ರತಂಡದಿಂದ ದೀಪಾವಳಿ ಶುಭ ಸಂದರ್ಭದಲ್ಲಿ ವಿಶೇಷ ಪೋಸ್ಟರ್ ಬಿಡುಗಡೆಯಾಗಿದೆ. ಎರಡು ಹಂತಗಳ ಚಿತ್ರೀಕರಣ ಕೂಡ ಮುಕ್ತಾಯವಾಗಿದೆ. ಮೈಸೂರು, ನಂದಿ ಬೆಟ್ಟದಲ್ಲಿ ಚಿತ್ರೀಕರಣ ನಡೆದಿದೆ. ಹರೀಶ್ ಪೆದ್ದಿ ಅವರು ಮೈರಾ ಕ್ರಿಯೇಷನ್ಸ್ ಲಾಂಛನದಡಿ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ತೆಲುಗಿನ ಖ್ಯಾತ ನಿರ್ದೇಶಕ ಅನಿಲ್ ಕನ್ನೆಗಂಟಿ ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ನಿರ್ಮಾಪಕರಿಗೆ ಹಾಗೂ, ನಿರ್ದೇಶಕರಿಗೆ ಇದು ಕನ್ನಡದಲ್ಲಿ ಮೊದಲ ಚಿತ್ರ. ಬಿ.ಎಸ್. ಸುಧೀಂದ್ರ ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಶಿವಣ್ಣ ವೈದ್ಯನ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಶರ್ಮಿಳಾ ಮಾಂಡ್ರೆ, ಬೇಬಿ ನಕ್ಷತ್ರ, ಬಾಬು, ಮಲಯಾಳಂ ನಟ ಸೂರಜ್ ವೆಂಜರಮೂಡು ಮುಂತಾದವರು ಚಿತ್ರದ ತಾರಾಬಳಗದಲ್ಲಿದ್ದಾರೆ. ಕನ್ನಡ, ತೆಲುಗು ಮತ್ತು ಮಲಯಾಳಂನಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರಕ್ಕೆ ಅರ್ಜುನ್ ಜನ್ಯ ಅವರ ಸಂಗೀತ ನಿರ್ದೇಶನ ಹಾಗೂ ಬಿ.ರಾಜಶೇಖರ್ ಅವರ ಛಾಯಾಗ್ರಹಣವಿದೆ.



# ಬಿಗ್ ಬಾಸ್‌ಗೆ ರೀ ಎಂಟ್ರಿ ಪಡೆದು ಡಲ್ ಆದ ಸಂಜನಾ ಗಲ್ರಾನಿ

ಸಂಜನಾ ಗಲ್ರಾನಿ ಅವರು 'ಬಿಗ್ ಬಾಸ್ ತೆಲುಗು'ನಲ್ಲಿ ಸಾಕಷ್ಟು ಛಾಪು ಮೂಡಿಸಿದರು. ಅವರು ಈ ಮೊದಲು ಎಲಿಮಿನೇಟ್ ಆಗಿದ್ದರು. ಈಗ ಬಿಗ್ ಬಾಸ್ ಮನೆಗೆ ಅವರು ರೀ ಎಂಟ್ರಿ ಪಡೆದುಕೊಂಡಿದ್ದಾರೆ ಅನ್ನೋದು ವಿಶೇಷ. ಸಂಜನಾ ಗಲ್ರಾಣಿ ಅವರು 'ಬಿಗ್ ಬಾಸ್ ತೆಲುಗು'ನಲ್ಲಿ ಸಾಕಷ್ಟು ಛಾಪು ಮೂಡಿಸಿದರು. ಅವರು ಈ ಮೊದಲು ಎಲಿಮಿನೇಟ್ ಆಗಿದ್ದರು. ಈಗ ಬಿಗ್ ಬಾಸ್ ಮನೆಗೆ ಅವರು ರೀ ಎಂಟ್ರಿ ಪಡೆದುಕೊಂಡಿದ್ದಾರೆ ಅನ್ನೋದು ವಿಶೇಷ.

ಮನೆಯವರೇ ನಿರ್ಧರಿಸಿ ಸಂಜನಾ ಅವರನ್ನು ಹೊರಹಾಕಿದ್ದರು. ಬಿಗ್ ಬಾಸ್ ಮನೆ ಮಂದಿ ನಾಮಿನೇಟ್ ಮಾಡುವ ಅಧಿಕಾರವನ್ನಷ್ಟೇ ಪಡೆದಿದ್ದಾರೆ. ಅವರನ್ನು ಹೊರಹಾಕುವ ಅಧಿಕಾರ ಯಾರಿಗೂ ಇಲ್ಲ. ಈ ಕಾರಣಕ್ಕೆ ಒಂದು ವಾರ ಬಿಟ್ಟು ಅವರು ರೀ ಎಂಟ್ರಿ ಪಡೆದರು. ಸಂಜನಾ ಗಲ್ರಾನಿ ಅವರು ಬಿಗ್ ಬಾಸ್‌ನಲ್ಲಿ ರೀ ಎಂಟ್ರಿ ಪಡೆದ ಬಳಿಕ ಜೋಶ್‌ನಲ್ಲೇನೋ ಇದ್ದರು. ಆದರೆ, ಇತ್ತೀಚೆಗೆ ಅವರು ಡಲ್ ಆದಂತೆ ಕಾಣಿಸುತ್ತಿದೆ. ಅಲ್ಲದೆ, ಅವರಿಗೆ ಬೀಳುತ್ತಿರುವ ವೋಟ್ ಶೇರ್ ಕೂಡ ಕುಸಿದಿದೆ ಎಂದು ಹೇಳಲಾಗುತ್ತಿದೆ. ಬಿಗ್ ಬಾಸ್ ಮನಯೆಲ್ಲಿ ವೈಲ್ಡ್ ಕಾರ್ಡ್ ಎಂಟ್ರಿ ಆಗಿದೆ. ಅವರ ಮೇಲೆ ಫೋಕಸ್ ಹೆಚ್ಚಿರುವುದರಿಂದ ಸಂಜನಾ ಮಾಡ್ತಿರೋ ಸರ್ಕಸ್‌ಗಳು ಹೆಚ್ಚು ಕೆಲಸ ಮಾಡುತ್ತಿಲ್ಲ. ಅವರು ಫಿನಾಲೆವರೆಗೆ ಇರುವ ಕನಸು ಕಾಣುತ್ತಿದ್ದಾರೆ. ಸಂಜನಾ ಗಲ್ರಾಣಿ ಅವರು ಬಿಗ್ ಬಾಸ್ ಮನೆಯಲ್ಲಿ ಎಷ್ಟು ದಿನಗಳ ಕಾಲ ಇರುತ್ತಾರೆ ಎನ್ನುವ ಕುತೂಹಲ ಮೂಡಿದೆ. ಅವರು ಈಗಲೇ ಫಿನಾಲೆ ಕನಸು ಕಾಣುತ್ತಿದ್ದಾರೆ. ಕನ್ನಡದವರ ಬಳಿಯೂ ವೋಟ್‌ಗಾಗಿ ಅವರು ಕೋರಿಕೆ ಇಡುತ್ತಿದ್ದಾರೆ.

ಫಿನಾಲೆವರೆಗೆ ಇರುವ ಕನಸು

# I Am ರೂಬಿ ಚಿತ್ರದ ಶೀರ್ಷಿಕೆಗೆ ನಿಶಾನಿ



ವಸಿಷ್ಠ ಸಿಂಹ ನಾಯಕರಾಗಿ ನಟಿಸಿದ್ದ ಲವ್ ಲಿ ಚಿತ್ರ ನಿರ್ದೇಶಿಸಿದ್ದ ಚೇತನ್ ಕೇಶವ್ ನಿರ್ದೇಶನದ ಎರಡನೇ ಸಿನಿಮಾದ ಶೀರ್ಷಿಕೆ ಬೆಳಕಿನ ಹಬ್ಬ ದೀಪಾವಳಿ ಸಂದರ್ಭದಲ್ಲಿ ಅನಾವರಣವಾಗಿದೆ. ಆಶ್ರಯ ಕ್ರಿಯೇಷನ್ಸ್ ಲಾಂಛನದಲ್ಲಿ ಡಾ||ಶಿವೇಗೌಡ ಸಿ.ವೈ ಹಾಗೂ ಚಂಗಾರಿ ಬಿ ಮಹದೇವ್ ಅವರು ನಿರ್ಮಿಸುತ್ತಿರುವ ಮತ್ತು ಆಕಾಶ್ ಎಂಬ ಮೈಸೂರಿನ ನೂತನ ಪ್ರತಿಭೆ ನಾಯಕನಾಗಿ ನಟಿಸುತ್ತಿರುವ ಈ ಚಿತ್ರಕ್ಕೆ I Am ರೂಬಿ ಎಂದು ಹೆಸರಿಡಲಾಗಿದೆ. ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಚಿತ್ರತಂಡ ಈ ನೂತನ ಚಿತ್ರದ ಬಗ್ಗೆ ಮಾಹಿತಿ ನೀಡಿದೆ.

ನಿರ್ದೇಶಕ ಚೇತನ್ ಕೇಶವ ಅವರೆ ಕೌಟುಂಬಿಕ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದು ನಿರ್ದೇಶಿಸುತ್ತಿದ್ದಾರೆ. ಅನೂಪ್ ಸೀಳಿನ್ ಸಂಗೀತ ಸಂಯೋಜನೆ, ಅಶ್ವಿನ್ ಕೆನಡಿ ಛಾಯಾಗ್ರಹಣ, ಮಹೇಶ್ ತೊಗಟ ಸಂಕಲನ, ಪ್ರತಾಪ್ ಆರ್ ಮೆಂಡನ್ ಕಲಾ ನಿರ್ದೇಶನ ಹಾಗೂ ಡಾ|ಕೆ.ರವಿವರ್ಮ - ದಿಲೀಪ್ ಎಂ ರಾಜ್ ಅವರ ಸಾಹಸ ನಿರ್ದೇಶನ ಈ ಚಿತ್ರಕ್ಕಿದೆ. ರಂಗಾಯಣ ಸೇರಿದಂತೆ ಅನೇಕ ಕಡೆ ನಾಟಕಗಳಲ್ಲಿ ಅಭಿನಯಿಸಿರುವ ಹಾಗೂ ಚಿತ್ರ ನಾಯಕನಾಗಲು ಬೇಕಾದ ಪೂರ್ವ ತಯಾರಿಯನ್ನು ಈಗಾಗಲೇ ಮಾಡಿಕೊಂಡಿರುವ ಮೈಸೂರು ಮೂಲದ ಆಕಾಶ್ ಈ ಚಿತ್ರದ ಮೂಲಕ ನಾಯಕನಾಗಿ ಕನ್ನಡ ಚಿತ್ರರಂಗ ಪ್ರವೇಶಿಸುತ್ತಿದ್ದಾರೆ.

ಲಕ್ಷ್ಮೀ ಬಾರಮ್ಮ ಧಾರಾವಾಹಿ ಖ್ಯಾತಿಯ ಭೂಮಿಕ ರಮೇಶ್ ನಾಯಕಿಯಾಗಿ ನಟಿಸುತ್ತಿದ್ದಾರೆ. ಅನುಭವಿ ಕಲಾವಿದರ ದೊಡ್ಡ ತಾರಾಬಳಗ ಈ ಚಿತ್ರದಲ್ಲಿರುತ್ತದೆ. ಶೀರ್ಷಿಕೆಯಲ್ಲೇ ಕುತೂಹಲ ಮೂಡಿಸಿರುವ I Am ರೂಬಿ ಚಿತ್ರಕ್ಕೆ ಡಿಸೆಂಬರ್ ನಿಂದ ಚಿತ್ರೀಕರಣ ಶುರುವಾಗಲಿದೆ.

# ಟಾಲಿವುಡ್ ಹೀರೋ ಪ್ರಭಾಸ್ ಜನ್ಮದಿನ



ನಟ ಪ್ರಭಾಸ್ ಜನ್ಮದಿನ. ಪ್ಯಾನ್ ಇಂಡಿಯಾ ಸ್ಟಾರ್ ಪ್ರಭಾಸ್ ಬಳಿ ಅರ್ಧ ಡಜನ್ ಬೃಹತ್ ಬಜೆಟ್ ಸಿನಿಮಾಗಳಿವೆ. 'ದಿ ರಾಜಾ ಸಾಬ್', 'ಸಲಾರ್: ಪಾರ್ಟ್ 2', 'ಕಲ್ಕಿ 2898: ಪಾರ್ಟ್ 2' ಪ್ರಮುಖವಾದವು. 'ಬಾಹುಬಲಿ'ಯಂತಹ ಸಾವಿರ ಕೋಟಿ ಕ್ಲಬ್ ಸೇರಿದ ಸಿನಿಮಾಗಳ ಮೂಲಕ ಅವರು ಜಾಗತಿಕ ಸ್ಟಾರ್ ಆಗಿ ಬೆಳೆದಿದ್ದಾರೆ.

ಪ್ರಭಾಸ್ ಜನ್ಮದಿನ ಅವರ ಅಭಿಮಾನಿಗಳ ಪಾಲಿಗೆ ವಿಶೇಷ ಎನಿಸಿಕೊಂಡಿದೆ. ಪ್ರಭಾಸ್ ಬರ್ತ್‌ಡೇ ಪ್ರಯುಕ್ತ 'ಸಲಾರ್', 'ಈಶ್ವರ್' ಮತ್ತು 'ಪೌರ್ಣಮಿ' ಅಕ್ಟೋಬರ್ 23ರಂದು ಮರು ಬಿಡುಗಡೆ ಆಗಿದೆ ಎಂಬುದು ವಿಶೇಷ. 'ಬಾಹುಬಲಿ: ದಿ ಎಪಿಕ್' ಅಕ್ಟೋಬರ್ 31ರಂದು ತೆರೆಗೆ ಬರಲಿದ. ಈ ಚಿತ್ರಕ್ಕಾಗಿ ಫ್ಯಾನ್ಸ್ ಕಾದಿದ್ದಾರೆ. ಪ್ರಭಾಸ್ ಅವರು ಪ್ಯಾನ್ ಇಂಡಿಯಾ ಹೀರೋ. ಅವರು ಸಾಕಷ್ಟು ಜನಪರ ಕಾರ್ಯಗಳನ್ನೂ ಮಾಡಿದ್ದಾರೆ ಎಂಬುದು ವಿಶೇಷ. ಆದರೆ, ಅದನ್ನು ಎಲ್ಲಿಯೂ ಹೇಳಿಕೊಳ್ಳಲು ಅವರು ಇಷ್ಟಪಡೋದಿಲ್ಲ. ಇದನ್ನು ಅವರು ಗುಟ್ಟಾಗಿಯೇ ಇಡುತ್ತಾರೆ. ಪ್ರಭಾಸ್ ಅವರು ವರ್ಷಕ್ಕೆ ಎರಡು ಸಿನಿಮಾ ನೀಡುವ ಉದ್ದೇಶ ಹೊಂದಿದ್ದು, ಆ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದಾರೆ. ಅವರ ಬಳಿ ಹಲವು ಸೂಪರ್ ಬಿಗ್ ಬಜೆಟ್ ಚಿತ್ರಗಳು ಇವೆ. 'ದಿ ರಾಜಾ ಸಾಬ್' ಚಿತ್ರ ಬಿಡುಗಡೆ ರೆಡಿ ಇದೆ. ಸಂಕ್ರಾಂತಿ ಪ್ರಯುಕ್ತ ಜನವರಿ 9 ರಂದು ಸಿನಿಮಾ ರಿಲೀಸ್ ಆಗಲಿದೆ. 'ಸಲಾರ್: ಪಾರ್ಟ್ 2' ಕೂಡ ಸೆಟ್ಟೇರಬೇಕಿದೆ. 'ಶೌರ್ಯಾಂಗ ಪರ್ವ', 'ಸ್ಪಿರಿಟ್', 'ಕಲ್ಕಿ 2898: ಪಾರ್ಟ್ 2' ಚಿತ್ರಗಳು ಕೂಡ ಅವರ ಬಳಿ ಇದೆ. ಇನ್ನು, 'ಫೌಜಿ' ಹೆಸರಿನ ಸಿನಿಮಾ ಕೂಡ ಅವರ ಬಳಿ ಇದೆ. ಪ್ರಭಾಸ್ ಬಳಿ ಸಾವಿರ ಕೋಟಿ ರೂಪಾಯಿ ಕ್ಲಬ್ ಸೇರಿದ ಕೆಲವು ಸಿನಿಮಾಗಳಿವೆ.

# ಕಳಪೆ ಆಟಕ್ಕೆ ಸರಣಿ ಸೋಲಿನ ಬೆಲೆ ತೆತ್ತ ಟೀಂ ಇಂಡಿಯಾ

ಮೂರು ಪಂದ್ಯಗಳ ಏಕದಿನ ಸರಣಿಗಾಗಿ ಆಸ್ಟ್ರೇಲಿಯಾ ಪ್ರವಾಸ ಮಾಡಿದ್ದ ಟೀಂ ಇಂಡಿಯಾ, ಇನ್ನೊಂದು ಪಂದ್ಯ ಬಾಕಿ ಇರುವಂತೆಯೇ ಏಕದಿನ ಸರಣಿಯನ್ನು ಕಳೆದುಕೊಂಡಿದೆ. ಪರ್ತ್‌ನಲ್ಲಿ ನಡೆದ ಮೊದಲ ಏಕದಿನ ಪಂದ್ಯದಲ್ಲಿ 7 ವಿಕೆಟ್‌ಗಳ ಹೀನಾಯ ಸೋಲು ಕಂಡಿದ್ದ ಗಿಲ್ ಪಡೆ, ಇದೀಗ ಅಡಿಲೇಡ್‌ನಲ್ಲಿ ನಡೆದ ಎರಡನೇ ಏಕದಿನ ಪಂದ್ಯವನ್ನು 2 ವಿಕೆಟ್‌ಗಳಿಂದ ಕಳೆದುಕೊಂಡಿದೆ. ಈ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ 264 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಆಸ್ಟ್ರೇಲಿಯಾ 8 ವಿಕೆಟ್ ಕಳೆದುಕೊಂಡು ಗೆಲುವಿನ ದಡ ಮುಟ್ಟಿತು.



**ಭಾರತದ ಕಳಪೆ ಪ್ರದರ್ಶನ:** ಎರಡನೇ ಏಕದಿನ ಪಂದ್ಯದಲ್ಲಿ ಟೀಂ ಇಂಡಿಯಾ, ಬ್ಯಾಟಿಂಗ್, ಬೌಲಿಂಗ್ ಹಾಗೂ ಫಿಲ್ಡಿಂಗ್ ಮೂರು ವಿಭಾಗಗಳಲ್ಲೂ ಹೀನಾಯ ಪ್ರದರ್ಶನ ನೀಡಿತು. ಇದರ ಲಾಭ ಪಡೆದ ಆಸ್ಟ್ರೇಲಿಯಾ ತವರಿನಲ್ಲಿ ಏಕದಿನ ಸರಣಿಯನ್ನು ತನ್ನ ಬುಟ್ಟಿಗೆ ಹಾಕಿಕೊಂಡಿದೆ. ಅಲ್ಲದೆ ಬರೋಬ್ಬರಿ 17 ವರ್ಷಗಳ ನಂತರ ಆಸ್ಟ್ರೇಲಿಯಾ ತಂಡ ಅಡಿಲೇಡ್‌ನಲ್ಲಿ ನಡೆದ ಏಕದಿನ ಪಂದ್ಯದಲ್ಲಿ ಭಾರತವನ್ನು ಸೋಲಿಸಿರುವುದು ಈ ಗೆಲುವಿನ ಮತ್ತೊಂದು ವಿಶೇಷವಾಗಿದೆ.

**ಸೊನ್ನೆ ಸುತ್ತಿದ ಕೊಹ್ಲಿ:** ಪರ್ತ್‌ನಂತೆಯೇ, ಅಡಿಲೇಡ್‌ನಲ್ಲಿಯೂ ಟಾಸ್ ಸೋತ ಟೀಂ ಇಂಡಿಯಾ ಮೊದಲು ಬ್ಯಾಟಿಂಗ್ ಮಾಡಬೇಕಾಯಿತು. ಆದರೆ ತಂಡಕ್ಕೆ ಮತ್ತೊಮ್ಮೆ ಕಳಪೆ ಆರಂಭ ಸಿಕ್ಕಿತು. ನಾಯಕ ಶುಭ್‌ಮನ್ ಗಿಲ್ ಮತ್ತೊಮ್ಮೆ ವಿಫಲರಾಗಿ 9 ರನ್‌ಗಳಿಗೆ ಔಟಾದರು. ಇತ್ತ ವಿರಾಟ್ ಕೊಹ್ಲಿ ಕೂಡ ಸತತ ಎರಡನೇ ಪಂದ್ಯದಲ್ಲಿ ಖಾತೆ ತೆರೆಯದೆ ವಿಕೆಟ್ ಒಪ್ಪಿಸಿದರು. ಈ ಮೂಲಕ ತಮ್ಮ ವೃತ್ತಿಜೀವನದಲ್ಲಿ ಮೊದಲ ಬಾರಿಗೆ ಸತತ ಎರಡು ಏಕದಿನ ಪಂದ್ಯಗಳಲ್ಲಿ ಶೂನ್ಯಕ್ಕೆ ಔಟಾದ ಬೇಡದ ದಾಖಲೆಯನ್ನು ಕೊಹ್ಲಿ ತಮ್ಮ ಖಾತೆಗೆ ಹಾಕಿಕೊಂಡರು. ಆದರೆ ಆರಂಭಿಕ ಆಘಾತದ ನಂತರ ಜೊತೆಯಾದ ರೋಹಿತ್ ಶರ್ಮಾ ಮತ್ತು ಶ್ರೇಯಸ್ ಅಯ್ಯರ್ ಶತಕದ ಜೊತೆಯಾಟದೊಂದಿಗೆ ತಂಡದ ಇನ್ನಿಂಗ್ಸ್ ನಿಭಾಯಿಸಿದರು. ಈ ವೇಳೆ ರೋಹಿತ್ ಶರ್ಮಾ 73 ರನ್ ಗಳಿಸಿದರೆ, ಶ್ರೇಯಸ್ ಅಯ್ಯರ್ 61 ರನ್ ಕಲೆ ಹಾಕಿದರು. ಕೊನೆಯಲ್ಲಿ ಅಕ್ಷರ್ ಪಟೇಲ್ 44 ರನ್ ಗಳಿಸುವ ಮೂಲಕ ತಂಡವನ್ನು 264 ರನ್ ಗಳಿಗೆ ಕೊಂಡೊಯ್ದರು.

**ಜೀವದಾನದ ಲಾಭ ಪಡೆದ ಶಾರ್ಟ್:** 265 ರನ್‌ಗಳ ಗುರಿ ಬೆನ್ನಟ್ಟಿದ ಆಸ್ಟ್ರೇಲಿಯಾಕ್ಕೆ ಮಿಚೆಲ್ ಮಾರ್ಷ್ ರೂಪದಲ್ಲಿ ಮೊದಲ ಆಘಾತ ಎದುರಾಯಿತು. ಇತ್ತ ಟ್ರಾವಿಸ್ ಹೆಡ್ ಕೂಡ 28 ರನ್‌ಗಳಿಸಿ ಔಟಾದರೆ, ಎರಡು ಜೀವದಾನಗಳ ಲಾಭ ಪಡೆದ ಮ್ಯಾಥ್ಯೂ ಶಾರ್ಟ್ 78 ಎಸೆತಗಳಲ್ಲಿ 74 ರನ್ ಗಳಿಸಿ ಆಸ್ಟ್ರೇಲಿಯಾದ ಗೆಲುವನ್ನು ಖಚಿತಪಡಿಸಿದರು.



ಮತ್ತೊಮ್ಮೆ ಕಳಪೆ ಆರಂಭ

# ನಾಯಕನಾಗಿ ಮತ್ತೆ ವಿಫಲ ಹೀನಾಯವಾಗಿ ಔಟಾದ ಗಿಲ್



ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಮೂರು ಪಂದ್ಯಗಳ ಏಕದಿನ ಸರಣಿಯ ಎರಡನೇ ಪಂದ್ಯ ಅಡಿಲೇಡ್‌ನಲ್ಲಿ ನಡೆಯುತ್ತಿದೆ. ಈ ಪಂದ್ಯದಲ್ಲಿ ನಾಯಕ ಶುಭ್ಮನ್ ಗಿಲ್ ತೀರಾ ಕಳಪೆಯಾಗಿ ಔಟಾದರು. ಶುಭಮನ್ 9 ಎಸೆತಗಳಲ್ಲಿ 9 ರನ್ ಗಳಿಸಿದ ನಂತರ ಪೆವಿಲಿಯನ್ ಸೇರಿಕೊಂಡರು.

ಗಿಲ್ ನಾಯಕತ್ವದ ಬಗ್ಗೆ ಪ್ರಶ್ನೆ

ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಮೂರು ಪಂದ್ಯಗಳ ಏಕದಿನ ಸರಣಿಯ ಎರಡನೇ ಪಂದ್ಯ ಅಡಿಲೇಡ್ ಓವಲ್‌ನಲ್ಲಿ ನಡೆಯುತ್ತಿದೆ. ಈ ಪಂದ್ಯದಲ್ಲಿ, ಆಸ್ಟ್ರೇಲಿಯಾದ ನಾಯಕ ಮಿಚೆಲ್ ಮಾರ್ಷ್ ಟಾಸ್ ಗೆದ್ದು ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿದರು. ಕಾಂಗರೂ ಪಡೆ ಆಯ್ದುಕೊಂಡ ನಿರ್ಧಾರ ಸರಿಯಾಗಿರುವಂತೆ ಕಂಡುಬಂತು. ಭಾರತ 17 ರನ್‌ಗಳಿಗೆ ಎರಡು ವಿಕೆಟ್‌ಗಳನ್ನು ಕಳೆದುಕೊಂಡಿತು. ಮೊದಲ ಏಕದಿನ ಪಂದ್ಯದ ನಂತರ ನಾಯಕ ಶುಭ್‌ಮನ್ ಗಿಲ್ ಕೂಡ ಎರಡನೇ ಏಕದಿನ ಪಂದ್ಯದಲ್ಲಿ ವಿಫಲರಾದರು. ಶುಭಮನ್ 9 ಎಸೆತಗಳಲ್ಲಿ 9 ರನ್ ಗಳಿಸಿದ ನಂತರ ಪೆವಿಲಿಯನ್ ಸೇರಿಕೊಂಡರು.

ಶುಭ್‌ಮನ್ 30-ಗಜ ವೃತ್ತದಲ್ಲಿ ಫೀಲ್ಡರ್ ಮೇಲೆ ದೊಡ್ಡ ಹೊಡೆತವನ್ನು ಹೊಡೆಯಲು ಬಯಸಿದ್ದರು. ಆದರೆ, ಮಿಡ್-ಆಫ್‌ನಲ್ಲಿ ಮಿಚೆಲ್ ಮಾರ್ಷ್ ಕ್ಯಾಚ್ ಪಡೆದರು. ಮೊದಲ ಏಕದಿನ ಪಂದ್ಯದಲ್ಲಿ ಗಿಲ್ ಕೇವಲ 10 ರನ್ ಗಳಿಸಿದ ನಂತರ ಔಟಾದರು. ಈ ಸರಣಿಯು ಇಲ್ಲಿಯವರೆಗೆ ಗಿಲ್‌ಗೆ ಸ್ಮರಣೀಯವಾಗಿಲ್ಲ. ಅಲ್ಲದೆ ದ್ವಿತೀಯ ಏಕದಿನಕ್ಕೆ ತಂಡದಲ್ಲಿ ಯಾವುದೇ ಬದಲಾವಣೆ ಮಾಡದೆ ಅದೇ ಸೋತ ತಂಡವನ್ನು ಗಿಲ್ ಕಣಕ್ಕಿಳಿಸಿದ್ದಾರೆ.

**ಏಕದಿನ ಪಂದ್ಯಗಳಲ್ಲಿ ಗಿಲ್ ನಾಯಕತ್ವದ ಬಗ್ಗೆ ಪ್ರಶ್ನೆ**

ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿಗೂ ಮುನ್ನ ಶುಭ್‌ಮನ್ ಗಿಲ್ ಅವರನ್ನು ಭಾರತದ ಹೊಸ ಏಕದಿನ ನಾಯಕರನ್ನಾಗಿ ನೇಮಿಸಲಾಯಿತು. ಅವರು ರೋಹಿತ್ ಶರ್ಮಾ ಅವರನ್ನು ನಾಯಕನ ಸ್ಥಾನವನ್ನು ಪಡೆದುಕೊಂಡರು. ಆದಾಗ್ಯೂ, ಗಿಲ್ ಇಲ್ಲಿಯವರೆಗೆ ಏಕದಿನ ಪಂದ್ಯಗಳಲ್ಲಿ ನಾಯಕತ್ವವನ್ನು ಆನಂದಿಸಿಲ್ಲ. ಅವರ ಬ್ಯಾಟ್ ಮೌನವಾಗಿದೆ, ಆದರೆ ಟೆಸ್ಟ್ ಪಂದ್ಯಗಳಲ್ಲಿ ಇದಕ್ಕೆ ವಿರುದ್ಧವಾಗಿದೆ. ಇಂಗ್ಲೆಂಡ್ ವಿರುದ್ಧದ ಅವರ ಮೊದಲ ಟೆಸ್ಟ್ ಸರಣಿಯಲ್ಲಿ, ನಾಯಕನಾಗಿ, ಶುಭ್‌ಮನ್ ಅವರ ಬ್ಯಾಟ್ ಜೋರು ಸದ್ದು ಮಾಡಿತು. ಆಂಗ್ಲರ ನಾಡಲ್ಲಿ ಗಿಲ್ ಸಾಕಷ್ಟು ರನ್ ಗಳಿಸಿದರು.

**ವಿರಾಟ್ ಕೊಹ್ಲಿ ಮತ್ತೆ ಶೂನ್ಯಕ್ಕೆ ಔಟ್:** ಭಾರತದ ಮಾಜಿ ನಾಯಕ ವಿರಾಟ್ ಕೊಹ್ಲಿ ಮತ್ತೊಮ್ಮೆ ಶೂನ್ಯಕ್ಕೆ ಔಟಾದರು. ಕೇವಲ ನಾಲ್ಕು ಎಸೆತಗಳನ್ನು ಆಡಿದ ನಂತರ ಅವರನ್ನು ಕ್ಸೇವಿಯರ್ ಬಾರ್ಟ್ಲೆಟ್ ಎಲ್‌ಬಿಡಬ್ಲ್ಯೂ ಮೂಲಕ ಔಟ್ ಮಾಡಿದರು.

ಇದಕ್ಕೂ ಮೊದಲು, ಮೊದಲ ಏಕದಿನ ಪಂದ್ಯದಲ್ಲಿಯೂ ಕೊಹ್ಲಿ ಶೂನ್ಯಕ್ಕೆ ಔಟಾದರು. ಕೊಹ್ಲಿ ಕಳಪೆ ಫಾರ್ಮ್ ನಲ್ಲಿದ್ದಾರೆ. ಪರ್ತ್‌ನಲ್ಲಿ ನಡೆದ ಮೊದಲ ಏಕದಿನ ಪಂದ್ಯದಲ್ಲಿ ಭಾರತ ತಂಡವು ಡಕ್ವರ್ತ್ ಲೂಯಿಸ್ ವಿಧಾನದ ಮೂಲಕ ಏಳು ವಿಕೆಟ್‌ಗಳಿಂದ ಸೋತಿತ್ತು.

# ಆಸ್ಟ್ರೇಲಿಯಾ ಅಂಗಳದಲ್ಲಿ ಭರ್ಜರಿ ದಾಖಲೆ ಬರೆದ ರೋಹಿತ್

ಏಕದಿನ ಕ್ರಿಕೆಟ್‌ನಲ್ಲಿ ರೋಹಿತ್ ಶರ್ಮಾ ಸಿಡಿಲಬ್ಬರ ಮುಂದುವರೆದಿದೆ. ಚಾಂಪಿಯನ್ಸ್ ಟ್ರೋಫಿಯಲ್ಲಿ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ್ದ ಹಿಟ್‌ಮ್ಯಾನ್ ಇದೀಗ ಆಸ್ಟ್ರೇಲಿಯಾ ವಿರುದ್ಧದ 2ನೇ ಏಕದಿನ ಪಂದ್ಯದಲ್ಲಿ ಆಕರ್ಷಕ ಅರ್ಧಶತಕ ಬಾರಿಸಿದ್ದಾರೆ. ಈ ಅರ್ಧಶತಕದೊಂದಿಗೆ ಭರ್ಜರಿ ದಾಖಲೆಯೊಂದನ್ನು ಸಹ ನಿರ್ಮಿಸಿದ್ದಾರೆ. ಅಡಿಲೇಡ್‌ನ ಓವಲ್ ಮೈದಾನದಲ್ಲಿ ನಡೆದ ಆಸ್ಟ್ರೇಲಿಯಾ ವಿರುದ್ಧದ 2ನೇ ಏಕದಿನ ಪಂದ್ಯದಲ್ಲಿ ರೋಹಿತ್ ಶರ್ಮಾ ಆಕರ್ಷಕ ಅರ್ಧಶತಕ ಬಾರಿಸಿ ಮಿಂಚಿದ್ದಾರೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಆಸ್ಟ್ರೇಲಿಯಾ ತಂಡದ ನಾಯಕ ಮಿಚೆಲ್ ಮಾರ್ಷ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ ಪರ ರೋಹಿತ್ ಶರ್ಮಾ 97 ಎಸೆತಗಳಲ್ಲಿ 2 ಭರ್ಜರಿ ಸಿಕ್ಸ್ ಹಾಗೂ 7 ಫೋರ್‌ಗಳೊಂದಿಗೆ 73 ರನ್ ಬಾರಿಸಿದರು. ಈ 73 ರನ್‌ಗಳೊಂದಿಗೆ ಆಸ್ಟ್ರೇಲಿಯಾದಲ್ಲಿ ಆಸೀಸ್ ವಿರುದ್ಧ ಏಕದಿನ ಕ್ರಿಕೆಟ್‌ನಲ್ಲಿ ಸಾವಿರಕ್ಕೂ ಅಧಿಕ ರನ್ ಕಲೆಹಾಕಿದ ಭಾರತದ ಮೊದಲ ಬ್ಯಾಟರ್ ಎನಿಸಿಕೊಂಡರು. ಅಂದರೆ ಆಸ್ಟ್ರೇಲಿಯಾ ವಿರುದ್ಧ ಆಸ್ಟ್ರೇಲಿಯಾ ಪಿಚ್‌ನಲ್ಲಿ ಏಕದಿನ ಪಂದ್ಯಗಳ ಮೂಲಕ ಭಾರತದ ಯಾವುದೇ ಬ್ಯಾಟರ್ 1000 ರನ್ ಗಳಿಸಿರಲಿಲ್ಲ. ಆದರೆ ಇದೀಗ 73 ರನ್ ಸಿಡಿಸುವುದರೊಂದಿಗೆ ರೋಹಿತ್ ಶರ್ಮಾ ಆಸೀಸ್ ಪಿಚ್‌ನಲ್ಲಿ ಏಕದಿನ ಪಂದ್ಯಗಳಲ್ಲಿ ಸಾವಿರ ರನ್ ಪೂರೈಸಿದ್ದಾರೆ.

ಆಸ್ಟ್ರೇಲಿಯಾದಲ್ಲಿ 21 ಏಕದಿನ ಪಂದ್ಯಗಳನ್ನಾಡಿರುವ ರೋಹಿತ್ ಶರ್ಮಾ 4 ಭರ್ಜರಿ ಶತಕ ಹಾಗೂ 3 ಅರ್ಧ ಶತಕಗಳೊಂದಿಗೆ ಒಟ್ಟು 1033 ರನ್ ಕಲೆಹಾಕಿದ್ದಾರೆ. ಈ ವೇಳೆ ಹಿಟ್ ಮ್ಯಾನ್ ಬ್ಯಾಟ್‌ನಿಂದ 83 ಫೋರ್ ಹಾಗೂ 31 ಸಿಕ್ಸರ್‌ಗಳು ಕೂಡ ಮೂಡಿಬಂದಿವೆ.

# ನಿವೃತ್ತಿಯ ಸುಳಿವು ನೀಡಿದ ವಿರಾಟ್

ಕೈ ಸನ್ನೆ ಮೂಲಕ ಧನ್ಯವಾದ

ವಿರಾಟ್ ಕೊಹ್ಲಿ ಏಕದಿನ ಕ್ರಿಕೆಟ್‌ಗೆ ಗುಡ್ ಬೈ ಹೇಳಲಿದ್ದಾರಾ ಇಂತಹ ಪ್ರಶ್ನೆಗೆ ಕಾರಣ ಕೊಹ್ಲಿ ಥ್ಯಾಂಕ್ಯೂನೊಂದಿಗೆ ಹೆಜ್ಜೆ ಹಾಕಿರುವುದು. ಹೌದು, ಅಡಿಲೇಡ್ ಮೈದಾನದಲ್ಲಿ ನಡೆದ ಆಸ್ಟ್ರೇಲಿಯಾ ವಿರುದ್ಧದ 2ನೇ ಏಕದಿನ ಪಂದ್ಯದಲ್ಲಿ ಕಣಕ್ಕಿಳಿದ ವಿರಾಟ್ ಕೊಹ್ಲಿ ಶೂನ್ಯಕ್ಕೆ ಔಟಾಗಿದ್ದರು. ಇತ್ತ ಶೂನ್ಯದೊಂದಿಗೆ ಪೆವಿಲಿಯನ್ ಕಡೆ ಭಾರದ ಹೆಜ್ಜೆ ಹಾಕಿದ ವಿರಾಟ್ ಕೊಹ್ಲಿಗೆ ಪ್ರೇಕ್ಷಕರು ಎದ್ದು ನಿಂತು ಬೀಳ್ಕೊಟ್ಟರು. ಇದೇ ವೇಳೆ ಕೊಹ್ಲಿಯು ಕೈ ಸನ್ನೆ ಮೂಲಕ ಧನ್ಯವಾದಗಳನ್ನು ತಿಳಿಸಿದ್ದಾರೆ.

ಈ ಧನ್ಯವಾದ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದ್ದಂತೆ ಕಿಂಗ್ ಕೊಹ್ಲಿ ಶೀಘ್ರದಲ್ಲೇ ನಿವೃತ್ತಿ ಘೋಷಿಸಲಿದ್ದಾರೆ ಎಂಬ ಸುದ್ದಿಗಳು ಹರಿದಾಡಲಾರಂಭಿಸಿದೆ. ಅದರಲ್ಲೂ ಇದು ವಿರಾಟ್ ಕೊಹ್ಲಿಗೆ ಕೊನೆಯ ಆಸ್ಟ್ರೇಲಿಯಾ ಸರಣಿ. ಹೀಗಾಗಿಯೇ ಅಡಿಲೇಡ್ ಪ್ರೇಕ್ಷಕರು ಕೊಹ್ಲಿಗೆ ಸ್ಟ್ಯಾಂಡಿಂಗ್ ಓವೇಶನ್ ನೀಡಿದ್ದಾರೆ. ಇತ್ತ ಮೊದಲೆರಡು ಪಂದ್ಯಗಳಲ್ಲಿ ಶೂನ್ಯಕ್ಕೆ ಔಟಾಗಿರುವ ಕಾರಣ ಕೊಹ್ಲಿಯನ್ನು ಮುಂಬರುವ ಸರಣಿಗೆ ಆಯ್ಕೆ ಮಾಡುವ ಸಾಧ್ಯತೆ ಕೂಡ ಕ್ಷೀಣಿಸಿದೆ. ಹೀಗಾಗಿ ಆಸ್ಟ್ರೇಲಿಯಾ ಪ್ರವಾಸದ ಬಳಿಕ ಕಿಂಗ್ ಕೊಹ್ಲಿ ನಿವೃತ್ತಿ ಘೋಷಿಸಿದರೂ ಅಚ್ಚರಿಪಡಬೇಕಿಲ್ಲ. ಇನ್ನು ಈ ಪಂದ್ಯದಲ್ಲಿ ಟಾಸ್ ಸೋತರೂ ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ ಪರ ರೋಹಿತ್ ಶರ್ಮಾ 73 ರನ್ ಬಾರಿಸಿ ಮಿಂಚಿದರು. ಹಾಗೆಯೇ ಶ್ರೇಯಸ್ 61 ರನ್‌ಗಳ ಕೊಡುಗೆ ನೀಡಿದರು. ಈ ಅರ್ಧಶತಕಗಳ ನೆರವಿನೊಂದಿಗೆ ಟೀಮ್ ಇಂಡಿಯಾ 50 ಓವರ್‌ಗಳಲ್ಲಿ 250 ರನ್ ಕಲೆಹಾಕಿದೆ.



**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,**
No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**